
**ಸಂಪುಟ:** 05 **ಸಂಚಿಕೆ:** 109 **ಪುಟಗಳು:** 08 **ಬುಧವಾರ** 02 **ಜುಲೈ** 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
**ಸಂಪಾದಕರು: ಟಿ. ಹೊಂಬೇಗೌಡ** RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಮನುಷ್ಯನ ಕರ್ತವ್ಯವು ಪ್ರಯತ್ನಿಸುವುದು ಮತ್ತು ಶ್ರಮಪಡುವುದು. ಯಶಸ್ಸು ಅವಕಾಶ ಮತ್ತು ಪರಿಸರವನ್ನು ಅವಲಂಬಿಸಿರುತ್ತದೆ.

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ



## ಸುರ್ಜೆವಾಲ ಮುಂದೆ ಸಿಎಂ ಬದಲಾವಣೆ ಬಗ್ಗೆ ಧ್ವನಿ ಎತ್ತಿದ ಶಾಸಕರು

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಕಾಂಗ್ರೆಸ್‌ನಲ್ಲಿ ಸದ್ಯಕ್ಕೆ ಎಲ್ಲವೂ ಸರಿ ಇಲ್ಲ ಎಂಬಂತಾಗಿದೆ. ಸ್ವಪಕ್ಷದ ವಿರುದ್ಧವೇ ಬಹಿರಂಗವಾಗಿ ಶಾಸಕರು ಅಸಮಾಧಾನ ಹೊರ ಹಾಕುತ್ತಿದ್ದು, ಇದೀಗ ಶಾಸಕರ ಅಹವಾಲು ಕೇಳಲು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ ಸಿಂಗ್ ಸುರ್ಜೆವಾಲಾ ಅವರ ಮುಂದೆ ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಡಿಕೆ ಶಿವಕುಮಾರ್ ಸಿಎಂ ಆಗುವ ಕುರಿತು ಚರ್ಚಿಸಿರುವುದು ರಾಜ್ಯ ಕೈ ಪಾಳಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದ್ದು, ಈ ಬಗ್ಗೆ ಉಪಮುಖ್ಯಮಂತ್ರಿ ಡಿಕೆಶಿವಕುಮಾರ್ ಪ್ರತಿಕ್ರಿಯಿಸಿದ್ದಾರೆ. ಕೆಪಿಸಿಸಿ ಕಚೇರಿಯಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಡಿ ಕೆ ಶಿವಕುಮಾರ್ ಅವರು ಮಾತನಾಡಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳು ಪಕ್ಷ ಸಂಘಟನೆ ವಿಚಾರ ಹಾಗೂ ಶಾಸಕರ ಅಹವಾಲು ಸ್ವೀಕರಿಸಲು ಸಭೆ ಮಾಡುತ್ತಿದ್ದಾರೆಯೇ ಹೊರತು, ಸಿಎಂ ಬದಲಾವಣೆ ಅಥವಾ ಸಚಿವ ಸಂಪುಟ ವಿಸ್ತರಣೆ ಬಗ್ಗೆ ಚರ್ಚೆಯಾಗುತ್ತಿಲ್ಲ ಎಂದು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ರಣದೀಪ್ ಸಿಂಗ್ ಸುರ್ಜೆವಾಲ ಅವರು ಕಾಂಗ್ರೆಸ್ ಶಾಸಕರ ಜೊತೆ ಸಭೆ ಕುರಿತು ಮಾತನಾಡಿ, ಈ ಸಭೆ ಬಗ್ಗೆ ಯಾರಿಗೂ ಆತಂಕ ಬೇಡ. ರಾಷ್ಟ್ರಾದ್ಯಂತ ನಾವು ಜಿಲ್ಲಾ ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರ ಬದಲಾವಣೆ ಮಾಡುತ್ತಿದ್ದು, ಸಂಘಟನೆ ಹಿನ್ನಲೆಯಲ್ಲಿ ಈ ಸಭೆ ಮಾಡಲಾಗುತ್ತಿದೆ. ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ಈ ವರ್ಷವನ್ನು ಸಂಘಟನೆ ವರ್ಷ ಎಂದು ಘೋಷಣೆ ಮಾಡಿದ್ದಾರೆ. ಹೀಗಾಗಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಿಗೆ ಶಕ್ತಿ ತುಂಬಲು ಹೇಳಿದ್ದಾರೆ. ಖರ್ಗೆ ಅವರು, ರಾಹುಲ್ ಗಾಂಧಿ ಹಾಗೂ ಪ್ರಧಾನ ಕಾರ್ಯದರ್ಶಿಗಳು ಎಲ್ಲಾ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರನ್ನು ಕರೆಸಿ ನವದೆಹಲಿಯಲ್ಲಿ ಸಭೆ ಮಾಡಲಾಗಿದೆ. ಆ ಮೂಲಕ ಕಾಂಗ್ರೆಸ್ ಕಚೇರಿ ನಿರ್ಮಾಣದಿಂದ, ಪಕ್ಷ ಸಂಘಟನೆವರೆಗೂ ಎಲ್ಲಾ ಜವಾಬ್ದಾರಿಯನ್ನು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಶಾಸಕರು ಇಲ್ಲದಿರುವ ಕ್ಷೇತ್ರಗಳ ಜವಾಬ್ದಾರಿಯನ್ನು ಒಬ್ಬೊಬ್ಬ ಶಾಸಕರಿಗೆ ನೀಡಲಾಗಿದೆ ಎಂದು ವಿವರಿಸಿದರು.

ಬಿ.ಆರ್ ಪಾಟೀಲ್ ಅವರು ಅನುದಾನ ವಿಚಾರವಾಗಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂಬ ಬಗ್ಗೆ ಮಾತನಾಡಿದರು, ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಅಭಿವೃದ್ಧಿ ಕೆಲಸಗಳಿಗಾಗಿಯೇ 1 ಲಕ್ಷ ಕೋಟಿ ಅನುದಾನ ಮೀಸಲಿಟ್ಟಿದೆ.

54 ಸಾವಿರ ಕೋಟಿ ಗ್ಯಾರಂಟಿ ಯೋಜನೆಗೆ, 19 ಸಾವಿರ ಕೋಟಿ ರೈತರಿಗೆ ವಿದ್ಯುತ್ ನೀಡಲು ವ್ಯಯಿಸಲಾಗುತ್ತಿದೆ. ಸಾಮಾಜಿಕ ಕಲ್ಯಾಣ ಯೋಜನೆ ಸೇರಿದಂತೆ ಇತರೆ ಅಭಿವೃದ್ಧಿ ಯೋಜನೆಗಳಿಗೆ ಆದ್ಯತೆ ನೀಡಲಾಗಿದೆ. ಇದು ಕ್ಷೇತ್ರದ ಅಭಿವೃದ್ಧಿಗಳಿಗೆ ಅಲ್ಲವೇ ನಮ್ಮ ರಾಜ್ಯದಲ್ಲಿ ಆಗುತ್ತಿರುವ ಕಲ್ಯಾಣ ಯೋಜನೆಗಳು ಬೇರೆ ಯಾವುದೇ ರಾಜ್ಯದಲ್ಲಿ ಆಗುತ್ತಿಲ್ಲ ಎಂದು ತಿಳಿಸಿದರು.

**ನಾವೆಲ್ಲರೂ ಸಿದ್ದರಾಮಯ್ಯ ಕೈ ಬಲಪಡಿಸಬೇಕು**

ಸಂಘಟನೆ ಕುರಿತು ಮಾರ್ಗದರ್ಶನ ನೀಡಲು ರಣದೀಪ್ ಸಿಂಗ್ ಸುರ್ಜೆವಾಲ ಅವರು ಆಗಮಿಸಿದ್ದು, ಅವರ ಅಹವಾಲುಗಳನ್ನು ಸ್ವೀಕರಿಸಲಾಗುತ್ತಿದೆ. ಕೆಲವು ಶಾಸಕರ ಹೇಳಿಕೆಗಳ ಮಧ್ಯೆ ಪಕ್ಷದಲ್ಲಿ ಶಿಸ್ತು ತರಲು ಪ್ರಯತ್ನಿಸುತ್ತಿದ್ದಾರೆ. ಇದರ ಹೊರತಾಗಿ ನಾಯಕತ್ವ ಬದಲಾವಣೆ, ಸಚಿವಸಂಪುಟ ವಿಸ್ತರಣೆ ಕುರಿತು ಯಾವುದೇ ಚರ್ಚೆ ಇಲ್ಲ. ನಾವುಗಳು ಯಾರೂ ಈಗ ಆತುರದಲ್ಲಿ ಇಲ್ಲ. ನಮಗೆ 2028 ಬಹಳ ಮುಖ್ಯ. ಅದೇ ಮುಖ್ಯ ಎಂದು ಸ್ಪಷ್ಟಪಡಿಸಿದರು. ಇಕ್ಬಾಲ್ ಹುಸೇನ್ ನೀವು ಸಿಎಂ ಆಗುವುದಾಗಿ ಹೇಳಿದ್ದಾರೆ ಕುರಿತು ಮಾತನಾಡಿ, ಅವರಿಗೆ ನಾನೇ ನೋಟೀಸ್ ನೀಡುತ್ತೇನೆ. ನಾನು ಸಿಎಂ ಆಗುತ್ತೇನೆ ಎಂದು ಯಾರೂ ಹೇಳುವ ಅಗತ್ಯವಿಲ್ಲ. ಯಾರೊಬ್ಬರೂ ಮಾಧ್ಯಮಗಳ ಮುಂದೆ ಮಾತನಾಡುವಂತಿಲ್ಲ. ಇಕ್ಬಾಲ್ ಹುಸೇನ್, ಬಿ.ಆರ್ ಪಾಟೀಲ್, ಬಾಲಕೃಷ್ಣ ಯಾರೇ ಆಗಲಿ, ಈ ವಿಚಾರವಾಗಿ ಮಾಧ್ಯಮಗಳ ಮುಂದೆ ಯಾರೂ ಮಾತನಾಡಬಾರದು. ಮುಖ್ಯಮಂತ್ರಿ ಸ್ಥಾನದಲ್ಲಿ ಸಿದ್ದರಾಮಯ್ಯ ಅವರಿದ್ದು, ನಾವೆಲ್ಲರೂ ಅವರ ಕೈ ಬಲಪಡಿಸಬೇಕು ಎಂದು ತಿಳಿಸಿದರು.

## ತಂತ್ರಜ್ಞಾನದೊಂದಿಗೆ ಸಂವಾದ ನಡೆಸಬಹುದಾದ ಅಲೆಕ್ಸಾ ಸಾಧನ

• **ಉದಯವಾಹಿನಿ, ಬೆಂಗಳೂರು**

ವಿದ್ಯಾರ್ಥಿಗಳು, ಶಿಕ್ಷಕರು, ಪೋಷಕರು, ಹಿರಿಯ ನಾಗರಿಕರು ಮತ್ತು ವಿಶೇಷ ಚೇತನ ವ್ಯಕ್ತಿಗಳು ತಮ್ಮ ಧ್ವನಿಯನ್ನು ಬಳಸಿ ತಂತ್ರಜ್ಞಾನದೊಂದಿಗೆ ಸಂವಾದ ನಡೆಸಬಹುದಾದ ಅಲೆಕ್ಸಾ ಸಹಾಯಕ ಸಾಧನವನ್ನು ರಾಜ್ಯದ ಆಯ್ದ 200 ಗ್ರಾಮಪಂಚಾಯಿತಿಗಳ ಅರಿವು ಕೇಂದ್ರಗಳಿಗೆ ವಿತರಣೆಗೆ ಚಾಲನೆ ನೀಡಲಾಯಿತು. ಮಕ್ಕಳಲ್ಲಿ ಕುತೂಹಲ ಮೂಡಿಸುವ ಮತ್ತು ಆಸಕ್ತಿಯನ್ನು ಬೆಳೆಸುವ ಕೆಲಸವಾಗಬೇಕು. ಅವರ ಕುತೂಹಲವನ್ನು ತಣಿಸುವ ಕೆಲಸ ಗ್ರಂಥಪಾಲಕರಿಂದ ನಡೆಯಬೇಕು ಎಂದು ಹೇಳಿದರು. ಇಡೀ ದೇಶದಲ್ಲಿ ಗ್ರಾಮೀಣ ಪ್ರದೇಶದಲ್ಲಿ ಅರಿವು ಕೇಂದ್ರಗಳು ವಿಭಿನ್ನ ಮತ್ತು ಪ್ರಾಮಾಣಿಕ ಪ್ರಯತ್ನವಾಗಿದೆ. ಈಗ ಮಕ್ಕಳಲ್ಲಿ ಕುತೂಹಲ, ಆಸಕ್ತಿ ಕಾಣಿಸುವುದಿಲ್ಲ. ಆದ್ದರಿಂದ ಅವರಲ್ಲಿ ಕುತೂಹಲ ಮೂಡಿಸುವ ಅವಶ್ಯ ಇದೆ. ಕಲಿಕೆಗೆ ಯಾವುದೇ ಭೌಗೋಳಿಕ ಚೌಕಟ್ಟು ಕೂಡ ಇರುವುದಿಲ್ಲ.

ದೃಷ್ಟಿ ಸವಾಲಿರುವವರಿಗೆ ಅಲೆಕ್ಸಾ ಸಾಧನವು ಕಲಿಕೆಗೆ ಸಹಾಯಕವಾಗಲಿದೆ. ಮುಂದೆ ಚಾಟ್‌ಬಾಟ್‌ಗಳನ್ನು ಕೂಡ ಅಳವಡಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದರು. ಮೊದಲ ಹಂತದಲ್ಲಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ರಾಮನಗರ ಜಿಲ್ಲಾ ಪಂಚಾಯಿತಿಗಳ ವ್ಯಾಪ್ತಿಯ ಆಯ್ದ 200 ಗ್ರಾಮ ಪಂಚಾಯಿತಿಗಳ ಅರಿವು ಕೇಂದ್ರಗಳಿಗೆ ಅಲೆಕ್ಸಾ ಸಾಧನಗಳನ್ನು ವಿತರಿಸಲಾಗುತ್ತದೆ ಎಂದು ಹೇಳಿದರು.

## ಬೆಂಗಳೂರು ಕಾಲ್ತುಳಿತಕ್ಕೆ ಆರ್ ಸಿಬಿಯೇ ಕಾರಣ: ಕೇಂದ್ರ

• **ಉದಯವಾಹಿನಿ, ಬೆಂಗಳೂರು**

ಜೂ. 4ರಂದು ಸಂಭವಿಸಿದ ಕಾಲ್ತುಳಿತದ ಪ್ರಕರಣದಲ್ಲಿ ಆರ್ ಸಿಬಿ ತಂಡದ ಆಡಳಿತ ಮಂಡಳಿಯೇ ಕಾರಣ ಎಂದು ಕೇಂದ್ರ ಆಡಳಿತ ನ್ಯಾಯಮಂಡಳಿ ಹೇಳಿದೆ. ಆ ಪ್ರಕರಣದ ವಿಚಾರಣೆ ನಡೆಸುತ್ತಿದ್ದ ನ್ಯಾಯಮಂಡಳಿಯು ಕಪ್ ಗೆದ್ದ ಮರುದಿವೇ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಮಾರಂಭ ಆಯೋಜಿಸಿದ್ದು, ಪೊಲೀಸರು ನೀಡಿದ ಸಲಹೆಯನ್ನು ಕೇಳದೇ ಇದ್ದಿದ್ದೆಲ್ಲವೂ ತಪ್ಪಾಗಿದೆ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ. ಇನ್ನು, ಮೂರು ನಾಲ್ಕು ಲಕ್ಷ ಜನರು ಸೇರುವಂಥ ಸಮಾರಂಭಕ್ಕೆ ಪೊಲೀಸರ ಅನುಮತಿ ಪಡೆದಿರಲಿಲ್ಲ. ಭದ್ರತೆಗಾಗಿ ಅವರ ಒಪ್ಪಿಗೆಯನ್ನೂ ಕೇಳಿರಲಿಲ್ಲ. ಸಾಮಾಜಿಕ ಜಾಲತಾಣಗಳಲ್ಲಿ ಕರೆ ಕೊಟ್ಟು ಲಕ್ಷಾಂತರ ಜನ ಅಭಿಮಾನಿಗಳು ಸೇರುವಂತೆ ಮಾಡಿ, ಅದಕ್ಕೆ ಬೇಕಾದ ಸೂಕ್ತ ಭದ್ರತೆಯನ್ನೂ ನೀಡದೇ ಇದ್ದಿದ್ದು ತಪ್ಪಾಗಿದೆ.

## ಇದು ಯಾವ ಪುರುಷಾರ್ಥಕ್ಕೆ ಮತ್ತು ಯಾರ ಲಾಭಕ್ಕೆ

• **ಉದಯವಾಹಿನಿ, ಬೆಂಗಳೂರು**

ಪರಿಶಿಷ್ಟರ ಒಳಮೀಸಲಾತಿಗೆ ಸಂಬಂಧಿಸಿದಂತೆ ನಡೆಸುತ್ತಿರುವ ಸಮೀಕ್ಷೆ ಕಾಟಾಚಾರದ ಮತ್ತು ಬೂಟಾಟಿಕೆಯ ಸಮೀಕ್ಷೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ಅವರು ಟೀಕಿಸಿದ್ದಾರೆ. ತೋರಿಕೆಯ ಜಾತಿ ಸಮೀಕ್ಷೆ ಏಕೆ ಮಾಡುತ್ತಿದ್ದೀರಿ ಇದು ಯಾವ ಪುರುಷಾರ್ಥಕ್ಕೆ ಮತ್ತು ಯಾರ ಲಾಭಕ್ಕೆ ಎಂದು ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಎಕ್ಸ್ ಮೂಲಕ ಪ್ರಶ್ನಿಸಿದ್ದಾರೆ. ಸಮೀಕ್ಷೆ ನಡೆಸಬೇಕಾದ ಸಿಬ್ಬಂದಿ ಮನೆ ಮನೆಗೆ ಹೋಗದೇ ಜನರನ್ನು ಸಂಪರ್ಕಿಸದೇ, ಕೇವಲ ಬಾಗಿಲಿಗೆ ಸಮೀಕ್ಷೆ ಪೂರ್ಣ ಎನ್ನುವ ಸ್ಟಿಕರ್ ಅಂಟಿಸುತ್ತಿದ್ದಾರೆ. ಜನರ ಜಾತಿಯ ಬಗ್ಗೆ ಕೇಳದೆ, ಮಾಹಿತಿ ಸಂಗ್ರಹಿಸದೇ ನಡೆಯುತ್ತಿರುವ ಇದನ್ನು ಸಮೀಕ್ಷೆ ಎನ್ನಲು ಸಾಧ್ಯವೇ ಇದು ಸಮೀಕ್ಷೆ ಅಲ್ಲ, ಇದು ಸರ್ಕಾರ ನಿರ್ದೇಶಿತ ಹಗರಣ ಎಂದು ಅಶೋಕ ಹೇಳಿದ್ದಾರೆ. ಜಾತಿ ಗಣತಿ ಹೆಸರಿನಲ್ಲಿ ಈಗಾಗಲೇ 162 ಕೋಟಿ ಪೋಲು ಮಾಡಿದ್ದೀರಿ. ಈಗ ಒಳಮೀಸಲಾತಿಗಾಗಿ ಮಾಡುತ್ತಿರುವ ಸಮೀಕ್ಷೆಯ ಹೆಸರಿನಲ್ಲಿ ಇನ್ನೊಂದಿಷ್ಟು ಕೋಟಿ ಲೂಟಿ. ಇದು ಯಾವ ಸೀಮೆಯ ಸಾಮಾಜಿಕ ನ್ಯಾಯ ಜನರ ತೆರಿಗೆ ಹಣವನ್ನು ಹಗಲು ದರೋಡೆ ಮಾಡುವ ಮೂಲಕ ಕಾಂಗ್ರೆಸ್ ಸರ್ಕಾರ ದಲಿತರಿಗೆ ಮೋಸ ಮಾಡುತ್ತಿದೆ ಎಂದು ಹರಿಹಾಯ್ದಿದ್ದಾರೆ.

## ಕರುನಾಡಿಗೆ ಹೃದಯಾಘಾತ

**ಹೃದಯಾಘಾತ ಪ್ರಕರಣ ಹೆಚ್ಚಳ**








• **ಉದಯವಾಹಿನಿ, ಬೆಂಗಳೂರು**

ಇತ್ತೀಚೆಗೆ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಸರಣಿ ಹೃದಯಾಘಾತ ಪ್ರಕರಣಗಳು ವರದಿಯಾಗುತ್ತಿವೆ. ಈ ವಿಷಯವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಸಿಎಂ ಸಿದ್ದರಾಮಯ್ಯ ಅವರು ಯುವಜನರು, ಮಧ್ಯ ವಯಸ್ಕರಲ್ಲಿ ಮಹತ್ವದ ಮನವಿ ಮಾಡಿದ್ದಾರೆ. ಈ ಬಗ್ಗೆ ಟ್ವೀಟ್ ಮಾಡಿರುವ ಸಿದ್ದರಾಮಯ್ಯ, ಜನರ ಆರೋಗ್ಯ ರಕ್ಷಣೆಗಾಗಿ ಒಂದು ಸರ್ಕಾರವಾಗಿ ಸಾಧ್ಯವಿರುವ ಎಲ್ಲಾ ಪ್ರಯತ್ನಗಳನ್ನು ನಾವು ಮಾಡುತ್ತಿದ್ದೇವೆ. ಯುವಜನರು, ಮಧ್ಯ ವಯಸ್ಕರು ಹಾಗೂ ಇತರೆ ಜನ ಎದೆನೋವು, ಉಸಿರಾಟದ ತೊಂದರೆ ಕಂಡುಬಂದರೆ ಅಲಕ್ಷ್ಯ ತೋರದೆ ತಕ್ಷಣವೇ ಸಮೀಪದ ಆರೋಗ್ಯ ಕೇಂದ್ರಗಳಿಗೆ ತೆರಳಿ ಪರೀಕ್ಷೆಗೆ ಒಳಗಾಗಬೇಕು. ವೈದ್ಯರ ಸೂಚನೆ ಪಾಲಿಸಬೇಕು ಎಂದು ವಿನಂತಿಸಿದ್ದಾರೆ. ರಾಜ್ಯದ ಹಲವು ಜಿಲ್ಲೆಗಳಲ್ಲಿ ಹೃದಯಾಘಾತ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿರುವುದು ಸಾರ್ವಜನಿಕರಲ್ಲಿ ಆತಂಕ ಹುಟ್ಟಿಸಿದೆ. ಹಾಸನ ಜಿಲ್ಲೆ ಒಂದರಲ್ಲೇ 20ಕ್ಕೂ ಅಧಿಕ ಮಂದಿ ಹೃದಯಾಘಾತದಿಂದ ಸಾವನ್ನಪ್ಪಿರುವುದು ವರದಿಯಾಗಿದೆ. ಇದನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ.ರವೀಂದ್ರನಾಥ್ ಅವರ ನೇತೃತ್ವದಲ್ಲಿ ತಜ್ಞರ ಸಮಿತಿ ರಚಿಸಿರುವುದಾಗಿ ಸಿಎಂ ಸಿದ್ದರಾಮಯ್ಯ ಮಾಹಿತಿ ನೀಡಿದ್ದಾರೆ. 10 ದಿನಗಳ ಒಳಗಾಗಿ ಅಧ್ಯಯನ ವರದಿ ನೀಡುವಂತೆ ಸೂಚಿಸಲಾಗಿದೆ ಎಂದಿದ್ದಾರೆ. ಕಳೆದೊಂದು ತಿಂಗಳಲ್ಲಿ ಹಾಸನ ಜಿಲ್ಲೆಯೊಂದರಲ್ಲೇ 20ಕ್ಕೂ ಹೆಚ್ಚು ಮಂದಿ ಹೃದಯಾಘಾತಕ್ಕೆ ಒಳಗಾಗಿ ಸಾವಿಗೀಡಾದ ವಿಚಾರವನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಈ ಸರಣಿ ಸಾವುಗಳಿಗೆ ನಿಖರ ಕಾರಣವನ್ನು ಪತ್ತೆಹಚ್ಚಿ, ಅದಕ್ಕೆ ಪರಿಹಾರ ಮಾರ್ಗೋಪಾಯಗಳನ್ನು ಕಂಡುಕೊಳ್ಳಲು ತಜ್ಞರ ಸಮಿತಿ ರಚಿಸಲಾಗಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಚಿಕ್ಕ ವಯಸ್ಸಿನವರ, ಯುವ ಜನರ ಹಠಾತ್ ನಿಧನಕ್ಕೆ ಕಾರಣಗಳೇನು... ಕೋವಿಡ್ ಲಸಿಕೆಯ ದುಷ್ಪರಿಣಾಮಗಳೇನಾದರೂ ಇರಬಹುದೇ... ಎಂದು ಕೂಲಂಕುಷವಾಗಿ ಅಧ್ಯಯನ ನಡೆಸಲು ಈ ಸಮಿತಿಗೆ ಕಳೆದ ಫೆಬ್ರವರಿ ತಿಂಗಳಲ್ಲೇ ಆದೇಶ ನೀಡಲಾಗಿತ್ತು.

**1** ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಸರಣಿ ಹೃದಯಾಘಾತ ಪ್ರಕರಣಗಳು ಹೆಚ್ಚಳ.

**2** ಸರ್ಕಾರ ಗಂಭೀರವಾಗಿ ಪರಿಗಣಿಸಿ ಅಗತ್ಯ ಕ್ರಮಕ್ಕೆ ಮುಂದಾಗಿದೆ ಎಂದ ಸಿದ್ದರಾಮಯ್ಯ.

**3** ಎದೆನೋವು, ಉಸಿರಾಟದ ತೊಂದರೆ ಕಂಡುಬಂದರೆ ಅಲಕ್ಷ್ಯ ತೋರದೆ ಪರೀಕ್ಷೆ ಮಾಡಿಸಿಕೊಳ್ಳಿ ಎಂದ ಸಿಎಂ

**ಹೃದಯಾಘಾತಕ್ಕೆ ಕೋವಿಡ್ ಲಸಿಕೆ ಕಾರಣ..:** ಬದುಕಿ ಬಾಳಬೇಕಾದ ಚಿಕ್ಕಮಕ್ಕಳು, ಯುವಜನರು, ಅಮಾಯಕರ ಜೀವಗಳ ಬೆಲೆ, ಅವರ ಕುಟುಂಬಸ್ಥರ ಕಾಳಜಿ ನಮಗೂ ಇದೆ. ಇಂತಹ ವಿಚಾರಗಳನ್ನು ಕೂಡ ತಮ್ಮ ರಾಜಕೀಯ ಸಾಧನೆಗೆ ಬಳಕೆ ಮಾಡಿಕೊಳ್ಳುತ್ತಿರುವ ಬಿಜೆಪಿ ನಾಯಕರ ನಡೆಯನ್ನು ನಾನು ಖಂಡಿಸುತ್ತೇನೆ. ಆತುರಾತುರದಲ್ಲಿ ಕೊರೋನಾ ಲಸಿಕೆಗೆ ಅಧಿಕೃತ ಅನುಮೋದನೆ ಕೊಟ್ಟು, ಜನರಿಗೆ ಹಂಚಿದ್ದು ಕೂಡ ಈ ಸಾವುಗಳಿಗೆ ಕಾರಣವಿರಬಹುದು ಎಂಬುದನ್ನು ಅಲ್ಲಗಳೆಯಲಾಗದು. ಕಾರಣ ವಿಶ್ವದ ಅನೇಕ ಅಧ್ಯಯನಗಳು ಇತ್ತೀಚೆಗೆ ಹೆಚ್ಚಾಗಿರುವ ಹೃದಯ ಸ್ತಂಭನಕ್ಕೆ ಕೋವಿಡ್ ಲಸಿಕೆ ಕಾರಣ ಎಂಬುದನ್ನು ಹೇಳಿವೆ. ಈ ವಿಚಾರದಲ್ಲಿ ಬಿಜೆಪಿಯವರು ನಮ್ಮನ್ನು ಟೀಕಿಸುವ ಮುನ್ನ ಆತ್ಮಸಾಕ್ಷಿಯನ್ನೊಮ್ಮೆ ಕೇಳಿಕೊಳ್ಳಲಿ ಎಂದು ವಾಗ್ದಾಳಿ ನಡೆಸಿದ್ದಾರೆ.

### ಎದೆನೋವು, ಉಸಿರಾಟದ ತೊಂದರೆ ಆದ್ರೆ ಎಚ್ಚರ...!

ಜನರ ಆರೋಗ್ಯ ರಕ್ಷಣೆಗಾಗಿ ಒಂದು ಸರ್ಕಾರವಾಗಿ ಸಾಧ್ಯವಿರುವ ಎಲ್ಲಾ ಪ್ರಯತ್ನಗಳನ್ನು ನಾವು ಮಾಡುತ್ತಿದ್ದು, ಸಾರ್ವಜನಿಕರು ಎದೆನೋವು, ಉಸಿರಾಟದ ತೊಂದರೆ ಕಂಡುಬಂದರೆ ಅಲಕ್ಷ್ಯ ತೋರದೆ ತಕ್ಷಣವೇ ಸಮೀಪದ ಆರೋಗ್ಯ ಕೇಂದ್ರಗಳಿಗೆ ತೆರಳಿ ಪರೀಕ್ಷೆಗೆ ಒಳಗಾಗಬೇಕು ಎಂದು ಮನವಿ ಮಾಡಿದ್ದಾರೆ. ಹಾಸನ ಜಿಲ್ಲೆಯೂ ಸೇರಿದಂತೆ ರಾಜ್ಯದಲ್ಲಿ ಸಂಭವಿಸುತ್ತಿರುವ ಹಠಾತ್ ಸರಣಿ ಸಾವುಗಳಿಗೆ ನೈಜ ಕಾರಣ ಪತ್ತೆ ಮಾಡಿ, ತಡೆಯುವ ನಿಟ್ಟಿನಲ್ಲಿ ನಾವು ಸಂಪೂರ್ಣ ಬದ್ಧರಿದ್ದೇವೆ. ಈ ಉದ್ದೇಶದಿಂದಲೇ ಹೃದಯ ಜ್ಯೋತಿ ಮತ್ತು ಗೃಹ ಆರೋಗ್ಯದಂತಹ ಯೋಜನೆಗಳನ್ನು ಈಗಾಗಲೇ ಜಾರಿಗೆ ಮಾಡಲಾಗಿದ್ದು, ಸಾರ್ವಜನಿಕರ ಆರೋಗ್ಯದ ಮೇಲೆ ನಿಗಾ ವಹಿಸಲಾಗಿದೆ. ಈಗ ಡಾ.ರವೀಂದ್ರನಾಥ್ ಅವರ ನೇತೃತ್ವದ ತಜ್ಞರ ಸಮಿತಿ ವರದಿ ಆಧರಿಸಿ, ಮುಂದಿನ ಅಗತ್ಯ ಕ್ರಮಗಳನ್ನು ಕೂಡ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ.

### ಎಂಬಿಬಿಎಸ್ ವಿದ್ಯಾರ್ಥಿ ಸಾವು

ಬಿವಿವಿ ಸಂಘದ ಎಸ್. ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನಲ್ಲಿ ನಾಲ್ಕೂವರೆ ವರ್ಷ ಎಂಬಿಬಿಎಸ್ ಮುಗಿಸಿ ಇಂಟರ್ಶಿಪ್‌ನಲ್ಲಿದ್ದ ವಿದ್ಯಾರ್ಥಿ ಲಕ್ಷ್ಮೀಪುತ್ರ ಬಿ.ಕುಲಕರ್ಣಿ ಬೆಂಗಳೂರಲ್ಲಿ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ. ಎರಡು ದಿನಗಳ ಹಿಂದಷ್ಟೇ ರಜೆ ಮೇಲೆ ಸಂಬಂಧಿಕರ ಜೊತೆ ಲಕ್ಷ್ಮೀಪುತ್ರ ಬೆಂಗಳೂರಿಗೆ ಹೋಗಿದ್ದರು. ಅಲ್ಲಿಂದ ತಮಿಳುನಾಡಿಗೆ ಪ್ರವಾಸಕ್ಕೆ ಹೋಗಿ ವಾಪಸ್ ಬರುತ್ತಿದ್ದಾಗ ಆರೋಗ್ಯದಲ್ಲಿ ಏರುಪೇರಾಗಿ ಬೆಂಗಳೂರು ಖಾಸಗಿ ಆಸ್ಪತ್ರೆಗೆ ಕರೆದೊಯ್ದಿದ್ದರು. ಅಷ್ಟರಲ್ಲೇ ಯುವಕ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ. ಹೃದಯಾಘಾತದಿಂದ ಸಾವನ್ನಪ್ಪಿರುವ ಲಕ್ಷ್ಮೀಪುತ್ರ ಮೂಲತಃ ವಿಜಯಪುರ ಜಿಲ್ಲೆ ಸಿಂದಗಿ ತಾಲ್ಲೂಕಿನ ಕುಮಸಗಿ ಗ್ರಾಮದವರು. ಮೆಡಿಕಲ್ ಓದಲು ಬಾಗಲಕೋಟೆ ಬಿವಿವಿ ಸಂಘದ ಎಸ್. ನಿಜಲಿಂಗಪ್ಪ ಮೆಡಿಕಲ್ ಕಾಲೇಜ್‌ನಲ್ಲಿ ಪ್ರವೇಶ ಪಡೆದಿದ್ದರು.

2019-20ನೇ ಸಾಲಿನಲ್ಲಿ ಎಂಬಿಬಿಎಸ್ ಪವೇಶ ಪಡೆದು, ನಾಲ್ಕೂವರೆ ವರ್ಷ ಅಧ್ಯಯನ ಮುಗಿಸಿ ಸದ್ಯ ಇಂಟರ್ನ್‌ಶಿಪ್‌ನಲ್ಲಿ ಇದ್ದರು. ಜು.10ಕ್ಕೆ ಇಂಟರ್ನ್‌ಶಿಪ್ ಪೂರ್ಣಗೊಂಡು ವೈದ್ಯಕೀಯ ಸೇವೆಗೆ ಅಣಿಯಾಗಬೇಕಿದ್ದ ಲಕ್ಷ್ಮೀಪುತ್ರ ಇದೀಗ ಹೃದಯಾಘಾತ ಸಂಭವಿಸಿದ ಪರಿಣಾಮ ಪ್ರಾಣ ಬಿಟ್ಟಿದ್ದಾರೆ. ಯುವಕರಲ್ಲಿ ಹೆಚ್ಚು ಹೃದಯ ಸಂಬಂಧಿ ಕಾಯಿಲೆ ಕಾಣಿಸಿಕೊಳ್ಳುತ್ತಿರುವ ಪ್ರಕರಣಗಳು ಹೆಚ್ಚುತ್ತಿರುವ ಬೆನ್ನಲ್ಲೇ ಮೆಡಿಕಲ್ ಕಾಲೇಜ್ ವಿದ್ಯಾರ್ಥಿ ವೈದ್ಯಕೀಯ ಶಿಕ್ಷಣ ಮುಗಿಸಿ, ಕ್ಷಣದಲ್ಲೇ ವಿಧಿಯಾಟ ಬೇರೆಯದ್ದೇ ಆಗಿದೆ. ಹೃದಯಾಘಾತದಿಂದ ವಿದ್ಯಾರ್ಥಿ ಅಕಾಲಿಕವಾಗಿ ಮೃತಪಟ್ಟಿದ್ದಾರೆ.

### ಒಂದೂವರೆ ತಿಂಗಳಲ್ಲಿ 21 ಮಂದಿ ಸಾವು

ಜಿಲ್ಲೆಯಲ್ಲಿ ಹೃದಯಾಘಾತದಿಂದ ಸಾವು ಪ್ರಕರಣಗಳು ಮುಂದುವರಿದಿವೆ. ಸೋಮವಾರ ಒಂದೇ ದಿನ ನಾಲ್ವರು ಮೃತಪಟ್ಟಿದ್ದಾರೆ. ದೈಹಿಕವಾಗಿ ಸದೃಢರಾಗಿರುವವರೂ ತೀವ್ರ ಹೃದಯಾಘಾತ, ಹೃದಯ ಸ್ತಂಭನದಿಂದ ಸಾವಿಗೀಡಾಗುತ್ತಿದ್ದು, ಜಿಲ್ಲೆಯಲ್ಲಿ ಆತಂಕದ ಅಲೆ ಎದ್ದಿದೆ. ಸೋಮವಾರ ಒಂದೇ ದಿನ ಜಿಲ್ಲೆಯ ಬೇಲೂರಿನಲ್ಲಿ ಗೃಹಿಣಿ ಲೇಪಾಕ್ಷಿ (50), ಹೊಳೆನರಸೀಪುರದ ಪ್ರಾಧ್ಯಾಪಕ ಮುತ್ತಯ್ಯ (58), ನುಗ್ಗೇಹಳ್ಳಿ ನಾಡ ಕಚೇರಿಯ 'ಡಿ' ಗ್ರೂಪ್ ನೌಕರ ಕುಮಾರ್ (57) ಹಾಗೂ ನಗರದ ಆಟೋರಿಕ್ಷಾ ಚಾಲಕ ಸೂರ್ಯನಾರಾಯಣರಾವ್ (63) ಮೃತಪಟ್ಟಿದ್ದಾರೆ. ಮೇ 20ರಿಂದ ಜೂನ್ 30ರವರೆಗೆ 21 ಜನರು ಹೃದಯಾಘಾತದಿಂದ ಮೃತಪಟ್ಟಿದ್ದಾರೆ. ಈ ಪೈಕಿ ನಾಲ್ವರು ಬೆಂಗಳೂರಿನಲ್ಲಿ ಮೃತಪಟ್ಟಿದ್ದಾರೆ. 25 ವರ್ಷದೊಳಗಿನ ಮೂವರು ಯುವತಿಯರು ಹಾಗೂ ಇಬ್ಬರು ಯುವಕರು ಮೃತಪಟ್ಟಿದ್ದಾರೆ.

## ತಮ್ಮ ಪರವಾಗಿ ಬ್ಯಾಟ್ ಬೀಸಿದ ಶಾಸಕನಿಗೆ ಎಚ್ಚರಿಕೆ ನೀಡಿದ ಡಿಕೆ

■ ಇಕ್ಬಾಲ್ ಹುಸೇನ್‌ಗೆ ನೋಟಿಸ್ ನೀಡುವುದಾಗಿ ಘೋಷಣೆ ■ ಡಿಕೆಗೆ 100ಕ್ಕೂ ಹೆಚ್ಚು ಶಾಸಕರ ಬೆಂಬಲ

• **ಉದಯವಾಹಿನಿ, ಬೆಂಗಳೂರು**

ಮುಂದಿನ ಮೂರು ತಿಂಗಳ ಒಳಗಾಗಿ ಡಿಸಿಎಂ ಡಿಕೆ ಶಿವಕುಮಾರ್ ಅವರು ಸಿಎಂ ಆಗುತ್ತಾರೆ ಎಂದು ಭವಿಷ್ಯ ನುಡಿದಿದ್ದ ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಅವರಿಗೆ ನೋಟಿಸ್ ಕೊಡುತ್ತೇನೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಗುಡುಗಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಮಾತನಾಡಿದ ಅವರು, ನನಗೆ ಯಾರು ಸಿಎಂ ಆಗ್ತೀನಿ ಅಂತ ಹೇಳುವ ಅವಶ್ಯಕತೆ ಇಲ್ಲ. ಇವತ್ತೋ ನಾಳೆನೋ ಅವನಿಗೆ ನೋಟಿಸ್ ಇಶ್ಯೂ ಮಾಡ್ತೀನಿ. ನನಗೆ ಯಾರೂ ಹೇಳುವುದು ಬೇಡ. ಮಾಧ್ಯಮದ ಮುಂದೆ ಯಾರು ಹೋಗಬಾರದು. ಇಕ್ಬಾಲ್ ಹುಸೇನ್ ಹೇಳೋದು ಅಷ್ಟೇ, ಬಿ.ಆರ್. ಪಾಟೀಲ್, ಬಾಲಕೃಷ್ಣಗೆ ಹೇಳೋದೂ ಇಷ್ಟೆ. ಇದನ್ನೆಲ್ಲ ಹೇಳುವ ಅವಶ್ಯಕತೆ ಇಲ್ಲ. ಮುಖ್ಯಮಂತ್ರಿಗಳಾಗಿ ಸಿದ್ದರಾಮಯ್ಯನವರು ಇದ್ದಾರೆ. ಅವರ ಕೈ ಬಲಪಡಿಸುವುದು, ಸರ್ಕಾರದ ಕೈ ಬಲಪಡಿಸೋದು ಅಷ್ಟೇ ನಮ್ಮ ಗುರಿ, ಎಂದು ಕಡ್ಡಿ ಮುರಿದಂತೆ ನುಡಿದರು. ಸೋಮವಾರ ರಾಮನಗರದಲ್ಲಿ ಮಾತನಾಡಿದ್ದ ಶಾಸಕ ಇಕ್ಬಾಲ್ ಹುಸೇನ್ ಇನ್ನು ಎರಡು ಮೂರು ತಿಂಗಳಲ್ಲಿ ಹೈಕಮಾಂಡ್ ಒಂದು ತೀರ್ಮಾನಕ್ಕೆ ಬರುತ್ತದೆ. ನಾನು ಸುತ್ತಿ ಬಳಸಿ ಮಾತನಾಡುತ್ತಿಲ್ಲ. ಎರಡು ಮೂರು ತಿಂಗಳಲ್ಲಿ ಡಿಕೆ ಶಿವಕುಮಾರ್‌ಗೆ ಸಿಎಂ ಸ್ಥಾನ ಸಿಗಲಿದೆ ಎಂದಿದ್ದರು. ಮುಂದುವರಿದು ಆಂಗ್ಲ ಮಾಧ್ಯಮಗಳ ಜೊತೆ ಮಾತನಾಡಿದ್ದ ಅವರು, ಡಿಕೆಶಿ ಅವರಿಗೆ 100ಕ್ಕೂ ಹೆಚ್ಚು ಶಾಸಕರ ಬೆಂಬಲ ಇದೆ ಎಂದಿದ್ದರು.

**ಕೈ ಬಲಪಡಿಸೋದು ಅಷ್ಟೇ ನಮ್ಮ ಗುರಿ**

ಈಗ ನೋಡಿ ನಮ್ಮ ವರ್ಕಿಂಗ್ ಪ್ರೆಸಿಡೆಂಟ್ ಜಿಸಿ ಚಂದ್ರಶೇಖರ್ ಅವರು ಹೋಗಿ ಸಭೆಗಳನ್ನು ಮಾಡುತ್ತಿದ್ದಾರೆ. ಅವರಿಗೆ ಒಂದು ಜಿಲ್ಲೆಯ ಜವಾಬ್ದಾರಿ ನೀಡಿದ್ದಾರೆ. ಯಾರನ್ನು ಅಧ್ಯಕ್ಷರನ್ನಾಗಿ ಮಾಡಬೇಕು, ಏನು ಮಾಡಬೇಕು ಅಂತ ಪ್ರತಿಯೊಂದು ತಾಲೂಕಲ್ಲೂ ಕೂಡ ಅವರು ಹೋಗಿ ಮೀಟಿಂಗ್ ಮಾಡ್ತಾ ಇದ್ದಾರೆ. ಹರಿಪ್ರಸಾದ್ ಇನ್‌ಚಾರ್ಜ್ ಸೆಕ್ರೆಟರಿ ಇದ್ದರೂ ಕೂಡ ಅವರೇ ಹೋಗಿ ಅಲ್ಲಿ ಮೀಟಿಂಗ್ ಮಾಡ್ತಾ ಇದ್ದಾರೆ, ಎಂದು ವಿವರ ನೀಡಿದರು.



**ಯಾರಿಗೂ ಗಾಬರಿ ಬೇಡ!**

ಇನ್ನು ರಣದೀಪ್ ಸಿಂಗ್ ಸುರ್ಜೇವಾಲ ಅವರು ಶಾಸಕರ ಜೊತೆ ಸಭೆ ನಡೆಸುತ್ತಿರುವ ಕುರಿತಾಗಿ ಮಾತನಾಡಿದ ಡಿಕೆ ಶಿವಕುಮಾರ್, ಯಾರಿಗೂ ಗಾಬರಿ ಬೇಡ. ಇದು ಸಂಪೂರ್ಣ ಪಕ್ಷದ ಸಂಘಟನೆ ವಿಚಾರ. ಇಡೀ ದೇಶದಲ್ಲೇ ಎಲ್ಲಾ ಬ್ಲಾಕ್‌ಗಳು, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರನ್ನೆಲ್ಲಾ ಬದಲಾವಣೆ ಮಾಡ್ತಾ ಇದ್ದೇವೆ. ಮಲ್ಲಿಕಾರ್ಜುನ ಖರ್ಗೆಯವರು ಬೆಳಗಾವಿಯಲ್ಲಿ, ಇದು ಕಾಂಗ್ರೆಸ್ ಸಂಘಟನೆ ವರ್ಷ ಎಂದು ಘೋಷಣೆ ಮಾಡಿದ್ದರು. ಸಂಘಟನೆ ವರ್ಷದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರುಗಳಿಗೆ ನಾವು ಹೆಚ್ಚಿನ ಶಕ್ತಿ ತುಂಬಬೇಕು ಅಂತ ಅವರು ಹೇಳಿದ್ದಾರೆ. ಅದರಂತೆ ಈ ಸಭೆಗಳು ನಡೆಯುತ್ತಿವೆ. ಇದಾದ ನಂತರ ದಿಲ್ಲಿಗೆ ಎಲ್ಲಾ ಜಿಲ್ಲಾ ಅಧ್ಯಕ್ಷರನ್ನು ಕರಿಸಿ ಸಭೆ ಮಾಡಿದ್ದಾರೆ. ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆಯವರು, ಜನರಲ್ ಸೆಕ್ರೆಟರಿಯವರು ಎಲ್ಲರೂ ಕೂತುಕೊಂಡು ಎಲ್ಲಾ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರುಗಳ ಹತ್ತಿರ ಪ್ರತ್ಯೇಕವಾಗಿ ಸುದೀರ್ಘ ಚರ್ಚೆ ನಡೆಸಿದ್ದಾರೆ. ಪ್ರತಿಯೊಂದು ವಿಚಾರದ ಬಗ್ಗೆಯೂ ಇದರಲ್ಲಿ ಚರ್ಚೆಯಾಗಿದೆ. ಯಾವ ರೀತಿ ಬಿಲ್ಡಿಂಗ್‌ಗಳು ಕಟ್ಟಬೇಕು, ಯಾವ ರೀತಿ ಕಚೇರಿ ಇರಬೇಕು, ನಿಮ್ಮ ಜವಾಬ್ದಾರಿ ಏನು ಸೇರಿ ಎಲ್ಲವೂ ಚರ್ಚೆಯಾಗಿದೆ.

ಹೀಗಾಗಿ ರಣದೀಪ್ ಸುರ್ಜೇವಾಲಾ ಅವರು ಸಂಘಟನೆ ವಿಚಾರಕ್ಕೆ ಬಂದಿರುವುದು. ಇದರ ಜೊತೆಗೆ ಏನಾದರೂ ಕುಂದು ಕೊರತೆ ಇದ್ದರೆ ಹೇಳಿ ಅಂತ. ಕೆಲವೊಂದು ಹೇಳಿಕೆಗಳೆಲ್ಲ ಹೊರಗೆ ಬೀಳ್ತಿದ್ದಾವೆ. ಹೀಗಾಗಿ ಪಕ್ಷದಲ್ಲಿ ಶಿಸ್ತು ತರಬೇಕು ಎಂದು ತೀರ್ಮಾನ ಮಾಡಿದ್ದೇವೆ. ಪಕ್ಷದಲ್ಲಿ ಶಿಸ್ತು ಬಹಳ ಮುಖ್ಯ. ಅದು ಬಿಟ್ಟರೆ ಯಾವ ನಾಯಕತ್ವ ಬದಲಾವಣೆ ವಿಚಾರವೂ ಇಲ್ಲ. ಅದರ ಬಗ್ಗೆ ಚರ್ಚೆ ಇಲ್ಲ. ನಮಗೆ 2028 ಬಹಳ ಮುಖ್ಯ ಎಂದು ಸ್ಪಷ್ಟಪಡಿಸಿದರು.

ಅನುದಾನದ ವಿಚಾರದಲ್ಲಿ ಇರುವ ಅಸಮಾಧಾನದ ಬಗ್ಗೆ ಪ್ರತಿಕ್ರಿಯಿಸಿ, ಒಂದು ಲಕ್ಷ ಕೋಟಿ ರೂಪಾಯಿಗಳನ್ನು ಕಲ್ಯಾಣ ಕಾರ್ಯಕ್ರಮಗಳಿಗೆ ನೀಡುತ್ತಿದ್ದೇವೆ. 54,000 ಕೋಟಿ ರೂ. ಗ್ಯಾರಂಟಿಗೆ ಹೋಗ್ತಾ ಇದೆ. 19,000 ಕೋಟಿ ರೂಗಳಿಗೆ. ರೈತರಿಗೆ ಉಚಿತ ವಿದ್ಯುತ್‌ಗೆ ನೀಡ್ತಿದ್ದೇವೆ. ಎಲ್ಲಾ ಸೇರಿ ಒಂದು ಲಕ್ಷ ಕೋಟಿ ರೂ. ಕಲ್ಯಾಣ ಕಾರ್ಯಕ್ರಮಗಳಿಗೆ ಹೋಗುತ್ತಿದೆ. ಇದು ಜನರ ಅಭಿವೃದ್ಧಿಗೇ ಅಲ್ವಾ ಎಂದು ಮರು ಪ್ರಶ್ನೆ ಹಾಕಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,840/Gram24ct ₹9,020/Gram22ct ಬೆಳ್ಳಿ: ₹110.00/Gram

## ಊಹಾ ಪತ್ರಿಕೋದ್ಯಮ ಅಪಾಯಕಾರಿ

• **ಉದಯವಾಹಿನಿ, ಬೆಂಗಳೂರು**

ನಿಜ ಸುದ್ದಿಗಾಗಿ ಹೋರಾಟ ನಡೆಸುವ ಸಂದರ್ಭ ಬಂದಿದೆ ಎಂದರೆ, ಸುಳ್ಳು ಸುದ್ದಿಗಳು ಹೆಚ್ಚಾಗಿವೆ ಎಂದು ಅರ್ಥವಲ್ಲವೇ ಊಹಾ ಪತ್ರಿಕೋದ್ಯಮವು ಪತ್ರಿಕೋದ್ಯಮ, ಸಮಾಜ ಎರಡಕ್ಕೂ ಅಪಾಯ. ಹೀಗಾಗಿ ಪತ್ರಿಕೋದ್ಯಮ ಇದರಿಂದ ಹೊರಗೆ ಬರಬೇಕು ಎಂದು ಸಿದ್ದರಾಮಯ್ಯ ಅವರು ಮಂಗಳವಾರ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಪತ್ರಿಕಾ ದಿನಾಚರಣೆ-2025, ನಿಜ ಸುದ್ದಿಗಾಗಿ ಸಮರ ಸಂವಾದದಲ್ಲಿ ಮಾತನಾಡಿದ ಸಿಎಂ, ಮಾಧ್ಯಮ ಸ್ವತಂತ್ರವಾಗಿ, ನಿರ್ಭೀತಿಯಿಂದ ಸುದ್ದಿ ಮಾಡಬೇಕು ಎನ್ನುವುದರಲ್ಲಿ ನಂಬಿಕೆ ಇಟ್ಟುಕೊಂಡಿರುವವನು ನಾನು. ಜವಾಹರಲಾಲ್ ನೆಹರೂ ಅವರೂ ಇದನ್ನೇ ನಂಬಿದ್ದರು ಮತ್ತು ಪಾಲಿಸಿದ್ದರು. ಯಾವುದೇ ಚಾನಲ್‌ಗಳು ನನ್ನ ಬಗ್ಗೆ ಎಷ್ಟು ಸುಳ್ಳು ಹೇಳಿದರೂ ನಾನು ಯಾರಿಗೂ ಫೋನ್ ಮಾಡಿ ಪ್ರಶ್ನೆ ಮಾಡುವವನಲ್ಲ ಎಂದಿದ್ದಾರೆ. ನನ್ನ ಕಾರಿನ ಮೇಲೆ ಕಾಗೆ ಕೂತಿದ್ದನ್ನು ಚರ್ಚೆ ನಡೆಸಿ, ಮೂಢನಂಬಿಕೆ ಬಿತ್ತುವುದನ್ನು ಪತ್ರಿಕಾವೃತ್ತಿ ಎಂದು ಕರೆಯಬೇಕಾ ಜನರನ್ನು ಮೌಢ್ಯಕ್ಕೆ ತಳ್ಳುವುದು ಪತ್ರಿಕಾ ವೃತ್ತಿಯಾ ಈ ಬಗ್ಗೆ ನೀವೆಲ್ಲರೂ ಯೋಚಿಸಬೇಕು ಎಂದು ಸಿಎಂ ಸಿದ್ದರಾಮಯ್ಯ ಅವರು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

## ಬೆಂಗಳೂರು ಪ್ರತಿಷ್ಠಿತ ಸಲೂನ್‌ನಿಂದ 50 ಕೋಟಿ ವಂಚನೆ ಆರೋಪ

• **ಉದಯವಾಹಿನಿ, ಬೆಂಗಳೂರು**

ನಗರದ ಪ್ರತಿಷ್ಠಿತ ಪೆರಿಮೀಟರ್ ಸಲೂನ್ ಮಾಲೀಕರಿಂದ ಕೋಟಿ ಕೋಟಿ ವಂಚನೆ ಮಾಡಿರುವ ಆರೋಪ ಕೇಳಿ ಬಂದಿದೆ. ಹೌದು, ಬೆಂಗಳೂರಿನ ಪ್ರತಿಷ್ಠಿತ ಪೆರಿಮೀಟರ್ ಸಲೂನ್ ರಾಜ್ಯಾದ್ಯಂತ ಹಲವು ಬ್ರ್ಯಾಂಚ್‌ಗಳನ್ನು ಹೊಂದಿದೆ. ಈ ಸಲೂನ್‌ಗೆ ಬರುವ ಶ್ರೀಮಂತ ಮಹಿಳೆಯರನ್ನು ಟಾರ್ಗೆಟ್ ಮಾಡಿ, ಅವರಿಂದ ಕೋಟಿ ಕೋಟಿ ವಂಚಿಸುತ್ತಿದ್ದಾರೆ. ನಮ್ಮ ಬಳಿಕ ಹೂಡಿಕೆ ಮಾಡಿ, ಇದರಿಂದ ನೀವು ಲಕ್ಷಾಂತರ ರೂ. ಲಾಭ ಮಾಡಬಹುದು ಎಂದು ನಂಬಿಸುತ್ತಾರೆ ಎಂದು ಆರೋಪಿಸಲಾಗಿದೆ. ಇದನ್ನು ನಂಬಿದ ಮಹಿಳೆಯರು ಹಣದಾಸೆಗೆ ಬಿದ್ದು ತಲಾ 10 ಲಕ್ಷದಿಂದ 50 ಲಕ್ಷ ರೂ.ವರೆಗೆ ಹೂಡಿಕೆ ಮಾಡಿದ್ದಾರೆ. ಆದರೆ ಸ್ವಲ್ಪ ಸಮಯದ ಬಳಿಕ ಯಾವುದೇ ಲಾಭ ಕೊಡದೇ ಮಾಲೀಕರಾದ ರಕ್ಷಾ ಹರಿಕಾಲ್ ಸಲ್ವ, ಸುನೀತ್ ಮೆಹ್ತಾ ಹಾಗೂ ತಿವಾರಿ ಎಂಬುವವರು ವಂಚಿಸಿದ್ದಾರೆ. ಸದ್ಯ ಈ ಕುರಿತು ಗೋವಿಂದರಾಜ ನಗರ, ತಲಘಟ್ಟಪುರ, ಸಿಸಿಬಿ ಸೇರಿದಂತೆ ಹಲವು ಕಡೆ ಎಫ್‌ಐಆರ್ ದಾಖಲಾಗಿದೆ. ಪೊಲೀಸರು ಪ್ರಾಥಮಿಕ ವಿಚಾರಣೆ ನಡೆಸಿದ ವೇಳೆ ಸುಮಾರು 50 ಕೋಟಿಯಷ್ಟು ಹಣ ವಂಚನೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಸದ್ಯ ಎಫ್‌ಐಆರ್ ಆಧಾರದ ಮೇಲೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಬೆಂಗಳೂರು ಅಡ್ವಕೇಟ್ಸ್ ಅಕಾಡೆಮಿಗೆ ಜಮೀನು

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ಅಡ್ವಕೇಟ್ಸ್ ಅಕಾಡೆಮಿಯ ಕಾರ್ಯ ಚಟುವಟಿಕೆಗಳಿಗೆ ಅನುವಾಗುವಂತೆ 10 ಎಕರೆ ಜಮೀನು ನೀಡಬೇಕೆಂಬ ಮನವಿಯನ್ನು ಸರ್ಕಾರಕ್ಕೆ ಮನದಟ್ಟು ಮಾಡಲು ಪ್ರಯತ್ನಿಸಲಾಗುವುದು ಎಂದು ಅಡ್ವಕೇಟ್ ಜನರಲ್ ವಕೀಲ ವೃಂದಕ್ಕೆ ಭರವಸೆ ನೀಡಿದರು. ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿದ್ದ ಮತ್ತು ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿಯೂ ಆದ ಎ.ಎಸ್.ಓಕಾ ಅವರಿಗೆ 'ಬೆಂಗಳೂರು ವಕೀಲರ ಸಂಘದವತಿಯಿಂದ ಸೋಮವಾರ ನೀಡಲಾದ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅಡ್ವಕೇಟ್ ಜನರಲ್ ಕೆ.ಶಶಿಕಿರಣ ಶೆಟ್ಟಿ ಅವರು, ವಕೀಲರ ಅಕಾಡೆಮಿಗೆ ಸರ್ಕಾರವು ಜಮೀನು ಮಂಜೂರು ಮಾಡಬೇಕು ಎಂಬ ಬೇಡಿಕೆಯಿದೆ. ಅಕಾಡೆಮಿಯ ಪದಾಧಿಕಾರಿಗಳು ಈಗಾಗಲೇ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ. ಅಕಾಡೆಮಿಗೆ ಜಮೀನಿನ ಅಗತ್ಯತೆ ಕುರಿತು ರಾಜ್ಯ ಸರ್ಕಾರಕ್ಕೆ ಮನದಟ್ಟು ಮಾಡಿಕೊಡಲಾಗುವುದು' ಎಂದರು. ಅಭಿನಂದನೆ ಸ್ವೀಕರಿಸಿ ಉಪನ್ಯಾಸ ನೀಡಿದ ಎ.ಎಸ್. ಓಕಾ ಅವರು, ಸಾಮಾಜಿಕ ನ್ಯಾಯ ಮತ್ತು ಸಾರ್ವಜನಿಕ ಹಿತಾಸಕ್ತಿ ಹೊಂದಿದ ಪ್ರಕರಣಗಳಲ್ಲಿ ಆಸಕ್ತರಾಗಿ ವೃತ್ತಿ ಕೌಶಲ ಮೈಗೂಡಿಸಿಕೊಳ್ಳಬೇಕು. ಕೋರ್ಟ್ ಹಾಲ್‌ನಲ್ಲಿ ಕ್ರೋಧಭರಿತರಾಗಿ ಆಕ್ರಮಣಕಾರಿ ಶೈಲಿಯಲ್ಲಿ ವಾದ ಮಂಡಿಸುವುದು ಬಹಳ ಸುಲಭ. ಆದರೆ, ಶಾಂತಚಿತ್ತರಾಗಿ ಸಹನೆಯಿಂದ ವಾದಾಂಶ ಪ್ರತಿಪಾದಿಸುವುದನ್ನು ಅಭ್ಯಾಸ ಮಾಡಿಕೊಂಡಿದ್ದೇ ಆದರೆ, ಅಂತಹವರ ವ್ಯಕ್ತಿತ್ವ ಸಹಜವಾಗಿಯೇ ಎತ್ತರೆತ್ತರ ಬೆಳೆಯುತ್ತದೆ' ಎಂದು ಕಿವಿಮಾತು ಹೇಳಿದರು.

## ದಲಿತರ ಕೃಷಿ ಭೂಮಿ ವಶಕ್ಕೆ ಅರಣ್ಯ ಇಲಾಖೆ ಯತ್ನ: ಬಿಜೆಪಿ ಆರೋಪ

• **ಉದಯವಾಹಿನಿ, ಬೆಂಗಳೂರು**

ನಗರದ ಹೊರವಲಯದ ಕಾಡುಗೋಡಿ ಬಳಿಯ ದಿನ್ನೂರು ಗ್ರಾಮದಲ್ಲಿ ದಲಿತರು ವ್ಯವಸಾಯ ಮಾಡುತ್ತಿರುವ ಬೆಲೆಬಾಳುವ ಜಮೀನನ್ನು ಅರಣ್ಯ ಇಲಾಖೆ ವಶಕ್ಕೆ ಪಡೆಯಲು ಮುಂದಾಗಿರುವುದನ್ನು ಬಿಜೆಪಿ ತೀವ್ರವಾಗಿ ಖಂಡಿಸಿದೆ. ಅರಣ್ಯಾಧಿಕಾರಿಗಳ ಕ್ರಮದ ವಿರುದ್ಧ ವಿಧಾನಪರಿಷತ್ತಿನ ಪ್ರತಿಪಕ್ಷದನಾಯಕ ಛಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ಬಿಜೆಪಿ ನಾಯಕರು ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಸೋಮವಾರ ಪ್ರತಿಭಟನೆ ನಡೆಸಿದರು. ಈ ವೇಳೆ ಮಾತನಾಡಿದ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ರಾಜ್ಯ ಸರ್ಕಾರವು ಅರಣ್ಯ ಸಚಿವ ಈಶ್ವರ ಖಂಡ್ರೆ ನೇತೃತ್ವದಲ್ಲಿ ದಲಿತರ ಕತ್ತು ಹಿಸುಕುವ ಕೆಲಸ ಮಾಡುತ್ತಿದೆ. ದಲಿತರ ವಿರುದ್ಧ ನಡೆಯುತ್ತಿರುವ ಕಾರ್ಯಾಚರಣೆ ತಕ್ಷಣ ನಿಲ್ಲಿಸಬೇಕು ಎಂದು ಆಗ್ರಹಿಸಿದರು. ದಿನ್ನೂರಿನಲ್ಲಿ 711 ಎಕರೆ ಜಾಗ ಇತ್ತು. ರೈಲ್ವೆ ಇಲಾಖೆಗೆ 278 ಎಕರೆ, ದೇವಸ್ಥಾನಕ್ಕೆ ಸುಮಾರು 3 ಎಕರೆ, ರಸ್ತೆಗೆ 13 ಎಕರೆ, ಇಂದಿರಾ ಕ್ಯಾಂಟೀನ್‌ಗೆ 13 ಗುಂಟೆ, ದಿನ್ನೂರು ಕಾಲೊನಿಯಲ್ಲಿ ಮನೆ ಕಟ್ಟಲು 20 ಎಕರೆ ಜಮೀನು ಕೊಟ್ಟಿದ್ದಾರೆ. ಸ್ಮಶಾನಕ್ಕೆ ಎರಡೂವರೆ ಎಕರೆ, ಬಡಾವಣೆ ಮಾಡಲು 32 ಎಕರೆ ಕೊಟ್ಟಿದ್ದು ಪೊಲೀಸ್ ಠಾಣೆಗೂ ನಾಲ್ಕೂವರೆ ಎಕರೆ ನೀಡಿದ್ದಾರೆ.

## ರಾಜ್ಯದ ಮೊಟ್ಟ ಮೊದಲ ಕೆ.ಸಿ.ರೆಡ್ಡಿ ಸಾಂಸ್ಕೃತಿಕ ಉತ್ಸವ-2025

• **ಉದಯವಾಹಿನಿ, ಕೋಲಾರ**

ಕನ್ನಡ ಸಂಸ್ಕೃತಿ, ಪರಂಪರೆ ಉಳಿಸುವ ನಿಟ್ಟಿನಲ್ಲಿ, ಕನ್ನಡದ ವೈಭವವನ್ನು ಸಾರುವ ನಿಟ್ಟಿನಲ್ಲಿ ಕೆ.ಸಿ ರೆಡ್ಡಿ ಸರೋಜಮ್ಮ ವೆಲ್ಪೇರ್ ಫೌಂಡೇಶನ್ ವತಿಯಿಂದ ಕೆ.ಸಿ ರೆಡ್ಡಿ ಸಾಂಸ್ಕೃತಿಕ ಉತ್ಸವ-2025. ಕೆ.ಸಿ ರೆಡ್ಡಿರವರ ಸೊಸೆ ವಸಂತ ಕವಿತ ರವರು ಡಾ ಬಿ.ಆರ್ ಅಂಬೇಡ್ಕರ್ ಬಾಲಕಿಯರ ವಸತಿ ಶಾಲೆ ಹಾಗೂ ಜವಾಹರ್ ನವೋದಯ ವಿದ್ಯಾಲಯ, ವಕ್ಕಲೇರಿ ಇವರ ಸಹಯೋಗದೊಂದಿಗೆ ಆಯೋಜಿಸಲಾಗಿತ್ತು.

ಭಾರತದ ಸರ್ವೋಚ್ಚ ನ್ಯಾಯಾಲಯದ ಮಾಜಿ ನ್ಯಾಯಾಧೀಶರಾದ ವಿ ಗೋಪಾಲಗೌಡರು. ವಿಧಾನಪರಿಷತ್ ಸದಸ್ಯರಾದ ಡಿ.ಟಿ ಶ್ರೀನಿವಾಸ, ವಿಧಾನಪರಿಷತ್ ಮಾಜಿ ಸಭಾಪತಿಗಳಾದ ವಿ.ಆರ್ ಸುದರ್ಶನ್, ಬಂಗಾರಪೇಟೆ ನಗರ ಸಭೆ ಅಧ್ಯಕ್ಷರಾದ ಚಂದ್ರಾರೆಡ್ಡಿ ರವರು ದೀಪ ಬೆಳಗಿಸಿ ಸಾಂಸ್ಕೃತಿಕ ಉತ್ಸವಕ್ಕೆ ಚಾಲನೆ ನೀಡಿದರು. ನ್ಯಾಯಮೂರ್ತಿಗಳಾದ ವಿ.ಗೋಪಾಲಗೌಡರು ಮಾತನಾಡಿ ಕರ್ನಾಟಕದ ಮೊಟ್ಟ ಮೊದಲ ಮುಖ್ಯಮಂತ್ರಿಯಾದ ಕೆ.ಸಿ ರೆಡ್ಡಿಯವರ ರಾಜಕೀಯ ಸಿದ್ಧಾಂತ, ಸಾಮಾಜಿಕ ಕಳಕಳಿ, ಸಮಾಜಕ್ಕೆ ಅವರು ನೀಡಿದ ಕೊಡುಗೆಗಳ ಅಪಾರ. ಕೆ.ಸಿ.ರೆಡ್ಡಿರವರು ಜನಸೇವೆಯ ಜನಾರ್ಧನ ಸೇವೆ ಎಂಬಂತೆ ರಾಜಕೀಯ ಕ್ಷೇತ್ರದಲ್ಲಿ ತತ್ವಸಿದ್ಧಾಂತದಂತೆ ಜನಸೇವೆ ಮಾಡಿದರು. ಶ್ರೀಮತಿ ವಸಂತ ಕವಿತಾ ರವರು ಮಾತನಾಡಿ ಕೆ.ಸಿ.ರೆಡ್ಡಿ ವೇಲ್ಬರ್ ಫೌಂಡೇಷನ್ ಗ್ರಾಮೀಣ ಮಕ್ಕಳ ಶಿಕ್ಷಣ ಮತ್ತು ಪರಿಸರ ಕುರಿತು ಸೇವೆ ಮಾಡುತ್ತಿದೆ.


ಉದಯವಾಹಿನಿ ಚಿತ್ರ

ಗ್ರಾಮೀಣ ಭಾಗದ ಮಕ್ಕಳು ಬುದ್ದಿವಂತರು ಅವರಿಗೆ ಉತ್ತಮ ಶಿಕ್ಷಣ ಲಭಿಸಿದರೆ ಉತ್ತಮ ಪ್ರಜೆಯಾಗಿ ದೇಶ ಸೇವೆ ಮಾಡಬಲ್ಲರು.

ಗ್ರಾಮೀಣ ಭಾಗದ ಸರ್ಕಾರಿ ಶಾಲೆಯ ಶಿಕ್ಷಣಕ್ಕೆ ಬೇಕಾದ ನೋಟ್ ಪುಸ್ತಕ, ಕಂಪ್ಯೂಟರ್ ಮತ್ತು ಬಿಸಿಲು, ಮಳೆಯಿಂದ ರಕ್ಷಣೆಗಾಗಿ ಛತ್ರಿಗಳನ್ನು ನೀಡಲಾಗಿದೆ. ವಿದ್ಯಾವಂತ ಸಮಾಜ ನಿರ್ಮಾಣ ಮಾಡಬೇಕು ಎಂಬುದು ನಮ್ಮ ಉದ್ದೇಶ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸುಮಾರು 1300 ಕ್ಕೂ ಹೆಚ್ಚು ವಿದ್ಯಾರ್ಥಿಗಳು, ಪೋಷಕರು ಸಿಬ್ಬಂದಿಗಳು ಭಾಗವಹಿಸಿದ್ದು, ಎರಡು ಶಾಲೆಗಳ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರ ಕಣ್ಮನ ಸೆಳೆಯುವಂತಿತ್ತು. ಆದಿಮ, ಕೋಲಾರ ಸಂಸ್ಥೆಯಿಂದ ತರಬೇತಿ ನೀಡಲಾದ ಡೊಳ್ಳು ಕುಣಿತ, ತಮಟೆ ಕಲಾ ಪ್ರಕಾರಗಳು ಕನ್ನಡ ಸಂಸ್ಕೃತಿಯನ್ನು, ಕನ್ನಡದ ಹಿರಿಮೆಯನ್ನು ಹೆಚ್ಚಿಸುವಂತಿತ್ತು ಅಲ್ಲದೇ ಕಲಾ ಪ್ರದರ್ಶನ ಅದ್ಭುತವಾಗಿ ಮೂಡಿ ಬಂತು.

ಈ ಕಾರ್ಯಕ್ರಮದಲ್ಲಿ ಪಿ.ಎಂ.ಶ್ರೀ ನವೋದಯ ವಿದ್ಯಾಲಯದ ಪ್ರಾಂಶುಪಾಲರಾದ ಇ ಉಮಾಪತಿರೆಡ್ಡಿ, ಉಪ ಪ್ರಾಂಶುಪಾಲರಾದ ಉಮಾ, ಡಾ ಬಿ.ಆರ್ ಅಂಬೇಡ್ಕರ್ ಬಾಲಕಿಯರ ವಸತಿ ಶಾಲೆಯ ಪ್ರಾಂಶುಪಾಲರಾದ ಆನಂತ ಕುಮಾರ್ ಕೆ.ಸಿ. ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮದನಹಳ್ಳಿ ಕ್ರಾಸ್ ಪ್ರಾಂಶುಪಾಲರಾದ ವೆಂಕಟರವಣಪ್ಪ ಜಿ. ಎಂ ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

## ಪೊಲೀಸ್ ಗಸ್ತು: ಹೊಸ ವ್ಯವಸ್ಥೆಗೆ ಅಸ್ತು

### ಮರಳಿ ಠಾಣೆಗೆ, ಮನೆ ಮನೆಗೆ ಪೊಲೀಸರು ಎಂಬ ನೂತನ ಕಾರ್ಯಕ್ರಮ

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ಅಪರಾಧ ಪ್ರಕರಣಗಳನ್ನು ಕಡಿಮೆ ಮಾಡಲು ಪಣ ತೊಟ್ಟಿರುವ ನಗರ ಪೊಲೀಸರು, ಕೆಲವು ವಿನೂತನ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಪೊಲೀಸ್ ಬೀಟ್ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿದ್ದಾರೆ. ಮರಳಿ ಠಾಣೆಗೆ, ಮನೆ ಮನೆಗೆ ಪೊಲೀಸರು ಎಂಬ ನೂತನ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತಂದಿದ್ದಾರೆ. ಆರೋಪಿಗಳ ಪತ್ತೆಗಾಗಿ ಸಿಸಿಟಿವಿ ಕ್ಯಾಮೆರಾ ಅಳವಡಿಕೆಗೆ ವೇಗ ಸಿಕ್ಕಿದೆ.

ಉದ್ಯೋಗ, ಶಿಕ್ಷಣ, ವ್ಯಾಪಾರಕ್ಕೆಂದು ರಾಜ್ಯ, ಹೊರ ರಾಜ್ಯದಿಂದ ನಗರಕ್ಕೆ ಬರುತ್ತಿರುವವರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಅವರೆಲ್ಲರಿಗೂ ಭದ್ರತೆ, ಸುರಕ್ಷಿತ ವಾತಾವರಣ ನಿರ್ಮಿಸುತ್ತೇವೆ ಎಂದು ಪೊಲೀಸರು ಭರವಸೆ ತುಂಬುತ್ತಿದ್ದಾರೆ. ಬೀಟ್ ವ್ಯವಸ್ಥೆ ಸಮರ್ಪಕವಾಗಿ ನಡೆಯುತ್ತಿಲ್ಲ, ಇ-ಬೀಟ್ ವ್ಯವಸ್ಥೆಯಿದ್ದರೂ ಹೊಯ್ಸಳ ಸಿಬ್ಬಂದಿ ಬಡಾವಣೆಗಳಲ್ಲಿ ಕಾಣಿಸಿಕೊಳ್ಳುತ್ತಿಲ್ಲ ಎಂದು ನಾಗರಿಕರು ದೂರಿದ್ದರು. ದೂರಿನ ಬೆನ್ನಲ್ಲೇ ನಗರ ಪೊಲೀಸ್ ಕಮಿಷನರ್ ಸೀಮಂತ್ ಕುಮಾರ್ ಸಿಂಗ್ ಅವರು ಪೊಲೀಸ್ ಗಸ್ತು ವ್ಯವಸ್ಥೆಯಲ್ಲಿ ಬದಲಾವಣೆ ತಂದಿದ್ದಾರೆ.

**ಪಿಎಸ್‌ಐ ನೇತೃತ್ವದಲ್ಲೇ ಕಾಲ್ನಡಿಗೆ:** ನಗರದಾದ್ಯಂತ ಬೆಳಿಗ್ಗೆ ಮತ್ತು ಸಂಜೆ ಇ-ಬೀಟ್ ವ್ಯವಸ್ಥೆಗೆ ಸಿಬ್ಬಂದಿಯನ್ನು ನೇಮಿಸಲಾಗಿತ್ತು. ಅವರು ಹೊಯ್ಸಳ ವಾಹನ ಹಾಗೂ ಚೀತಾ ವಾಹನಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು. ಸಾರ್ವಜನಿಕರ ನಂಬಿಕೆ ಬಲಪಡಿಸಲು ಹಾಗೂ ಪೊಲೀಸ್ ಉಪಸ್ಥಿತಿ ಹೆಚ್ಚಿಸಲು ಬೀಟ್ ಸಿಬ್ಬಂದಿ, ಹೊಯ್ಸಳ ಸಿಬ್ಬಂದಿಯ ಜತೆಗೆ ಇನ್ಮುಂದೆ ಪಿಎಸ್‌ಐ ಶ್ರೇಣಿಯ ಅಧಿಕಾರಿಗಳೂ ಕಾಲ್ನಡಿಗೆಯಲ್ಲಿ ಹೆಜ್ಜೆ ಹಾಕಲಿದ್ದಾರೆ. ಬಡಾವಣೆಗಳ ವಿವಿಧ ರಸ್ತೆಗಳಲ್ಲಿ ವಾಹನ ರಸ್ತೆಗೆ ಇಳಿದು ಸುತ್ತಾಟ ನಡೆಸಲಿದ್ದಾರೆ. ಗಸ್ತು ವೇಳೆ ಶಂಕಿತರು ಕಂಡುಬಂದರೆ ವಶಕ್ಕೆ ಪಡೆದುಕೊಳ್ಳಲಿದ್ದಾರೆ. ನಾಗರಿಕರಲ್ಲಿ ಧೈರ್ಯ ತುಂಬಲಿದ್ದಾರೆ. ಒಂದು ವಾರದಿಂದ ಪಶ್ಚಿಮ, ಆಗ್ನೇಯ, ವೈಟ್‌ಫೀಲ್ಡ್, ಉತ್ತರ ಹಾಗೂ ದಕ್ಷಿಣ, ಈಶಾನ್ಯ ವಿಭಾಗದಲ್ಲಿ ಪಿಎಸ್‌ಐ ನೇತೃತ್ವದಲ್ಲಿ ಕಾಲ್ನಡಿಗೆ ಗಸ್ತು ಆರಂಭವಾಗಿದೆ. ಪಶ್ಚಿಮ ವಿಭಾಗದ ಬ್ಯಾಟರಾಯನಪುರ, ಕೆಂಗೇರಿ, ಚಂದ್ರಾಲೇಔಟ್, ಜ್ಞಾನಭಾರತಿ, ಆರ್‌ಆರ್ ನಗರ, ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಾಲ್ನಡಿಗೆ ಗಸ್ತಿಗೆ ಉತ್ತಮ ಸ್ಪಂದನೆ ಸಿಕ್ಕಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದರು.


ಉದಯವಾಹಿನಿ ಚಿತ್ರ

**ಗಸ್ತು ಹೆಚ್ಚಿಸುವಂತೆ ಸೂಚನೆ**


**ಅಪರಾಧ ಪ್ರಕರಣ ತಡೆಗಟ್ಟಲು ಸಹಾಯ**

**ಬೆಂಗಳೂರಿನಲ್ಲೂ ಮನೆ ಮನೆ ಯೋಜನೆಯನ್ನು ಜಾರಿಗೆ ತರಲಾಗಿದೆ. ನಗರದ ಮನೆಗಳಿಗೆ ಪೊಲೀಸರು ಭೇಟಿ ನೀಡುವುದರಿಂದ ಆಯಾ ಪೊಲೀಸ್ ಠಾಣಾ ವ್ಯಾಪ್ತಿಯ ಸಮಸ್ಯೆಗಳು ಅರಿವಿಗೆ ಬರಲಿದೆ. ಅದರಿಂದ ಅಪರಾಧ ಪ್ರಕರಣಗಳನ್ನು ತಡೆಗಟ್ಟಲು ಸಹಾಯವಾಗಲಿದೆ**

> **ಗಸ್ತು ಹೆಚ್ಚಿಸುವಂತೆ ಸೂಚನೆ ಯಾವ ಪ್ರದೇಶದಲ್ಲಿ ಯಾವ ಅವಧಿಯಲ್ಲಿ ಹೆಚ್ಚಿನ ಅಪರಾಧ ಕೃತ್ಯಗಳು ಜರುಗುತ್ತಿವೆ ಎಂಬುದರ ಬಗ್ಗೆ ಸಿಬ್ಬಂದಿ ಸ್ಪಷ್ಟ ಮಾಹಿತಿ ಪಡೆದುಕೊಂಡು ಅಂತಹ ಪ್ರದೇಶದಲ್ಲಿ ಗಸ್ತು ಹೆಚ್ಚಿಸುವಂತೆ ಸೂಚಿಸಲಾಗಿದೆ**
>
> **- ಸೀಮಂತ್ ಕುಮಾರ್ ಸಿಂಗ್**
> **ನಗರ ಪೊಲೀಸ್ ಕಮಿಷನರ್**

ಮಹಿಳೆಯರು, ವೃದ್ಧರು ಹಾಗೂ ಮಕ್ಕಳ ಸುರಕ್ಷತಾ ದೃಷ್ಟಿಯಿಂದ ನಗರದ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚುವರಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸುವಂತೆ ಹಿಂದಿನ ಪೊಲೀಸ್ ಕಮಿಷನರ್ ಬಿ.ದಯಾನಂದ ಅವರು ಬಿಬಿಎಂಪಿ ವಿವಿಧ ಕಂಪನಿಗಳ ಮುಖ್ಯಸ್ಥರಲ್ಲಿ ಮನವಿ ಮಾಡಿದ್ದರು. ಮನವಿ ಮೇರೆಗೆ ನಗರದಲ್ಲಿ ಸಿಸಿಟಿವಿಗಳ ಕ್ಯಾಮೆರಾ ಅಳವಡಿಕೆಗೆ ವೇಗ ದೊರೆತಿದೆ. 2024ರ ಜನವರಿ 1ರ ವೇಳೆಗೆ ನಗರದಲ್ಲಿ 2,32,711 ಸಿಸಿಟಿವಿ ಕ್ಯಾಮೆರಾಗಳು ಇದ್ದವು. ಈ ವರ್ಷದ ಜೂನ್ 20ರ ವೇಳೆಗೆ ಒಟ್ಟು 5,35,815 ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಅಂದಾಜು 3 ಲಕ್ಷಕ್ಕೂ ಹೆಚ್ಚು ಕ್ಯಾಮೆರಾಗಳನ್ನು ಜಿಯೊ ಟ್ಯಾಗ್ ಮಾಡಲಾಗಿದೆ. ಈ ಕ್ಯಾಮೆರಾಗಳನ್ನು ಬಳಸಿಕೊಂಡು ನಗರದಲ್ಲಿ ಅಪರಾಧ ಪ್ರಕರಣಗಳನ್ನು ಕಡಿಮೆ ಮಾಡಲು ಕ್ರಮ ವಹಿಸಲಾಗಿದೆ ಎನ್ನುತ್ತಾರೆ ಪೊಲೀಸ್ ಅಧಿಕಾರಿಗಳು. ಜನವಸತಿ ಪ್ರದೇಶಗಳು, ವ್ಯಾಪಾರಿ ಕೇಂದ್ರಗಳು, ಮುಖ್ಯರಸ್ತೆಗಳು, ಸಿಗ್ನಲ್‌ಗಳು, ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಬ್ಯಾಂಕ್‌ಗಳು ಸೇರಿ ಇತರೆ ಮಹತ್ವದ ಸ್ಥಳಗಳಲ್ಲಿ ಮತ್ತಷ್ಟು ಕ್ಯಾಮೆರಾ ಅಳವಡಿಸುವಂತೆ ಕೋರಲಾಗಿದೆ. ಇನ್ನಷ್ಟು ಕ್ಯಾಮೆರಾಗಳು ಅಳವಡಿಕೆಯಾದರೆ ಅಪರಾಧ ಪ್ರಕರಣಗಳ ತನಿಖೆ ಹಾಗೂ ಕಾರ್ಯಾಚರಣೆಗೆ ನೆರವಾಗಲಿದೆ. ಆಗ ನಗರದ ಬಹುತೇಕ ಭಾಗವು ಕ್ಯಾಮೆರಾಗಳ ಕಣ್ಗಾವಲಿಗೆ ಬರಲಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದರು.

## ವರ್ಷಾಂತ್ಯಕ್ಕೆ ರಾಜಕಾಲುವೆ ಕಾಮಗಾರಿ ಪೂರ್ಣ: ಬಿಬಿಎಂಪಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಜೆಪಿ ನಗರದ ಸಿಂಧೂರ ಕಲ್ಯಾಣ ಮಂಟಪದ ಸುತ್ತಲೂ ಕೈಗೊಂಡಿರುವ ರಾಜಕಾಲುವೆ ಕಾಮಗಾರಿಯನ್ನು ಈ ವರ್ಷದ ಅಂತ್ಯದ ವೇಳೆಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಬಿಬಿಎಂಪಿ ಆಯುಕ್ತ ಮಹೇಶ್ವರ್ ರಾವ್ ಅವರು ಸೋಮವಾರ ಸೂಚನೆ ನೀಡಿದರು.

ಬಿಬಿಎಂಪಿ ದಕ್ಷಿಣ ವಲಯದ ವಿವಿಧ ಸ್ಥಳಗಳ ಪರಿಶೀಲನೆಯ ಸಂದರ್ಭದಲ್ಲಿ, ಸಿಂಧೂರ ಕಲ್ಯಾಣ ಮಂಟಪದಿಂದ ಕೆ-210ಕ್ಕೆ ಸಂಪರ್ಕ ಕಲ್ಪಿಸಲು 1.3 ಕಿ.ಮೀ ಉದ್ದದ ಮಳೆ ನೀರು ಹರಿಯುವ ರಾಜಕಾಲುವೆ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ ಪ್ರವಾಹ ಆಗುವುದನ್ನು ತಪ್ಪಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಯಾವುದೇ ಅಹಿತಕರ ಘಟನೆಗಳನ್ನು ತಡೆಗಟ್ಟಲು ನಿರ್ಮಾಣ ಸ್ಥಳಗಳ ಬಳಿ ಬ್ಯಾರಿಕೇಡ್‌ಗಳನ್ನು ಅಳವಡಿಸಬೇಕು. ನಿರ್ಮಾಣ ವಲಯದ ಉದ್ದಕ್ಕೂ ಪಾದಚಾರಿ ಮಾರ್ಗಗಳ ಸರಿಯಾದ ನಿರ್ವಹಣೆ ಮಾಡಬೇಕು. ಹೊರ ವರ್ತುಲ ರಸ್ತೆಯ ಚರಂಡಿಗಳಲ್ಲಿ ಹೂಳೆತ್ತಿ ಸ್ವಚ್ಛತೆ ಕಾಪಾಡಬೇಕು. ಚರಂಡಿಗಳಿಂದ ತೆಗೆದ ಹೂಳನ್ನು ಸ್ಥಳದಲ್ಲಿಯೇ ಬಿಡದೆ ಕೂಡಲೇ ವಿಲೇವಾರಿ ಮಾಡಬೇಕು ಎಂದು ಹೇಳಿದರು.

ಜಯನಗರದ 3ನೇ ಬ್ಲಾಕ್‌ನಲ್ಲಿ 5 ಟನ್ ಸಾಮರ್ಥ್ಯದ ಘನತ್ಯಾಜ್ಯ ಜೈವಿಕ ಅನಿಲ ಘಟಕವಿದೆ. ಇಂತಹ ಘಟಕಗಳನ್ನು ನಗರದ ಇತರೆ ಭಾಗಗಳಲ್ಲಿ ಸ್ಥಾಪಿಸಬೇಕು. ಕೆ.ಆರ್. ಮಾರುಕಟ್ಟೆಯಲ್ಲಿ ಸ್ಥಾಪಿಸಿದರೆ, ತ್ಯಾಜ್ಯ ನಿರ್ವಹಣಾ ಸಮಸ್ಯೆ ಬಗೆಹರಿಸಬಹುದು ಎಂದು ತಿಳಿಸಿದರು. ಬಳಿಕ ಅತ್ತಿಗುಪ್ಪೆ ವಾರ್ಡ್‌ನಲ್ಲಿರುವ ಘನತ್ಯಾಜ್ಯ ಸಂಗ್ರಹಣಾ ಕೇಂದ್ರಕ್ಕೆ ಭೇಟಿ ನೀಡಿದ ಅವರು, ರಸ್ತೆಬದಿಗಳು ಮತ್ತು ಖಾಲಿ ಜಾಗಗಳು ಕಸದ ಸುರಿಯುವ ತಾಣಗಳಾಗಿ ಬದಲಾಗದಂತೆ ನೋಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದಕ್ಕಾಗಿ ಮಾರ್ಷಲ್‌ಗಳು ಹಾಗೂ ಮೇಲ್ವಿಚಾರಕರ ನೇಮಿಸುವಂತೆಯೂ ಸೂಚನೆ ನೀಡಿದರು.

## ಎಸ್‌ಐಟಿ ರದ್ದು, ಸಿಬಿಐ ತನಿಖೆಗೆ ಆದೇಶ

• **ಉದಯವಾಹಿನಿ, ಬೆಂಗಳೂರು**

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಣ ದುರ್ಬಳಕೆ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಿ ಹೈಕೋರ್ಟ್ ಮಹತ್ವದ ಆದೇಶ ಪ್ರಕಟಿಸಿದೆ. ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಕೋರ್ಟ್ ವಿಶೇಷ ತನಿಖಾ ತಂಡದ ತನಿಖೆಯನ್ನು ರದ್ದುಗೊಳಿಸಿದೆ. ಅಷ್ಟೇ ಅಲ್ಲದೇ ಎಸ್‌ಐಟಿ ಸಂಗ್ರಹಿಸಿದ ಎಲ್ಲಾ ದಾಖಲೆಗಳನ್ನು ಸಿಬಿಐಗೆ ವರ್ಗಾಯಿಸುವಂತೆ ಆದೇಶಿಸಿದೆ. ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಸಲ್ಲಿಸಿದ್ದ ರಿಟ್ ಅರ್ಜಿ ವಿಚಾರಣೆಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ 2024ರ ಸೆಪ್ಟೆಂಬರ್ 30ರಂದು ಮುಕ್ತಾಯಗೊಳಿಸಿ ತೀರ್ಪು ಕಾಯ್ದಿರಿಸಿತ್ತು.




ಹೈಕೋರ್ಟ್ ಆದೇಶದಿಂದ ರಾಜ್ಯ ಸರ್ಕಾರಕ್ಕೆ ಭಾರೀ ಹಿನ್ನಡೆಯಾಗಿದೆ. ಬೆಂಗಳೂರು ಪೂರ್ವ ವಲಯದ ಯೂನಿಯನ್ ಬ್ಯಾಂಕ್ ಡಿಜಿಎಂ ಜೆ. ಮಹೇಶ್ ಎಂಬುವವರು ಸರ್ಕಾರಿ ಅಧಿಕಾರಿಗಳು, ಜನಪ್ರತಿನಿಧಿಗಳು, ಖಾಸಗಿ ವ್ಯಕ್ತಿಗಳು ಶಾಮೀಲಾಗಿದ್ದಾರೆ ಎಂದು ಆರೋಪಿಸಿ ದೂರು ನೀಡಿದ್ದರು. ಹಿರಿಯ ಅಧಿಕಾರಿಗಳ ಪತ್ರದ ಅನ್ವಯ ಬ್ಯಾಂಕಿನ ಮೂವರು ಸೇರಿ ಐವರ ವಿರುದ್ಧ ಸಿಬಿಐ ಎಫ್‌ಐಆರ್ ದಾಖಲು ಮಾಡಿ ಈಗಾಗಲೇ ತನಿಖೆ ಆರಂಭಿಸಿದೆ.

**ಏನಿದು ಪ್ರಕರಣ?**

**ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರನ್ ಇತ್ತೀಚೆಗೆ ಶಿವಮೊಗ್ಗದಲ್ಲಿರುವ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಆತ್ಮಹತ್ಯೆಗೂ ಮುನ್ನ ಬರೆದಿದ್ದ ಡೆತ್ ನೋಟ್‌ನಲ್ಲಿ ಮೂವರು ಹೆಸರು ಹಾಗೂ ಬಹುಕೋಟಿ ಹಗರಣ ನಡೆದಿರುವ ಬಗ್ಗೆ ಉಲ್ಲೇಖಿಸಿದ್ದರು. ಈ ಬೆನ್ನಲ್ಲೇ ಬ್ಯಾಂಕ್‌ನಿಂದ 94 ಕೋಟಿ ರೂ. ಅಕ್ರಮವಾಗಿ ವರ್ಗಾವಣೆಯಾಗಿದೆ. ಹಣ ವರ್ಗಾವಣೆಯಾದ ಬಗ್ಗೆ ಯಾವುದೇ ಮೇಲ್, ಮೆಸೇಜ್ ಬಂದಿಲ್ಲ. ಬ್ಯಾಂಕ್ ಸಿಬ್ಬಂದಿಯಿಂದಲೇ ನಕಲಿ ದಾಖಲೆ ಸೃಷ್ಟಿಸಿ ವಂಚನೆ ಎಸಗಿದ್ದಾರೆ ಎಂದು ಆರೋಪಿಸಿ ನಿಗಮದ ಪ್ರಧಾನ ವ್ಯವಸ್ಥಾಪಕ ರಾಜಶೇಖರ್ ಅವರು ದೂರು ನೀಡಿದ್ದರು. ದೂರಿನ ಆಧಾರದ ಮೇಲೆ ಬ್ಯಾಕ್‌ನ 6 ಮಂದಿ ಸಿಬ್ಬಂದಿ ವಿರುದ್ಧ ಹೈಗ್ರೌಂಡ್ಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿತ್ತು.**

## ರಾಜ್ಯದಲ್ಲಿ ಐದೂವರೆ ವರ್ಷದಲ್ಲಿ 82 ಹುಲಿಗಳ ಸಾವು

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಕಳೆದ ಐದೂವರೆ ವರ್ಷಗಳಲ್ಲಿ 82 ಹುಲಿಗಳು ಮೃತಪಟ್ಟಿರುವುದಾಗಿ ಮಾಧ್ಯಮಗಳಲ್ಲಿ ವರದಿಯಾಗಿರುವ ಬಗ್ಗೆ ಆಘಾತ ವ್ಯಕ್ತಪಡಿಸಿರುವ ಅರಣ್ಯ, ಜೀವಿಶಾಸ್ತ್ರ ಪರಿಸರ ಸಚಿವ ಈಶ್ವರ್ ಖಂಡ್ರೆ ಈ ಎಲ್ಲಾ ಹುಲಿಗಳ ಸಾವಿನ ಬಗ್ಗೆ ವರದಿ ಸಲ್ಲಿಸುವಂತೆ ಅರಣ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ.

ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಈ ಸಂಬಂಧ ಸೂಚನೆ ನೀಡಿರುವ ಸಚಿವರು, ಸಾವನ್ನಪ್ಪಿರುವ 82 ಹುಲಿಗಳ ಪೈಕಿ ಎಷ್ಟು ಹುಲಿಗಳು ಸಹಜವಾಗಿ ಸಾವನ್ನಪ್ಪಿವೆ ಎಷ್ಟು ಹುಲಿಗಳು ಅಸಹಜವಾಗಿ ಮೃತಪಟ್ಟಿವೆ ಅಸಹಜವಾಗಿ ಮೃತಪಟ್ಟ ಹುಲಿಗಳ ಸಾವಿಗೆ ಕಾರಣವೇನು ಎಂಬ ಬಗ್ಗೆ ತನಿಖೆ ನಡೆದು ವರದಿ ಬಂದಿದೆಯೇ ಎಂದು ಪ್ರಶ್ನಿಸಿದ್ದಾರೆ.

ಮೃತಪಟ್ಟ ಯಾವುದಾದರೂ ಹುಲಿಗಳ ಅಂಗಾಂಗ ಅಂದರೆ ಉಗುರು, ಹಲ್ಲು ಇತ್ಯಾದಿ ತೆಗೆಯಲಾಗಿತ್ತೆ

ಹುಲಿಗಳ ಹತ್ಯೆ ಆಗಿದ್ದಲ್ಲಿ ನಿರ್ಲಕ್ಷ್ಯ ತೋರಿದ ಸಿಬ್ಬಂದಿ ಅಧಿಕಾರಿಗಳ ವಿರುದ್ಧ ಕ್ರಮ ಆಗಿದೆಯೇ ಎಷ್ಟು ಹುಲಿ ಹತ್ಯೆ ಪ್ರಕರಣದಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ ಎಂಬ ವಿವರವನ್ನೂ ಕೇಳಿದ್ದಾರೆ.

ಈವರೆಗೆ ಹುಲಿ ಹತ್ಯೆ ಪ್ರಕರಣಗಳಲ್ಲಿ ಎಷ್ಟು ಜನರಿಗೆ ಶಿಕ್ಷೆ ಆಗಿದೆ ಎಷ್ಟು ಪ್ರಕರಣಗಳು ತನಿಖಾ ಹಂತದಲ್ಲಿದೆ. ಯಾವ ಕಾರಣಕ್ಕೆ ತನಿಖೆ ವಿಳಂಬವಾಗಿದೆ ಎಂಬ ಸಂಪೂರ್ಣ ವಿವರವನ್ನು 10 ದಿನಗಳ ಒಳಗಾಗಿ ಸಲ್ಲಿಸಲು ಸೂಚಿಸಿದ್ದಾರೆ. ಚಿರತೆಯ ಅಂಗಾಂಗ ಕತ್ತರಿಸಿರುವುದು ನಿಜವಾಗಿದ್ದಲ್ಲಿ ತಪ್ಪಿತಸ್ಥ ಅಧಿಕಾರಿ ಮತ್ತು ಸಿಬ್ಬಂದಿ ವಿರುದ್ಧ ಕೈಗೊಳ್ಳಬೇಕಾದ ಕ್ರಮದ ಶಿಫಾರಸಿನೊಂದಿಗೆ 7 ದಿನಗಳ ಒಳಗಾಗಿ ವರದಿ ಸಲ್ಲಿಸಲು ಸಚಿವರು ಸೂಚನೆ ನೀಡಿದ್ದಾರೆ.

**ಮಲೆ ಮಹದೇಶ್ವರ ಕಾಡಿನಲ್ಲಿ ಚಿರತೆ ಹತ್ಯೆ?**



**ಮಲೆ ಮಹದೇಶ್ವರ ಕಾನನ ಪ್ರದೇಶದ ಹೂಗ್ಯಂನಲ್ಲಿ 5 ಹುಲಿಗಳು ವಿಷ ಪ್ರಾಶನದಿಂದ ಮೃತಪಟ್ಟಿವೆ ಎನ್ನಲಾದ ಪ್ರಕರಣಕ್ಕೆ ಕೆಲವು ದಿನಗಳ ಮೊದಲು ಕೌದಳ್ಳಿ ವಲಯ, ರಾಮಾಪುರ-ಮಾರ್ಟಳ್ಳಿ ಗಡಿಯಲ್ಲಿ ಚಿರತೆಯೊಂದರ ಹತ್ಯೆ ಆಗಿತ್ತು ಮತ್ತು ಮೃತ ಚಿರತೆಯ ಕಾಲುಗಳನ್ನು ಕತ್ತರಿಸಲಾಗಿತ್ತು ಎಂದು ಮಾಧ್ಯಮಗಳಲ್ಲಿ ಬಂದಿರುವ ವರದಿ ಕುರಿತಂತೆಯೂ ಎಪಿಸಿಸಿಎಫ್ ನೇತೃತ್ವದ ತಂಡದಿಂದ ತನಿಖೆಗೆ ಆದೇಶಿಸಿದ್ದಾರೆ.**

## ಗಡಿ ಉಸ್ತುವಾರಿ ಸಚಿವರಾಗಿ ಹೆಚ್.ಕೆ ಪಾಟೀಲ್ ನೇಮಕ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ಗಡಿ ಮತ್ತು ನದಿಗಳ ವಿವಾದ ವಿಷಯಗಳ ಬಗ್ಗೆ ನಿರಂತರವಾಗಿ ನಿಗಾ ವಹಿಸಿ ಸೂಕ್ತ ಕ್ರಮ ಕೈಗೊಳ್ಳಲು ಉಸ್ತುವಾರಿಯನ್ನಾಗಿ ಕಾನೂನು ಸಚಿವ ಹೆಚ್.ಕೆ ಪಾಟೀಲ್ ಅವರನ್ನ ನೇಮಿಸಲಾಗಿದೆ.

ಈ ವಿಷಯಗಳಿಗೆ ಸಂಬಂಧಿಸಿದಂತೆ ಕಾನೂನಾತ್ಮಕವಾಗಿ , ರಾಜಕೀಯ ನೆಲೆಗಟ್ಟಿನಲ್ಲಿ ಪರಿಶೀಲಿಸಿ ಸಮಯೋಚಿತ ಅವಶ್ಯಕ ಕ್ರಮ ತೆಗೆದುಕೊಳ್ಳಲು ಸಚಿವರೊಬ್ಬರಿಗೆ ಜವಾಬ್ದಾರಿ ವಹಿಸಲು ಸರ್ಕಾರ ನಿರ್ಧರಿಸಿತ್ತು. ಹೀಗಾಗಿ ಗಡಿ ಉಸ್ತುವಾರಿ ಬಗ್ಗೆ ನೋಡಿಕೊಳ್ಳಳು ಹೆಚ್.ಕೆ ಪಾಟೀಲ್ ಅವರನ್ನ ನೇಮಿಸಲಾಗಿದೆ. ಕರ್ನಾಟಕದ ಗಡಿ ಭಾಗದಲ್ಲಿ ಶಿಕ್ಷಣ, ಸಂಸ್ಕೃತಿ, ಸಾಮಾಜಿಕ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕನ್ನಡಪರ ಸಂಘ ಸಂಸ್ಥೆಗಳು ಹಾಗೂ ಕನ್ನಡ ಪರ ಕಾರ್ಯ ನಿರ್ವಹಿಸುತ್ತಿರುವ ಕನ್ನಡ ಮಾಧ್ಯಮ ಶಾಲೆಗಳ ಸಮಸ್ಯೆಗಳು ಸವಾಲುಗಳು ತುಂಬಾ ಗಂಭೀರ ವಾದುದಾಗಿರುತ್ತವೆ.

ಕರ್ನಾಟಕ ರಾಜ್ಯದ ಒಳಗಿರುವ ಗಡಿ ಭಾಗದಲ್ಲಿನ ಪ್ರದೇಶಗಳ ಅಭಿವೃದ್ಧಿಯ ಜೊತೆಗೆ ಕರ್ನಾಟಕದ ಹೊರಗಿರುವ ಆರು ನೆರೆ ರಾಜ್ಯಗಳಿಗೆ ಹೊಂದಿಕೊಂಡಂತೆ ಇರುವ ಕನ್ನಡ ಪ್ರದೇಶಗಳಲ್ಲಿನ ಕನ್ನಡದ ಕಾಯಕವನ್ನು ಕೈಗೊಳ್ಳುವುದು ತೀರಾ ಅಗತ್ಯವಾಗಿರುತ್ತದೆ.

## ಹೊಸೂರು ರಸ್ತೆಯ 2 ಟೋಲ್ ದರ ಏರಿಕೆ

### ಇಂದಿನಿಂದ ಬೆಂಗಳೂರು ಎಲಿವೇಟೆಡ್ ಕಾರಿಡಾರ್ ಟೋಲ್‌ವೇ ಶುಲ್ಕ ಹೆಚ್ಚಳ

• **ಉದಯವಾಹಿನಿ, ಬೆಂಗಳೂರು**

ದರ ಏರಿಕೆಯಿಂದ ಕಂಗೆಟ್ಟಿದ್ದ ಬೆಂಗಳೂರಿಗರಿಗೆ ಮತ್ತೊಂದು ಶಾಕ್ ಎದುರಾಗಿದ್ದು, ಇಂದಿನಿಂದ ಬೆಂಗಳೂರಿನ ಮತ್ತೆರೆಡು ಪ್ರಮುಖ ಟೋಲ್ ದರ ಏರಿಕೆಯಾಗಿದೆ. ಬೆಂಗಳೂರಿನಿಂದ ತಮಿಳುನಾಡಿಗೆ ಸಂಪರ್ಕ ಕಲ್ಪಿಸುವ ಹೊಸೂರು ರಸ್ತೆಯ ಎರಡು ಟೋಲ್‌ಗಳಲ್ಲೂ ದರ ಏರಿಕೆಯಾಗಿದೆ. ಸೋಮವಾರ ಮಧ್ಯರಾತ್ರಿಯಿಂದಲೇ ನೂತನ ದರ ಜಾರಿಯಾಗಿದೆ. ಇಂದಿನಿಂದ ಬೆಂಗಳೂರು ಎಲಿವೇಟೆಡ್ ಕಾರಿಡಾರ್ ಟೋಲ್‌ವೇ ಶುಲ್ಕ ಹೆಚ್ಚಳವಾಗಿದೆ.

ಪರಿಣಾಮ ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ ಎಲೆಕ್ಟ್ರಾನಿಕ್ ಸಿಟಿಗೆ ಮತ್ತು ಕರ್ನಾಟಕ, ತಮಿಳುನಾಡು ಗಡಿಯ ಬಳಿಯ ಅತ್ತಿಬೆಲೆ ಕಡೆಯ ಮಾರ್ಗದಲ್ಲಿ ಚಲಿಸುವ ಪ್ರಯಾಣಿಕರು ಎಲಿವೇಟೆಡ್ ರಸ್ತೆಗೆ ಹೆಚ್ಚಿನ ಟೋಲ್ ಶುಲ್ಕವನ್ನು ಪಾವತಿಸಬೇಕಾಗಿದೆ. ಈ ಕುರಿತ ಪರಿಷ್ಕೃತ ದರಗಳನ್ನ ಮಾರ್ಚ್ 31ರ ಸಗಟು ಬೆಲೆ ಸೂಚ್ಯಂಕ ಆಧರಿಸಿ ದರ ಏರಿಕೆ ಮಾಡಲಾಗಿದೆ.

ಎಲಿವೇಟೆಡ್ ಎಕ್ಸ್‌ಪ್ರೆಸ್ ವೇ ಹೊಸ ಟೋಲ್ ರಚನೆಯಡಿಯಲ್ಲಿ, ಕಾರುಗಳು, ಜೀಪ್‌ಗಳು ಮತ್ತು ವ್ಯಾನ್‌ಗಳಿಗೆ ಏಕಮುಖ ಪ್ರಯಾಣಕ್ಕೆ 65 ರೂ. ಇದೆ. ವಾಪಸ್ ಹಿಂತಿರುಗಿ ಬರಲು ಅದೇ ದಿನಕ್ಕೆ 95 ರೂ. ಮತ್ತು ಮಾಸಿಕ ಪಾಸ್‌ಗೆ 1,885 ರೂ. ಪಾವತಿಸಬೇಕಾಗುತ್ತದೆ. ಈ ಹಿಂದೆ ಈ ಎಲ್ಲಾದಕ್ಕೂ 5 ರೂ. ಕಡಿಮೆ ಇತ್ತು. ಈಗ ಬಿಇಟಿಪಿಎಲ್‌ನಿಂದ 5 ರೂ. ಏರಿಕೆ ಮಾಡಿದ್ದು, ದರ ಜಾರಿಯಾಗಿದೆ. ಆದರೆ ಬಸ್‌ಗಳು ಮತ್ತು ಟ್ರಕ್‌ಗಳಿಗೆ ಶುಲ್ಕ ಭಾರೀ ಹೆಚ್ಚಳವಾಗಿದೆ. ಒಂದೇ ಪ್ರಯಾಣಕ್ಕೆ 175 ರೂ. ಮತ್ತು ಮಾಸಿಕ ಪಾಸ್‌ಗೆ 5,275 ರೂ.


ಉದಯವಾಹಿನಿ ಚಿತ್ರ

**ಅತ್ತಿಬೆಲೆ ಟೋಲ್ ದರವೂ ಹೆಚ್ಚಳ**

- **ಕಾರುಗಳು ಏಕ ಬದಿ ಪ್ರಯಾಣಕ್ಕೆ 40 ರೂ. (ಹಳೆ ಬೆಲೆ 35 ರೂ.)**
- **ಲಘು ವಾಹನಗಳು, ಮಿನಿ ಬಸ್ 65 ರೂ. (ಹಳೆ ಬೆಲೆ 60 ರೂ.)**
- **ಟ್ರಕ್, ಬಸ್ 125 ರೂ. (ಹಳೆ ಬೆಲೆ 120 ರೂ.)**
- **ದೊಡ್ಡ ಮಲ್ಟಿ ಆಕ್ಸೆಲ್ ವಾಹನಗಳಿಗೆ ಒಂದು ಟ್ರಿಪ್‌ಗೆ 265 ರೂ. ಇದೆ (ಹಳೆ ಬೆಲೆ 260 ರೂ.)**

ಗೆ ಶುಲ್ಕ ಏರಿಕೆಯಾಗಿದೆ. ಮಲ್ಟಿ-ಆಕ್ಸಲ್ ವಾಹನಗಳಿಗೆ ಪ್ರತಿ ಟ್ರಿಪ್‌ಗೆ 350 ರೂ., ತಿಂಗಳಿಗೆ 10,550 ರೂ.ಗಳನ್ನು ಪಾವತಿಸಬೇಕಾಗುತ್ತದೆ. ಇನ್ನೂ ಅತ್ತಿಬೆಲೆ ಟೋಲ್‌ನಲ್ಲೂ ದರ ಏರಿಕೆಯಾಗಿದೆ.

ಹಳೆಯ ದರಕ್ಕಿಂತ 5 ರೂ. ಹೆಚ್ಚಳವಾಗಿದ್ದು, ಈ ಭಾಗದ ಸವಾರರಿಗೂ ಇಂದಿನಿಂದಲೇ ದರ ಏರಿಕೆ ಬಿಸಿ ತಟ್ಟಲಿದೆ.

**ಎಲೆಕ್ಟ್ರಾನಿಕ್ ಸಿಟಿ ಫ್ಲೈಓವರ್ ದರ ಎಷ್ಟಾಗಲಿದೆ?**

- **ಕಾರು, ಜೀಪ್, ನಾಲ್ಕು ಚಕ್ರದ ಲಘು ವಾಹನಗಳಿಗೆ ಒಂದು ಪ್ರಯಾಣಕ್ಕೆ ರೂ.65 ? ಹಳೆ ಬೆಲೆ 60**
- **ಎರಡು ಕಡೆಗಿನ ಪ್ರಯಾಣಕ್ಕೆ ರೂಪಾಯಿ 90- ಹಳೆಯ ಬೆಲೆ 85**
- **ದ್ವಿಚಕ್ರ ವಾಹನಗಳಿಗೆ ಒಂದು ಮಾರ್ಗದ ಪ್ರಯಾಣಕ್ಕೆ ?25 ಪಾವತಿಸಬೇಕಾಗಿದೆ (ಬದಲಾವಣೆ ಇಲ್ಲ)**
- **ಲಾರಿ (ಟ್ರಕ್) ಹಾಗೂ ಬಸ್‌ಗಳಿಗೆ ಒಂದು ಬದಿ ಪ್ರಯಾಣಕ್ಕೆ 175 (ಹಳೆ ಬೆಲೆ 170) ರೂಪಾಯಿ**
- **ಮಲ್ಟಿ-ಆಕ್ಸಲ್ ವಾಹನಗಳಿಗೆ ಒಂದು ಬದಿಗೆ 350 ರೂಪಾಯಿ ಕಟ್ಟಬೇಕಿದೆ (ಹಳೆ ಬೆಲೆ 345)**

## 114 ಆಟೋ ಸೀಜ್, 299 ಪ್ರಕರಣ ದಾಖಲು

• **ಉದಯವಾಹಿನಿ, ಬೆಂಗಳೂರು**

ಸಾರ್ವಜನಿಕರಿಂದ ನಿಗದಿಗಿಂತಲೂ ಅಧಿಕ ಪ್ರಯಾಣ ದರ ವಸೂಲಿ ಮಾಡುತ್ತಿರುವ ಆಟೋ ಚಾಲಕರಿಗೆ ಸಾರಿಗೆ ಇಲಾಖೆ ಅಧಿಕಾರಿಗಳು ಸೋಮವಾರ ಶಾಕ್ ನೀಡಿದ್ದು, ಒಂದೇ ದಿನ 299 ಪ್ರಕರಣ ದಾಖಲಿಸಿಕೊಂಡು, 114 ಆಟೋಗಳನ್ನು ಜಪ್ತಿ ಮಾಡಿದ್ದಾರೆ.

ಆ್ಯಪ್ ಆಧಾರಿತ ಆಟೋಗಳು, ಇನ್ನಿತರೆ ಆಟೋ ಚಾಲಕರು ಪ್ರಯಾಣಿಕರಿಂದ ನಿಗದಿಗಿಂತ ಹೆಚ್ಚು ದರ ವಸೂಲಿ ಮಾಡುವ ಮೂಲಕ ಹಗಲು ದರೋಡೆಗಿಳಿದಿರುವ ದೂರುಗಳು ಬರುತ್ತಿವೆ. ಹೀಗಾಗಿ, ಅಧಿಕ ದರ ವಸೂಲಿ ಮಾಡುತ್ತಿರುವ ಆಟೋಗಳ ಪರ್ಮಿಟ್ ರದ್ದು ಮಾಡುವಂತೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದರು. ಸೂಚನೆ ಬೆನ್ನಲ್ಲೇ ನಗರದಲ್ಲಿನ ಎಲ್ಲಾ ಪ್ರಾದೇಶಿಕ ಸಾರಿಗೆ ಕಚೇರಿಗಳಿಂದ ತಲಾ ಎರಡು ತಂಡಗಳಂತೆ ಒಟ್ಟು 22 ತಂಡಗಳು ಕಾರ್ಯಾಚರಣೆ ಕೈಗೊಂಡು ಅಧಿಕ ದರ ವಸೂಲಿ ಮಾಡುತ್ತಿದ್ದ ಆಟೋ ಚಾಲಕರಿಗೆ ಬಿಸಿ ಮುಟ್ಟಿಸಿದ್ದಾರೆ. ನಿಯಮ ಉಲ್ಲಂಘನೆಗೆ ಸಂಬಂಧಿಸಿದಂತೆ 299 ಪ್ರಕರಣ ದಾಖಲಿಸಿ, 114 ಆಟೋಗಳನ್ನು ಮುಟ್ಟುಗೋಲು ಹಾಕಿಕೊಂಡಿದ್ದಾರೆ.

ಬೆಂಗಳೂರು ದಕ್ಷಿಣದ ಅಧಿಕಾರಿಗಳು ಒಟ್ಟು 48 ಪ್ರಕರಣಗಳನ್ನು ದಾಖಲಿಸುವ ಮೂಲಕ ಅಗ್ರಸ್ಥಾನದಲ್ಲಿದ್ದರೆ, ಬೆಂಗಳೂರು ಪಶ್ಚಿಮ 36 ಪ್ರಕರಣಗಳೊಂದಿಗೆ ಎರಡನೇ ಸ್ಥಾನದಲ್ಲಿದೆ. ಬೆಂಗಳೂರು ಕೇಂದ್ರ 19 ವಾಹನಗಳನ್ನು ವಶಪಡಿಸಿಕೊಳ್ಳುವ ಮೂಲಕ ವಾಹನ ವಶಪಡಿಸಿಕೊಳ್ಳುವ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ.

ಈ ಹಿಂದೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದ ಸಂಸದ ಪಿಸಿ.ಮೋಹನ್ ಅವರು, ಆಟೋ ಚಾಲಕರು ಸಾರ್ವಜನಿಕರನ್ನು ಸುಲಿಗೆ ಮಾಡುತ್ತಿರುವುದಕ್ಕೆ ಕಿಡಿಕಾರಿದ್ದರು.


ಉದಯವಾಹಿನಿ ಚಿತ್ರ

> **ಕರ್ನಾಟಕ ಹೈಕೋರ್ಟ್ ಮೇ 2024ರಲ್ಲಿ ಆಟೋ ದರಗಳಿಗೆ ಮಿತಿ ವಿಧಿಸಿತು. ಆಟೋ ಚಾಲಕರು ಒಂದು ವರ್ಷಕ್ಕೂ ಹೆಚ್ಚು ಕಾಲ ಕಾನೂನನ್ನು ಉಲ್ಲಂಘಿಸಿದ್ದಾರೆ. ಈ ಉಲ್ಲಂಘನೆ ಮುಂದುವರಿಯಲು ಸಾಧ್ಯವಿಲ್ಲ. ದೇಶದ ಕಾನೂನು ಸರ್ವೋಚ್ಚವಾಗಿದೆ. ಸಾರಿಗೆ ಇಲಾಖೆ ಕ್ರಮ ಕೈಗೊಳ್ಳಬೇಕು, ಅಕ್ರಮ ಪರವಾನಗಿಗಳನ್ನು ರದ್ದುಗೊಳಿಸಬೇಕು, ಅಗ್ರಿಗೇಟರ್ ಪರವಾನಗಿಗಳನ್ನು ರದ್ದುಗೊಳಿಸಬೇಕು ಮತ್ತು ಪ್ರಯಾಣಿಕರನ್ನು ಶೋಷಣೆಯಿಂದ ರಕ್ಷಿಸಬೇಕು ಎಂದು ಆಗ್ರಹಿಸಿದ್ದರು.**

### ದಿನ ಕಳೆದಂತೆ ಮಾಯವಾಗುತ್ತಿರುವ ಕೆರೆಯ ಒಡಲು, ಈ ಬಗ್ಗೆ ಆಡಳಿತಯಂತ್ರ ದಿವ್ಯ ನಿರ್ಲಕ್ಷ್ಯ

# 20 ಎಕರೆಯಷ್ಟು ಶೆಟ್ಟಿಹಳ್ಳಿ ಕೆರೆ ಅಂಗಳ ಒತ್ತುವರಿ

• ಉದಯವಾಹಿನಿ, ಚನ್ನಪಟ್ಟಣ

ನಗರದ ಹೃದಯ ಭಾಗದಲ್ಲಿರುವ ಶೆಟ್ಟಿಹಳ್ಳಿ ಕೆರೆ ಅಂಗಳ ಒತ್ತುವರಿಗೆ ಒಳಗಾಗಿ ಕಿರಿದಾಗುತ್ತಿದ್ದು, ದಿನಕಳೆದಂತೆ ಕೆರೆಯ ಒಡಲು ಮಾಯವಾಗುತ್ತಿದೆ. ಸುಮಾರು 60 ಎಕರೆಯ ಪ್ರದೇಶ ವ್ಯಾಪಿಸಿದ್ದ ಕೆರೆಗೆ ಈಗ ಒತ್ತುವರಿ ಭೂತ ಕಾಡುತ್ತಿದೆ. ಕೆರೆಯ ನಾಲ್ಕು ದಿಕ್ಕುಗಳಲ್ಲಿಯೂ ಸುಮಾರು 20 ಎಕರೆಯಷ್ಟು ಕೆರೆ ಅಂಗಳ ಒತ್ತುವರಿಯಾಗಿದೆ. ಆದರೆ, ಈ ಬಗ್ಗೆ ಆಡಳಿತಯಂತ್ರ ದಿವ್ಯ ನಿರ್ಲಕ್ಷ್ಯ ವಹಿಸಿಸುತ್ತಿದೆ ಎಂಬ ಆರೋಪ ಕೇಳಿಬರುತ್ತಿವೆ.

ಕೆರೆಯ ಆಸುಪಾಸಿನಲ್ಲಿರುವ ಕೆಲವು ಸರ್ಕಾರಿ ಇಲಾಖೆಗಳು ಕೆರೆಯನ್ನು ಒತ್ತುವರಿ ಮಾಡಿಕೊಂಡು ತಮ್ಮ ವ್ಯಾಪ್ತಿಯನ್ನು ಹೆಚ್ಚಿಸಿಕೊಂಡಿದ್ದಾರೆ. ಇದರ ಜೊತೆಗೆ ಕೆಲವು ಖಾಸಗಿ ವ್ಯಕ್ತಿಗಳು ಒತ್ತುವರಿಯಲ್ಲಿ ಭಾಗಿಯಾಗಿದ್ದಾರೆ. ಕೆರೆಯ ಮೇಲ್ಭಾಗದ ಇಂದಿರಾ ಕಾಟೇಜ್ ಬಳಿ ಕೆರೆಯ ತೀರದಲ್ಲಿರುವ ಕೆಲವರು ಕೆರೆಯನ್ನು ಮುಚ್ಚಿ ಮನೆ, ಅಂಗಡಿಗಳನ್ನು ನಿರ್ಮಿಸಿಕೊಂಡಿದ್ದಾರೆ. ನಗರದ ಯಾವುದೇ ಹಳೆ ಕಟ್ಟಡ, ಮನೆ ಕೆಡವಿದರೆ, ರಸ್ತೆ ಅಗೆದರೆ ಅವುಗಳ ಕಲ್ಲು, ಮಣ್ಣು, ಸಿಮೆಂಟ್ ತ್ಯಾಜ್ಯವನ್ನು ಕೆರೆ ಬದಿಗೆ ಸುರಿಯುತ್ತಾರೆ. ಇಂದಿರಾ ಕಾಟೇಜ್ ಅಸುಪಾಸಿನಲ್ಲಿ ಕೆರೆಯ ಒತ್ತುವರಿ ಯಾವುದೇ ಅಡೆತಡೆ ಇಲ್ಲದೆ ನಡೆಯುತ್ತಿದೆ. ಈ ಬಗ್ಗೆ ಅಧಿಕಾರಿಗಳಾಗಲಿ, ಜನಪ್ರತಿನಿಧಿಗಳಾಗಲಿ ಈ ಬಗ್ಗೆ ಗಮನಹರಿಸುತ್ತಿಲ್ಲ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.

ಒಂದು ಕಾಲದಲ್ಲಿ ಕೆರೆಯ ನೀರು ಕೃಷಿಗೆ ಬಳಕೆಯಾಗುತ್ತಿತ್ತು. ಈಗ ಕೃಷಿ ಭೂಮಿಯನ್ನು ಬಡಾವಣೆಗಳಾಗಿ ಮಾರ್ಪಾಡು ಮಾಡಿದ್ದಾರೆ. ಇದರಿಂದ ಕೆರೆ ನೀರು ನಿಂತಲ್ಲೆ ನಿಂತು ಕಲುಷಿತಗೊಂಡಿದ್ದು, ಬಳಕೆಗೆ ಬಾರದಂತಾಗುತ್ತಿದೆ. ಹಾಗಾಗಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಗಮನಹರಿಸಿ ಒತ್ತುವರಿ ತೆರವುಗೊಳಿಸಿ ಕೆರೆ ರಕ್ಷಿಸಬೇಕೆಂದು ಸಾರ್ವಜನಿಕರ ಒತ್ತಾಯಿಸಿದ್ದಾರೆ.


ಉದಯವಾಹಿನಿ ಚಿತ್ರ

ಬಡಾವಣೆ ನಿವಾಸಿಗಳ ಆರೋಪ

**ಮಂಗಳಮುಖಿಯರ ಯಲ್ಲಮ್ಮ ತಾಯಿ ದೇವಸ್ಥಾನ:** ಶೆಟ್ಟಿಹಳ್ಳಿ ಕೆರೆಯ ಉತ್ತರಕ್ಕೆ ಪೊಲೀಸ್ ವಸತಿ ನಿಲಯದ ಭಾಗದಲ್ಲಿ ಮಂಗಳಮುಖಿಯರು ಕೆರೆಯ ಸ್ವಲ್ಪ ಭಾಗವನ್ನು ಮುಚ್ಚಿ ಅಲ್ಲಿ ಯಲ್ಲಮ್ಮ ತಾಯಿ ಅಂಗಾಳ ಪರಮೇಶ್ವರಿ ದೇವಾಲಯ ನಿರ್ಮಿಸಿ ಪೂಜೆ ಮಾಡುತ್ತಿದ್ದಾರೆ. ಹಲವು ವರ್ಷಗಳಿಂದ ಮುಂಗಳಮುಖಿಯರು ಪೂಜೆ ಮಾಡಿಕೊಂಡು ಬಂದಿದ್ದು ಆಷಾಢ ಮಾಸದಲ್ಲಿ ವಿಶೇಷ ಪೂಜೆ ನಡೆಯುತ್ತದೆ. ಆ ವೇಳೆ ವಿವಿಧ ಭಾಗಗಳಿಂದ ಮಂಗಳಮುಖಿಯರು ಆಗಮಿಸುತ್ತಾರೆ. ಆಷಾಢ ಮಾಸದ ಭೀಮನ ಅಮಾವಾಸ್ಯೆಯಂದು ರಾತ್ರಿ ಪೂರ್ತಿ ಪ್ರಾರ್ಥನೆ ಭಜನೆ ಪೂಜೆ ನಡೆಸುತ್ತಾರೆ. ಯಾವುದೇ ಅನುಮತಿ ಪಡೆಯದೆ ಕೆರೆ ಅಂಗಳವನ್ನು ಮುಚ್ಚಿ ದೇವಸ್ಥಾನ ನಿರ್ಮಿಸಿ ಪೂಜೆ ನಡೆಸುತ್ತಿದ್ದರೂ ಈ ಬಗ್ಗೆ ಅಧಿಕಾರಿಗಳು ಗಮನ ಹರಿಸುತ್ತಿಲ್ಲ ಎಂದು ಬಡಾವಣೆ ನಿವಾಸಿಗಳ ಆರೋಪವಾಗಿದೆ.

**ಕೆರೆ ಪುನಶ್ಚತನಗೊಳಿಸಿ**

ಶೆಟ್ಟಿಹಳ್ಳಿ ಕೆರೆಯು ಐತಿಹಾಸಿಕ ಕೆರೆಯಾಗಿದ್ದು ಈ ಕೆರೆಯನ್ನು ಉಳಿಸುವ ನಿಟ್ಟಿನಲ್ಲಿ ಕೆರೆ ಒತ್ತುವರಿ ತೆರವುಗೊಳಿಸಿ ಪುನಶ್ಚತನಗೊಳಿಸಿ ಶುದ್ಧನೀರು ತುಂಬಿಸಿ ಜಲಕ್ರೀಡೆ ದೋಣಿ ವಿಹಾರಕ್ಕೆ ಯೋಜನೆ ರೂಪಿಸುವುದು ಉತ್ತಮ. ಇದರಿಂದ ನಗರ ವಾಸಿಗಳು ತಮ್ಮ ರಜಾ ದಿನಗಳಲ್ಲಿ ಈ ಕೆರೆಯನ್ನು ಮೋಜಿನ ತಾಣವಾಗಿ ಬಳಸಿಕೊಳ್ಳಲು ಅನುಕೂಲವಾಗುತ್ತದೆ. ಸಂಬಂಧಪಟ್ಟವರು ಈ ಬಗ್ಗೆ ಚಿಂತಿಸುವುದು ಅಗತ್ಯ

-ಸುರೇಶ್ ಕುಮಾರ್, ಉಪನ್ಯಾಸಕ ಚನ್ನಪಟ್ಟಣ


**ಸರ್ವೆ ಕಾರ್ಯ ನನೆಗುದಿಗೆ**

ಕೆರೆಯ ಒತ್ತುವರಿ ಬಗ್ಗೆ ಸಾರ್ವಜನಿಕರ ಆರೋಪಗಳು ಹೆಚ್ಚುತ್ತಿದ್ದ ಹಿನ್ನೆಲೆ ಜಿಲ್ಲಾಡಳಿತದ ಸೂಚನೆ ಮೇರೆಗೆ ತಹಶೀಲ್ದಾರ್ ನೇತೃತ್ವದಲ್ಲಿ ಎರಡು ವರ್ಷದ ಅವಧಿಯಲ್ಲಿ ಎರಡು ಬಾರಿ ಕೆರೆ ಸರ್ವೆಗೆ ತಾಲ್ಲೂಕು ಆಡಳಿತ ಮುಂದಾಗಿತ್ತು. ಸರ್ವೆ ಇಲಾಖೆ ಅಧಿಕಾರಿಗಳು ಸಿಬ್ಬಂದಿ ಜೊತೆ ಪೊಲೀಸರ ರಕ್ಷಣೆಯೊಂದಿಗೆ ಕೆರೆಯ ಬಳಿಗೆ ಆಗಮಿಸಿದ್ದ ಅಧಿಕಾರಿಗಳ ತಂಡ ಅಲ್ಲಲ್ಲಿ ಸರ್ವೆ ಕಾರ್ಯ ನಡೆಸಿ ಸುಮ್ಮನಾಗಿತ್ತು. ಕೆರೆ ಒತ್ತುವರಿ, ತೆರವು ಕಾರ್ಯಾಚರಣೆಯಾಗಲಿ ಅಧಿಕಾರಿಗಳು ಯಾವುದೇ ಮಾಹಿತಿ ನೀಡಿರಲಿಲ್ಲ. ತಹಶೀಲ್ದಾರ್‌ಗಳ ವರ್ಗಾವಣೆ ಕೆಲವು ಪ್ರಭಾವಿಗಳ ಒತ್ತಡ ಮತ್ತಿತರ ಕಾರಣಗಳಿಂದ ಸರ್ವೆ ಕಾರ್ಯ ನನೆಗುದಿಗೆ ಬಿದ್ದಿದೆ ಎಂಬ ಆರೋಪಗಳು ಕೇಳಿ ಬಂದಿವೆ.

## ಡಿಕೆಶಿಗೆ ಶಾಸಕರ ಬೆಂಬಲವಿದೆ, ಈ ಅವಧಿಯಲ್ಲೇ ಸಿಎಂ ಆಗಲಿ

• ಉದಯವಾಹಿನಿ, ರಾಮನಗರ

ನಮ್ಮ ನಾಯಕ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಈ ಅವಧಿಯಲ್ಲೇ ಎರಡೂವರೆ ವರ್ಷ ಸಿಎಂ ಆಗಬೇಕು. ಅದಕ್ಕೆ ಪಕ್ಷದಲ್ಲಿರುವ ಶಾಸಕರ ಬೆಂಬಲವೂ ಇದೆ. ಈ ಕುರಿತು, ಹೈಕಮಾಂಡ್ ತೀರ್ಮಾನ ಕೈಗೊಳ್ಳಬೇಕಷ್ಟೆ ಎಂದು ಶಾಸಕ ಎಚ್.ಎ. ಇಟ್ಬಾಲ್ ಹುಸೇನ್ ಹೇಳಿದರು. ಮುಖ್ಯಮಂತ್ರಿ ಬದಲಾವಣೆ ಚರ್ಚೆ ಕುರಿತು ನಗರದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಬೇಕು ಎಂಬುದು ನಾನು ಸೇರಿದಂತೆ ಹಲವರ ಅಭಿಲಾಷೆಯಾಗಿದೆ. ಪಕ್ಷದ ಹೈಕಮಾಂಡ್ ಅವರಿಗೂ ಒಂದು ಅವಕಾಶ ನೀಡಬೇಕು ಎಂದು ಒತ್ತಾಯಿಸಿದರು. ಶಿವಕುಮಾರ್ ಅವರು ತಮ್ಮ ಅಧ್ಯಕ್ಷತೆಯಲ್ಲಿ ಪಕ್ಷವನ್ನು ತಳಮಟ್ಟದಿಂದ ಸಂಘಟಿಸಿದ್ದಾರೆ. ಪೂರ್ಣ ಬಹುಮತದೊಂದಿಗೆ ಪಕ್ಷವನ್ನು ಅಧಿಕಾರಕ್ಕೆ ಬರಲು ಕಾರಣ ಕರ್ತರಾಗಿದ್ದಾರೆ. ಮೇಕೆದಾಟು, ಭಾರತ್ ಜೋಡೊ ಪಾದಯಾತ್ರೆ ಸೇರಿದಂತೆ ಪಕ್ಷದ ಹಲವು ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಮುನ್ನಡೆಸಿದ್ದಾರೆ.



ಅವರನ್ನು ಸಿಎಂ ಮಾಡುವುದರಿಂದ ಉತ್ತಮ ಸಂಘಟನೆಕಾರ, ಹೋರಾಟಗಾರನಿಗೆ ಗೌರವ ಕೊಟ್ಟಂತಾಗುತ್ತದೆ ಎಂದರು.

ಸಿಎಂ ಬದಲಾವಣೆಯಾಗುವುದು ಕ್ರಾಂತಿಯಲ್ಲ, ಬದಲಿಗೆ, ಅದೊಂದು ಬದಲಾವಣೆಯಷ್ಟೆ. ಸಚಿವ ರಾಜಣ್ಣ ಅವರು ಹೇಳುವಂತೆ ಇಲ್ಲಿ ಯಾವುದೇ ಕ್ರಾಂತಿಯಾಗುವುದಿಲ್ಲ. ಕೇವಲ ಮುಖ್ಯಮಂತ್ರಿ ಬದಲಾಗುತ್ತಾರೆ. ಇಲ್ಲಿ ಕ್ರಾಂತಿಯಾಗುವಂತಹದ್ದು ಏನೂ ಇಲ್ಲ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

**ಪಕ್ಷದ ಉಸ್ತುವಾರಿ ರಣದೀಪ್ ಸುರ್ಜೇವಾಲ ಅವರು ಶಾಸಕರೊಂದಿಗೆ ಸಭೆ ನಡೆಸಿ ಕ್ಷೇತ್ರದ ಅಭಿವೃದ್ಧಿ, ಕಾಮಗಾರಿಗಳು, ಅನುದಾನ ಕುರಿತು ಕೇಳುತ್ತಾರೆ. ನಾನೂ ಅವರನ್ನು ಭೇಟಿ ಮಾಡಿ ಮಾಹಿತಿ ನೀಡುವೆ. ಇತ್ತೀಚಿನ ಅಲ್ಪಸಂಖ್ಯಾತ ಶಾಸಕರ ಸಭೆಯಲ್ಲೂ ಇದನ್ನೇ ಚರ್ಚಿಸಲಾಗಿದೆ. ನನ್ನ ಕ್ಷೇತ್ರಕ್ಕೂ 50 ಕೋಟಿ ಅನುದಾನ ಕೊಟ್ಟಿದ್ದಾರೆ. ಅದರಲ್ಲಿ ರಸ್ತೆ ಸೇರಿದಂತೆ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು**


-ಎಚ್.ಎ. ಇಟ್ಬಾಲ್ ಹುಸೇನ್, ಶಾಸಕ

## ಅರ್ಹರಿಗೆ ಗ್ಯಾರಂಟಿ ಯೋಜನೆಗಳು ತಲುಪಲಿ

• ಉದಯವಾಹಿನಿ, ಬಂಗಾರಪೇಟೆ

ರಾಜ್ಯ ಕಾಂಗ್ರೆಸ್ ಸರ್ಕಾರದ 5 ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ತಾಲ್ಲೂಕಿನಲ್ಲಿ ಅನುಷ್ಠಾನಗೊಳಸಬೇಕು. ಅರ್ಹ ಫಲಾನುಭವಿಗಳು ಯಾರು ಕೂಡ ಯೋಜನೆಯಿಂದ ವಂಚಿತರಾಗಬಾರದು ಎಂದು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಸ್. ಎ.ಪಾರ್ಥಸಾರಥಿ ಹೇಳಿದರು. ಪಟ್ಟಣದ ತಾಲ್ಲೂಕು ಪಂಚಾಯಿತಿ ಕಾರ್ಯಾಲಯ ಸಭಾಂಗಣದಲ್ಲಿ ಮಂಗಳವಾರ 5 ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಎಲ್ಲಾ ಅರ್ಹರಿಗೂ ಯೋಜನೆಗಳು ಲಭಿಸುತ್ತಿದೆಯೇ ಎಂಬುದನ್ನು ಪ್ರಗತಿ ಪರಿಶೀಲನೆ ನಡೆಸಲಾಯಿತು.

ಯುವನಿಧಿ ಯೋಜನೆ ಕುರಿತು ತಾಲ್ಲೂಕಿನ ಎಲ್ಲಾ ಕಾಲೇಜುಗಳಲ್ಲಿ ಪ್ರಚಾರ ಮಾಡಿ ಯುವಕರಿಗೆ ಅರಿವು ಮೂಡಿಸಬೇಕು. ನಿರುದ್ಯೋಗಿ ಯುವಕ-ಯುವತಿಯರಿಗೆ ಉದ್ಯೋಗ ಸಿಗುವವರೆಗೂ ಸರ್ಕಾರ ನೀಡುವ ಮೂರು ಸಾವಿರ ಪಡೆಯುವಂತೆ ಅರಿವು ಮೂಡಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.


ಉದಯವಾಹಿನಿ ಚಿತ್ರ

**ಹೊಸದಾಗಿ ಮನೆ ಕಟ್ಟುವವರಿಗೆ ಮೀಟರ್ ಅಳವಡಿಸಲು ಸರ್ಕಾರದ ನಿಯಮಗಳ ಅನುಸಾರ ಅನುಮತಿ ಪಡೆಯುವುದು ಕಡ್ಡಾಯ. ಇದರ ಮಾರ್ಗದರ್ಶನದಂತೆಯೇ ಮನೆ ನಿರ್ಮಾಣ ಮಾಡಿರುವವರಿಗೆ ಮಾತ್ರ ಬೆಸ್ಕಾಂನಿಂದ ಮೀಟರ್ ನೀಡಲಾಗುವುದು**

-ಸುಕುಮಾರ್ ರಾಜು, ಬೆಸ್ಕಾಂ ಎಇಇ

## ಹೊಸಬಾಳೆ ವಿರುದ್ಧ ಸಿಪಿಐ (ಎಂ) ಪ್ರತಿಭಟನೆ

• ಉದಯವಾಹಿನಿ, ಬಾಗೇಪಲ್ಲಿ

ದೇಶದ ಸಂವಿಧಾನದ ಪೀಠಿಕೆಯಿಂದ ಜಾತ್ಯತೀತ, ಸಮಾಜವಾದ ಪದಗಳನ್ನು ತೆಗೆಯಬೇಕು ಎಂಬ ಬೇಡಿಕೆ ನೀಡಿದ ಆರ್‌ಎಸ್ ಪ್ರಧಾನ ಕಾರ್ಯದರ್ಶಿ ದತ್ತಾತ್ರೇಯ ಹೊಸಬಾಳೆ ವಿರುದ್ಧ ಭಾರತ ಕಮ್ಯುನಿಸ್ಟ್ ಪಕ್ಷದ ತಾಲ್ಲೂಕು ಸಮಿತಿ ನೇತೃತ್ವದಲ್ಲಿ ಮಂಗಳವಾರ ಪ್ರತಿಭಟನೆ ನಡೆಯಿತು. ಇಲ್ಲಿನ ಸುಂದರಯ್ಯ ಭವನ, ಡಿವಿಜಿ ಮುಖ್ಯರಸ್ತೆಯಲ್ಲಿ ಬೈಕ್ ರ್‍ಯಾಲಿ ಮಾಡಿದರು. ಸಿಪಿಐ (ಎಂ) ರಾಜ್ಯ ಸಮಿತಿ ಮಂಡಲಿ ಸದಸ್ಯ ಎಂ.ಪಿ.ಮುನಿವೆಂಕಟಪ್ಪ ಮಾತನಾಡಿ, ಆಗಿನ ಪ್ರಧಾನಿ ಇಂದಿರಾಗಾಂಧಿ ಅವರು ದೇಶದ ಮೇಲೆ ಹೇರಿದ ತುರ್ತು ಪರಿಸ್ಥಿತಿಯ 50ನೇ ವರ್ಷದ ಸ್ಮರಣೆ ಕಾರ್ಯಕ್ರಮದಲ್ಲಿ ಆರ್‌ಎಸ್ ಎಸ್ ಪ್ರಧಾನ ಕಾರ್ಯದರ್ಶಿ ದತ್ತಾತ್ರೇಯ ಹೊಸಬಾಳೆ ಸಂವಿಧಾನದ ಪೀಠಿಕೆಯಿಂದ ಜಾತ್ಯತೀತ ಮತ್ತು ಸಮಾಜವಾದ ಪದಗಳನ್ನು ತೆಗೆಯಬೇಕು ಎಂದಿದ್ದಾರೆ. ಆರ್‌ಎಸ್‌ಎಸ್‌ನ ಬೇಡಿಕೆಯು ಕೇವಲ ಪರಿ ಭಾಷೆಯ ವಿಷಯವಲ್ಲ. ಇದು ಸಂವಿಧಾನದ ಆಶಯದ ಮೇಲಿನ ನೇರ ದಾಳಿ. ಈ ಮೂಲಕ ದೇಶವನ್ನು ಧಾರ್ಮಿಕ ಶ್ರೇಷ್ಠತೆ, ಜಾತಿ ಶ್ರೇಣಿ ಮತ್ತು ಕಾರ್ಪೊರೇಟ್ ಸರ್ವಾಧಿಕಾರದ ಆಡಳಿತದ ಕಡೆಗೆ ಎಳೆಯುವ ಯತ್ನವಾಗಿದೆ ಎಂದರು.


ಉದಯವಾಹಿನಿ ಚಿತ್ರ

ಬಿಜೆಪಿ, ಆರ್‌ಎಸ್ ಅಂದಿನಿಂದ ಇಂದಿನವರೆಗೆ ಪ್ರಬಲ ಜಾತಿಗಳು, ಶ್ರೀಮಂತ ವರ್ಗಗಳ ಜೊತೆಗಿದೆ. ಅವರ ಕಾನೂನುಗಳು ಮತ್ತು ಹೇಳಿಕೆಗಳು ದೇಶದ ದುಡಿಯುವ ವರ್ಗಗಳ ಜನರ ವಿರುದ್ಧವೇ ಆಗಿರುತ್ತದೆ. ಇತ್ತೀಚಿನ ದಿನಗಳಲ್ಲಿನ ಅವರ ಹೇಳಿಕೆಗಳು ಇದನ್ನು ಸಾಬೀತುಪಡಿಸಿದೆ. ಶೋಷಿತರು, ದುಡಿಯುವ ವರ್ಗ ಹಾಗೂ ಜನಸಾಮಾನ್ಯರ ಸಾಂವಿಧಾನಿಕ ಹಕ್ಕುಗಳನ್ನು ಕಸಿದುಕೊಳ್ಳುವ ಯೋಜನೆ ಇದು ಎಂದರು. ಸಿಪಿಐ (ಎಂ) ಜಿಲ್ಲಾ ಸಮಿತಿ ಸದಸ್ಯ ಬಿಳ್ಳೂರು ನಾಗರಾಜ್ ಮಾತನಾಡಿ, ಸಂವಿಧಾನವನ್ನು ಕುಗ್ಗಿಸುವ ಆರ್‌ಎಸ್‌ಎಸ್‌ನ ಹೇಳಿಕೆಗಳು, ಪ್ರಯತ್ನಗಳ ವಿರುದ್ಧ ದೇಶದಾದ್ಯಂತ ಒಗ್ಗಟ್ಟು ಪ್ರದರ್ಶಿಸಬೇಕು. ಸಂವಿಧಾನದಿಂದ ಜಾತ್ಯತೀತ ಮತ್ತು ಸಮಾಜವಾದದ ಮೂಲ ಮೌಲ್ಯಗಳನ್ನು ಅಳಿಸುವ ಆರ್‌ಎಸ್‌ಎಸ್ ಬೇಡಿಕೆಯನ್ನು ಜನರು ತಿರಸ್ಕರಿಸಬೇಕು ಎಂದು ಮನವಿ ಮಾಡಿದರು.

## ಶುಂಠಿ ಬೆಳೆಗೆ ಬೆಂಕಿ ರೋಗ ಬಾಧೆ

• ಉದಯವಾಹಿನಿ, ಮಡಿಕೇರಿ

ಕೊಡಗು ಜಿಲ್ಲೆಯಲ್ಲಿ ಶುಂಠಿಗೆ ಹೊಸದೊಂದು ಕಾಯಿಲೆ ತಗುಲಿದ್ದು, ಬೆಳೆಗಾರರ ಚಿಂತೆಗೆ ಕಾರಣವಾಗಿದೆ. ಪೈರಿಕ್ಯುಲೇರಿಯಾ ಬೆಂಕಿ ರೋಗವೆಂದು ಹೆಸರಿಸಿರುವ ಈ ಕಾಯಿಲೆ ಕುಶಾಲನಗರ ಮತ್ತು ಸೋಮವಾರಪೇಟೆ ತಾಲ್ಲೂಕುಗಳಲ್ಲಿ ಹೆಚ್ಚಾಗಿ ಕಾಣಿಸಿಕೊಂಡಿದೆ. ಶುಂಠಿ ನಾಟಿ ಮಾಡಿದ 70 ರಿಂದ 80 ದಿನಗಳಲ್ಲೇ ಈ ಕಾಯಿಲೆ ಕಾಣಿಸಿಕೊಂಡಿದೆ. ಈ ಕುರಿತು ಕಲ್ಲಿ ಕೋಟೆಯ ಐ.ಸಿ.ಎ.ಆರ್ ಭಾರತೀಯ ಸಾಂಬಾರು ಬೆಳೆಗಳ ಸಂಶೋಧನಾ ಸಂಸ್ಥೆಯ ವಿಜ್ಞಾನಿಗಳು ಪರಿಶೀಲನೆ ನಡೆಸಿದ್ದು, ಇದು ಭತ್ತ, ಗೋಧಿ ಮತ್ತು ಬಾರ್ಲಿಯಂತಹ ಏಕದಳ ಸಸ್ಯಗಳಲ್ಲಿ ಕಂಡುಬರುವ ಬೆಂಕಿ ರೋಗವನ್ನು ತರುವ ಶಿಲೀಂಧ್ರವಾದ ಪೈರಿಕ್ಯುಲೇರಿಯಾ ಎಂಬ ರೋಗಾಣುವಿನಿಂದ ಹರಡುತ್ತದೆ ಎಂದು ಹೇಳಿದ್ದಾರೆ. ಕಳೆದ ವರ್ಷ ಶುಂಠಿ ಕೊಯ್ದು ಮಾಡುವ ಸಂದರ್ಭದಲ್ಲಿ ಒಂದು ಹೊಸ ರೋಗ ಕಾಣಿಸಿಕೊಂಡು ರೈತರಲ್ಲಿ ಅಂತಕ ಉಂಟು ಮಾಡಿತ್ತು. ಈಗ ಆರಂಭದಲ್ಲೇ ಕಾಣಿಸಿಕೊಂಡು ರೋಗ ಅತ್ಯಂತ ವೇಗವಾಗಿ ಹರಡುತ್ತಿದೆ.


ಉದಯವಾಹಿನಿ ಚಿತ್ರ

**ರೋಗದ ಲಕ್ಷಣಗಳು:** ಪ್ರಾರಂಭದಲ್ಲಿ ಗಿಡದ ಎಲೆಗಳ ಮೇಲೆ ಕಪ್ಪು, ಆಲಿವ್-ಹಸಿರು ಬಣ್ಣದ ಚುಕ್ಕೆಗಳು ಕಾಣಿಸಿಕೊಳ್ಳುತ್ತವೆ. ಚುಕ್ಕೆಗಳ ಮಧ್ಯಭಾಗವು ಬೂದಿ ಬಣ್ಣಕ್ಕೆ ತಿರುಗಿ ಸುತ್ತಲೂ ಕಂದು ಬಣ್ಣ ಉಂಟಾಗುತ್ತದೆ. ಇಂತಹ ಚುಕ್ಕೆಗಳು ಒಂದಕ್ಕೊಂದು ಕೂಡಿಕೊಂಡು ಗಿಡದ ಎಲೆಗಳು ಹಳದಿಯಾಗಿ ಸುಟ್ಟು ಹೋದಂತೆ ಕಂಡು ಬರುತ್ತದೆ. ಒಮ್ಮೆ ಸೋಂಕು ತಗುಲಿದರೆ ಅದು ವೇಗವಾಗಿ ಹರಡುತ್ತದೆ ಮತ್ತು ಕೆಲವೇ ಗಂಟೆಗಳಲ್ಲಿ ಇಡೀ ಹೊಲವನ್ನು ಆವರಿಸುತ್ತದೆ. ರೋಗ ತೀವ್ರವಾದಾಗ ಶುಂಠಿಯ ಎಲೆ, ಕಾಂಡದ ಒಣಗುವಿಕೆಗೆ ಕಾರಣವಾಗುತ್ತದೆ. ಇದರಿಂದ ಗೆಡ್ಡೆಗಳ ಬೆಳವಣಿಗೆಯು ಕುಂಠಿತವಾಗಿ ಗೆಡ್ಡೆಗಳ ತೂಕದಲ್ಲಿ ಶೇ 30ರಷ್ಟು ನಷ್ಟ ಉಂಟಾಗುತ್ತದೆ ಎಂದು ಗೋಣಿಕೊಪ್ಪಲುವಿನ ಐಸಿಎ ಆರ್- ಕೃಷಿ ವಿಜ್ಞಾನ ಕೇಂದ್ರದ ಸಸ್ಯ ಸಂರಕ್ಷಣಾ ತಜ್ಞ ಡಾ.ಕೆ.ವಿ.ವೀರೇಂದ್ರಕುಮಾರ್ ಹೇಳುತ್ತಾರೆ.

**ರೋಗಕ್ಕೆ ಕಾರಣ:** ಪೈರಿಕ್ಯುಲೇರಿಯಾ ಎಂಬ ಶಿಲೀಂಧ್ರದ ಬೀಜಕಣಗಳು ಗಾಳಿಯ ಮುಖಾಂತರ ಇತರ ಗಿಡಗಳಿಗೂ ಹರಡುತ್ತವೆ. ಈ ರೋಗ ವೃದ್ಧಿಯಾಗಲು ಹೆಚ್ಚು ಆದ್ರತೆ (ಶೇ 86-98), ಕಡಿಮೆ ರಾತ್ರಿ ಉಷ್ಣಾಂಶ (20 ಸೆ.) ಮತ್ತು ಸಾರಜನಕ ಗೊಬ್ಬರವನ್ನು ಹೆಚ್ಚಿನ ಪ್ರಮಾಣದಲ್ಲಿ ಉಪಯೋಗಿಸುವುದರಿಂದ ರೋಗ ಬರುತ್ತದೆ. ಬೆಳಗಿನ ಇಬ್ಬನಿ, ಮೋಡ ಕವಿದ ವಾತಾವರಣ, ಸಾಲುಗಳ ನಡುವಿನ ಅಂತರ, ಹೆಚ್ಚು ಮಳೆ ಮತ್ತು ತುಂತುರು ಮಳೆ ಹನಿ, ಬಿಟ್ಟು ಬಿಟ್ಟು ಬರುವ ಬಿಸಿಲು ಮತ್ತು ಮಳೆ ಈ ರೋಗ ತೀವ್ರವಾಗಿ ಹರಡಲು ಕಾರಣಗಳಾಗಿವೆ. ಈ ರೋಗವು ಕೇವಲ 15 ರಿಂದ 20 ಗಂಟೆಗಳ ಅವಧಿಯಲ್ಲಿ ಇತರೆ ಪ್ರದೇಶಗಳಿಗೂ ವೇಗವಾಗಿ ಹರಡುತ್ತದೆ ಎಂದು ಅವರು ಹೇಳುತ್ತಾರೆ.

**ಸೋಮವಾರಪೇಟೆ ಪಿರಿಯಾಪಟ್ಟಣ ಹುಣಸೂರು ಕುಶಾಲನಗರ ತಾಲ್ಲೂಕುಗಳಲ್ಲಿ ಹೆಚ್ಚಾಗಿರುವುದು ಕಂಡು ಬಂದಿದೆ. ಸೂಕ್ತ ಮುಂಜಾಗ್ರತೆ ವಹಿಸಬೇಕು**

-ಡಾ.ಕೆ.ವಿ.ವೀರೇಂದ್ರಕುಮಾರ್
ಐಸಿಎಆರ್- ಕೃಷಿ ವಿಜ್ಞಾನ ಕೇಂದ್ರದ ಸಸ್ಯ ಸಂರಕ್ಷಣಾ ತಜ್ಞ ಗೋಣಿಕೊಪ್ಪಲು

## ಮಾತೃಪಕ್ಷಕ್ಕೆ ಮೋಸ ಮಾಡಿದ ಸಿದ್ದರಾಮಯ್ಯ: ನಿಖಿಲ್ ವಾಗ್ದಾಳಿ

• ಉದಯವಾಹಿನಿ, ಮಂಡ್ಯ

ಸಿದ್ದರಾಮಯ್ಯನವರೇ ನೀವು ಮಾತೃಪಕ್ಷಕ್ಕೆ (ಜೆಡಿಎಸ್) ಮೋಸ ಮಾಡಿ ಹೋಗಿದ್ದೀರಾ ಎಂಬುದು ನೆನಪಿರಲಿ. ಇದು ಹೆತ್ತ ತಾಯಿಗೆ ಮಾಡಿದ ದ್ರೋಹಕ್ಕೆ ಸಮ. ನೀವು ಇಲ್ಲಿ ಉಂಡು, ತಿಂದು ಹೋದವರು ಇದೀಗ ನಮ್ಮ ಪಕ್ಷದ ವಿರುದ್ಧ ಮಾತನಾಡುತ್ತೀರಾ. ನಮ್ಮ ಪಕ್ಷದ ಕಾರ್ಯಕರ್ತರೇ ನಮ್ಮ ಶಕ್ತಿಯಾಗಿದ್ದು, ನಾವು ಧೃತಿಗೆಡುವುದಿಲ್ಲ ಎಂದು ಜೆಡಿಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ವಾಗ್ದಾಳಿ ನಡೆಸಿದರು. ಜೆಡಿಎಸ್ ಬೇರೆಯವರ ಹೆಗಲ ಮೇಲೆ ಕೈ ಹಾಕಿಕೊಂಡೇ ಅಧಿಕಾರಕ್ಕೆ ಬರಬೇಕು ಎಂದು ಸಿದ್ದರಾಮಯ್ಯ ಅವರು ಕೆಆರ್‌ಎಸ್ ಬಾಗಿನ ಕಾರ್ಯಕ್ರಮದಲ್ಲಿ ಹೇಳಿಕೆ ನೀಡಿದ್ದರು.

ಈ ಹೇಳಿಕೆಗೆ ಕೆ.ಆರ್. ಪೇಟೆಯಲ್ಲಿ ಮಂಗಳವಾರ ನಡೆದ ಜೆಡಿಎಸ್ ಡಿಜಿಟಲ್ ಸದಸ್ಯತ್ವ ಅಭಿಯಾನ ಕಾರ್ಯಕ್ರಮದಲ್ಲಿ ನಿಖಿಲ್ ಪ್ರತಿಕ್ರಿಯಿಸಿದರು. ಮುಂದೆ ಕುಮಾರಸ್ವಾಮಿ ಮುಖ್ಯಮಂತ್ರಿಯಾದರೆ 2 ಸಾವಿರ ಅಲ್ಲ, 5 ಸಾವಿರ ಕೊಡುತ್ತೇವೆ. ನಾವು ರಾಜ್ಯದ ಅಭಿವೃದ್ಧಿಗೆ ಅಡ್ಡಿಯಾಗದಂತೆ ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬುತ್ತೇವೆ ಎಂದರು. ನಾನು ಅಧಿಕಾರಕ್ಕಾಗಿ ಸಾರ್ವಜನಿಕ ಬದುಕಿಗೆ ಬಂದಿಲ್ಲ. ಜನಸೇವೆಗೆ ಮತ್ತು ಪಕ್ಷದ ಕಾರ್ಯಕರ್ತರ ಸೇವೆಗೆ ಬಂದಿದ್ದೇನೆ. ಮೂರು ಬಾರಿ ಸೋತಿದ್ದರೂ ಧೃತಿಗೆಟ್ಟಿಲ್ಲ, ಪಕ್ಷ ಸಂಘಟನೆ ಮಾಡುತ್ತಿದ್ದೇನೆ. ನನ್ನ ಮೂರು ಬಾರಿಯ ಸೋಲಿಗೆ ಏನೆಲ್ಲಾ ಪಿತೂರಿ ಮಾಡಿದ್ರಿ ಎಂಬುದು ಗೊತ್ತಿದೆ.



ನಮ್ಮ ಪಕ್ಷವನ್ನು ಬುಡಸಮೇತ ಕಿತ್ತೊಗೆಯಲು ಸಾಧ್ಯವಿಲ್ಲ. ರಾಜ್ಯದಾದ್ಯಂತ 58 ದಿನಗಳ ಪ್ರವಾಸ ಕೈಗೊಂಡು ಪಕ್ಷ ಸಂಘಟಿಸುತ್ತೇನೆ ಎಂದರು.

ಕಾಂಗ್ರೆಸ್- ಜೆಡಿಎಸ್ ಮೈತ್ರಿ ಸರ್ಕಾರ ಬೀಳಿಸಲು ಕಾರಣರಾದವರು ಸಿದ್ದರಾಮಯ್ಯ. ನಿಮ್ಮದೇ ಪಕ್ಷದ ಶಾಸಕರನ್ನು ಬಿಜೆಪಿಗೆ ಕಳಿಸಿದ್ದು ಯಾರೆಂದು ಗೊತ್ತಿದೆ. ಅದರ ಸೂತ್ರಧಾರರು ನೀವೇ ಎಂದು ಎಲ್ಲರಿಗೂ ಗೊತ್ತಿದೆ ಎಂದು ಆರೋಪಿಸಿದರು.

**ಯಾರೋ ಕಟ್ಟಿದ ಪಕ್ಷದಲ್ಲಿ ನೀವು ಹೋಗಿ ಕಾಂಗ್ರೆಸ್ ಮುಖಂಡರಿಗೆ ಅಧಿಕಾರ ತಪ್ಪಿಸಿದ್ರಿ. ಅಧಿಕಾರದ ಆಸೆಗಾಗಿ ಹಲವು ದಲಿತ ನಾಯಕರನ್ನು ತುಳಿದಿದ್ದೀರಾ. ನಮ್ಮ ಪಕ್ಷದ ಬಗ್ಗೆ ಹಗುರವಾಗಿ ಮಾತನಾಡುತ್ತೀರಾ, ನಮ್ಮ ಕಾರ್ಯಕರ್ತರು ಎಂದಿಗೂ ನಮ್ಮನ್ನು ಕೈಬಿಡುವುದಿಲ್ಲ. ನಮ್ಮ ಪಕ್ಷ ಅಧಿಕಾರಕ್ಕೆ ಬಂದೇ ಬರುತ್ತದೆ. ಇದು ನಮ್ಮ ತಾತನ (ಎಚ್.ಡಿ. ದೇವೇಗೌಡ) ಬಯಕೆ**

- ನಿಖಿಲ್ ಕುಮಾರಸ್ವಾಮಿ
ಜೆಡಿಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ

## ಸ್ಮಶಾನ ಜಾಗ ವಿವಾದ: ಪ್ರತಿಭಟನೆ

• ಉದಯವಾಹಿನಿ, ಕುಣಿಗಲ್

ತಾಲ್ಲೂಕಿನ ಹುಲಿವಾನದಲ್ಲಿ ಸ್ಮಶಾನ ಜಾಗದ ವಿವಾದದಿಂದಾಗಿ ಶವಸಂಸ್ಕಾರಕ್ಕೆ ಅಡ್ಡಿಪಡಿಸಿದ್ದಾರೆ ಎಂದು ಆರೋಪಿಸಿದ ಗ್ರಾಮಸ್ಥರು ಮಂಗಳವಾರ ಶವವಿಟ್ಟು ಪ್ರತಿಭಟನೆ ನಡೆಸಿದರು. ಅಧಿಕಾರಿಗಳ ಮಧ್ಯಪ್ರವೇಶದ ನಂತರ ಅಂತ್ಯಸಂಸ್ಕಾರ ನಡೆಯಿತು. ಹುಲಿವಾನ ಮುಖ್ಯರಸ್ತೆ ಬಲಭಾಗದಲ್ಲಿ ಎರಡು ಎಕರೆ ಸ್ಮಶಾನವಿದ್ದು, ಗ್ರಾಮಸ್ಥರು ನೂರು ವರ್ಷದಿಂದ ಬಳಸುತ್ತಿದ್ದರು.

ಗ್ರಾಮಸ್ಥ ನಂಜೇಗೌಡ ಸ್ಮಶಾನಕ್ಕೆ ಹೊಂದಿಕೊಂಡ ಜಾಗದಲ್ಲಿ ಮನೆ ನಿರ್ಮಿಸಿಕೊಂಡಿದ್ದು, ನಂಜೇಗೌಡ, ಕೆಲ ಗ್ರಾಮಸ್ಥರು ಸಾರ್ವಜನಿಕ ಸ್ಮಶಾನದಿಂದ ಸಮಸ್ಯೆಯಾಗುತ್ತಿರುವ ಬಗ್ಗೆ ಕಂದಾಯ ಇಲಾಖೆ ಅಧಿಕಾರಿಗಳಿಗೆ ಮಾಡಿದ ಮನವಿ ಮೇರೆಗೆ ಇತ್ತೀಚೆಗೆ ಅಧಿಕಾರಿಗಳು ಸಾರ್ವಜನಿಕ ಸ್ಮಶಾನಕ್ಕೆ ಎರಡು ಎಕರೆ ಜಮೀನನ್ನು ಮುಖ್ಯರಸ್ತೆಯ ಎಡಭಾಗದಲ್ಲಿ ಮಂಜೂರು ಮಾಡಿ ಸ್ಥಳಾಂತರ ಮಾಡಿದ್ದರು. ಸಂಜೆ ಗ್ರಾಮದ ವೆಂಕಟೇಶ ಅಲಿಯಾಸ್ ಮಂಜುನಾಥ (45) ಮೃತಪಟ್ಟಿದ್ದು, ಸಂಬಂಧಿಕರು ಮಂಗಳವಾರ ಬೆಳಗ್ಗೆ ಅಂತ್ಯಸಂಸ್ಕಾರಕ್ಕೆಂದು ಹಳೆ ಸ್ಮಶಾನಕ್ಕೆ ಶವ ತಂದಾಗ ನಂಜೇಗೌಡ ಸೇರಿದಂತೆ ಕೆಲವರು ಅಡ್ಡಿಪಡಿಸಿದ್ದಾರೆ. ಆಗ ಗ್ರಾಮಸ್ಥರು ಶತಮಾನಗಳಿಂದ ನಮ್ಮ ಪೂರ್ವಿಕರ ಅಂತ್ಯಸಂಸ್ಕಾರವನ್ನು ಇಲ್ಲಿ ಮಾಡಿದ್ದೇವೆ. ಈಗ ಸ್ಮಶಾನ ಜಾಗ ಬದಲಿ ಮಾಡಿರುವುದು ಖಂಡನೀಯ ಎಂದು ಶವವಿಟ್ಟು ಪ್ರತಿಭಟನೆ ನಡೆಸಿದರು.


ಉದಯವಾಹಿನಿ ಚಿತ್ರ

ಕಂದಾಯ ಇಲಾಖೆ ಗ್ರಾಮ ಆಡಳಿತಾಧಿಕಾರಿ ವಿವೇಕ್, ಪಿಡಿಒ ಚಂದ್ರಹಾಸ್ ಮತ್ತು ಕಾನ್‌ಸ್ಟೆಬಲ್ ದಯಾನಂದ ಸ್ಥಳಕ್ಕೆ ಭೇಟಿ ನೀಡಿ, ಈಗಾಗಲೇ ಶವ ಹೂಳಲು ಗುಂಡಿ ತೋಡಿರುವುದರಿಂದ ಅಂತ್ಯಸಂಸ್ಕಾರಕ್ಕೆ ಅನುವು ಮಾಡಿಕೊಟ್ಟು, ಮುಂದಿನ ದಿನಗಳಲ್ಲಿ ಸ್ಥಳಾಂತರ ಗೊಂಡಿರುವ ಜಮೀನನಲ್ಲಿ ಮಾಡಲು ಸೂಚಿಸಿ, ವಿವಾದಕ್ಕೆ ಅಂತ್ಯಹಾಡಿದರು.

# ಸಂವಿಧಾನ ಬದಲಾವಣೆ ಸಾಧ್ಯವಿಲ್ಲ: ಯದುವೀರ್

### ತುರ್ತು ಪರಿಸ್ಥಿತಿ ಹೇರಿದ ಕಾಂಗ್ರೆಸ್- ಕರಾಳ ಇತಿಹಾಸಕ್ಕೆ 50 ವರ್ಷ ವಿಚಾರ ಸಂಕಿರಣ

• ಉದಯವಾಹಿನಿ, ಕೊಳ್ಳೇಗಾಲ

ಸಂವಿಧಾನವನ್ನು ಯಾರಿಂದಲೂ ಸಹ ಬದಲಾವಣೆ ಮಾಡಲು ಸಾಧ್ಯವಿಲ್ಲ ಎಂದು ಮೈಸೂರು-ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದರು. ನಗರದ ಚೌಡೇಶ್ವರಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಭಾರತೀಯ ಜನತಾ ಪಾರ್ಟಿ ವತಿಯಿಂದ ಆಯೋಜಿಸಿದ್ದ ತುರ್ತು ಪರಿಸ್ಥಿತಿ ಹೇರಿದ ಕಾಂಗ್ರೆಸ್- ಕರಾಳ ಇತಿಹಾಸಕ್ಕೆ 50 ವರ್ಷ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬರೂ ಸಹ ಸಂವಿಧಾನವನ್ನು ರಕ್ಷಣೆ ಮಾಡಬೇಕು. ಸಂವಿಧಾನವೇ ನಮಗೆ ಶಕ್ತಿ, ರಕ್ಷಣೆ ಹಾಗೂ ದೇವರು ಎಂದರು. ಕಾಂಗ್ರೆಸ್‌ನವರು ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಾವಣೆ ಮಾಡುತ್ತಾರೆ ಎಂದು ಜನರಿಗೆ ಸುಳ್ಳು ಸುದ್ದಿಗಳನ್ನು ಹಬ್ಬಿಸುತ್ತಾರೆ. ಸುಳ್ಳು ಸುದ್ದಿಗಳನ್ನು ಹೇಳುವುದರಲ್ಲಿ ಆ ಪಕ್ಷ ನಂಬರ್ ಒನ್ ಸ್ಥಾನವನ್ನು ಪಡೆದಿದೆ. ಅವರಿಗೆ ಸುಳ್ಳೇ ಅಸ್ತ್ರ ಅದನ್ನು ಬಿಟ್ಟರೆ ಬೇರೆ ದಾರಿಯೇ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

**ಸಂವಿಧಾನವೇ ನಮಗೆ ಶಕ್ತಿ**

ಪ್ರತಿಯೊಬ್ಬರೂ ಸಹ ಸಂವಿಧಾನದ ಮೂಲಕ ನಡೆಯಬೇಕು. ಮತ್ತೆ ದೇಶವು ತುರ್ತು ಪರಿಸ್ಥಿತಿಗೆ ಬರದಂತೆ ಒಟ್ಟಾಗಿರಬೇಕು. ಹಿಂದಿನ ಕಾಂಗ್ರೆಸ್ ಸರ್ಕಾರ ನಮ್ಮ ದೇಶವನ್ನೇ ಹಾಳು ಮಾಡಿದೆ. ಅಂದಿನ ತುರ್ತು ಪರಿಸ್ಥಿತಿಯಲ್ಲಿ ಅವರಿಗೆ ಹೇಗೆ ಬೇಕೋ ಹಾಗೆ ಸಂವಿಧಾನವನ್ನು ತಿದ್ದುಪಡಿ ಮಾಡಿಕೊಂಡರು. ಅದೇ ಅವರ ಸಾಧನೆ, ಕಾಂಗ್ರೆಸ್ ಕರಾಳ ಇತಿಹಾಸದ ತುರ್ತು ಪರಿಸ್ಥಿತಿಯನ್ನು ಪ್ರತಿಯೊಬ್ಬರು ತಿಳಿದುಕೊಳ್ಳಬೇಕು ಎಂದರು. ಪ್ರಧಾನಿ ನರೇಂದ್ರ ಮೋದಿ ಅವರು ಕಳೆದ 11 ವರ್ಷಗಳಿಂದಲೂ ಉತ್ತಮ ಅಧಿಕಾರದ ಮೂಲಕ ದೇಶವನ್ನು ಪರಿವರ್ತನೆ ಮಾಡಿದ್ದಾರೆ. ಕೇಂದ್ರದಲ್ಲಿ ಕೇಸರಿ ಅರಳಿದೆ ಹಾಗೆ ರಾಜ್ಯದಲ್ಲೂ ಕೇಸರಿ ಅರಳಬೇಕು. 2028ಕ್ಕೆ ಚುನಾವಣೆ ಎದುರಿಸಲು ಸಿದ್ದರಿದ್ದೇವೆ. ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲಾ ಕಡೆ ಬಿಜೆಪಿ ಗೆದ್ದು ಅಧಿಕಾರಕ್ಕೆ ಬರಬೇಕು. ಪ್ರತಿಯೊಬ್ಬ ಕಾರ್ಯಕರ್ತರೂ ಹಗಲು ರಾತ್ರಿ ದುಡಿದು ಕೆಲಸ ಮಾಡಬೇಕು ಎಂದರು. ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಮಾತನಾಡಿ, ಕಾಂಗ್ರೆಸ್ ಅವರು ಸಂವಿಧಾನ ರಕ್ಷಕರಲ್ಲ ಅವರು ಸಂವಿಧಾನದ ವಿರೋಧಿಗಳು. ಇಂದಿರಾಗಾಂಧಿ ತುರ್ತು ಪರಿಸ್ಥಿತಿ ಘೋಷಣೆ ಮಾಡಿದ್ದರು, ಅದನ್ನು ಸಂಸತ್ತಿನಲ್ಲಿ ರಾಜೀವ್ ಗಾಂಧಿ ಸಮರ್ಥನೆ ಮಾಡಿಕೊಂಡರು, ರಾಹುಲ್ ಗಾಂಧಿಯೂ ಇದೆ ಡಿಎನ್‌ಎ ಇಂದ ಬಂದವರು. ಅವರೂ ಸಹ ಮುಂದಿನ ದಿನಗಳಲ್ಲಿ ತುರ್ತು ಪರಿಸ್ಥಿತಿ ತರುವುದರಲ್ಲಿ ಅನುಮಾನವೇ ಇಲ್ಲ, ಆ ಕುಟುಂಬದವರಿಗೆ ಸಂವಿಧಾನದ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ ಎಂದರು. ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ಕರಾಳ ದಿನವನ್ನು ವಿರೋಧಿಸಿ ಜೈಲಿಗೆ ಹೋಗಿ ಬಂದವರನ್ನು ಸನ್ಮಾನಿಸಲಾಯಿತು.


ಉದಯವಾಹಿನಿ ಚಿತ್ರ

ಮಾಜಿ ಶಾಸಕ ಎಸ್.ಬಾಲರಾಜು, ಮುಖಂಡ ಪ್ರೀತಮ್ ನಾಗಪ್ಪ, ಸುಂದರ್, ರಾಮಚಂದ್ರ, ನಿಶಾಂತ್, ನಗರ ಮಂಡಲ ಬಿಜೆಪಿ ಅಧ್ಯಕ್ಷ ಸಿ.ಎಂ.ಪರಮೇಶ್ವರಯ್ಯ, ಗ್ರಾಮಾಂತರ ಅಧ್ಯಕ್ಷ ನಾಗೇಶ್, ಚಾಮರಾಜನಗರ ಮಂಡಲದ ಶಿವರಾಜ್, ಯಳಂದೂರು ಅನಿಲ್, ಎಸ್‌ಸಿ ಘಟಕದ ಅಧ್ಯಕ್ಷ ಸಿದ್ದಪ್ಪಾಜಿ ಇದ್ದರು.

**ದಸರಾ; ಶುರು ಮಾಡಿದವರು ಮುಂದುವರಿಸಿ:** ಮೈಸೂರು ಮಹಾರಾಜರು ದಸರಾ ಹಬ್ಬವನ್ನು ಮೈಸೂರಿಗೆ ಮಾತ್ರ ಸೀಮಿತ ಮಾಡಿದ್ದರು. ಈ ಹಿಂದೆ ಇದ್ದ ಸರ್ಕಾರಗಳು ಮೈಸೂರು ಜೊತೆಯಲ್ಲಿ ಬೇರೆ ಬೇರೆ ಕಡೆ ದಸರಾ ಆಚರಣೆ ಮಾಡಲು ಆರಂಭಿಸಿದರು. ಜನರ ಭಾವನೆಗೆ ತಕ್ಕಂತೆ ಅವರು ಕೆಲಸ ಮಾಡಬೇಕಾಗಿದೆ. ಹೊಸ ದಸರಾಗಳನ್ನು ಶುರು ಮಾಡಿದ ಸರ್ಕಾರವು ಮುಂದುವರಿಸುವುದೂ ಅಗತ್ಯ ಎಂದು ಸಂಸದ ಯದುವೀರ್ ಹೇಳಿದರು. ರಾಜ್ಯ ಸರ್ಕಾರದ ಬೊಕ್ಕಸ ಖಾಲಿಯಾಗಿದೆ. ಚಾಮರಾಜನಗರ ಹಾಗೂ ಮೈಸೂರು ಕೊಡಗು ಜಿಲ್ಲೆಗಳಲ್ಲಿ ಅಭಿವೃದ್ಧಿ ಕೆಲಸ ಕಾಮಗಾರಿಗಳು ಆಗಿಲ್ಲ ಎಂದು ದೂರಿದರು.

**ಹುಲಿ ಸಾವು ಸಮಗ್ರ ತನಿಖೆ ಮಾಡಿ**

**ರಾಜ್ಯದಲ್ಲಿ ಶೇ. 50ಕ್ಕೂ ಹೆಚ್ಚು ವನ್ಯ ಪ್ರದೇಶ ಹೊಂದಿರುವ ಈ ಜಿಲ್ಲೆಯಲ್ಲಿರುವಷ್ಟು ವನ್ಯಜೀವಿ ವೈವಿಧ್ಯತೆ ಎಲ್ಲಿಯೂ ಇಲ್ಲ. ಜಿಲ್ಲೆಯ ಪ್ರತಿನಿಧಿಗಳು ಇಲ್ಲಿನ ಜೀವವೈವಿಧ್ಯತೆ, ಜನರನ್ನ ಕಾಪಾಡಬೇಕಾದ ಕರ್ತವ್ಯ ಹೊಂದಿದ್ದಾರೆ. ಇಂಥ ಘಟನೆ ಮರುಕಳಿಸದಂತೆ ಒತ್ತು ನೀಡಿ ಸಮಗ್ರ, ಸೂಕ್ತ ತನಿಖೆ ಆಗಬೇಕು ಎಂದು ಯದುವೀರ್ ಹೇಳಿದರು. ಬಂಡೀಪುರ ಅರಣ್ಯ ರಸ್ತೆಯಲ್ಲಿ ರಾತ್ರಿ ಪ್ರಯಾಣ ನಿಷೇಧ ವಿಚಾರದಲ್ಲೂ ಗೊಂದಲ ಮೂಡಿಸಲಾಗಿದೆ. ಕಾಂಗ್ರೆಸ್‌ನವರು ಕೇಂದ್ರದ ಯಾವುದೋ ಒಂದು ಫ್ಯಾಮಿಲಿ ಸಲುವಾಗಿ ನಿಷೇಧ ತೆರವುಗೊಳಿಸಲು ಹೇಳುತ್ತಿದ್ದಾರೆ. ಆದರೆ ನಮ್ಮ ಕೇಂದ್ರ ಸರ್ಕಾರ ಇದಕ್ಕೆ ಅವಕಾಶ ನೀಡಿಲ್ಲ. ನಾನು ಈ ವಿಚಾರವನ್ನ ಸಂಸತ್ತಿನಲ್ಲಿ ಮಾತನಾಡಿದ್ದೇನೆ. ಕೈನವರಿಗೆ ವನ್ಯಜೀವಿ ಕುರಿತು ಆಸಕ್ತಿ ಇಲ್ಲ ಎಂದರು.**

## ಮಿನಿ ನ್ಯೂಸ್

## ರಾಷ್ಟ್ರೀಯ ವೈದ್ಯ ದಿನಾಚರಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಾಗಡಿ

ರೋಗಿಯನ್ನು ಸರಿಯಾದ ಸಮಯಕ್ಕೆ ಆಸ್ಪತ್ರೆಗೆ ಕರೆದುಕೊಂಡು ಹೋಗುವವನೇ ನಿಜವಾದ ರಕ್ಷಕ ಎಂದು ಸರ್ಕಾರಿ ಆಸ್ಪತ್ರೆ ವೈದ್ಯ ಡಾ.ಫಾರೂಕ್ ತಿಳಿಸಿದರು. ಪಟ್ಟಣದ ರೋಟರಿ ಭವನದಲ್ಲಿ ರಾಷ್ಟ್ರೀಯ ವೈದ್ಯ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸರ್ಕಾರಿ ಆಸ್ಪತ್ರೆ ಮೇಲ್ದರ್ಜೆಗೇರಿದಾಗ ಹೆಚ್ಚಿನ ರೋಗಿಗಳಿಗೆ ತಾಲ್ಲೂಕು ಆಸ್ಪತ್ರೆಗಳಲ್ಲಿ ಎಲ್ಲಾ ಚಿಕಿತ್ಸೆ ಕೊಡಿಸಬಹುದು. ಸರಿಯಾದ ಸಮಯಕ್ಕೆ ಚಿಕಿತ್ಸೆ ದೊರೆತಾಗ ಮಾತ್ರ ಅಮೂಲ್ಯವಾದ ಪ್ರಾಣ ಉಳಿಸಲು ಸಾಧ್ಯ ಎಂದು ತಿಳಿಸಿದರು. ರೋಟರಿ ಮಾಗಡಿ ಸೆಂಟ್ರಲ್ ಅಧ್ಯಕ್ಷ ಡಾ.ಮಂಜುನಾಥ್ ಬೆಟಗೇರಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ವೈದ್ಯರು ಅನೇಕ ಸವಾಲುಗಳನ್ನು ಎದುರಿಸುತ್ತಿದ್ದಾರೆ. ಅವಘಡದ ಪರಿಸ್ಥಿತಿಗಳಲ್ಲಿ ಕಡಿಮೆ ಮೂಲಸೌಕರ್ಯದಲ್ಲೂ ಶ್ರದ್ಧೆಯಿಂದ ಸೇವೆ ನೀಡುತ್ತಿದ್ದಾರೆ ಎಂದರು. ರಾಷ್ಟ್ರೀಯ ವೈದ್ಯ ದಿನಾಚರಣೆ ಅಂಗವಾಗಿ ಸರ್ಕಾರಿ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿರುವ ಡಾ.ಎಚ್.ಯಶ್ವಂತ್, ಡಾ.ಪಿ.ಬಿ.ಮೊಹಮ್ಮದ್ ಫಾರೂಕ್ ಮತ್ತು ಡಾ.ಮಂಜುಳಾ ಅವರನ್ನು ಸನ್ಮಾನಿಸಿ, ಸ್ಮರಣಿಕೆ ನೀಡಲಾಯಿತು.

## ಸಚಿವ ಸಂಪುಟ ಸಭೆ: ಜುಲೈ 3ರವರೆಗೆ ನಂದಿಬೆಟ್ಟ, ಸ್ಕಂದಗಿರಿ ಪ್ರವೇಶ ನಿರ್ಬಂಧ

• ಉದಯವಾಹಿನಿ, ಚಿಕ್ಕಬಳ್ಳಾಪುರ

ತಾಲ್ಲೂಕಿನ ಐತಿಹಾಸಿಕ ನಂದಿಗಿರಿಧಾಮದಲ್ಲಿ ಬುಧವಾರ ಸಚಿವ ಸಂಪುಟ ಸಭೆ ನಡೆಯಲಿದೆ. ಈ ಹಿನ್ನೆಲೆಯಲ್ಲಿ ನಂದಿಗಿರಿಧಾಮ ಮತ್ತು ಪ್ರಸಿದ್ಧ ಚಾರಣತಾಣ ಸ್ಕಂದಗಿರಿಗೆ ಜುಲೈ 3ರ ಮಧ್ಯಾಹ್ನ 2ರವರೆಗೆ ಪ್ರವಾಸಿಗರು ಹಾಗೂ ವಾಹನಗಳ ಪ್ರವೇಶ ನಿರ್ಬಂಧಿಸಲಾಗಿದೆ. ಈ ಅವಧಿಯಲ್ಲಿ ಗಿರಿಧಾಮದಲ್ಲಿನ ವಸತಿ ನಿಲಯದ ಕೊಠಡಿಗಳನ್ನು ಮುಂಗಡವಾಗಿ ಕಾಯ್ದಿರಿಸುವಿಕೆಯನ್ನೂ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ತಿಳಿಸಿದ್ದಾರೆ.

ಗಿರಿಧಾಮಕ್ಕೆ ಹೋಗಲು, ಬರಲು ಒಂದೇ ರಸ್ತೆ ಇರುವುದರಿಂದ ವಾಹನ ದಟ್ಟಣೆ ಹೆಚ್ಚಾಗಿರುತ್ತದೆ. ಗಿರಿಧಾಮದಲ್ಲಿ ಕಡಿದಾದ ತಿರುವುಗಳಿವೆ. ವಾಹನಗಳು, ಪ್ರವಾಸಿಗರನ್ನು ನಿಯಂತ್ರಿಸುವುದು ಕಷ್ಟವಾಗುತ್ತದೆ. ಅಪಘಾತಗಳಾಗುವ ಸಾಧ್ಯತೆ ಹೆಚ್ಚಿರುತ್ತವೆ. ಮುನ್ನೆಚ್ಚರಿಕಾ ಕ್ರಮವಾಗಿ ಪ್ರವೇಶ ನಿರ್ಬಂಧಿಸ ಲಾಗಿದೆ ಎಂದು ತಿಳಿಸಿದ್ದಾರೆ.

## ಪಡಿತರ ಅಕ್ಕಿ ಕಳ್ಳಸಾಗಾಣಿಕೆ

• ಉದಯವಾಹಿನಿ, ನಂಜನಗೂಡು

ನಗರದ ಚಾಮರಾಜನಗರ ಬೈಪಾಸ್ ರಸ್ತೆಯ ಸಮುದಾಯ ಭವನದ ಬಳಿ ರಾತ್ರಿ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಾಗಿಸುತ್ತಿದ್ದ ಎರಡು ಲಾರಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಆಹಾರ ಶಿರಸ್ತೇದಾರ್ ಮಂಜುಳಾ ನೀಡಿದ ದೂರಿಗೆ ಮೇರೆಗೆ 17 ಟನ್ ಅಕ್ಕಿ, ಅಕ್ಕಿ ಮೂಟೆಗಳನ್ನು ತುಂಬಿ ಆಗುತ್ತಿದ್ದ ಲಾರಿ, ಮಿನಿ ಗೂಡ್ಸ್ ವಾಹನಗಳು, ಇಬ್ಬರು ಚಾಲಕರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕಳೆದ ತಿಂಗಳು ಇದೇ ಸ್ಥಳದಲ್ಲಿ ಎರಡು ಲಾರಿಗಳಲ್ಲಿ ಪಡಿತರ ಅಕ್ಕಿ ಸಾಗಿಸುತ್ತಿದ್ದವರನ್ನು ಪೊಲೀಸರು ವಶಕ್ಕೆ ಪಡೆದಿದ್ದರು, ಆದರೆ ಪಡಿತರ ಅಕ್ಕಿ ಕಳ್ಳಸಾಗಣೆ ನಿಂತಿಲ್ಲ, ಪೊಲೀಸರು ಕಠಿಣ ಕ್ರಮವಹಿಸಬೇಕು ಎಂದು ಸಾರ್ವಜನಿಕರು ದೂರಿದ್ದಾರೆ.

## ಪಕ್ಷದ ಕಚೇರಿಗೆ ಶಾಸಕ ಕೆ.ಎಂ. ಉದಯ್ ನಿವೇಶನ ದಾನ

• ಉದಯವಾಹಿನಿ, ಮದ್ದೂರು


ಪಟ್ಟಣದಲ್ಲಿ ಕಾಂಗ್ರೆಸ್ ಪಕ್ಷದ ಕಚೇರಿಯನ್ನು ಸುಸಜ್ಜಿತವಾಗಿ ನಿರ್ಮಿಸಲು ಶಾಸಕ ಕೆ.ಎಂ. ಉದಯ್ ಅವರು ಸ್ವಂತ ನಿವೇಶನವನ್ನು ದಾನ ನೀಡಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಪಟ್ಟಣದ ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ನಿವೇಶನವನ್ನು ಪಕ್ಷಕ್ಕೆ ನೋಂದಣಿ ಮಾಡಿಸಿದ ಪ್ರಕ್ರಿಯೆ ಮುಗಿಸಿ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಶಾಸಕ ಕೆ.ಎಂ. ಉದಯ್ ಅವರ ಈ ಕಾರ್ಯ ಇತರರಿಗೂ ಮಾದರಿಯಾಗಿದೆ. ಇದಕ್ಕಾಗಿ ಅವರನ್ನು ಅಭಿನಂದಿಸುವೆ.

ರಾಜ್ಯದಾದ್ಯಂತ ತಾಲ್ಲೂಕುಗಳಲ್ಲಿಯೂ ಪಕ್ಷದ ಕಚೇರಿಗಳ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ ಎಂದರು. ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಶೀಘ್ರದಲ್ಲೇ ರಾಜ್ಯಕ್ಕೆ ಭೇಟಿ ನೀಡಲಿದ್ದಾರೆ. ಮೊದಲ ಹಂತದಲ್ಲಿ ಈಗಾಗಲೇ ನೋಂದಣಿಯಾಗಿರುವ ರಾಜ್ಯದ ವಿವಿಧ 100 ತಾಲ್ಲೂಕುಗಳಲ್ಲಿ ಪಕ್ಷದ ನೂತನ ಕಚೇರಿಗಳ ಶಂಕುಸ್ಥಾಪನೆಗೆ ವರ್ಚುವಲ್ ಮೂಲಕ ಅವರು ಚಾಲನೆ ನೀಡಲಿದ್ದಾರೆ ಎಂದರು. ಶಾಸಕ ಕೆ.ಎಂ. ಉದಯ್ ಮಾತನಾಡಿ, ಪಟ್ಟಣದ ಐ.ಬಿ ವೃತ್ತದ ಬಳಿ ಮೈಸೂರು ಬೆಂಗಳೂರು ಹೆದ್ದಾರಿಗೆ ಹೊಂದಿಕೊಂಡಂತೆ 5,445 ಅಡಿ ವಿಸ್ತೀರ್ಣದ (5 ಗುಂಟೆ) ಜಾಗ ಖರೀದಿಸಿದ್ದೆ. ಅದನ್ನು ಪಕ್ಷದ ಕಚೇರಿ ನಿರ್ಮಿಸಲು ದಾನ ನೀಡಿದ್ದೇನೆ ಎಂದರು.

## ಖಾಸಗಿ ಶಿಕ್ಷಣ ಸಂಸ್ಥೆಯಿಂದ ಸರ್ಕಾರಿ ಜಾಗ ಅತಿಕ್ರಮ ಆರೋಪ: ದೂರು

• ಉದಯವಾಹಿನಿ, ಶ್ರೀರಂಗಪಟ್ಟಣ

ತಾಲ್ಲೂಕಿನ ಬೆಳಗೊಳ ಗ್ರಾಮದಲ್ಲಿ ಗುರುಕುಲ ಹೆಸರಿನ ಶಿಕ್ಷಣ ಸಂಸ್ಥೆ ಸರ್ಕಾರಿ ಜಮೀನನ್ನು ಅತಿಕ್ರಮಿಸಿದ್ದು, ಅದನ್ನು ತೆರವು ಮಾಡಿಸಬೇಕು ಎಂದು ಒತ್ತಾಯಿಸಿ ಗ್ರಾಮಸ್ಥರು ಮಂಗಳವಾರ ಮನವಿ ಸಲ್ಲಿಸಿದರು. ಪಟ್ಟಣದಲ್ಲಿ ತಾಲ್ಲೂಕು ಕಚೇರಿಯಲ್ಲಿ ತಹಶೀಲ್ದಾರ್ ಪರಶುರಾಮ ಸತ್ತಿಗೇರಿ ಅವರಿಗೆ ಮನವಿ ಸಲ್ಲಿಸಿದರು.



ಬೆಳಗೊಳ ಗ್ರಾಮದ ಸ.ನಂ. 100, ಸ.ನಂ. 101, 102ರಲ್ಲಿ ಸರ್ಕಾರಿ ಭೂಮಿ ಇದ್ದು. ಇದನ್ನು ಸೇರಿಸಿಕೊಂಡು ಖಾಸಗಿ ಶಾಲೆಯ ಆಡಳಿತ ಮಂಡಳಿ ಕಾಂಪೌಂಡ್ ನಿರ್ಮಿಸಿದೆ. ಸ್ಥಳೀಯ ಕಂದಾಯ ಅಧಿಕಾರಿಗಳಿಗೆ ವಿಷಯ ಗೊತ್ತಿದ್ದರೂ ಮೌನವಾಗಿದ್ದಾರೆ. ಸದರಿ ಜಾಗದ ಸರ್ವೆ ನಡೆಸಿ ಅತಿಕ್ರಮಕ್ಕೆ ಒಳಗಾಗಿರುವ ಸರ್ಕಾರಿ ಜಮೀನನ್ನು ತೆರವು ಮಾಡಿಸಬೇಕು ಎಂದು ಗ್ರಾಮದ ಮುಖಂಡರಾದ ಸುನಿಲ್, ವಿಷಕಂಠು ಇತರರು ಒತ್ತಾಯಿಸಿದರು.

ಅಂತರಾಳದಿಂದ... EDITORIAL

# ಹಿಂದಿಯನ್ನು ಕೈ ಬಿಟ್ಟ ಮಹಾರಾಷ್ಟ್ರ ಬಿಜೆಪಿ ಸರಕಾರ

ಕೇಂದ್ರ ಗೃಹ ಮಂತ್ರಿ ಅಮಿತ್ ಶಾ ಅವರ ಬಲವಂತದ ಹಿಂದಿ ಹೇರಿಕೆಯ ವಿರುದ್ಧ ದಕ್ಷಿಣ ಭಾರತದ ಬಿಜೆಪಿಯೇತರ ಸರಕಾರಗಳು ಈಗಾಗಲೇ ತಿರುಗಿ ಬಿದ್ದಿವೆ. ಈಗ ಮಹಾರಾಷ್ಟ್ರದ ಬಿಜೆಪಿ ಸರಕಾರ ಕೂಡ ರಾಜ್ಯದ ಜನರ, ಪ್ರತಿಪಕ್ಷಗಳ, ಲೇಖಕರ, ಕಲಾವಿದರ ತೀವ್ರ ಪ್ರತಿರೋಧಕ್ಕೆ ಮಣಿದು ತ್ರಿಭಾಷಾ ಸೂತ್ರವನ್ನು ಕೈ ಬಿಡಲು ತೀರ್ಮಾನಿಸಿದೆ. ಅಂದರೆ ಪ್ರಾಥಮಿಕ ಶಾಲೆಗಳಲ್ಲಿ ಮೂರನೆಯ ಭಾಷೆಯಾಗಿ ಕಲಿಸುವುದು ಬೇಡ ಎಂದು ತೀರ್ಮಾನಿಸಿದೆ. ಕಳೆದ ಎಪ್ರಿಲ್ ತಿಂಗಳಿನಲ್ಲಿ ಮಹಾರಾಷ್ಟ್ರದ ಬಿಜೆಪಿ ಸರಕಾರ ಮರಾಠಿ ಇಂಗ್ಲಿಷ್ ಮಾಧ್ಯಮದ ಶಾಲೆಗಳಲ್ಲಿ ಹಿಂದಿಯನ್ನು ಮೂರನೇ ಭಾಷೆಯನ್ನಾಗಿ ಕಲಿಸಲಾಗುವುದೆಂದು ಅಧಿಸೂಚನೆಯನ್ನು ಹೊರಡಿಸಿತ್ತು. ಇದಕ್ಕೆ ಉದ್ಧವ್ ಠಾಕ್ರೆ ನೇತೃತ್ವದ ಶಿವಸೇನೆ ಮತ್ತು ರಾಜ್ ಠಾಕ್ರೆ ನಾಯಕತ್ವದ ಎಂಎನ್‌ಎಸ್ ಮಾತ್ರವಲ್ಲ ಮಹಾರಾಷ್ಟ್ರದ ಪ್ರಮುಖ ವಿರೋಧ ಪಕ್ಷಗಳು ತೀವ್ರ ಆಕ್ಷೇಪವನ್ನು ವ್ಯಕ್ತಪಡಿಸಿದ್ದವು. ಅಲ್ಲದೆ, ಬೀದಿಗಿಳಿದು ಪ್ರತಿಭಟನೆಯನ್ನೂ ನಡೆಸಿದ್ದವು. ಉದ್ಧವ್ ಠಾಕ್ರೆಯವರಂತೂ ವಿಧಾನ ಮಂಡಲದ ಮುಂಗಾರು ಅಧಿವೇಶನಕ್ಕೆ ಮುನ್ನ ಶಾಲೆಗಳ ಎದುರು ಹಿಂದಿ ಭಾಷಾ ಕಲಿಕೆಯನ್ನು ಕಡ್ಡಾಯಗೊಳಿಸುವ ಮಹಾರಾಷ್ಟ್ರ ಬಿಜೆಪಿ ಸರಕಾರದ ಆದೇಶದ ಪ್ರತಿಗಳನ್ನು ಸುಟ್ಟು ಹಾಕಲು ಕರೆ ನೀಡಿದ್ದರು. ಇದೆಲ್ಲದರ ಪರಿಣಾಮವಾಗಿ ಅಲ್ಲಿನ ಬಿಜೆಪಿ ಸರಕಾರ ಹಿಂದಿಯನ್ನು ಕೈ ಬಿಟ್ಟಿದೆ.ರಾಜ್ಯದ ನೆಲ, ಜಲ, ಭಾಷೆಯ ಪ್ರಶ್ನೆ ಬಂದಾಗ ಮಹಾರಾಷ್ಟ್ರದ ಜನತೆ ಪಕ್ಷಭೇದ ಬದಿಗಿಟ್ಟು ಜೊತೆಗೂಡಿ ಧ್ವನಿಯೆತ್ತುತ್ತಾರೆ, ಬೀದಿಗಿಳಿದು ಹೋರಾಟ ಮಾಡುತ್ತಾರೆ. ಆದರೆ ಕರ್ನಾಟಕದ ಬಿಜೆಪಿ ನಾಯಕರಿಗೆ ದಿಲ್ಲಿ ಹೈಕಮಾಂಡ್ ಪ್ರಧಾನಿ ಮೋದಿ ಮತ್ತು ಅಮಿತ್ ಶಾ ಎದುರು ನಿಂತು ಮಾತಾಡುವ ತಾಕತ್ತಿಲ್ಲ. ಇವರು ದಿಲ್ಲಿಗೆ ಹೋದರೆ ಇವರಿಗೆ ಭೇಟಿಯ ಅವಕಾಶವೂ ಸಿಗುವುದಿಲ್ಲ. ಹಿಂದಿ ಹೇರಿಕೆಯ ಪ್ರಶ್ನೆಯಲ್ಲಿ ಕೂಡ ಕನ್ನಡದ ಹಿತಾಸಕ್ತಿಯ ಪರವಾಗಿ ನಿಲ್ಲದ ಬಿಜೆಪಿ ನಾಯಕರು ಅದನ್ನು ಸಮರ್ಥಿಸಿ ಅಮಿತ್ ಶಾ ಅವರನ್ನು ಓಲೈಸಲು ನಿಂತರು. ಒಬ್ಬರಾದರೂ ಹಿಂದಿ ಹೇರಿಕೆ ಬೇಡ ಎಂದು ಬಾಯಿಬಿಟ್ಟು ಹೇಳಲೇ ಇಲ್ಲ. ನಾಗಪುರದ ಸಂವಿಧಾನೇತರ ಶಕ್ತಿ ಕೇಂದ್ರದ ಆದೇಶದಂತೆ ಹಿಂದಿಯನ್ನು ಇಡೀ ಭಾರತದ ಮೇಲೆ ಬಲವಂತವಾಗಿ ಹೇರಿ ಕನ್ನಡ, ತಮಿಳು, ತೆಲುಗು, ಮಲಯಾಳಂ, ಮರಾಠಿ ಮೊದಲಾದ ಪ್ರಾದೇಶಿಕ ಭಾಷೆಗಳನ್ನು ನಿರ್ನಾಮ ಮಾಡಲು ಹೊರಟ ಕೇಂದ್ರದ ನರೇಂದ್ರ ಮೋದಿಯವರ ನೇತೃತ್ವದ ಬಿಜೆಪಿ ಸರಕಾರ ಅದರಲ್ಲೂ ವಿಶೇಷವಾಗಿ ಗೃಹ ಮಂತ್ರಿ ಅಮಿತ್ ಶಾ ಅವರು ಈ ವಿಷಯದಲ್ಲಿ ತುಂಬಾ ಹಠ ಹಿಡಿದಿರುವುದು ಸರಿಯಲ್ಲ. ಹಿಂದಿ ಯಾವುದೇ ಪ್ರಾದೇಶಿಕ ಭಾಷೆಗಳ ವಿರೋಧಿ ಅಲ್ಲ ಎಂದು ಇತ್ತೀಚೆಗೆ ಅಮಿತ್ ಶಾ ಹೇಳಿದ್ದಾರೆ. ನಿಜ, ಯಾವುದೇ ಭಾಷೆಗೆ ಇನ್ನೊಂದು ಭಾಷೆ ವಿರೋಧಿಯಲ್ಲ. ಆದರೆ ಕೇಂದ್ರದ ಬಿಜೆಪಿ ಸರಕಾರ ಹಿಂದಿಯನ್ನು ಬಲವಂತವಾಗಿ ಹೇರುವ ಮೂಲಕ ಪ್ರಾದೇಶಿಕ ಭಾಷೆಗಳ ವಿರುದ್ಧ ಎತ್ತಿ ಕಟ್ಟಿ ಅದನ್ನು ವಿರೋಧಿಸುವಂತೆ ಮಾಡಿದ್ದಾರೆ. ಉತ್ತರದ ಜನ ಕನ್ನಡ ಸೇರಿದಂತೆ ದಕ್ಷಿಣದ ಭಾಷೆಗಳನ್ನು ಹಾಗೂ ದಕ್ಷಿಣದ ಜನ ಹಿಂದಿಯನ್ನು ಇಷ್ಟಪಟ್ಟು ಕಲಿಯಲು ಯಾರ ತಕರಾರೂ ಇಲ್ಲ. ಆದರೆ ಕಡ್ಡಾಯ ಮಾಡಲು ಮುಂದಾದರೆ ಸಹಜವಾಗಿ ಬಲವಾದ ಪ್ರತಿರೋಧ ಬರುತ್ತದೆ. ಏಕಧರ್ಮ, ಏಕ ಸಂಸ್ಕೃತಿ, ಏಕ ಭಾಷೆ, ಏಕ ಪಡಿತರ ಎಂಬ ತಮ್ಮ ರಹಸ್ಯ ಕಾರ್ಯಸೂಚಿಯನ್ನು ಬಲವಂತವಾಗಿ ಜಾರಿಗೆ ತರಲು ಹೊರಟವರ ಗುರಿ ಬಹುತ್ವ ಭಾರತವನ್ನು ಬಲಿ ತೆಗೆದುಕೊಳ್ಳುವುದಾಗಿದೆ. ಹಿಂದಿ ಹೇರಿಕೆಯ ಕುರಿತು ಕರ್ನಾಟಕ, ತಮಿಳುನಾಡು, ಕೇರಳ ಸೇರಿದಂತೆ ದಕ್ಷಿಣದ ರಾಜ್ಯಗಳಿಂದ ಬಲವಾದ ವಿರೋಧ ಬರುತ್ತಿದ್ದರೂ ಅದನ್ನು ಉದ್ದೇಶಪೂರ್ವಕವಾಗಿ ಕಡೆಗಣಿಸಿ ಒತ್ತಾಯದಿಂದ ಹಿಂದಿಯನ್ನು ಹೇರಲು ಮುಂದಾಗಿರುವುದು ನಿರಂಕುಶ, ಸರ್ವಾಧಿಕಾರಿ ಮನೋಭಾವವಾಗಿದೆ. ಹಿಂದೂ ಹಾಗೂ ಹಿಂದಿಯನ್ನು ತಳಕು ಹಾಕಿ ಹಿಂದಿಯನ್ನು ರಾಷ್ಟ್ರ ಭಾಷೆಯೆಂದು ಹೇರಲು ಹೊರಟಿರುವ ಮೋದಿ ಸರಕಾರ ಹಿಂದಿಯು ಹಿಂದೂಗಳೆಲ್ಲರ ಭಾಷೆಯಲ್ಲ ಎಂಬುದನ್ನು ಮರೆಯದಿರಲಿ. ಉರ್ದು ಕೂಡ ಮುಸಲ್ಮಾನರ ಭಾಷೆಯಲ್ಲ. ಯಾವುದೇ ಧರ್ಮಕ್ಕೂ ಭಾಷೆಗೂ ಸಂಬಂಧವಿಲ್ಲ. ಅದೇ ರೀತಿ ಭಾರತ ಎಂಬುದು ಯಾವುದೇ ಒಂದು ಭಾಷೆಯನ್ನಾಡುವ ಜನರ ದೇಶವಲ್ಲ. ಹಿಂದಿ ಕೇವಲ 3-4 ರಾಜ್ಯಗಳಿಗೆ ಸೀಮಿತವಾದ ಭಾಷೆ. ಸಂವಿಧಾನದ ಪ್ರಕಾರ ಅದೊಂದೇ ರಾಷ್ಟ್ರಭಾಷೆಯಲ್ಲ. ಹಿಂದಿಯಂತೆ ಕನ್ನಡ, ತಮಿಳು, ತೆಲುಗು, ಮಲಯಾಳಂ, ಮರಾಠಿ ಮುಂತಾದ 22 ಭಾಷೆಗಳು ಕೂಡ ರಾಷ್ಟ್ರ ಭಾಷೆಗಳೇ ಆಗಿವೆ. ಇದನ್ನು ಉದ್ದೇಶಪೂರ್ವಕವಾಗಿ ಕಡೆಗಣಿಸಿ ಹಿಂದಿ ಭಾಷೆಯನ್ನು ಹಿಂದಿಯೇತರ ಭಾಷಿಕ ರಾಜ್ಯಗಳ ಮೇಲೆ ಹೇರುವುದು ಒಕ್ಕೂಟ ವ್ಯವಸ್ಥೆಗೆ ಮಾಡುವ ಅಪಚಾರವಾಗಿದೆ. ಭಾರತದಲ್ಲಿ ಇರುವುದು ಒಕ್ಕೂಟ ವ್ಯವಸ್ಥೆ ಇದು ಸಂವಿಧಾನದ ಅನ್ವಯ ಫೆಡರಲ್ ಸ್ಟೇಟ್. ಆಯಾ ರಾಜ್ಯಗಳಿಗೆ ತಮ್ಮ ಗಡಿಯೊಳಗೆ ಸಾರ್ವಭೌಮತ್ವವನ್ನು ಕಲ್ಪಿಸುವುದು ಮಾತ್ರವಲ್ಲ ರಾಜ್ಯಗಳ ಪ್ರಾದೇಶಿಕ ಭಾಷೆಗಳನ್ನು ಮನ್ನಿಸಿ ಗೌರವಿಸುವುದು ಸಂವಿಧಾನದ ತಿರುಳಾಗಿದೆ. ಸಂವಿಧಾನದ 348 (1)(ಬಿ) ವಿಧಿಯು ದೇಶದ ಎಲ್ಲಾ ಶಾಸನಗಳ ಅಧಿಕೃತ ಪಠ್ಯವು ಇಂಗ್ಲಿಷ್ ಭಾಷೆಯಲ್ಲಿ ಇರಬೇಕೆಂದು ಹೇಳುತ್ತದೆ.



ರಾಜ್ಯ ಸಚಿವ ಸಂಪುಟದ ಸಭೆಯಲ್ಲಿ ಹಿಂದಿ ಹೇರಿಕೆಗೆ ಬಲವಾದ ವಿರೋಧ ಬಂದ ಕಾರಣ ತ್ರಿಭಾಷಾ ಸೂತ್ರ ಜಾರಿಯನ್ನು ತಡೆ ಹಿಡಿದಿರುವುದಾಗಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ರವಿವಾರ ತಿಳಿಸಿದ್ದಾರೆ. ಈ ಕುರಿತು ಡಾ. ನರೇಂದ್ರ ಜಾಧವ್ ಅವರ ನೇತೃತ್ವದಲ್ಲಿ ಸಮಿತಿ ರಚಿಸಿ ವರದಿ ಪಡೆದು ಅಂತಿಮ ನಿರ್ಧಾರ ಕೈಗೊಳ್ಳುವುದಾಗಿ ಅವರು ಹೇಳಿದ್ದಾರೆ.

# ಅಸ್ಮಿತಾ ಮತ್ತು ಶ್ರುತಿ ರಾಜಕುಮಾರ್ ಸಹೋದರಿಯರ ರಂಗಪ್ರವೇಶ



ಕಲಾ ಸಾಹಿತ್ಯ

ವೈ.ಕೆ. ಸಂಧ್ಯಾ ಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

ಖ್ಯಾತ ಶಿವಾಲಯ ನಾಟ್ಯಮಂದಿರದ ಕಲಾತ್ಮಕ ನಿರ್ದೇಶಕಿ ಮತ್ತು ನೃತ್ಯಗುರು ವಿದುಷಿ. ಮಂಜುಳಾ ಜಗದೀಶ್ ಅವರ ನುರಿತ ಗರಡಿಯಲ್ಲಿ ರೂಹುಗೊಂಡ ಕಲಾಪ್ರತಿಮೆಗಳು ಕು. ಅಸ್ಮಿತಾ ರಾಜಕುಮಾರ್ ಮತ್ತು ಶ್ರುತಿ ರಾಜಕುಮಾರ್. ಈಸಕ್ಕಿ ರಾಜಕುಮಾರ್ ಮತ್ತು ಅನಿತಾ ದಂಪತಿಗಳ ಪುತ್ರಿಯರಾದ ಈ ಪ್ರತಿಭಾವಂತ ಸಹೋದರಿಯರು ತಮ್ಮ ಬಾಲ್ಯದ ಆರರ ಎಳವೆಯಲ್ಲೇ ಉತ್ಕೃಷ್ಟ ಶಿಕ್ಷಣಕ್ಕೆ ಹೆಸರಾದ ಗುರು ಮಂಜುಳಾ ಜಗದೀಶರಿಂದ ನೃತ್ಯ ಕಲಿಯಲಾರಂಭಿಸಿ ನಾಡಿನ ಅನೇಕ ವೇದಿಕೆಗಳಲ್ಲಿ ಯಶಸ್ವೀ ನೃತ್ಯ ಪ್ರದರ್ಶನಗಳನ್ನು ನೀಡಿರುವ ಬಹುಮುಖ ಪ್ರತಿಭೆಗಳು. ಕರ್ನಾಟಕ ಸರ್ಕಾರದ ನೃತ್ಯಪರೀಕ್ಷೆ ಜ್ಯೂನಿಯರ್ ಮತ್ತು ಸೀನಿಯರ್‌ಗಳಲ್ಲಿ ಉತ್ತೀರ್ಣರಾಗಿ ರುವರಲ್ಲದೆ, ಕರಾಟೆಯಲ್ಲಿ ಬ್ಲಾಕ್ ಬೆಲ್ಟ್ ಪಡೆದಿದ್ದು ಅನೇಕ ಕ್ರೀಡಾಸ್ಪರ್ಧೆಗಳಲ್ಲಿ ಭಾಗವಹಿಸಿದ್ದಾರೆ.

ಫ್ರೀ ಸ್ಟೈಲ್ ಡ್ಯಾನ್ಸ್ ಅಲ್ಲದೆ ಸ್ಕೇಟಿಂಗ್ ನಲ್ಲೂ ತರಬೇತಿ ಪಡೆಯುತ್ತಿರುವ ಇವರು ಕ್ರಮವಾಗಿ ಹನ್ನೆರಡನೆಯ ಮತ್ತು ಎಂಟನೇ ತರಗತಿಯ ವಿದ್ಯಾರ್ಥಿನಿಯರು. ಅನೇಕ ವರ್ಷಗಳಿಂದ ಭರತನಾಟ್ಯ ಅಭ್ಯಾಸ ಮಾಡುತ್ತಿರುವ ಈ ಸಹೋದರಿಯರು, ಜುಲೈ ತಿಂಗಳ 6 ಭಾನುವಾರದಂದು ಬೆಳಗ್ಗೆ 9.30 ಕ್ಕೆ ನಗರದ ಎ.ಡಿ.ಎ. ರಂಗಮಂದಿರದಲ್ಲಿ ವಿದ್ಯುಕ್ತವಾಗಿ ರಂಗಪ್ರವೇಶ ಮಾಡಲಿದ್ದಾರೆ. ಕಲಾವಿದೆದ್ವಯರ ಚೇತೋಹಾರಿ ನೃತ್ಯರಮ್ಯತೆಯನ್ನು ಕಣ್ತುಂಬಿಕೊಳ್ಳಲು ಸರ್ವರಿಗೂ ಆದರದ ಸ್ವಾಗತ. ಉತ್ತಮ ಕಲಾಸಕ್ತಿಯುಳ್ಳ ರಾಜಕುಮಾರ್, ಅನಿತಾ ದಂಪತಿಗಳ ಹೆಣ್ಣು ಮಕ್ಕಳಿಬ್ಬರಿಗೂ ಬಾಲ್ಯದಿಂದಲೇ ನೃತ್ಯದ ಬಗ್ಗೆ ಅಮಿತ ಒಲವು. ಹಿರಿಯವಳು ಅಸ್ಮಿತಾ ಕಿರಿಯವಳು ಶ್ರುತಿ. ಅಸ್ಮಿತಾ ಓಕ್ರಿಜ್ ಇಂಟರ್ನ್ಯಾಷನಲ್ ಸ್ಕೂಲ್ನಲ್ಲಿ ಹನ್ನೆರಡನೆಯ ತರಗತಿಯ ವಿದ್ಯಾರ್ಥಿನಿಯಾದರೆ, ಶ್ರುತಿ 8 ನೆಯ ತರಗತಿಯಲ್ಲಿ ಓದುತ್ತಿದ್ದಾಳೆ.

ಇಬ್ಬರೂ ಓದಿನಲ್ಲಿ ಜಾಣೆಯರು, ನೃತ್ಯದಲ್ಲಿ ಆಸಕ್ತಿ-ಪರಿಶ್ರಮಗಳಿಂದ ಅನೇಕ ದೇವಾಲಯಗಳಲ್ಲಿ ನೃತ್ಯ ಪ್ರದರ್ಶನಗಳನ್ನು ನೀಡಿ ಮೆಚ್ಚುಗೆಗಳಿಸಿದ್ದಾರೆ. ಅಸ್ಮಿತಾ ಸೀನಿಯರ್ ಮತ್ತು ಶ್ರುತಿ ಜ್ಯೂನಿಯರ್ ನೃತ್ಯ ಪರೀಕ್ಷೆಯಲ್ಲಿ ತೇರ್ಗಡೆಯಾಗಿದ್ದು, ಶಾಲೆಯ ಅನೇಕ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಪಾಲ್ಗೊಂಡು ಬಹುಮಾನಗಳನ್ನು ಪಡೆದಿದ್ದಾರೆ.

ಓದಿನ ಜೊತೆ ಕ್ರೀಡಾಸಕ್ತಿ ಇರುವ ಈ ಸೋದರಿಯರು ಶಾಲೆಯ ಒಲಂಪಿಯ್ಡ್ಸ್ ಕ್ರೀಡೆಗಳಲ್ಲಿ ನಿರಂತರ ಭಾಗವಹಿಸುತ್ತ ಬಂದಿರುವ ಉತ್ಸಾಹಿಗಳು ಎಂಬುದು ಇವರ ವಿಶೇಷ. ಕು. ಅಸ್ಮಿತಾ, ಶಾಸ್ತ್ರೀಯ ನೃತ್ಯೋತ್ಸವಗಳು, ಕಲೆಮನೆ ಉತ್ಸವ, ಸಮರ್ಪಣಂ, ಶಿವರಾತ್ರಿ ಉತ್ಸವ, ನಾಟ್ಯಾಂಜಲಿ ಮತ್ತು ಅಂತರರಾಷ್ಟ್ರೀಯ ಕ್ಲಾಸಿಕಲ್ ಡ್ಯಾನ್ಸ್ ಫೆಸ್ಟಿವಲ್‌ಗಳಲ್ಲಿ ಭಾಗವಹಿಸಿದ್ದು, ಇವಳಿಗೆ ಸಮಾಜ ಸೇವೆಯಲ್ಲಿ ಅಪರಿಮಿತ ಆಸಕ್ತಿ. ಅಷ್ಟೇ ಉತ್ಸಾಹಿಯಾದ ಶ್ರುತಿ ಬದ್ಧತೆಯಿಂದ ನೃತ್ಯ ಕಲಿಯುತ್ತಿರುವುದಲ್ಲದೆ ಶಾಲೆಯಲ್ಲಿ JMUN ಮತ್ತು Code-festಗಳಲ್ಲಿ ಪಾಲ್ಗೊಂಡ ಕ್ರಿಯಾಶಾಲಿ ಕೂಡ. ಪ್ರಯೋಗಶೀಲ ನೃತ್ಯ ಸಂಯೋಜಕಿಯಾದ ಗುರು ಮಂಜುಳಾ ಜಗದೀಶ್ ಅವರ ಉತ್ತಮ ಮಾರ್ಗದರ್ಶನ ಪಡೆದ ಈ ನೃತ್ಯಾರ್ಥಿಗಳು, ನೃತ್ಯಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡುವ ಕನಸು ಹೊಂದಿದ್ದಾರೆ.



ರಮಣೀಯ ನೃತ್ಯ ವೈವಿಧ್ಯ

ಉದಯವಾಹಿನಿ ಚಿತ್ರ

# ಮೌಲ್ಯ

ವಿಶ್ವಾಸ್.ಡಿ.ಗೌಡ
ಉದಯವಾಹಿನಿ, ವಿಶೇಷ



ಒಂದು ಬಾರಿ ಎರಡು ಸಾವಿರ ರೂಪಾಯಿಯ ನೋಟು ಮತ್ತು ಒಂದು ರೂಪಾಯಿಯ ಬಿಲ್ಲೆ ಪರ್ಸ್‌ನಲ್ಲಿ ಭೇಟಿಯಾಗುತ್ತವೆ. ಅವೆರಡರ ಮಧ್ಯೆ ಸಂಭಾಷಣೆ ಹೀಗಿದೆ --

ರೂಪಾಯಿ ಬಿಲ್ಲೆಯು ಎರಡು ಸಾವಿರ ರೂಪಾಯಿ ನೋಟಿನೊಂದಿಗೆ ಭೇಟಿಯಾದ ಸಂತಸದಲ್ಲಿ ತನ್ಮಯತ್ವದಿಂದ ಕೂಡಿದ ಆನಂದದಿಂದ ಹಾಗೆಯೇ ನೋಡುತ್ತಾ ಇದ್ದುಬಿಡುತ್ತದೆ. ಇದನ್ನು ಗಮನಿಸಿದ ಆ ನೋಟು ಆ ಬಿಲ್ಲೆಯನ್ನು ಕೇಳುತ್ತದೆ, ಏನು ಮಿತ್ರ ನನ್ನನ್ನು ಅಷ್ಟು ತದೇಕವಾಗಿ ನೋಡುತ್ತಿರುವೆ

ಆಗ ಅದು - ಏನಿಲ್ಲ ನಿನ್ನ ಮೌಲ್ಯ ನನಗಿಂತ ಎರಡು ಸಾವಿರ ಪಟ್ಟು ಹೆಚ್ಚಲ್ಲವೇ ನೀನು ನಿನ್ನ ಜೀವಿತಕಾಲದಲ್ಲಿ ಎಷ್ಟೋ ಮಂದಿ ಕಷ್ಟಗಳನ್ನು ತೀರಿಸಿ ಕಣ್ಣೀರು ಒರೆಸಿರಬಹುದು, ಎಷ್ಟೋ ಮಂದಿಯ ಹಸಿವು ನೀಗಿಸಿರಬಹುದೆಂದುದು ನಿನ್ನನ್ನು ಹಾಗೆ ನೋಡುತ್ತಿರುವೆ. ನೀನೇಧನ್ಯ ಎಂದೆನಿಸುತ್ತಿದೆ.

ಆಗ ಆ ನೋಟು ಬಾಧೆಯಿಂದ - ಇಲ್ಲ ಸ್ನೇಹಿತನೇ, ಯಾರ ಕಣ್ಣೀರು ಒರೆಸಲೂ, ಹೊಟ್ಟೆ ತುಂಬಿಸಲು ಅನ್ನ ನೀಡುವ ಅವಕಾಶವೂ ನನಗೆ ಬರಲಿಲ್ಲ.

ಯಾಕೆಂದರೆ ನಾನು ದೊಡ್ಡ ಶ್ರೀಮಂತನ ಮನೆಯ ಲಾಕರ್ ಒಂದರಲ್ಲಿ ಬಂಧಿಸಿಡಲ್ಪಟ್ಟಿದ್ದೆ. ಸರಿಯಾಗಿ ಟ್ಯಾಕ್ಸ್ ಕಟ್ಟಿಲ್ಲವೆಂಬ ಕಾರಣಕ್ಕೆ ಈ ಮಧ್ಯ ಜರುಗಿದ ಐಟಿ ರೈಡ್‌ನಲ್ಲಿ ನಾನು ಬಯಲಿಗೆ ಬಂದೆ. ಸೆರೆಮನೆಯಿಂದ ಬಿಡುಗಡೆ ಸಿಕ್ಕಂತಾದ ಆನಂದ ಬಹಳ ದಿನ ಉಳಿಯಲಿಲ್ಲ, ದಾಳಿಯಲ್ಲಿ ಸಿಕ್ಕ ಹಣದಿಂದ ಲಂಚದ ರೂಪದಲ್ಲಿ ನನ್ನನ್ನು ಅಧಿಕಾರಿಯೊಬ್ಬರಿಗೆ ನೀಡಲಾಯಿತು. ಅದನ್ನು ತೆಗೆದುಕೊಂಡ ಅಧಿಕಾರಿ ನನ್ನನ್ನು ಮತ್ತೆ ಬ್ಯಾಂಕ್ ಲಾಕರ್‌ಗೆ ಕಳುಹಿಸಿದ. ಸ್ವಲ್ಪ ದಿವಸದ ಮಟ್ಟಿಗೆ ಹೊರಗೆ ಬಂದರೂ ನನ್ನ ಜೀವನದ ಬಹುಭಾಗ ಲಾಕರ್ ಎಂಬ ಜೈಲ್‌ನಲ್ಲೇ ಕಳೆಯಿತು. ಅದಿರಲಿ, ನಿನ್ನ ಸಂಗತಿ ಏನೆಂದು ಆ ಚಿಲ್ಲರೆಯ ಒಂದು ರೂಪಾಯಿಯ ನಾಣ್ಯವನ್ನು ದೊಡ್ಡ ನೋಟು ಕೇಳಿತು.

ಆಗ ರೂಪಾಯಿ ಬಿಲ್ಲೆ ಆನಂದದಿಂದ ಹೀಗೆ ನುಡಿಯಿತು ಜೀವನದಲ್ಲಿ ಎಲ್ಲೆಲ್ಲಿ ತಿರುಗಿದೆನೋ ಹೇಳಲಾರೆ, ಭಿಕ್ಷುಕನ ತಟ್ಟೆಯಲ್ಲಿ ಸೇರಿ ಅವನ ಹಸಿವು ತೀರಿಸಿದೆ, ಅಳುತ್ತಿದ್ದ ಹುಡುಗನಿಗೆ ಚಾಕಲೇಟ್ ಕೊಡಿಸಿ ಅವನ ಮುಖದಲ್ಲಿ ನಗೆ ನೋಡಿದೆ, ಪೂಜಾರಿಯ ಆರತಿ ತಟ್ಟೆಯಲ್ಲಿ, ದೇವರ ಹುಂಡಿಯಲ್ಲಿ ಸೇರಿ ಅಲ್ಲಿಂದ ಭಗವಂತನ ಚರಣ ಸೇರಿದೆ.

ಹಾಗೆಯೇ ಒಂದಲ್ಲ, ಎರಡಲ್ಲ ನಾನು ತಿರುಗಾಡದ ಜಾಗವೇ ಇಲ್ಲ ಭಗವಂತನ ಪಾದದಿಂದ ಹಿಡಿದು ಮಾನವನ ಅಂತಿಮ ಯಾತ್ರೆಯವರೆಗೂ ಪ್ರತಿ ಜಾಗದಲ್ಲೂ ತಿರುಗಾಡಿದೆ ಎಂದು ಹೆಮ್ಮೆಯಿಂದ ಹೇಳಿತು.

ಆಗ ನೋಟು ಹೀಗೆ ನುಡಿಯುತ್ತೆ - ಎಷ್ಟು ಮೌಲ್ಯ ಎಂಬುದು ಮುಖ್ಯವಲ್ಲ ಎಷ್ಟು ಮಂದಿಗೆ ಹತ್ತಿರವಾಗಿ ಅವರ ಅವಶ್ಯಕತೆಯನ್ನು ಪೂರೈಸಿದೆ ಎಂಬುದೇ ಮುಖ್ಯ.


ಮಿತ್ರರೇ ನಾವುಗಳು ನಮ್ಮ ಜೀವನದಲ್ಲಿ ಎಷ್ಟು ಉನ್ನತವಾಗಿ, ಎತ್ತರವಾಗಿ ಬದುಕಿದ್ದೇವೆ ಎನ್ನುವುದು ಮುಖ್ಯವಲ್ಲ. ಎಷ್ಟು ಮಂದಿಗೆ ಹತ್ತಿರವಾಗಿದ್ದೇವೆ ಎಂಬುದೇ ಮುಖ್ಯ.!!



# ಸರಳ ಕಾವೇರಿಗೆ ನೀರಸ ಪ್ರತಿಕ್ರಿಯೆ

ಉದಯವಾಹಿನಿ, ಬೆಂಗಳೂರು

ಹೊಸ ಸಂಪರ್ಕಗಳಿಗೆ ನಿಗದಿಪಡಿಸಿರುವ ಹಣವನ್ನು ಪೂರ್ಣ ಪ್ರಮಾಣದಲ್ಲಿ ಪಾವತಿಸಲು ಸಾಧ್ಯವಾಗದವರಿಗೆ ಕಂತುಗಳ ಮೂಲಕ ಪಾವತಿಸಿ ಕಾವೇರಿ ನೀರಿನ ಸಂಪರ್ಕ ಪಡೆಯಲು ಜಲಮಂಡಳಿ ಆರಂಭಿಸಿರುವ 'ಸರಳ ಕಾವೇರಿ' ಯೋಜನೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ.ಕಾವೇರಿ 5ನೇ ಹಂತದ ಯೋಜನೆಯಡಿ ನಗರಕ್ಕೆ ಹೆಚ್ಚುವರಿಯಾಗಿ 775 ದಶಲಕ್ಷ ಲೀಟರ್ ನೀರನ್ನು ತರಲಾಗಿದ್ದು, 110 ಹಳ್ಳಿಗಳು ಸೇರಿದಂತೆ ಇತರೆ ಪ್ರದೇಶಗಳಿಗೆ ಪೂರೈಸಲಾಗುತ್ತಿದೆ. ಈ ಯೋಜನೆಯಡಿ 4 ಲಕ್ಷ ನೀರಿನ ಸಂಪರ್ಕ ನೀಡುವ ಗುರಿ ಇದೆ. ಈ ಗುರಿ ತಲುಪಲು ಜಲಮಂಡಳಿ ಮೇ 9 ರಂದು 'ಸರಳ ಕಾವೇರಿ' ಯೋಜನೆ ಜಾರಿಗೊಳಿಸಿತು. ಈ ಯೋಜನೆ ಆರಂಭವಾಗಿ ಒಂದೂವರೆ ತಿಂಗಳಾಗುತ್ತಿದೆ. ಆರಂಭದಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ಆಗ ಯೋಜನೆಯಡಿ 144 ಮಂದಿಯಷ್ಟೇ ಅರ್ಜಿ ಸಲ್ಲಿಸಿ ಸಂಪರ್ಕ ಪಡೆದಿದ್ದರು. ಪ್ರಸ್ತುತ 1500 ಸಂಪರ್ಕಗಳಿಗೆ ಕಂತುಗಳ ಸೌಲಭ್ಯದ ಅಡಿಯಲ್ಲಿ ಹಣ ಪಾವತಿಗೆ ಮಂಜೂರಾತಿ ದೊರೆತಿದೆ. ಇನ್ನೂ 10 ಸಾವಿರಕ್ಕೂ ಹೆಚ್ಚು ಅರ್ಜಿಗಳು ಸಲ್ಲಿಕೆಯಾಗಿವೆ ಎಂದು ಜಲಮಂಡಳಿಯ ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ. ಸ್ವಾಧೀನಾನುಭವ ಪತ್ರ (ಒಸಿ) ಇತರೆ ಕೆಲವು ದಾಖಲೆಗಳ ಸಲ್ಲಿಕೆ ಕಡ್ಡಾಯಗೊಳಿಸಿದ ನಂತರ, ಹೊಸದಾಗಿ ನೀರಿನ ಸಂಪರ್ಕ ಪಡೆಯುವವರ ಸಂಖ್ಯೆ ಕಡಿಮೆಯಾಗಿತ್ತು. ಇತ್ತೀಚೆಗೆ ಒಸಿ ವಿನಾಯಿತಿ ಇರುವಂತಹ ಸಣ್ಣ ನಿವೇಶನಗಳಲ್ಲಿ (600 ಚದರ ಅಡಿಗಿಂತ ಕಡಿಮೆ ಇರುವ) ಮನೆ ನಿರ್ಮಿಸಿಕೊಂಡವರು ಅರ್ಜಿ ಸಲ್ಲಿಸಿ, ಯೋಜನೆಯ ಅನುಕೂಲ ಪಡೆಯುತ್ತಿದ್ದಾರೆ. ಒಸಿ ಹೊಂದಿರುವ ಕೆಲವು ಕಟ್ಟಡಗಳು ಅಪಾರ್ಟ್‌ಮೆಂಟ್‌ನವರೂ ಸಮಾನ ಕಂತುಗಳಲ್ಲಿ ಹಣ ಪಾವತಿಸುವ ಸೌಲಭ್ಯ ಪಡೆಯುತ್ತಿದ್ದಾರೆ' ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಸರಳ ಕಾವೇರಿ ಯೋಜನೆಯನ್ನು ಬಳಸಿಕೊಳ್ಳಲು ಸಾಕಷ್ಟು ಜನರು ಆಸಕ್ತಿ ತೋರುತ್ತಿದ್ದಾರೆ. ಅದಕ್ಕೆ ಸಲ್ಲಿಸಿರುವ ಅರ್ಜಿಗಳ ಸಂಖ್ಯೆಯೇ ಸಾಕ್ಷಿ. ಆದರೆ, ಒಸಿ ಸಮಸ್ಯೆ ಇರುವ ಕಾರಣ, ಈ ಪ್ರಕ್ರಿಯೆ ವೇಗ ಪಡೆದುಕೊಂಡಿಲ್ಲ. ಈ ಸಮಸ್ಯೆ ಬಗೆಹರಿದರೆ, ಹೆಚ್ಚಿನ ಸಂಖ್ಯೆಯಲ್ಲಿ ಜನರು ನೀರಿನ ಸಂಪರ್ಕಗಳನ್ನು ಪಡೆಯುತ್ತಾರೆ ಎಂದು ಜಲಮಂಡಳಿಯ ಅಧ್ಯಕ್ಷ ವಿ.ರಾಮಪ್ರಸಾತ್ ಮನೋಹರ್ ವಿಶ್ವಾಸ ವ್ಯಕ್ತಪಡಿಸಿದರು.





# ಶುಗರ್‌ಗೆ ಮಾತ್ರವಲ್ಲ ಹೈ ಬಿಪಿಗೂ ಹಾಗಲಕಾಯಿ ಮದ್ದು

ಹಾಗಲಕಾಯಿ ಕಹಿಯಾಗಿರುವ ಒಂದು ತರಕಾರಿಯಾಗಿದೆ. ಹಾಗಾಗಿ ಇದು ಮಧುಮೇಹಿಗಳಿಗೆ ಬಹಳ ಒಳ್ಳೆಯದು, ಇದು ರಕ್ತದಲ್ಲಿನ ಸಕ್ಕರೆಯ ಮಟ್ಟವನ್ನು ಕಂಟ್ರೋಲ್‌ನಲ್ಲಿಡಲು ಸಹಕಾರಿಯಾಗಿದೆ.

ಆದರೆ ನಿಮಗೆ ಗೊತ್ತಾ ಹಾಗಲಕಾಯಿ ಬರೀ ಮಧುಮೇಹಿಗಳಿಗೆ ಮಾತ್ರವಲ್ಲ, ಅಧಿಕ ರಕ್ತದೊತ್ತಡದ ಸಮಸ್ಯೆ ಇರುವವರಿಗೂ ಒಳ್ಳೆಯದು. ಅಧಿಕ ರಕ್ತದೊತ್ತಡದ ಸಮಸ್ಯೆ ಹೊಂದಿರುವವರು ತಮ್ಮ ಜೀವನಶೈಲಿಯಲ್ಲಿ ಕೆಲವೊಂದು ಬದಲಾವಣೆಗಳನ್ನು ಮಾಡುವುದು ಮುಖ್ಯ. ಸಮತೋಲಿತ ಆಹಾರ ಸೇವನೆ, ವ್ಯಾಯಾಮ ಅಧಿಕ ರಕ್ತದೊತ್ತಡವನ್ನು ಕಂಟ್ರೋಲ್‌ನಲ್ಲಿಡಲು



ಸಹಕರಿಸುವುದು. **ಆಹಾರ ತಜ್ಞೆಯ ಸಲಹೆ:** ಎಸ್ಸೆಂಟ್ರಿಕ್ಸ್ ಡಯಟ್ ಕ್ಲಿನಿಕ್‌ನ ಆಹಾರ ತಜ್ಞೆ ಶಿವಾಲಿ ಗುಪ್ತಾ ಅವರು, ಹಾಗಲಕಾಯಿ ಅಧಿಕ ರಕ್ತದೊತ್ತಡವನ್ನು ನಿಯಂತ್ರಿಸಲು ಹೇಗೆ ಸಹಾಯ ಮಾಡುತ್ತದೆ. ಹೈ ಬಿಪಿ ಸಮಸ್ಯೆ ಇರುವವರು ತಮ್ಮ ಆಹಾರದಲ್ಲಿ ಯಾವೆಲ್ಲಾ ಬದಲಾವಣೆಯನ್ನು ಮಾಡಬೇಕು ಎನ್ನುವುದನ್ನು ನಾವಿಲ್ಲಿ ತಿಳಿಯೋಣ.

**ಹಾಗಲಕಾಯಿಯಲ್ಲಿರುವ ಪೌಷ್ಟಿಕಾಂಶಗಳು:** ಹಾಗಲಕಾಯಿ ರುಚಿಯಲ್ಲಿ ಕಹಿಯಾಗಿರಬಹುದು, ಆದರೆ ಇದು ಅನೇಕ ಆರೋಗ್ಯ ಪ್ರಯೋಜನಗಳನ್ನು ಹೊಂದಿದೆ. ವಿಶೇಷವಾಗಿ ಅಧಿಕ ರಕ್ತದೊತ್ತಡ ರೋಗಿಗಳಿಗೆ ತುಂಬಾ ಪ್ರಯೋಜನಕಾರಿಯಾಗಿದೆ. ಇದು ಔಷಧೀಯ ಗುಣಗಳಿಂದ ಸಮೃದ್ಧವಾಗಿದ್ದು, ಆಯುರ್ವೇದದಲ್ಲಿ ಅನೇಕ ರೋಗಗಳಿಗೆ ಚಿಕಿತ್ಸೆ ನೀಡಲು ಬಳಸಲಾಗುತ್ತಿದೆ. ಇದರಲ್ಲಿ ವಿಟಮಿನ್ ಸಿ, ಕಬ್ಬಿಣ, ಮೆಗ್ನೀಸಿಯಮ್, ಪೊಟ್ಯಾಸಿಯಮ್, ಫೈಬರ್ ಮತ್ತು ಉತ್ಕರ್ಷಣ ನಿರೋಧಕಗಳು ಸಮೃದ್ಧವಾಗಿವೆ. ಇದು ಪಾಲಿಪೆಪ್ಟೈಡ್-ಪಿ, ಚರಂಟಿನ್ ಮತ್ತು ವಿಸಿನ್‌ನಂತಹ ಸಕ್ರಿಯ ಸಂಯುಕ್ತಗಳನ್ನು ಹೊಂದಿದ್ದು ರಕ್ತದಲ್ಲಿನ ಸಕ್ಕರೆ ಮತ್ತು ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

**ರಕ್ತದೊತ್ತಡವನ್ನು ನಿಯಂತ್ರಿಸಲು:** ಹಾಗಲಕಾಯಿಯಲ್ಲಿರುವ ಪೊಟ್ಯಾಸಿಯಮ್ ಮತ್ತು ಮೆಗ್ನೀಸಿಯಮ್ ಅಧಿಕ ರಕ್ತದೊತ್ತಡವನ್ನು ನಿಯಂತ್ರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಈ ಎರಡೂ ಖನಿಜಗಳು ನರಗಳನ್ನು ವಿಶ್ರಾಂತಿ ಮಾಡುವುದಲ್ಲದೆ ಇದು ರಕ್ತ ಪರಿಚಲನೆಯನ್ನು ಸುಧಾರಿಸುತ್ತದೆ, ಒತ್ತಡವನ್ನು ನಿಯಂತ್ರಣದಲ್ಲಿಡುತ್ತದೆ.

**ದೇಹವನ್ನು ನಿರ್ವಿಷಗೊಳಿಸುತ್ತದೆ:** ಹಾಗಲಕಾಯಿ ನೈಸರ್ಗಿಕ ನಿರ್ವಿಶೀಕರಣ ಕಾರಕವಾಗಿ ಕಾರ್ಯನಿರ್ವಹಿಸುತ್ತದೆ. ಇದು ದೇಹದಿಂದ ವಿಷವನ್ನು ತೆಗೆದುಹಾಕಲು ಕೆಲಸ ಮಾಡುತ್ತದೆ, ಇದರಿಂದಾಗಿ ರಕ್ತವನ್ನು ಶುದ್ಧೀಕರಿಸುತ್ತದೆ ಮತ್ತು ರಕ್ತನಾಳಗಳಲ್ಲಿ ಸಂಗ್ರಹವಾಗಿರುವ ಕೊಬ್ಬು ಮತ್ತು ಕೊಳೆಯನ್ನು ತೆಗೆದುಹಾಕುತ್ತದೆ. ಶುದ್ಧ ರಕ್ತ ಮತ್ತು ರಕ್ತನಾಳಗಳು ಅಧಿಕ ರಕ್ತದೊತ್ತಡದ ಅಪಾಯವನ್ನು ಕಡಿಮೆ ಮಾಡುತ್ತದೆ.

**ಒತ್ತಡವನ್ನು ಕಡಿಮೆ ಮಾಡಲು ಸಹಾಯಕವಾಗಿದೆ:** ಹಾಗಲಕಾಯಿಯಲ್ಲಿ ಉತ್ಕರ್ಷಣ ನಿರೋಧಕಗಳು ಸಮೃದ್ಧವಾಗಿವೆ. ಇದು ದೇಹದಲ್ಲಿ ಫ್ರೀ ರಾಡಿಕಲ್‌ಗಳ ಪರಿಣಾಮವನ್ನು ಕಡಿಮೆ ಮಾಡುತ್ತದೆ. ಇದು ಒತ್ತಡವನ್ನು ಕಡಿಮೆ ಮಾಡುತ್ತದೆ ಮತ್ತು ಹೃದಯವನ್ನು ಆರೋಗ್ಯವಾಗಿಡುತ್ತದೆ. ಮಾನಸಿಕ ಒತ್ತಡವು ಅಧಿಕ ರಕ್ತದೊತ್ತಡವನ್ನು ಹೆಚ್ಚಿಸುತ್ತದೆ, ಆದ್ದರಿಂದ ಹಾಗಲಕಾಯಿ ಒತ್ತಡವನ್ನು ಕಡಿಮೆ ಮಾಡುವ ಮೂಲಕ ರಕ್ತದೊತ್ತಡವನ್ನು ಕಂಟ್ರೋಲ್‌ನಲ್ಲಿಡುತ್ತದೆ.

**ತೂಕವನ್ನು ಕಡಿಮೆ ಮಾಡಲು:** ಅಧಿಕ ರಕ್ತದೊತ್ತಡದ ಪ್ರಮುಖ ಕಾರಣಗಳಲ್ಲಿ ಬೊಜ್ಜು ಕೂಡಾ ಒಂದು. ಹಾಗಲಕಾಯಿಯಲ್ಲಿ ಕ್ಯಾಲೋರಿಗಳು ಕಡಿಮೆ ಮತ್ತು ನಾರಿನಂಶ ಹೆಚ್ಚಿದ್ದು, ತೂಕ ಇಳಿಸಲು ಸಹಾಯ ಮಾಡುತ್ತದೆ. ಇದರ ಸೇವನೆಯು ಹಸಿವನ್ನು ನಿಯಂತ್ರಿಸುತ್ತದೆ, ಚಯಾಪಚಯ ಕ್ರಿಯೆಯನ್ನು ವೇಗಗೊಳಿಸುತ್ತದೆ.

**ಇನ್ಸುಲಿನ್ ಸೂಕ್ಷ್ಮತೆಯನ್ನು ಹೆಚ್ಚಿಸುತ್ತದೆ:** ಹಾಗಲಕಾಯಿಯಲ್ಲಿರುವ ಚರಂಟಿನ್ ಸಂಯುಕ್ತವು ರಕ್ತದಲ್ಲಿನ ಸಕ್ಕರೆಯನ್ನು ನಿಯಂತ್ರಿಸುತ್ತದೆ ಮತ್ತು ಇನ್ಸುಲಿನ್ ಚಟುವಟಿಕೆಯನ್ನು ಹೆಚ್ಚಿಸುತ್ತದೆ. ಮಧುಮೇಹ ಮತ್ತು ಅಧಿಕ ಬಿಪಿ ಒಂದಕ್ಕೊಂದು ಸಂಬಂಧ ಹೊಂದಿದೆ. ಆದ್ದರಿಂದ ಈ ಗುಣವು ಪರೋಕ್ಷವಾಗಿ ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

### ಹಾಗಲಕಾಯಿಯನ್ನು ಹೇಗೆ ಸೇವಿಸುವುದು

**ಮಧ್ಯಾಹ್ನ ಅಥವಾ ರಾತ್ರಿ ಊಟಕ್ಕೆ ಕಡಿಮೆ ಎಣ್ಣೆ ಮತ್ತು ಕಡಿಮೆ ಮಸಾಲೆಗಳಲ್ಲಿ ಬೇಯಿಸಲಾದ ಹಾಗಲಕಾಯಿಯನ್ನು ಸೇವಿಸಿ. ಪ್ರತಿದಿನ ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಒಂದು ಲೋಟ ತಾಜಾ ಹಾಗಲಕಾಯಿ ರಸವನ್ನು ಕುಡಿಯುವುದು ಹೆಚ್ಚು ಪ್ರಯೋಜನಕಾರಿ. ರುಚಿಯನ್ನು ಸಮತೋಲನಗೊಳಿಸಲು, ಸ್ವಲ್ಪ ನಿಂಬೆಯನ್ನು ಇದಕ್ಕೆ ಸೇರಿಸಬಹುದು. ಅಥವಾ ಹಾಗಲಕಾಯಿಯನ್ನು ಒಣಗಿಸಿ ಅದರ ಪುಡಿಯನ್ನು ತಯಾರಿಸಿ, ಪ್ರತಿದಿನ ಒಂದು ಟೀಚಮಚ ಪುಡಿಯನ್ನು ಉಗುರು ಬೆಚ್ಚಗಿನ ನೀರಿನೊಂದಿಗೆ ಸೇವಿಸಿ.**



# ರಾಮಾಯಣ

ಭರದ್ವಾಜ ಮುನಿಯಿಂದ ಭರತಾದಿಗಳಿಗೆ ಔತಣ

ಹಿಂದಿನ ಸಂಚಿಕೆಯಿಂದ 91ನೆಯ ಅಧ್ಯಾಯ

ಭರದ್ವಾಜಮುನೀಶ್ವರನು ಭರತ ನಾವೆಲ್ಲರೂ ಸುಖವಾಗಿದ್ದೇವೆ. ರಾಜ್ಯಪರಿಪಾಲನದಲ್ಲಿ ಆಸಕ್ತಚಿತ್ತನಾದ ನೀನು ಇಲ್ಲಿಗೆ ಬರಲು ಕಾರಣವೇನು ನನ್ನ ಮನಸ್ಸಿಗೆ ಸಂಶಯವುಂಟಾಗಿದೆ. ಕೈಕೇಯಾದೇವಿಯಿಂದ ಬೋಧಿಸಲ್ಪಟ್ಟು ದಶರಥರಾಯನು ತನ್ನ ಜೇಷ್ಠಪುತ್ರನಾದ ಶ್ರೀರಾಮನನ್ನು ಸೀತಾದೇವೀಸಮೇತವಾಗಿ ಹದಿನಾಲ್ಕು ವರುಷಗಳು ವನವಾಸ ಮಾಡಬೇಕೆಂದು ಹೊರಡಿಸಿದನಂತೆ. ಯಾವ ದ್ರೋಹವನ್ನೂ ಮಾಡದಿದ್ದ ಶ್ರೀರಾಮನಿಗೂ ಆತನೊಡನೆ ಬಂದಿರುವ ಲಕ್ಷ್ಮಣನಿಗೂ ಏನಾದರು ಕೇಡನ್ನು ಚಿಂತಿಸಿ ಆಕಂಟಕವಾಗಿ ರಾಜ್ಯವನ್ನನುಭವಿಸಬೇಕೆಂದು ಅವರನ್ನು ಹುಡುಕಿ ಕೊಂಡು ಬಂದೆಯಾ ಎಂದು ಕೇಳಿದನು. ಭರತನು ಕಣ್ಣೀರುತುಂಬಿ ದುಃಖಾತಿಶಯದಿಂದ ಭರದ್ವಾಜಮುನಿಯನ್ನು ಕುರಿತು ಮುನಿಗಳೆ, ನನ್ನಲ್ಲಿ ಇಂಥ ಸಂಶಯವನ್ನು ಮಾಡಿದಾಗಲೇ ನಾನು ಕೆಟ್ಟೆನು. ನನ್ನಲ್ಲಿ ದೋಷ ವನ್ನೆಣಿಸಿ ಹೀಗೆ ನುಡಿಯಬೇಡಿರಿ. ನನ್ನನ್ನು ಕೃಪಾದೃಷ್ಟಿಯಿಂದ ನೋಡಿ ರಕ್ಷಿಸಿರಿ. ನನ್ನ ತಾಯಿಯಾದ ಕೈಕೇಯಾದೇವಿಯು ಮಾಡಿದ ಕೃತ್ಯವನ್ನು ನಾನು ಸಹಿಸಲಾರೆನು. ನಾನು ಆಕೆಯು ಮಾಡಿದ ಕೃತ್ಯವನ್ನರಿತವನಲ್ಲ : ನಾನು ದುಷ್ಟನಲ್ಲ : ಶ್ರೀರಾಮನನ್ನು ಸಂತವಿಟ್ಟು ಕರೆದುಕೊಂಡು ಹೋಗಬೇಕೆಂದು ಬಂದೆನು. ಆತನು ಬರೆದಿದ್ದರೆ ನಾನೂ ವನಕ್ಕೆ ಹೋಗುವೆನೆಂದು ತಿಳಿದು ನನ್ನಲ್ಲಿ ಕೃಪೆಮಾಡಿ ರಕ್ಷಿಸಿರಿ ಎಂದು ಪ್ರಾರ್ಥನೆ ಮಾಡಿದನು. ಆಗ ಭರತನ ಮಾತಿಗೆ ಅನುಕೂಲವಾಗಿ ವಸಿಷ್ಠಾದಿಮುನೀಶ್ವರರೂ ಭರದ್ವಾಜಮುನಿಯನ್ನು ಪ್ರಾರ್ಥಿಸಲು ಆತನು ಭರತನನ್ನು ಕುರಿತು ಭರತ, ರಘುಕುಲೋದ್ಭವನಾದ ನಿನಗೆ ಈ ಸದ್ಗುಣವು ಸಹಜವಾದದ್ದು. ನಿಮ್ಮ ವಂಶದಲ್ಲಿ ಹುಟ್ಟಿದ ರಾಜರಿಗೆ ಗುರುಭಕ್ತಿಯೂ ಸತ್ಪುರುಷರ ಸೇವೆಯೂ ಸ್ವಭಾವಗುಣಗಳು ನಿನಗೊಂದು ಬುದ್ಧಿಯನ್ನು ಹೇಳುತ್ತೇನೆ ಕೇಳು : ನೀನು ಈ ಲೋಕದಲ್ಲಿ ಕೀರ್ತಿಯನ್ನೇ ಬಯಸು. ಸೀತಾಲಕ್ಷ್ಮಣಸಮೇತನಾದ ಶ್ರೀರಾಮನು ಚಿತ್ರಕೂಟಪರ್ವತದಲ್ಲಿದ್ದಾನೆ. ಆ ವೃತ್ತಾಂತವನ್ನು ನಾನು ಬಲ್ಲೆನು. ನೀನು ಈ ದಿನ ಮಂತ್ರಿಗಳನ್ನು ಕೂಡಿಕೊಂಡು ಈ ಗಂಗಾ ತೀರದಲ್ಲಿ ವಾಸವಾಗಿರು: ನಾಳೆ ಮುಂದಕ್ಕೆ ಪ್ರಯಾಣಮಾಡಬಹುದು ಎಂದು ಹೇಳಿದನು. ಮಹಾಪ್ರಸಾದವೆಂದು ಭರದ್ವಾಜಮುನಿಯ ಮಾತನ್ನು ಅಂಗೀಕರಿಸಿ ಬುದ್ಧಿವಂತನಾದ ಭರತನು ತನ್ನ ಗುರುವಾದ ವಸಿಷ್ಠ ಮುನೀಶ್ವರನನ್ನೂ ಮಂತ್ರಿಗಳನ್ನೂ ಕೂಡಿಕೊಂಡು ಆತನ ಆಶ್ರಮದಲ್ಲಿ ಗಂಗಾತೀರದಲ್ಲಿ ಆ ರಾತ್ರಿಯಲ್ಲಿದ್ದನು.

**ಭರದ್ವಾಜ ಮುನಿಯಿಂದ ಭರತಾದಿಗಳಿಗೆ ಔತಣ**

ಈ ಪ್ರಕಾರದಲ್ಲಿ ಭರದ್ವಾಜಮುನೀಶ್ವರನು ಭರತನನ್ನು ತನ್ನ ಆಶ್ರಮದಲ್ಲಿ ನಿಲ್ಲಿಸಿ ಆತನನ್ನು ಔತಣಕ್ಕೆ ಆಹ್ವಾನಿಸಿದನು. ಭರತನು ಭರದ್ವಾಜಮುನೀಶ್ವರರೆ, ನಮಗೆ ಅರ್ಘ್ಯಪಾದ್ಯಾದಿ ಗಳನ್ನೂ ಈ ವನದಲ್ಲಿರುವ ಕಂದಮೂಲಫಲಾದಿಗಳನ್ನೂ ಅನುಗ್ರಹಿಸಿದಿರಿ. ಅದು ಔತಣವಲ್ಲವೆ ನಿಮ್ಮ ಕೃಪಾಕಟಾಕ್ಷವೇ ಸಾಲದೆ ಇನ್ನು ಬೇರೆ ಔತಣವಾಗಬೇಕೆ ಎಂದು ಹೇಳಿದನು.

**ಮುಂದುವರಿಯುವುದು...**

# ಜ್ಯೂಸ್‌ಗಳನ್ನು ಕುಡಿಯುತ್ತಾ ಬಂದರೆ, ಹಿಮೋಗ್ಲೋಬಿನ್ ಮಟ್ಟ ಹೆಚ್ಚಾಗುತ್ತದೆ

ದೇಹದ ಕೆಂಪು ರಕ್ತ ಕಣಗಳಲ್ಲಿ ಹಿಮೋಗ್ಲೋಬಿನ್ ಅಂಶ ಹೆಚ್ಚಾಗಿರಬೇಕು ಎನ್ನುವುದು ತಜ್ಞರೂ ಕೂಡ ಹೇಳುತ್ತಾರೆ. ಆದರೆ ಕೆಲವೊಮ್ಮೆ ನಾವು ಅನುಸರಿಸಿಕೊಂಡು ಹೋಗುತ್ತಿರುವ ಜೀವನಶೈಲಿ ಹಾಗೂ ಆಹಾರಪದ್ಧತಿಯ ಕಾರಣಗಳಿಂದಾಗಿ ದೇಹದಲ್ಲಿ ಕಬ್ಬಿಣಾಂಶದ ಕೊರತೆ ಕಾಣಿಸಿಕೊಂಡು ಹಿಮೋಗ್ಲೋಬಿನ್ ಮಟ್ಟ ಕಡಿಮೆಯಾಗುತ್ತದೆ ಕೊನೆಗೆ ಇದೇ ಕಾರಣಕ್ಕೆ ಕೆಂಪು ರಕ್ತ ಕಣಗಳು ಕೂಡ ಕಡಿಮೆಯಾಗಿ, ದೇಹದ ರೋಗ ನಿರೋಧಕ ಶಕ್ತಿಯೂ ಕೂಡ ದುರ್ಬಲಗೊಳ್ಳುತ್ತದೆ.

ದೇಹದಲ್ಲಿ ಹಿಮೋಗ್ಲೋಬಿನ್ ಮಟ್ಟ ಕಡಿಮೆ ಆಗಲು ಅನೇಕ ಕಾರಣಳಿರಬಹುದು, ಅದರಲ್ಲಿ ಪ್ರಮುಖವಾಗಿ ನಾವು ಅನುಸರಿಸಿಕೊಂಡು ಹೋಗು ತ್ತಿರುವ ಜೀವನಶೈಲಿ ಆಹಾರ ಪದ್ಧತಿಯಿಂದ ಆಗಿರಬಹುದು, ದೀರ್ಘಕಾಲಿನ ಕಾಯಿಲೆಗಳು ಇರಬಹುದು ಅಥವಾ ಪೌಷ್ಟಿಕಾಂಶ ಹೆಚ್ಚಿರುವ ಆಹಾರಗಳ ಸೇವನೆ ಮಾಡದೆ ಇದ್ದರೂ ಕೂಡ ರಕ್ತದಲ್ಲಿ ಕೆಂಪು ರಕ್ತಕಣಗಳ ಸಂಖ್ಯೆ ಕಡಿಮೆ ಆಗುತ್ತದೆ ಎನ್ನುತ್ತಾರೆ ತಜ್ಞರು.


ದೇಹದಲ್ಲಿ ಹಿಮೋಗ್ಲೋಬಿನ್ ಹೆಚ್ಚಿಸಲು ಬೀಟ್ರೂಟ್ ತುಂಬಾನೇ ಪ್ರಯೋಜನಕಾರಿ ಎನ್ನುತ್ತಾರೆ ಆರೋಗ್ಯ ತಜ್ಞರು.. ಇದರಲ್ಲಿ ಕಬ್ಬಿಣ, ವಿಟಮಿನ್ ಸಿ, ಫೈಬರ್ ಮತ್ತು ಪೊಟ್ಯಾಸಿಯಮ್ ನಂತಹ ಅಂಶಗಳಿವೆ. ಆರೋಗ್ಯ ತಜ್ಞರ ಪ್ರಕಾರ, ಬೀಟ್ರೂಟ್ ಅನ್ನು ರಕ್ತ ಶುದ್ಧೀಕರಣಕಾರಕ ಎಂದೂ ಕರೆಯಲಾಗುತ್ತದೆ. ಇದರಲ್ಲಿರುವ ವಿಟಮಿನ್ ಸಿ ಕಬ್ಬಿಣವನ್ನು ಪರಿಣಾಮಕಾರಿಯಾಗಿ ಹೀರಿಕೊಳ್ಳುತ್ತದೆ ಹಾಗೂ ರಕ್ತ ಸಂಚಾರದಲ್ಲಿ ಕೆಂಪು ರಕ್ತ ಕಣಗಳನ್ನು ಕೂಡ ಹೆಚ್ಚು ಮಾಡುತ್ತದೆ.

**ಟೊಮೆಟೊ ಹಣ್ಣುಗಳ ಜ್ಯೂಸ್ :** ಮನೆಯಲ್ಲಿ ರೆಡಿ ಮಾಡುವ ಸಾಂಬರ್ ರುಚಿಯನ್ನು ಹೆಚ್ಚಿಸುವ ಟೊಮೆಟೊ ಹಣ್ಣುಗಳು ಕೂಡ ಹಿಮೋಗ್ಲೋಬಿನ್ ಮಟ್ಟವನ್ನು ವೇಗವಾಗಿ ಹೆಚ್ಚಿಸಲು ನೆರವಿಗೆ ಬರುತ್ತದೆಯಂತೆ.ತಜ್ಞರ ಪ್ರಕಾರ, ಅಡುಗೆಯಲ್ಲಿ ಟೊಮೆಟೊ ಬಳಸುವ ಅಭ್ಯಾಸ ಮಾಡಿಕೊಳ್ಳುವುದರ ಜೊತೆಗೆ, ದಿನಾ ಒಂದು ಲೋಟ ಟೊಮೆಟೊ ಹಣ್ಣುಗಳ ಜ್ಯೂಸ್ ಮಾಡಿ ಕುಡಿಯುವ ಅಭ್ಯಾಸ ಮಾಡಿಕೊಂಡರೆ ಒಳ್ಳೆಯದು.

**ಪಾಲಕ್ ಸೊಪ್ಪಿನ ಜ್ಯೂಸ್:** ಪಾಲಕ್ ಸೊಪ್ಪಿನಲ್ಲಿ ಮನುಷ್ಯನ ಆರೋಗ್ಯಕ್ಕೆ ಬೇಕಾಗುವಂತಹ ಪೋಷಕಾಂಶಗಳು ಕಂಡು ಬರುವುದರಿಂದ, ಇದೊಂದು ಆರೋಗ್ಯಕಾರಿ ಸೊಪ್ಪು ಎನ್ನುವುದರಲ್ಲಿ ಎರಡು ಮಾತಿಲ್ಲ. ಪ್ರಮುಖವಾಗಿ ಈ ಹಸಿರೆಲೆ ಸೊಪ್ಪಿನಲ್ಲಿ ಅಧಿಕ ಪ್ರಮಾನದಲ್ಲಿ ಕಬ್ಬಿಣಾಂಶ, ವಿಟಮಿನ್ಸ್‌ಗಳಾದ ವಿಟಮಿನ್ ಎ, ವಿಟಮಿನ್ ಇ, ವಿಟಮಿನ್ ಕೆ, ಹಾಗೂ ಖನಿಜಾಂಶಗಳಾದ ಪೊಟ್ಯಾಸಿ ಯಮ್ ಮತ್ತು ಮೆಗ್ನೀಸಿಯಮ್ ಅಗಾಧ ಪ್ರಮಾಣದಲ್ಲಿ ಕಂಡು ಬರುವುದರಿಂದ, ಪ್ರತಿದಿನ ಒಂದು ಲೋಟ ಪಾಲಕ್ ಜ್ಯೂಸ್ ಸೇವನೆ ಕುಡಿಯುವ ಅಭ್ಯಾಸ ಮಾಡಿಕೊಂಡರೆ, ಹಿಮೋಗ್ಲೋಬಿನ್ ಮಟ್ಟವನ್ನು ಹೆಚ್ಚಿಸಿ ಕೊಳ್ಳಬಹುದು.

**ಪ್ಲಮ್ ಹಣ್ಣಿನ ಜ್ಯೂಸ್:** ಒಣಗಿದ ಪ್ಲಮ್‌ನಿಂದ ತಯಾರಿಸಿದ ಜ್ಯೂಸ್ ಅನ್ನು ಕುಡಿಯುವುದರಿಂದ ಹಿಮೋಗ್ಲೋಬಿನ್ ಮಟ್ಟವು ವೇಗವಾಗಿ ಹೆಚ್ಚಾಗುತ್ತದೆ.

ಇದನ್ನು ತಯಾರಿಸಲು, 5 ಒಣಗಿದ ಪ್ಲಮ್‌ಗಳನ್ನು ತೆಗೆದುಕೊಂಡು ನೀರಿನಲ್ಲಿ ಇರಿಸಿ. ಈಗ ಇವೆಲ್ಲಾವನ್ನೂ ಕೂಡ ಜ್ಯೂಸರ್ ಗೆ ಹಾಕಿಕೊಂಡು, ಒಂದು ಚಮಚ ನಿಂಬೆ ರಸ ಹಾಗೂ ರುಚಿಗೆ ತಕ್ಕಷ್ಟು ಸಕ್ಕರೆಯನ್ನು ಬೆರೆಸಿ, ದಿನಕ್ಕೆ ಒಂದು ಲೋಟ ಕುಡಿಯುವ ಅಭ್ಯಾಸ ಮಾಡಿಕೊಂಡರೆ ರಕ್ತಹೀನತೆಯ ಹೊರತಾಗಿ, ಆಯಾಸ ಸುಸ್ತು, ಇತರ ಆರೋಗ್ಯ ಸಮಸ್ಯೆಗಳು ಕೂಡ ದೂರವಾಗುತ್ತದೆ.





### ದಿನಾ ಒಂದು ಗ್ಲಾಸ್ ಬೀಟ್ರೂಟ್ ಜ್ಯೂಸ್

**ಬೀಟ್ರೂಟ್ ಚೆನ್ನಾಗಿ ತೊಳೆದು, ಅದರ ಮೇಲ್ಭಾಗದ ಸಿಪ್ಪೆ ತೆಗೆದು ಸಣ್ಣ ಸಣ್ಣ ಹೋಳುಗಳನ್ನಾಗಿ ಕತ್ತರಿಸಿ ಸಲಾಡ್ ಮಾಡಿಕೊಂಡು ಸೇವನೆ ಮಾಡಬಹುದು. ಇಲ್ಲಾಂದ್ರೆ, ದಿನಾ ಒಂದು ಗ್ಲಾಸ್ ಬೀಟ್ರೂಟ್ ಜ್ಯೂಸ್ ಕುಡಿಯುವ ಅಭ್ಯಾಸ ಮಾಡಿಕೊಳ್ಳಿ. ಇದರಿಂದ ಬೀಟ್ರೂಟ್ ಆರೋಗ್ಯ ಪ್ರಯೋಜನಗಳನ್ನು ನಿಮ್ಮದಾಗಿಸಿಕೊಳ್ಳಬಹುದು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಸಮೃದ್ಧ ಮತ್ತು ಹೆಚ್ಚಿನ ಕೊಲೆಸ್ಟ್ರಾಲ್ ಇರುವ ಆಹಾರ ತಪ್ಪಿಸಲು ಪ್ರಯತ್ನಿಸಿ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಒಂದು ಕುಟುಂಬದ ಒಟ್ಟಾಗುವಿಕೆಯಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ.

**ವೃಷಭ** ನಿಮ್ಮ ಸ್ನೇಹಿತರು ಅಥವಾ ಕುಟುಂಬ ಸದಸ್ಯರೊಂದಿಗಿನ ಸಂತಸದ ಪ್ರಯಾಣ ನಿಮಗೆ ಸಮಾಧಾನ ನೀಡುತ್ತದೆ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಉತ್ತಮ ಬೆಲೆಗೆ ಮಾರಾಟ ಮಾಡಬಹುದು.

**ಮಿಥುನ** ಅತಿಯಾಗಿ ತಿನ್ನುವುದನ್ನು ತಪ್ಪಿಸ್ತಿ, ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ದೀರ್ಘಕಾಲದ ದೃಷ್ಟಿಕೋನದಿಂದ ಹೂಡಿಕೆ ಮಾಡಬೇಕು. ನಿಮ್ಮ ವರ್ತನೆಯಲ್ಲಿ, ವಿಶೇಷವಾಗಿ ನಿಮ್ಮ ಸಂಗಾತಿಯ ಜೊತೆ, ತಾಳ ತಪ್ಪದಿರಲಿ.

**ಕರ್ಕಾಟಕ** ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು.

**ಸಿಂಹ** ನಿಮ್ಮ ಸಂಗಾತಿ ನಿಮ್ಮ ಸ್ಥಾನವನ್ನು ತಿಳಿದುಕೊಳ್ಳುವಂತೆ ಮಾಡಲು ನೀವು ತೊಂದರೆ ಹೊಂದಿರುತ್ತೀರಿ. ಇದು ಒಂದು ಅನುಕೂಲಕರವಾದ ದಿನ, ಕೆಲಸದಲ್ಲಿ ಇದನ್ನು ಸೂಕ್ತವಾಗಿ ಬಳಸಿಕೊಳ್ಳಿ.

**ಕನ್ಯಾ** ನೀವು ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

**ತುಲಾ** ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ , ಇದು ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ – ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ.

**ವೃಶ್ಚಿಕ** ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ಡೈರಿ ಉದ್ಯಮಕ್ಕೆ ಸೇರಿರುವವರು ಇಂದು ಆರ್ಥಿಕ ಲಾಭವನ್ನು ಪಡೆಯುವ ಪ್ರಬಲ ಸಾಧ್ಯತೆ ಇದೆ.

**ಧನಸ್ಸು** ನಿಮ್ಮ ಪ್ರಿಯತಮೆ ಇಡೀ ದಿನ ನಿಮಗಾಗಿ ಪರಿತಪಿಸುತ್ತಾಳೆ. ಒಂದು ಅಚ್ಚರಿಯನ್ನು ಯೋಜಿಸಿ ಮತ್ತು ಇದನ್ನು ನಿಮ್ಮ ಜೀವನದ ಅತ್ಯಂತ ಸುಂದರ ದಿನವನ್ನಾಗಿ ಮಾಡಿ.

**ಮಕರ** ಹೊರಾಂಗಣ ಚಟುವಟಿಕೆಗಳು ಉಪಯುಕ್ತವಾಗುತ್ತವೆ. ಕೋಟೆಯೊಳಗಿನ ಜೀವನ ಶೈಲಿ, ಯಾವಾಗಲೂ ಭದ್ರತೆಯ ಬಗ್ಗೆ ಯೋಚಿಸುವುದು ನಿಮ್ಮ ದೈಹಿಕ , ನಿಮ್ಮ ಮಾನಸಿಕ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತವೆ.

**ಕುಂಭ** ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ಯಾವುದೇ ಸಮಯದಲ್ಲಿ ಹಣದ ಅಗತ್ಯವಿರುತ್ತದೆ ಆದ್ದರಿಂದ ಇಂದು ಸಾಧ್ಯವಾದಷ್ಟು ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ.

**ಮೀನ** ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ನೀವು ಅಪರೂಪಕ್ಕೆ ಭೇಟಿ ಮಾಡುವ ಜನರನ್ನು ಸಂಪರ್ಕಿಸಲು ಒಳ್ಳೆಯ ದಿನ.

● ಪ್ರಯಾಣಿಕರ ಸಂಖ್ಯೆಯಲ್ಲಿ ಹೆಚ್ಚಳವಾದರೂ ಯಾವುದೇ ಬದಲಾವಣೆಗಳಾಗಿಲ್ಲ

# ಶೃಂಗೇರಿ-ಮೈಸೂರು ಪ್ರಯಾಣ ಹೈರಾಣ

• ಉದಯವಾಹಿನಿ ಶೃಂಗೇರಿ

ಶಾರದೆಯ ಸನ್ನಿಧಾನ ಶೃಂಗೇರಿ ಹಾಗೂ ಅರಮನೆ ನಗರಿ ಮೈಸೂರಿಗೂ ಐತಿಹಾಸಿಕ ನಂಟಿದೆ. ಪ್ರವಾಸಿಗರು ಸೇರಿದಂತೆ ಸಾರ್ವಜನಿಕರು ಸಹ ನಿತ್ಯ ಓಡಾಟಕ್ಕೆ ಕೆಎಸ್‌ಆರ್‌ಟಿಸಿ ಬಸ್‌ನ್ನೇ ಅವಲಂಬಿಸಿದ್ದಾರೆ.

ಆದರೆ, ಕಳೆದ 50 ವರ್ಷದಿಂದ ಎರಡೂ ನಗರಕ್ಕೆ ಏಕೈಕ ಬಸ್ ಸೇವೆಗೆ ಕೆಎಸ್‌ಆರ್‌ಟಿಸಿ ಸೀಮಿತವಾಗಿರುವುದು ಪ್ರಯಾಣಿಕರಲ್ಲಿ ಬೇಸರ ಮೂಡಿಸಿದೆ. ಪ್ರಸಿದ್ಧ ಯಾತ್ರ ಸ್ಥಳವಾದ ಶೃಂಗೇರಿ ಹಾಗೂ ಸಾಂಸ್ಕೃತಿಕ ನಗರಿ ಮೈಸೂರಿನ ನಡುವೆ ರಾತ್ರಿ ವೇಳೆಯಲ್ಲಿಕಳೆದ 50 ವರ್ಷದಿಂದ ರಾಜ್ಯ ಸಾರಿಗೆಯ ಒಂದು ಬಸ್ ಮಾತ್ರ ಸಂಚರಿಸುತ್ತಿದೆ. ಹಲವು ವರ್ಷಗಳಿಂದ ಪ್ರಯಾಣಿಕರ ಸಂಖ್ಯೆ ಗಣನೀಯವಾಗಿ ಹೆಚ್ಚಳವಾಗಿದ್ದರೂ ಸಹ ಬಸ್ ವ್ಯವಸ್ಥೆಯಲ್ಲಿಯಾವುದೇ ಬದಲಾವಣೆ ಆಗಿಲ್ಲ. ಅದರಲ್ಲೂರಾಜಹಂಸ, ಓಲ್ವೋದಂತಹ ಅತ್ಯಾಧುನಿಕ ದರ್ಜೆಯ ಬಸ್ ಸೇವೆ ಮರೀಚಿಕೆ ಆಗಿದ್ದು ಸಾಮಾನ್ಯ ಬಸ್ ಸೇವೆಗೆ ಮಾತ್ರ ನಿಗಮ ಸೀಮಿತವಾಗಿದೆ.

ಕೆಲ ವರ್ಷದ ಹಿಂದೆ ಈ ಮಾರ್ಗದಲ್ಲಿ ರಾಜಹಂಸ ಬಸ್ ಸಂಚರಿಸುತ್ತಿತ್ತು. ಪ್ರಯಾಣಿಕರಿಗೆ ಈ ಬಗ್ಗೆ ಮಾಹಿತಿ ಲಭ್ಯವಾಗುವಷ್ಟರಲ್ಲಿ ಬಸ್ ಸೇವೆಯನ್ನೇ ಸ್ಥಗಿತಗೊಳಿಸಲಾಯಿತು. ರಾತ್ರಿ ವೇಳೆ ಸಾಮಾನ್ಯ ಬಸ್ ಸೇವೆ ಇರುವುದರಿಂದ ತಿರುವುಗಳ ರಸ್ತೆಯಲ್ಲಿಪ್ರಯಾಣಿಕರು ಹರಸಾಹಸ ಪಡುವಂತಾಗಿದ್ದು, ರಾತ್ರಿ ವೇಳೆ ಉನ್ನತ ದರ್ಜೆಯ ಬಸ್ ಸೇವೆ ಒದಗಿಸುವಂತೆ ಪ್ರಯಾಣಿಕರು ಆಗ್ರಹಿಸಿದ್ದಾರೆ.

ಶೃಂಗೇರಿ-ಮೈಸೂರು ಮಾರ್ಗದಲ್ಲಿರಾತ್ರಿ ವೇಳೆ ಸಂಚರಿಸುವ ಬಸ್ ಅವ್ಯವಸ್ಥೆ ಹೇಳ ತೀರದಾಗಿದೆ, ಶೃಂಗೇರಿಯಿಂದ ಬೆಂಗಳೂರಿಗೆ ರಾತ್ರಿ ವೇಳೆಯಲ್ಲಿಖಾಸಗಿ ಹಾಗೂ ಸಾರಿಗೆ ಸಂಸ್ಥೆಯ ಬಸ್‌ಗಳು ಸಂಚರಿಸುತ್ತವೆ. ರಾತ್ರಿ ವೇಳೆ ಉತ್ತಮ ದರ್ಜೆಯ ಬಸ್ ಸೇವೆ ಒದಗಿಸಿದರೆ ಪ್ರಯಾಣಿಕರಿಗೆ ಸಹಾಯವಾಗುತ್ತದೆ. ಈ ಬಗ್ಗೆ ಜನಪ್ರತಿನಿಧಿಗಳು, ಅಧಿಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ ಎಂದಿದ್ದಾರೆ ರಘುನಂದನ, ಕೆರೆಮನೆ, ಶೃಂಗೇರಿ. ಶೃಂಗೇರಿಯಿಂದ ಮೈಸೂರು ಭಾಗಕ್ಕೆ ರಾತ್ರಿ ವೇಳೆ ಒಂದೇ ಬಸ್ ಸಂಚರಿಸುವುದು ನಿಜ. ಆದರೆ, ಪ್ರಯಾಣಿಕರ ಕೊರತೆಯಿಂದಾಗಿ ಸಂಸ್ಥೆ ಒಂದೇ ಬಸ್ ವ್ಯವಸ್ಥೆ ಕಲ್ಪಿಸಿದೆ. ಮುಂದಿನ ದಿನಗಳಲ್ಲಿಇನ್ನೊಂದು ಉನ್ನತ ದರ್ಜೆಯ ಬಸ್ ಬಿಡುವಂತೆ ಮನವಿ ಸಲ್ಲಿಸಲಾಗುವುದು ಎಂದಿದ್ದಾರೆ ಶಿವಮೂರ್ತಿ, ರಾಜ್ಯ ಸಾರಿಗೆ ನಿಗಮ ಉಸ್ತುವಾರಿ, ಶೃಂಗೇರಿ.



☛ ಉದಯವಾಹಿನಿ ಚಿತ್ರ

**ಅಗತ್ಯ ಬಸ್‌ಗಳ ಕೊರತೆ**

■ ಶೃಂಗೇರಿ ಮತ್ತು ಮೈಸೂರು ನಡುವಿನ ಏಕೈಕ ಬಸ್ ಸೇವೆ ಕಳೆದ 50 ವರ್ಷಗಳ ಕಾಲ ಕಾರ್ಯನಿರ್ವಹಣೆ

■ ಪ್ರಯಾಣಿಕರ ಸಂಖ್ಯೆಯಲ್ಲಿ ಹೆಚ್ಚಳವಾದರೂ ಯಾವುದೇ ಬದಲಾವಣೆಗಳಾಗಿಲ್ಲ.

■ ರಾತ್ರಿ ಸಮಯದಲ್ಲಿ ಶೃಂಗೇರಿ-ಮೈಸೂರು ಮಾರ್ಗದಲ್ಲಿ ಕೇವಲ ಒಂದು ಸಾಮಾನ್ಯ ಬಸ್ ಸೇವೆ ಮಾತ್ರ ಇರುವುದರಿಂದ, ಪ್ರಯಾಣಿಕರು ಬೇರೆ ಮಾರ್ಗಗಳನ್ನು ಬಳಸಬೇಕಾಗುತ್ತಿದೆ.

### ಮೈಸೂರಿನಲ್ಲಿ ನೆಲೆ

ಶೃಂಗೇರಿ ಹಾಗೂ ಸುತ್ತಮುತ್ತಲಿನ ಸಾವಿರಾರು ಕುಟುಂಬಗಳು ಐತಿಹಾಸಿಕ ನಗರಿ ಮೈಸೂರಿನಲ್ಲಿ ನೆಲೆಸಿವೆ. ಉದ್ಯೋಗಸ್ಥರು, ವಿದ್ಯಾರ್ಥಿಗಳು, ಹಿರಿಯ ನಾಗರಿಕರಲ್ಲದೆ ಈ ಎರಡು ಪ್ರವಾಸಿ ಕ್ಷೇತ್ರಗಳ ನಡುವೆ ಸಂಚರಿಸುವ ಯಾತ್ರಾರ್ಥಿಗಳ ಸಂಖ್ಯೆ ಹೆಚ್ಚಳವಾಗಿದೆ. ಸರಕಾರದ ಶಕ್ತಿ ಯೋಜನೆಯಡಿ ಉಚಿತ ಬಸ್ ಪ್ರಯಾಣ ಮಾಡುವವರ ಸಂಖ್ಯೆಯೂ ಹೆಚ್ಚಾಗಿದೆ. ಪುಣ್ಯ ಕ್ಷೇತ್ರಗಳಿಗೆ ಬರುವ ಹಿರಿಯ ನಾಗರಿಕರು, ಭಕ್ತರು ಸಂಚಾರದ ಸಮಸ್ಯೆಯಿಂದ ತೊಂದರೆ ಅನುಭವಿಸುವಂತಾಗಿದೆ.

### ಬೇರೆ ಮಾರ್ಗದಲ್ಲಿ ಸಂಚಾರ

ರಾತ್ರಿ ವೇಳೆಯಲ್ಲಿ ಶೃಂಗೇರಿಯಿಂದ ಮೈಸೂರಿಗೆ ಕೇವಲ ಒಂದು ಸರಕಾರಿ ಬಸ್ ಸೇವೆ ಮಾತ್ರ ಇದೆ. ಇದರಿಂದಾಗಿ ಶೃಂಗೇರಿ-ಮೈಸೂರು ಕ್ಷೇತ್ರಗಳ ನಡುವೆ ಪ್ರಯಾಣಿಕರು ಬೇರೆ ಮಾರ್ಗಗಳಿಂದ ಸಂಚರಿಸುತ್ತಿದ್ದಾರೆ. ಕೆಲವರು ಬೆಂಗಳೂರಿಗೆ ತೆರಳಿ ಸ್ಲೀಪರ್ ಕೋಚ್‌ನಲ್ಲಿ ಪ್ರಯಾಣ ಮಾಡುತ್ತಿದ್ದಾರೆ. ಇನ್ನು ಕೆಲವರು ರೈಲಿನಲ್ಲಿ ಬೀರೂರು ಮಾರ್ಗದಲ್ಲಿ ಹಾಗೂ ಶಿವಮೊಗ್ಗದಿಂದ ಬಸ್‌ನಲ್ಲಿ ತೆರಳುವಂತಾಗಿದೆ.

## ಹಲ್ಲೆ ಪ್ರಕರಣ: ಆರೋಪಿ ಓರ್ವ ಅರೆಸ್ಟ್

• ಉದಯವಾಹಿನಿ ಮಂಜೇಶ್ವರ

ಹಲ್ಲೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಆರೋಪಿ ಯೋರ್ವ ನನ್ನು ಮಂಜೇಶ್ವರ ಠಾಣಾ ಪೊಲೀಸರು ಬಂಧಿಸಿದ್ದಾರೆ. ಮಚ್ಚಂಪಾಡಿಯ ಅಬ್ದುಲ್ ಜಬ್ಬಾರ್ (37) ಬಂಧಿತ ಆರೋಪಿ. ಪಾವೂರು ಕೋಡಿ ಮನೆಯ ಅಬ್ದುಲ್ ಖಾದರ್ (35) ಮತ್ತು ಮಹಮ್ಮದ್ ಜಾಫರ್ (31) ರವರ ಮೇಲೆ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಈತನನ್ನು ಬಂಧಿಸಲಾಗಿದೆ. ಈತನಲ್ಲದೆ ಹೊಸಂಗಡಿ ಯಾಕೂಬ್, ಮುಬಾರಕ್ ಮತ್ತು ಅಶ್ರಫ್ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿ ಕೊಂಡಿದ್ದಾರೆ. ಮಚ್ಚಂಪಾಡಿಯಲ್ಲಿ ಕಾರಿಗೆ ಸೈಡ್ ಕೊಡುವ. ವಿಚಾರದಲ್ಲಿ ಈ ಘಟನೆ ನಡೆದಿದೆ.

## ಕೋಟ ಪೊಲೀಸರ ಕಾರ್ಯಾಚರಣೆ ಕಳ್ಳತನ ಆರೋಪಿಯ ಬಂಧನ

• ಉದಯವಾಹಿನಿ ಉಡುಪಿ

ಶಿರಿಯಾರ ಗ್ರಾಮದ ಶಿರ್ಶ್ ಕ್ರಾಸ್ ಬಳಿ ಚೇತನ್ ದೇವಾಡಿಗ ಎಂಬವರು ನಂದಿಕೇಶ್ವರ ಫಾಸ್ಟ್ ಫುಡ್ ಎಂಬ ಅಂಗಡಿಯನ್ನು ನಡೆಸಿಕೊಂಡಿದ್ದು ದಿನಾಂಕ 14.05.2025 ರಂದು ರಾತ್ರಿ 09.30 ಗಂಟೆಗೆ ಅಂಗಡಿಯನ್ನು ಬೀಗ ಹಾಕಿ ಮನೆಗೆ ಹೋಗಿದ್ದು ದಿನಾಂಕ 15.05.2025 ರಂದು ಬೆಳಿಗ್ಗೆ 08.30 ಗಂಟೆಗೆ ಅಂಗಡಿಗೆ ಬಂದು ನೋಡಿದಾಗ ಯಾರೋ ಕಳ್ಳರು ಅಂಗಡಿಯ ಹಿಂಬದಿಯ ಸೀಟನ್ನು ಕತ್ತರಿಸಿ ಅಂಗಡಿಯ ಒಳಗಿದ್ದ ಸ್ವತ್ತುಗಳನ್ನು ಕಳವು ಮಾಡಿಕೊಂಡು ಹೋಗಿದ ಬಗ್ಗೆ ದೂರು ನೀಡಿದ್ದು ಈ ಬಗ್ಗೆ ಕೋಟ ಪೊಲೀಸ್ ಠಾಣೆಯಲ್ಲಿ ಅ. ಕ್ರ. 97/25 ಕಲಂ 305,331(4) ಬಿ.ಎನ್.ಎಸ್ ರಂತೆ ಪ್ರಕರಣ ದಾಖಲಾಗಿರುತ್ತದೆ.

ಪೊಲೀಸ್ ಉಪಾಧೀಕ್ಷಕರಾದ ಶ್ರೀ ಪ್ರಭು ಡಿ.ಟಿ. ಹಾಗೂ ಬ್ರಹ್ಮಾವರ ವೃತ್ತ ನಿರೀಕ್ಷಕರಾದ ಶ್ರೀ ಗೋಪಿಕೃಷ್ಣ ರವರ ಇವರ ಮಾರ್ಗದರ್ಶನದಲ್ಲಿ ಕೋಟಾ ಪೊಲೀಸ್ ಠಾಣೆಯ ಪೊಲೀಸ್ ಉಪ-ನಿರೀಕ್ಷಕರಾದ ರಾಘವೇಂದ್ರ ಸಿ. ಪಿ.ಎಸ್.ಐ.(ಕಾಸು.) ಸುಧಾಪ್ರಭು, ಪಿ.ಎಸ್.ಐ. ( ತನಿಖೆ) ಸಿಬ್ಬಂದಿಗಳಾದ ಕೃಷ್ಣ ಶೇರೆಗಾರ, ವಿಜಯೇಂದ್ರ, ದುಂಡಪ್ಪ ರವರು ಕಾರ್ಯಾಚರಣೆಯಲ್ಲಿ ಪಾಲ್ಗೊಂಡು ಪ್ರಕರಣದ ಆರೋಪಿಯಾದ ರಾಕೇಶ್ ಎಂಬಾತನನ್ನು ದಸ್ತಗಿರಿಗೊಳಿಸಿ, ಆತನಿಂದ ಸುಮಾರು 70,000/- ಮೌಲ್ಯದ ಸ್ವತ್ತುಗಳನ್ನು ವಶಪಡಿಸಿಕೊಳ್ಳಲಾಗಿರುತ್ತದೆ.

## ಶ್ರೀಮಂತ ದೇಗುಲಗಳಿಂದ ಸಿ ಗ್ರೇಡ್ ದೇವಸ್ಥಾನ ಅಭಿವೃದ್ಧಿಗೆ ಆದ್ಯತೆ

• ಉದಯವಾಹಿನಿ ಸುಬ್ರಹ್ಮಣ್ಯ

ಕುಕ್ಕೆ ಸುಬ್ರಹ್ಮಣ್ಯದಂತಹ ಶ್ರೀಮಂತ ದೇವಸ್ಥಾನಗಳ ಅನುದಾನದಲ್ಲಿ ಸಿ ಗ್ರೇಡ್ ದೇವಸ್ಥಾನಗಳ ಅಭಿವೃದ್ಧಿ ನಡೆಸಲು ಆದ್ಯತೆ ನೀಡಲಾಗುವುದು ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗ ರೆಡ್ಡಿ ಹೇಳಿದ್ದಾರೆ. ಕುಕ್ಕೆ ಸುಬ್ರಹ್ಮಣ್ಯದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಸಚಿವರು, ಎ, ಬಿ ಗ್ರೇಡ್ ದೇವಸ್ಥಾನಗಳ ಅಭಿವೃದ್ಧಿ ಆಯಾ ದೇವಸ್ಥಾನಗಳಲ್ಲಿ ಅನುದಾನ ಲಭ್ಯವಿರುತ್ತದೆ. ಆದರೆ ಸಿ ಗ್ರೇಡ್ ದೇವಸ್ಥಾನಗಳಲ್ಲಿ ಅನುದಾನ ಇಲ್ಲದೇ ಇರುವುದರಿಂದ ಸಿ ಗ್ರೇಡ್ ದೇವಸ್ಥಾನಗಳ ಅಭಿವೃದ್ಧಿಯನ್ನು ಶ್ರೀಮಂತ ದೇವಸ್ಥಾನಗಳ ವತಿಯಿಂದ ನಡೆಸಲು ಆದ್ಯತೆ ನೀಡಲಾಗುವುದು ಎಂದರು.

ಕುಕ್ಕೆ ಸುಬ್ರಹ್ಮಣ್ಯ ಕ್ಷೇತ್ರದಲ್ಲಿ ಎಲ್ಲಾ ರೀತಿಯ ಅಭಿವೃದ್ಧಿ ಕೆಲಸ ಮಾಡಲಾಗುವುದು. ಕುಕ್ಕೆ ಸುಬ್ರಹ್ಮಣ್ಯಕ್ಕೆ ಪ್ರಾಧಿಕಾರ ಆಗಬೇಕೆಂಬ ಬೇಡಿಕೆ ಇದೆ. ಈಗ ಸಮಿತಿ ಇರುವುದರಿಂದ ಮುಂದಿನ ಮೂರು ವರ್ಷದವರೆಗೆ ಪ್ರಾಧಿಕಾರ ಮಾಡುವುದಿಲ್ಲ, ಆ ಬಳಿಕ ಯೋಚನೆ ಮಾಡೋಣ ಎಂದರು.

**ಬಸ್ ಸಮಸ್ಯೆ ಪರಿಹಾರಕ್ಕೆ ಕ್ರಮ:** ಈ ಹಿಂದೆ ನಾಲ್ಕು ವರ್ಷ ಬಿಎಂಟಿಸಿಗೆ ಮಾತ್ರ ಬಸ್ ಖರೀದಿಸಲಾಗಿತ್ತು. ಈಗ ಬಸ್ ಖರೀದಿಸಲಾಗುತ್ತಿದೆ. ಈ ವರ್ಷ ಸುಮಾರು 800 ಬಸ್ ಕೆಎಸ್‌ಆರ್‌ಟಿಸಿಗೆ ಬರಲಿದೆ. ಇದರಲ್ಲಿ ದಕ್ಷಿಣ ಕನ್ನಡಕ್ಕೆ ಆದ್ಯತೆ ನೀಡಲಾಗುವುದು. ಚಾಲಕರ ನೇಮಕ ಮಾಡಲಾಗಿದ್ದು, 340 ಚಾಲಕರನ್ನು ಪುತ್ತೂರಿಗೆ ನೀಡಲಾಗಿದೆ. 200 ಚಾಲಕರನ್ನು ಮಂಗಳೂರಿಗೆ ನೀಡಲಾಗಿದೆ. ಬಳಿಕ ಚಾಮರಾಜನಗರ, ರಾಮನಗರ ವಿಭಾಗಕ್ಕೆ ನೀಡಲಾಗಿದೆ. 2000 ಚಾಲಕರಲ್ಲಿ 1 ಸಾವಿರ ಚಾಲಕರನ್ನು ಈ ನಾಲ್ಕು ವಿಭಾಗಕ್ಕೆ ನೀಡಲಾಗಿದೆ ಎಂದರು.


☛ ಉದಯವಾಹಿನಿ ಚಿತ್ರ

ಕೇಂದ್ರದ ಪ್ರಸಾದ ಯೋಜನೆಗೆ ರಾಜ್ಯದ 54 ದೇವಸ್ಥಾನಗಳ ಪಟ್ಟಿ ಕಳುಹಿಲಾಗಿದೆ. ಪ್ರಸಾದ ಯೋಜನೆ ದೇಶಾದ್ಯಂತ ನಡೆಲಾಗುತ್ತಿದ್ದು, ಇದರಲ್ಲಿ ರಾಜ್ಯದ ನಾಲ್ಕು ದೇವಸ್ಥಾನಕ್ಕೆ ಅನುದಾನ ಬಂದಿದೆ. ಮೈಸೂರಿಗೆ 30 ಕೋಟಿ, ರೇಣುಕಾ ಯಲ್ಲಮ್ಮ ದೇವಸ್ಥಾನಕ್ಕೆ 34 ಕೋಟಿ, ಇತರೆ ಎರಡು ದೇವಸ್ಥಾನಕ್ಕೆ 15 ಲಕ್ಷ ಬಂದಿದೆ ಎಂದರು. -ರಾಮಲಿಂಗ ರೆಡ್ಡಿ

### ಸುಸಜ್ಜಿತ ಆಸ್ಪತ್ರೆ ಬೇಡಿಕೆ

ಮಂಗಳೂರು ವಿಮಾನ ನಿಲ್ದಾಣದಿಂದ ಕುಕ್ಕೆಗೆ ಒಂದೆರಡು ತಿಂಗಳಲ್ಲಿ ಮೂರು ಬಸ್‌ಗಳ ವ್ಯವಸ್ಥೆ ಮಾಡಲಾಗುವುದು. ಶಾಲಾ-ಕಾಲೇಜು ಮಕ್ಕಳಿಗೆ ಬಸ್ ನಿಲ್ಲಿಸದೇ ಇದ್ದಲ್ಲಿ ದೂರು ನೀಡಿ ಎಂದು ಸಚಿವರು ಪ್ರಶ್ನೆಗೆ ಉತ್ತರಿಸಿದರು. ಕುಕ್ಕೆಯಲ್ಲಿ ಸುಸಜ್ಜಿತ ಆಸ್ಪತ್ರೆ ಬೇಡಿಕೆ ಇದೆ. ತಕ್ಷಣಕ್ಕೆ ನಮಗೆ ದೇವಸ್ಥಾನದ ಆಸು-ಪಾಸಿನಲ್ಲಿ ಜಾಗ ಕೊಟ್ಟಲ್ಲಿ 24 ಗಂಟೆ ಆರೋಗ್ಯ ಸೇವೆ ನೀಡುವ ಕೇಂದ್ರ ಮಾಡುತ್ತೇವೆ. ಈ ಬಗ್ಗೆ ಆರೋಗ್ಯ ಸಚಿವರಲ್ಲಿ ಮಾತನಾಡುತ್ತೇನೆ ಎಂದರು.

## ಗ್ರಾಮಾಡಳಿತ ಅಧಿಕಾರಿಗಳಿಗೆ ಕ್ರೋಮ್ ಬುಕ್ ವಿತರಿಸಿದ ಸಚಿವ ಶಿವಾನಂದ

• ಉದಯವಾಹಿನಿ ವಿಜಯಪುರ

ಕಂದಾಯ ಇಲಾಖೆಯ ಆಯುಕ್ತಾಲಯ ತನ್ನ ಇಲಾಖೆಯಲ್ಲಿ ಡಿಜಿಟಲ್ ಆಡಳಿತಕ್ಕಾಗಿ ನೀಡಿರುವ ಕ್ರೋಮ್ ಬುಕ್‌ಗಳನ್ನು ಜವಳಿ, ಕೃಷಿ ಮಾರುಕಟ್ಟೆ, ಸಕ್ಕರೆ ಮತ್ತು ಕಬ್ಬು ಅಭಿವೃದ್ಧಿ ಸಚಿವರಾದ ಶಿವಾನಂದ ಪಾಟೀಲ ಅವರು ಗ್ರಾಮ ಆಡಳಿತಾಧಿಕಾರಿಗಳಿಗೆ ವಿತರಿಸಿದರು. ತಾವು ಪ್ರತಿನಿಧಿಸುವ ಬಸವನಬಾಗೇವಾಡಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ನಿಡಗುಂದಿ ಹಾಗೂ ಕೊಲ್ಹಾರ ತಾಲ್ಲೂಕಗಳ ಗ್ರಾಮ ಆಡಳಿತಾಧಿಕಾರಿಗಳಿಗೆ ನಗರದಲ್ಲಿರುವ ಗೃಹ ಕಛೇರಿಯಲ್ಲಿ ಕ್ರೋಬ್ ಬುಕ್ ವಿತರಿಸಿದರು.


☛ ಉದಯವಾಹಿನಿ ಚಿತ್ರ

## ವೈದ್ಯರು ರೋಗ ನಿವಾರಣೆಗೆ ತಮ್ಮ ಜೀವನ ಸಮರ್ಪಣೆ

• ಉದಯವಾಹಿನಿ ಇಂಡಿ

ಸಮಾಜದ ಸ್ವಾಸ್ಥವನ್ನು ಕಾಪಾಡುವಲ್ಲಿ ವೈದ್ಯರ ಪಾತ್ರವು ಅತ್ಯಂತ ಮಹತ್ವವಾದುದು. ರೋಗಿಗಳ ರೋಗ ನಿವಾರಣೆಗೆಂದೇ ವೈದ್ಯರು ತಮ್ಮ ಜೀವನವನ್ನೇ ಸಮರ್ಪಿಸಿ ಕೊಳ್ಳುತ್ತಾರೆ. ವೈದ್ಯರು ರೋಗಿಗಳು ಶೀಘ್ರಗತಿಯಲ್ಲಿ ಗುಣಮುಖರಾಗಲಿ ಅವರ ಆರೋಗ್ಯ ಸುಸ್ಥಿತಿಯಲ್ಲಿರಲಿ ತನ್ಮೂಲಕ ಸಾಮಾಜಿಕ ಜೀವನ ಗುಣಮೌಲ್ಯವು ಉತ್ತಮಗೊಳ್ಳಲಿ ಶ್ರಮಿಸುತ್ತಾರೆ ಎಂದು ಭಾರತೀಯ ಸ್ಟೇಟ್ ಬ್ಯಾಂಕ ಆಫ್ ಇಂಡಿಯಾ ಮುಖ್ಯ ಪ್ರಬಂಧಕ ಸುನೀಲ ಪರಿಮಳ ಹೇಳಿದರು.

ಪಟ್ಟಣದ ಭಾರತೀಯ ಸ್ಟೇಟ್ ಬ್ಯಾಂಕ ಆವರಣದಲ್ಲಿ ಬ್ಯಾಂಕಿನ 70 ನೆಯ ವರ್ಷದ ದಿನಾಚರಣೆ ನಿಮಿತ್ಯ ಮತ್ತು ವೈದ್ಯ ದಿನಾಚರಣೆ ನಿಮಿತ್ಯ ವೈದ್ಯರಿಗೆ ಸನ್ಮಾನಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು. ವೈದ್ಯೋ ನಾರಾಯಣ ಹರಿ ಎಂದು ವೈದ್ಯರನ್ನು ಪೂಜಿಸಲಾಗುತ್ತಿದೆ. ಆಧುನಿಕತೆ ಬೆಳೆದಂತೆ ಅನೇಕ ರೋಗಗಳು ಹುಟ್ಟಿಕೊಳ್ಳುತ್ತವೆ. ನಿತ್ಯ ರೋಗಿಗಳ ಸೇವೆಯ ಕಾಯಕದಲ್ಲಿ ತೊಡಗಿರುವ ವೈದ್ಯರ ಸೇವೆ ನಿತ್ಯ ಸ್ಮರಣೀಯ ಎಂದರು.


☛ ಉದಯವಾಹಿನಿ ಚಿತ್ರ

ಭಾರತೀಯ ಸ್ಟೇಟ್ ಬ್ಯಾಂಕು ಎಲ್ಲಾ ರೀತಿಯ ಸಾಲ ನಿಡುತ್ತಿದ್ದು ರೈತರಿಗೆ, ನೌಕರಸ್ಥರಿಗೆ ಮನೆ ಕಟ್ಟಲು, ಬಂಗಾರದ ಮೇಲೆ , ಶಿಕ್ಷಣಕ್ಕೆ ಸೇರಿದಂತೆ ಎಲ್ಲಾ ರೀತಿಯ ಸಾಲ ನೀಡುವಲ್ಲಿ ಮುಂಚುಣಿಯಲ್ಲಿದೆ ಎಂದರು.

ವೈದ್ಯರಾದ ಡಾ|| ಅನೀಲ ವಾಲಿ, ಪರಮಾನಂದ ಬಿರಾದಾರ, ಪ್ರವೀಣ ಗಜಾಕೋಶ,ಡಾ|| ಕದಮ್, ಡಾ|| ವಿಪುಲ ಕೋಳೆಕರ ಮತ್ತು ಕಿರಣ ಗಜಾಕೋಶ ಇವರನ್ನು ಸನ್ಮಾನಿಸಲಾಯಿತು. ಬ್ಯಾಂಕಿನ ಆನಂದ ಮ್ಯಾಕೇರಿ, ಪ್ರಕಾಶ ಗುಜ್ಜಲಕರ, ಸತೀಶ ಬಿ, ಅಜಯ ಯರಮತ್ತು. ಶ್ರೀಮತಿ ಚೇತನಾ ಸದ್ಲಾಪುರ, ಆದರ್ಶ ಸಾಲಿಮಠ, ರವಿ ಪಾಟೀಲ, ಅಕ್ಷಯ ಹಾದಿಮನಿ ಮತ್ತಿತರಿದ್ದರು.

## ಮೋದಿಯವರೇ ನಮಗೆ ಪ್ರೇರಣೆ : ಎ.ಎಸ್. ಪಾಟೀಲ್ ನಡಹಳ್ಳಿ

● ಬಿಜೆಪಿ ಮಂಡಲದಿಂದ ವೈದ್ಯ ಮತ್ತು ಪತ್ರಿಕಾ ದಿನಾಚರಣೆ ಸನ್ಮಾನ ಸಮಾರಂಭ

• ಉದಯವಾಹಿನಿ ಮುದ್ದೇಬಿಹಾಳ

ವೈದ್ಯೋ ನಾರಾಯಣ ಹರಿ ಎಂಬ ಶ್ಲೋಕದಂತೆ, ವೈದ್ಯರ ಸೇವೆ ದೇವಸಮಾನವಾದದ್ದು. ಪತ್ರಕರ್ತರು ಮತ್ತು ವೈದ್ಯರು ಸಮಾಜದ ನಡಿಗೆಗೆ ದಿಕ್ಕು ನೀಡುವ ದೀಪಗಳು. ಇಂದಿನ ಯುವ ವೈದ್ಯರು ಕೂಡ ಆರ್. ಆರ್. ಪದಕಿಯವರ ಸೇವಾ ಮನೋಭಾವದಿಂದ ಪ್ರೇರಿತರಾಗಿ ಸಮಾಜ ಸೇವೆಯಲ್ಲಿ ತೊಡಗಬೇಕು ಎಂದು ಮಾಜಿ ಶಾಸಕ ಎ.ಎಸ್. ಪಾಟೀಲ್ ನಡಹಳ್ಳಿ ಹೇಳಿದರು. ಸಮಂಗಳವಾರ ನಡಹಳ್ಳಿ ಅವರ ತೋಟದ ಮನೆಯಲ್ಲಿ ಬಿಜೆಪಿ ಮಂಡಲದ ವತಿಯಿಂದ ರಾಷ್ಟ್ರೀಯ ವೈದ್ಯ ದಿನಾಚರಣೆ ಮತ್ತು ಪತ್ರಿಕಾ ದಿನಾಚರಣೆ ಅಂಗವಾಗಿ ನಡೆದ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

''ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಎಲ್ಲಾ ಕ್ಷೇತ್ರದ ವ್ಯಕ್ತಿಗಳನ್ನು ಗುರುತಿಸಿ ಗೌರವಿಸುವ ಮೂಲಕ ಸಮಾಜದ ಎಲ್ಲ ವರ್ಗಕ್ಕೆ ಪ್ರೇರಣೆಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರೇ ನಮಗೆ ಮಾದರಿ, ಎಂದರು ವೈದ್ಯಕೀಯ ವೃತ್ತಿ ಪವಿತ್ರವಾಗಿದ್ದು, ಸೇವೆಯ ಮನೋಭಾವದಿಂದ ಜನತೆಗೆ ಲಾಭವಾಗುವಂತೆ ಕೆಲಸ ಮಾಡಬೇಕೆಂದರು. ರಾಜಕೀಯ ಮತ್ತು ಮಾಧ್ಯಮದ ಬಾಂಧವ್ಯ ಗಂಡ ಹೆಂಡತಿಯಂತೆ ಒಂದಿಲ್ಲದೇ ಇನ್ನೊಂದಿಲ್ಲವೆಂದರು


☛ ಉದಯವಾಹಿನಿ ಚಿತ್ರ

ಹಿರಿಯ ವೈದ್ಯ ಎಸ್.ಬಿ. ನಾಗೂರ ಹಾಗೂ ಹಿರಿಯ ಪತ್ರಕರ್ತ ಡಿ.ಬಿ. ವಡವಡಗಿ ಮಾತನಾಡಿ, ವೈದ್ಯರು ಮತ್ತು ಪತ್ರಕರ್ತರು ಸಮಾಜವನ್ನು ಸರಿಯಾದ ದಿಕ್ಕಿನಲ್ಲಿ ನಡೆಸುವ ದಾರಿದೀಪಗಳಾಗಿದ್ದಾರೆ ಎಂದು ಹೇಳಿದರು. ಬಿಜೆಪಿ ಹಿರಿಯ ಮುಖಂಡ ಎಂ ಎಸ್ ಪಾಟೀಲ್ ,ವೈದ್ಯಕೀಯ ಪ್ರಕೋಷ್ಠದ ಜಿಲ್ಲಾ ಸಂಚಾಲಕ ಡಾ.ವಿರೇಶ ಪಾಟೀಲ್ ಮಾತನಾಡಿದರು. ಸನ್ಮಾನ ಕಾರ್ಯಕ್ರಮದಲ್ಲಿ ಪಟ್ಟಣದ ಎಲ್ಲಾ ವೈದ್ಯರು ಹಾಗೂ ಪತ್ರಕರ್ತರನ್ನು ಗೌರವಿಸಲಾಯಿತು.

### ಆಕ್ಸಿಜನ್ ಪಾರ್ಕ್ ಕನಸು ನನಸಾಗಲಿದೆ

ಮುದ್ದೇಬಿಹಾಳ ಪಟ್ಟಣದಲ್ಲಿ ಇರುವ 62 ಉದ್ಯಾನವನಗಳನ್ನು ಆಕ್ಸಿಜನ್ ಪಾರ್ಕ್ ಆಗಿ ಪರಿವರ್ತನೆಗೊಳಿಸುವ ಕನಸು ನನಸಾಗಲಿದೆ. ಜಾಗತಿಕವಾಗಿ ಎದುರಾಗುತ್ತಿರುವ ಕಾರ್ಬನ್ ಡೈಆಕ್ಸೈಡ್ ಸಮಸ್ಯೆಗೆ ಪರಿಹಾರವಾಗಿ ಈ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ಈ ದೃಷ್ಟಿಯಿಂದ ನನ್ನ ತೋಟದ 3 ಎಕರೆ ಜಾಗದಲ್ಲಿ ಮಾದರಿ ಆಕ್ಸಿಜನ್ ಪಾರ್ಕ್ ನಿರ್ಮಿಸಲಾಗುತ್ತದೆ ಎಂದು ಎ.ಎಸ್. ಪಾಟೀಲ್ ನಡಹಳ್ಳಿ ಹೇಳಿದರು.

ಡಾ. ರಾಜೇಶ್ವರಿ ಗೂಳಿ ಪ್ರಾರ್ಥನೆ ಸಲ್ಲಿಸಿದರು, ಡಾ. ಸಿ.ಕೆ. ಶಿವಯೋಗಿಮಠ ಸ್ವಾಗತ ಭಾಷಣ ಮಾಡಿದರು, ಡಾ. ರೇವಣಸಿದ್ದಪ್ಪ ಮಸೂತಿ ನಿರೂಪಿಸಿ ವಂದಿಸಿದರು. ಬಿಜೆಪಿ ಮುಖಂಡ ಎಂ.ಎಸ್. ಪಾಟೀಲ್, ಜಿಲ್ಲಾ ವೈದ್ಯಕೀಯ ಪ್ರಕೋಷ್ಟ ಸಂಚಾಲಕ ಡಾ. ವಿರೇಶ ಪಾಟೀಲ್, ಹಾಗೂ ಇತರ ಮುಖಂಡರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ತಾಲ್ಲೂಕು ವೈದ್ಯಾಧಿಕಾರಿ ಡಾ. ಸತೀಶ್ ತಿವಾರಿ, ಆಡಳಿತ ವೈದ್ಯಾಧಿಕಾರಿ ಡಾ. ಅನಿಲ್ ಶೇಗುಣಸಿ, ಪಟ್ಟಣದ ವಿವಿಧ ವೈದ್ಯರು, ದಂಪತಿಗಳು, ಹಾಗೂ ನಾನಾ ಗ್ರಾಮೀಣ ಪ್ರದೇಶಗಳ ಪತ್ರಕರ್ತರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಸನ್ಮಾನ ಸ್ವೀಕರಿಸಿದರು. ರಾಷ್ಟ್ರೀಯ ವೈದ್ಯರು, ಪತ್ರಿಕಾ ದಿನಾಚರಣೆ ಅಂಗವಾಗಿ ನಡಹಳ್ಳಿ ಅವರ ತೋಟದ ಮನೆಅಂಗಳದಲ್ಲಿ ನೆರಳೆ ಹಣ್ಣಿನ ಸಸಿಯನ್ನು ನಡೆಸಿ ನೀರೆರೆಯಲಾಯಿತು.

## ಶತಮಾನದ ಸೇತುವೆ ಮೇಲೆ ಬೆಳೆದ ಕಂಟಿ ತೆರವು

● ಅಳಿವಿನಂಚಿನಲಿದ್ದ ಸೇತುವ ಕ್ಲೀನ್: ಉಮೇಶ್ ಮುದ್ನಾಳ್ ಹರ್ಷ

• ಉದಯವಾಹಿನಿ ಯಾದಗಿರಿ

ನಗರದ ಹೊರವಲಯದ ಭೀಮಾನದಿ ಸೇತುವೆ ಮೇಲೆ ಗಿಡಗಂಟಿ ಬೆಳೆದು ಬ್ರಿಡ್ಜ್ ಹಾಳಾಗಿತ್ತು. ನಿಜಾಮರು ಕಟ್ಟಿರುವ ಭೀಮಾ ಬ್ರಿಡ್ಜ್ ದುರಸ್ತಿಗೊಳಿಸಿ ಅಂತ ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಉಮೇಶ್ ಮುದ್ನಾಳ್ ಹೋರಾಟ ನಡೆಸಿದರು.

ಉಮೇಶ್ ಮುದ್ನಾಳ್ ಅವರ ಹೋರಾಟದ ಬೆನ್ನಲ್ಲೇ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಎಚ್ಚೆತ್ತಿದ್ದು, ಭೀಮಾ ಬ್ರಿಡ್ಜ್ ಮೇಲಿನ ಕಂಟಿ ತೆರವು ಮಾಡಿದ್ದಾರೆ. ಇದು ಒಳ್ಳೆಯ ಬೆಳವಣಿಗೆ ಆದರೆ ಕಟಿಂಗ್ ಮಾಡಿರುವ ಜಾಗೆಯಲ್ಲಿ ಕೆಮಿಕಲ್ ಹಾಕಬೇಕು. ಕೆಮಿಕಲ್ ಹಾಕಿ ಮತ್ತೆ ಕಂಟಿ ಬೆಳೆಯದ ಹಾಗೆ ಕ್ರಮ ವಹಿಸಬೇಕು ಅಂತ ಆಗ್ರಹಿದ್ದಾರೆ. ಜಿಲ್ಲಾಡಳಿತ, ಕೇಂದ್ರ ಹಾಗೂ ರಾಜ್ಯ ಸರ್ಕಾರ ಹೆಚ್ಚಿನ ಹೊಸ ಭೀಮಾ ಸೇತುವೆಗೆ ನಿರ್ಮಾಣಕ್ಕೆ ಅನುದಾನ ನೀಡುವಂತೆ ಪ್ರಸ್ತಾವನೆ ಸಲ್ಲಿಸುವಂತೆ ಆಗ್ರಹಿದ್ದಾರೆ.



☛ ಉದಯವಾಹಿನಿ ಚಿತ್ರ

## ಕುಣಿ ಮುಚ್ಚುವ ಕಾರ್ಯ ಆರಂಭ

• ಉದಯವಾಹಿನಿ ಬಳ್ಳಾರಿ

ನಗರದ ರಸ್ತೆಗಳಲ್ಲಿ ಉಂಟಾಗಿದ್ದ ಕುಣಿಗಳನ್ನು ಡಾಂಬರೀಕರಣ ಮಾಡುವ ಮೂಲಕ ಮುಚ್ಚುವ ಕಾರ್ಯ ಮಹಾ ನಗರ ಪಾಲಿಕೆಯಿಂದ ಆರಂಭಗೊಂಡಿದೆ. ನಗರದ ರಸ್ತೆಗಳಲ್ಲಿನ ಗುಂಡಿಗಳನ್ನು ಮುಚ್ಚಲೆಂದು ಪಾಲಿಕೆ ಇತ್ತೀಚೆಗೆ ನಡೆದ ಸಾಮಾನ್ಯ ಸಭೆಯಲ್ಲಿ 40 ಲಕ್ಷ ರೂ ಗಳನ್ನು ತೆಗೆದಿರಿಸಿತ್ತು. ಒಂದೋ, ಎರಡೋ ಯಂತ್ರಗಳಿಂದ ಕುಣಿ ಮುಚ್ಚುತ್ತಾ ಸಾಗಿದರೆ ನಗರದ ಎಲ್ಲಾ ರಸ್ತೆಗಳ ಕುಣಿಮುಚ್ಚಲು ತಿಂಗಳು ಸಾಕಾಗುವುದಿಲ್ಲ.

ಇನ್ನು ಕಾಮಗಾರಿ ಗುಣಮಟ್ಟದಿಂದ ಮಾಡದೇ ಹೋದರೆ. ಒಂದು ಕಡೆ ಮುಚ್ಚುತ್ತಾ ಹೋದರೆ ಮತ್ತೊಂದು ಕಡೆ ಮತ್ತೆ ಗುಮನಡಿ ಬೀಳುತ್ತಾ ಸಾಗುತ್ತವೆ. ನಗರದ ಕೆ.ಸಿ.ರಸ್ತೆಯಲ್ಲಿ ಹೆಚ್ಚಿನ ಮಟ್ಟದಲ್ಲಿ ಕುಣಿಗಳು ಬಿದ್ದಿದ್ದು ರಸ್ತೆ ಹಾಳಾಗಿ ವಾಹನಗಳ ಸಂಚಾರಕ್ಕೆ ತೀವ್ರ ಸಮಸ್ಯೆಯಾಗುತ್ತಿದೆ. ಇಲ್ಲಿ ಆದ್ಯತೆಯ ಮೇಲೆ ಕೆಲಸ ತೆಗೆದುಕೊಳ್ಳಬೇಕಾಗುತ್ತದೆ.


☛ ಉದಯವಾಹಿನಿ ಚಿತ್ರ

## ನ್ಯಾಯವಾದಿ ಮಹ್ಮದಗೌಸ ಹವಾಲ್ದಾರಗೆ ಬಸವ ಚೇತನ ಪ್ರಶಸ್ತಿ

• ಉದಯವಾಹಿನಿ ವಿಜಯಪುರ

ಅಮ್ಮ ಫೌಂಡೇಶನ್ ವಿಜಯಪುರ ಇವರು ಕೊಡಮಾಡುವ 2025ನೇ ಸಾಲಿನ ರಾಜ್ಯ ಮಟ್ಟದ ಬಸವ ಚೇತನ ಪ್ರಶಸ್ತಿಗೆ ಯುವ ಮುಖಂಡ ಶ್ರೀ ಮಹ್ಮದಗೌಸ ಹವಾಲ್ದಾರ ಅವರು ಭಾಜನರಾಗಿದ್ದಾರೆ,

ಕೊಲ್ಹಾರ ತಾಲ್ಲೂಕಿನ ಹಳ್ಳದಗೆಣ್ಣೂರ ಗ್ರಾಮದ ರೈತಾಪಿ ಕುಟುಂಬದಲ್ಲಿ ಜನಿಸಿದ ಶ್ರೀಯುತ ಮಹ್ಮದಗೌಸ ಹವಾಲ್ದಾರ ಅವರು ಅನೇಕ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತ ವಿಜಯಪುರ ಜಿಲ್ಲೆಯಾದ್ಯಂತ ತಮ್ಮದೇ ಆದ ಛಾಪನ್ನು ಮೂಡಿಸಿದ್ದಾರೆ ಗ್ರಾಮೀಣ ಹಾಗೂ ನಗರ ಭಾಗದಲ್ಲಿ ನಡೆಯುವ ಸಾಂಸ್ಕೃತಿಕ, ಕ್ರೀಡೆ, ಸಾಮಾಜಿಕ, ಕನ್ನಡ ಪರ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ಪ್ರೋತ್ಸಾಹಿಸಿ ಸಹಾಯ ಹಸ್ತವನ್ನು ಚಾಚಿದ್ದಾರೆ,

ಶೀಯುತರ ಸಮಾಜ ಸೇವೆಯನ್ನು ಗುರುತಿಸಿ ಜುಲೈ 6ರಂದು ವಿಜಯಪುರದ ಕಂದಗಲ ಹನುಮಂತರಾಯ ರಂಗ ಮಂದಿರದಲ್ಲಿ ಜರಗುವ ರಾಜ್ಯ ಮಟ್ಟದ ಬಸವ ಸಂಸ್ಕೃತಿ ಉತ್ಸವದಲ್ಲಿ ನಾಡಿನ ಖ್ಯಾತ ಸಾಹಿತಿಗಳ, ಗಣ್ಯರ, ರಾಜಕೀಯ ಮುಖಂಡರ ಸಮ್ಮುಖದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ.



# ಜೆಡಿಎಸ್ ತಾಲ್ಲೂಕು ಘಟಕಕ್ಕೆ ನೂತನ ಪದಾಧಿಕಾರಿಗಳ ನೇಮಕ

ಪಕ್ಷ ಸಂಘಟನೆಯ ಮೂಲಕ ಜನತೆಯ ಹಕ್ಕು ಮತ್ತು ನ್ಯಾಯಕ್ಕಾಗಿ ಹೋರಾಟ ಮುಂದುವರಿಸಲಾಗುವುದು: ಬಸನಗೌಡ ಮಾಡಗಿ

• ಉದಯವಾಹಿನಿ ಮುದ್ದೇಬಿಹಾಳ

ನಾಗರಬೆಟ್ಟ ಏತ ನೀರಾವರಿ ಯೋಜನೆಯ ಪ್ರಾಥಮಿಕ ಹಂತದ ಪಂಪ್ ಹಂತದ ಕೆಲಸಗಳು ಪೂರ್ಣಗೊಂಡಿದ್ದರೂ, ನೀರಿಗಾಗಿ ಕಾಲುವೆ ನಿರ್ಮಾಣವಿಲ್ಲದೆ 150 ಕೋಟಿ ರೂ. ವ್ಯಯಿಸಿ ಬೇರೆಯೇ ರೀತಿಯ ಅವ್ಯವಸ್ಥೆ ಉಂಟಾಗಿದೆ ಎಂದು ಜೆಡಿಎಸ್ ಮುಖಂಡ ಬಿ.ಬಿ. ಪಾಟೀಲ ಹಿರೇಮುರಾಳ ದೂರಿದ್ದಾರೆ.

ತಾಲ್ಲೂಕು ಜೆಡಿಎಸ್ ಘಟಕದ ವತಿಯಿಂದ ದಿ. ಬಾಗವಾನ ಬ್ಯಾಂಕ್ ಸಭಾಭವನದಲ್ಲಿ ಸೋಮವಾರ ಆಯೋಜಿಸಿದ್ದ ಕಾರ್ಯಕರ್ತರ ಸಮಾವೇಶ ಹಾಗೂ ನೂತನ ಪದಾಧಿಕಾರಿಗಳಿಗೆ ಆದೇಶ ಪತ್ರ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ನದಿಯಲ್ಲಿ ನೀರಿದೆ, ಆದರೆ ಕಾಲುವೆ ಇಲ್ಲದೆ ರೈತರಿಗೆ ನೀರು ತಲುಪುತ್ತಿಲ್ಲ. ಭೂಮಿ ಅಗೆದು ಪರಿಹಾರ ನೀಡದ ಕಾರಣ ರೈತರು ಸಹಕಾರ ನೀಡುತ್ತಿಲ್ಲ'' ಎಂದು ವಿಷಾದ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಾವಡೆಪ್ಪಗೌಡ ಹವಾಲ್ದಾರ್ ವಹಿಸಿದ್ದರು. ವೇದಿಕೆಯಲ್ಲಿ ಮುಖಂಡರಾದ ಶರಣಗೌಡ ಪಾಟೀಲ, ಸೈಯದ್ ಸುಲೇಮಾನ್ ಸಂಕನಾಳ, ಚನ್ನಣ್ಣ ಅಲದಿ, ರಾಜೇಸಾಬ ಬಾಗಲಕೋಟ ಸೇರಿ ಹಲವರು ಉಪಸ್ಥಿತರಿದ್ದರು.

**ಜೆಡಿಎಸ್ ಸೇರಲು ಅವಕಾಶ:** ಪಕ್ಷಕ್ಕೆ ಸೇರುವ ಆಸಕ್ತರು 9964002028 ಸಂಖ್ಯೆಗೆ ಮಿಸ್ಡ್ ಕಾಲ್ ನೀಡಬಹುದಾಗಿದೆ ಎಂದು ಜಿಲ್ಲಾ ಅಧ್ಯಕ್ಷರು ತಿಳಿಸಿದ್ದಾರೆ.

**ನಾಗರಬೆಟ್ಟ ಯೋಜನೆಯ ದುರವಸ್ಥೆ ವಿರುದ್ಧ ಕಿಡಿ**


☛ ಉದಯವಾಹಿನಿ ಚಿತ್ರ

### ಪಕ್ಷದ ನೂತನ ಪದಾಧಿಕಾರಿಗಳಿಗೆ ಆದೇಶ ಪತ್ರ ವಿತರಣೆ

ಈ ಕಾರ್ಯಕ್ರಮದಲ್ಲಿ ವಿವಿಧ ಭಾಗಗಳ ಜೆಡಿಎಸ್ ನ ನೂತನ ಪದಾಧಿಕಾರಿಗಳನ್ನು ನೇಮಿಸಿ ಅವರಿಗೆ ಆದೇಶ ಪತ್ರ, ಪಕ್ಷದ ಧ್ವಜ ಹಾಗೂ ಶಾಲು ನೀಡಿ ಸನ್ಮಾನಿಸಲಾಯಿತು.

### ಸರ್ಕಾರದ ವಿರುದ್ಧ ಆಕ್ರೋಶ

ಜೆಡಿಎಸ್ ಜಿಲ್ಲಾಧ್ಯಕ್ಷ ಬಸನಗೌಡ ಮಾಡಗಿ ಮಾತನಾಡಿ, ಸರ್ಕಾರ ರೈತರು ಮತ್ತು ಅಧಿಕಾರಿಗಳನ್ನು ದುರ್ಬಳಕೆ ಮಾಡುತ್ತಿದೆ. ಗ್ಯಾರಂಟಿ ಕಾರ್ಡ್ ಹೆಸರಿನಲ್ಲಿ ಲೂಟಿ ನಡೆಯುತ್ತಿದೆ. ಬಡವರಿಗೆ ಮನೆ ಕೊಡಿಸಿ ಲಂಚ ಪಡೆಯುತ್ತಿದ್ದಾರೆ ಎಂದು ಆರೋಪಿಸಿದರು. ಪಕ್ಷ ಸಂಘಟನೆಯ ಮೂಲಕ ಜನತೆಯ ಹಕ್ಕು ಮತ್ತು ನ್ಯಾಯಕ್ಕಾಗಿ ಹೋರಾಟ ಮುಂದುವರಿಸಲಾಗುವುದು ಎಂದು ತಿಳಿಸಿದರು.

### ನಿಯೋಜಿತರಾದವರು

- ಮೋತಿಲಾಲ ಮ್ಯಾಗೇರಿ ತಾಲ್ಲೂಕು ಜೆಡಿಎಸ್ ಪ್ರಧಾನ ಕಾರ್ಯದರ್ಶಿ
- ಸಂಗನಬಸಪ್ಪ ಡಂಬಳ ನಾಲತವಾಡ ಉಪಾಧ್ಯಕ್ಷ
- ಶಾಂತಕುಮಾರ ಹಾದಿಮನಿ ಎಸ್ಸಿ ಯುವ ಮೋರ್ಚಾ ಅಧ್ಯಕ್ಷ, ನಾಲತವಾಡ
- ಚಂದ್ರಶೇಖರ ಭಿಕ್ಷಾವತಿಮಠ ಯುವ ಘಟಕ ಅಧ್ಯಕ್ಷ, ನಾಲತವಾಡ.

ಅಮೆರಿಕನ್ ಪಾರ್ಟಿ ಸಿದ್ಧವಾಗಿದೆ ಎಂದ ಮಸ್ಕ್; ದಕ್ಷಿಣ ಆಫ್ರಿಕಾ ಹೊರಡುವ ಸಮಯ ಬಂದಿದೆ ಎಂದ ಟ್ರಂಪ್

# ಒನ್ ಬಿಗ್ ಬ್ಯೂಟಿಫುಲ್ ಬಿಲ್ ಕಾರಣಕ್ಕೆ ಟ್ರಂಪ್, ಮಸ್ಕ್ ನಡುವೆ ವಾಕ್ಸಮರ

**ವಾಷಿಂಗ್ಟನ್:** ಶ್ವೇತಭವನದ ಬೃಹತ್ ತೆರಿಗೆ, ವಲಸೆ ಕಾರ್ಯಸೂಚಿಯ ಮೇಲಿನ ಮತದಾನಕ್ಕೆ ಯುಎಸ್ ಸೆನೆಟ್ ಸಿದ್ಧಗೊಳ್ಳುತ್ತಿದ್ದಂತೇ, ಟೆಕ್ ಬಿಲಿಯನೇರ್ ಎಲೋನ್ ಮಸ್ಕ್ ಅವರು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಒನ್ ಬಿಗ್ ಬ್ಯೂಟಿಫುಲ್ ಬಿಲ್ ಬಗೆಗಿನ ತಮ್ಮ ಟೀಕೆಯನ್ನು ಮುಂದುವರೆಸಿದ್ದಾರೆ. ರಿಪಬ್ಲಿಕನ್ನರು 2017ರಲ್ಲಿ ಅಂಗೀಕರಿಸಿದ ಡೊನಾಲ್ಡ್ ಟ್ರಂಪ್ ಅವರ ತೆರಿಗೆ ಕಡಿತಗಳನ್ನು ವಿಸ್ತರಿಸುವ ಒನ್ ಬಿಗ್ ಬ್ಯೂಟಿಫುಲ್ ಬಿಲ್‌ನ್ನು ಅಂಗೀಕರಿಸಲು ಪ್ರಯತ್ನಿಸುತ್ತಿದ್ದಾರೆ. ಯುಎಸ್ ಸೆನೆಟ್ ಶಾಸಕರು ತಿದ್ದುಪಡಿ ಮತಗಳ ಮ್ಯಾರಥಾನ್ ಅಧಿವೇಶನ ನಡೆಸಿದ್ದಾರೆ.

ಆದರೆ ಎಲಾನ್ ಮಸ್ಕ್ ಈ ಮಸೂದೆ ಪರವಾಗಿ ಮತ ಚಲಾಯಿಸುವವರ ರಾಜಕೀಯ ಭವಿಷ್ಯ ಅಂಧಕಾರದಲ್ಲಿ ಮುಳುಗಲಿದೆ ಎಂದು ಎಚ್ಚರಿಸಿದ್ದಾರೆ. ಸರ್ಕಾರಿ ವೆಚ್ಚವನ್ನು ಕಡಿಮೆ ಮಾಡುವ ಬಗ್ಗೆ ಪ್ರಚಾರ ಮಾಡಿದ, ಇತಿಹಾಸದಲ್ಲಿ ಅತಿದೊಡ್ಡ ಸಾಲ ಹೆಚ್ಚಳಕ್ಕೆ ಮತ ಹಾಕಿದ ಕಾಂಗ್ರೆಸ್‌ನ ಪ್ರತಿಯೊಬ್ಬ ಸದಸ್ಯರು ನಾಚಿಕೆಯಿಂದ ತಲೆ ತಗ್ಗಿಸಬೇಕು ಎಂದು ಕಳೆದ ಮೇ ತಿಂಗಳವರೆಗೆ ಡೊನಾಲ್ಡ್ ಟ್ರಂಪ್ ಅವರ ಅಧ್ಯಕ್ಷೀಯ ಸಲಹೆಗಾರರಾಗಿದ್ದ ಎಲಾನ್ ಮಸ್ಕ್ ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಮುಂದುವರೆದು, ಈ ಭೂಮಿಯ ಮೇಲೆ ನಾನು ಮಾಡುವ ಕೊನೆಯ ಕೆಲಸವಾಗಿದ್ದರೆ, ಈ ಮಸೂದೆ ಪರವಾಗಿ ಮತ ಚಲಾಯಿಸುವ ಕಾಂಗ್ರೆಸ್ ಸದಸ್ಯರ ಪ್ರಾಥಮಿಕ ಸದಸ್ಯತ್ವವನ್ನು ಕಸಿದುಕೊಳ್ಳುವುದು ಎಂದು ಎಲಾನ್ ಮಸ್ಕ್ ತೀವ್ರ ವಾಗ್ದಾಳಿ ನಡೆಸಿದ್ದಾರೆ.



**ಮಸ್ಕ್ ತಿರುಗೇಟು**

**ಡೊನಾಲ್ಡ್ ಟ್ರಂಪ್ ಅವರ ಬೆದರಿಕೆಗೆ ತಿರುಗೇಟು ನೀಡಿರುವ ಎಲಾನ್ ಮಸ್ಕ್, ಕಂಪನಿಗಳಿಗೆ ಸಬ್ಸಿಡಿ ಕಡಿತಗೊಳಿಸುವ ಕುರಿತು ಮಾತನಾಡಿರುವ ಅಧ್ಯಕ್ಷರು, ಕೂಡಲೇ ಈ ನಿರ್ಧಾರವನ್ನು ಜಾರಿಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ. ನಾನು ಅಕ್ಷರಶಃ ಎಲ್ಲವನ್ನೂ ಕಡಿತಗೊಳಿಸಬೇಕು ಎಂದೇ ಹೇಳುತ್ತಿದ್ದೇನೆ ಎಂದು ಹೇಳುವ ಮೂಲಕ, ಎಲಾನ್ ಮಸ್ಕ್ ಅವರು ಡೊನಾಲ್ಡ್ ಟ್ರಂಪ್ ಅವರಿಗೆ ತಮ್ಮಿಬ್ಬರ ನಡುವಿನ ಗೆಳೆತನವನ್ನೂ ಕಡಿತಗೊಳಿಸಬೇಕು ಎಂದು ಪರೋಕ್ಷವಾಗಿ ಹೇಳಿದ್ದಾರೆ.**

**ಡೊನಾಲ್ಡ್ ಟ್ರಂಪ್ ಗುಡುಗು**

**ಇನ್ನು ತಮ್ಮ ಒನ್ ಬಿಗ್ ಬ್ಯೂಟಿಫುಲ್ ಬಿಲ್‌ಗೆ ವಿರೋಧ ವ್ಯಕ್ತಪಡಿಸುತ್ತಿರುವ ಎಲಾನ್ ಮಸ್ಕ್ ವಿರುದ್ಧ ಡೊನಾಲ್ಡ್ ಟ್ರಂಪ್ ಗುಡುಗಿದ್ದಾರೆ. ತಂತ್ರಜ್ಞಾನ ಉದ್ಯಮಿಗಳ ಕಂಪನಿಗಳಿಗೆ ನೀಡಲಾಗುವ ಸರ್ಕಾರಿ ಸಬ್ಸಿಡಿಗಳನ್ನು ಕಡಿತಗೊಳಿಸುವುದಾಗಿ ಡೊನಾಲ್ಡ್ ಟ್ರಂಪ್ ನೇರವಾಗಿ ಬೆದರಿಕೆ ಹಾಕಿದ್ದಾರೆ. ದಕ್ಷಿಣ ಆಫ್ರಿಕಾದಲ್ಲಿ ಜನಿಸಿದ ಎಲಾನ್ ಮಸ್ಕ್ ಅವರ ಟೆಸ್ಲಾ, ಸ್ಪೇಸ್‌ಎಕ್ಸ್‌ನಂತಹ ಕಂಪನಿಗಳಿಗೆ, ಸಬ್ಸಿಡಿಗಳನ್ನು ಕಡಿತಗೊಳಿಸಿದರೆ ಬಹುಶಃ ಅಂಗಡಿ ಮುಚ್ಚಿ ಮನೆಗೆ ಹಿಂತಿರುಗಬೇಕಾಗುತ್ತದೆ ಎಂದು ಡೊನಾಲ್ಡ್ ಟ್ರಂಪ್ ಸೂಚ್ಯವಾಗಿ ಹೇಳಿದ್ದಾರೆ. ಎಲಾನ್ ಮಸ್ಕ್ ಮರಳಿ ದಕ್ಷಿಣ ಆಫ್ರಿಕಾಗೆ ಹೋಗಬೇಕಾಗುತ್ತದೆ ಎಂಬರ್ಥದಲ್ಲಿ ಡೊನಾಲ್ಡ್ ಟ್ರಂಪ್ ಮಾತನಾಡಿರುವುದು ಇದೀಗ ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ.**

**ಹೊಸ ಪಕ್ಷದ ಬೆದರಿಕೆ:** ಶಾಸಕರು ಸೆನೆಟ್‌ನಲ್ಲಿ ಡೊನಾಲ್ಡ್ ಟ್ರಂಪ್ ಅವರ ಖರ್ಚು ಮಸೂದೆಯನ್ನು ಅಂಗೀಕರಿಸಿದರೆ, ಡೆಮೊಕ್ರೆಟಿಕ್ ಮತ್ತು ರಿಪಬ್ಲಿಕನ್ ಪಕ್ಷಗಳಿಗೆ ಪರ್ಯಾಯವಾಗಿ ಅಮೆರಿಕನ್ ಪಾರ್ಟಿ ಎಂಬ ಹೊಸ ಪಕ್ಷ ಅಮೆರಿಕದಲ್ಲಿ ಉದಯಾವಾಗಲಿದೆ ಎಂದು ಎಲಾನ್ ಮಸ್ಕ್ ಎಚ್ಚರಿಸಿದ್ದಾರೆ. ಈ ಹುಚ್ಚುತನದ ಖರ್ಚು ಮಸೂದೆ ಅಂಗೀಕಾರವಾದರೆ, ಮರುದಿನವೇ ಅಮೆರಿಕ ಪಕ್ಷ ರಚನೆಯಾಗುತ್ತದೆ. ನಮ್ಮ ದೇಶಕ್ಕೆ ಡಮೊಕ್ರಟಿಕ್ ಮತ್ತು ರಿಪಬ್ಲಿಕನ್ ಪಕ್ಷಗಳಿಗೆ ಪರ್ಯಾಯದ ರಾಜಕೀಯ ಪಕ್ಷವೊಂದರ ಅಗತ್ಯವಿದೆ. ಇದರಿಂದ ಜನರಿಗೆ ನಿಜವಾಗಿಯೂ ಧ್ವನಿ ಸಿಗುತ್ತದೆ ಎಂದು ಎಲಾನ್ ಮಸ್ಕ್ ತಮ್ಮ ಎಕ್ಸ್‌ಪೋಸ್ಟ್‌ನಲ್ಲಿ ಅಭಿಪ್ರಾಯಪಟ್ಟಿದ್ದಾರೆ.

ಅಮೆರಿಕದಲ್ಲಿ ಹೊಸ ರಾಜಕೀಯ ಪಕ್ಷ ಸ್ಥಾಪನೆ ಸಾಧ್ಯತೆ ಬಗ್ಗೆ ಮಾತನಾಡುತ್ತಿರುವ ಎಲಾನ್ ಮಸ್ಕ್, ಒನ್ ಬಿಗ್ ಬ್ಯೂಟಿಫುಲ್ ಬಿಲ್ ವಿರೋಧಿಸಿ ಡೊನಾಲ್ಡ್ ಟ್ರಂಪ್ ಅವರನ್ನು ಎದುರು ಹಾಕಿಕೊಳ್ಳಲು ತಯಾರಿ ನಡೆಸಿದ್ದಾರೆ. ಆದರೆ ಇಂತದ್ದೊಂದು ಸಾಧ್ಯತೆಯ ಬಗ್ಗೆ ಅಮೆರಿಕನ್ನರಲ್ಲಿ ಯಾವುದೇ ಭರವಸೆ ಇಲ್ಲ. ಒಟ್ಟಿನಲ್ಲಿ, ಕೆಲವೇ ತಿಂಗಳುಗಳ ಹಿಂದೆ ಗಾಢ ಸ್ನೇಹ ಹೊಂದಿದ್ದ ಡೊನಾಲ್ಡ್ ಟ್ರಂಪ್, ಎಲಾನ್ ಮಸ್ಕ್, ಒನ್ ಬಿಗ್ ಬ್ಯೂಟಿಫುಲ್ ಬಿಲ್ ಕುರಿತ ಭಿನ್ನಾಭಿಪ್ರಾಯದ ಕಾರಣಕ್ಕೆ, ಹಾವು-ಮುಂಗುಸಿಯಂತೆ ಕಚ್ಚಾಡುತ್ತಿರುವುದನ್ನು ಜಗತ್ತು ನೋಡುತ್ತಿದೆ ಎಂದು ಹೇಳಬಹುದು.

## 7 ಭಾರತೀಯ ಮೀನುಗಾರರನ್ನು ಬಂಧಿಸಿದ ಶ್ರೀಲಂಕಾ ನೌಕಾಪಡೆ

**ಕೊಲಂಬೊ:** ಶ್ರೀಲಂಕಾ ನೌಕಾಪಡೆ ಮಂಗಳವಾರ 7 ಭಾರತೀಯ ಮೀನುಗಾರರನ್ನು ಬಂಧಿಸಿ ಅವರ ದೋಣಿಗಳನ್ನು ವಶಪಡಿಸಿಕೊಂಡಿದೆ.ತಲೈಮನ್ನಾರ್ ಪ್ರದೇಶದ ಪ್ರಾದೇಶಿಕ ನೀರಿನಲ್ಲಿ ಅಕ್ರಮ ಮೀನುಗಾರಿಕೆ ಆರೋಪದ ಮೇಲೆ ಕಳದ ರಾತ್ರಿ ಬಂಧಿಸಲಾಗಿದೆ ಎಂದು ಶ್ರೀಲಂಕಾ ನೌಕಾಪಡೆಯ ವಕ್ತಾರರು ತಿಳಿಸಿದ್ದಾರೆ. ಬಂಧಿತ ಮೀನುಗಾರರು ಮತ್ತು ಅವರ ದೋಣಿಯನ್ನು ಮನ್ನಾರ್‌ನಲ್ಲಿರುವ ಮೀನುಗಾರಿಕೆ ನಿರೀಕ್ಷಕರಿಗೆ ಹಸ್ತಾಂತರಿಸಲಾಗುವುದು ಎಂದು ನೌಕಾಪಡೆ ತಿಳಿಸಿದೆ. ಭಾರತ, ಶ್ರೀಲಂಕಾ ಎರಡೂ ದೇಶಗಳ ಮೀನುಗಾರರನ್ನು ಪರಸ್ಪರರ ನೀರಿನೊಳಗೆ ಅಜಾಗರೂಕತೆಯಿಂದ ಅತಿಕ್ರಮಣ ಮಾಡಿದ್ದಕ್ಕಾಗಿ ಆಗಾಗ್ಗೆ ಬಂಧಿಸಲಾಗುತ್ತದೆ.

ಭಾರತ, ಶ್ರೀಲಂಕಾ ನಡುವಿನ ಸಂಬಂಧಗಳಲ್ಲಿ ಮೀನುಗಾರರ ವಿಷಯವು ವಿವಾದಾಸ್ಪದವಾಗಿದೆ, ಶ್ರೀಲಂಕಾ ನೌಕಾಪಡೆಯ ಸಿಬ್ಬಂದಿ ಪಾಕ್ ಜಲಸಂಧಿಯಲ್ಲಿ ಭಾರತೀಯ ಮೀನುಗಾರರ ಮೇಲೆ ಗುಂಡು ಹಾರಿಸಿ ದ್ವೀಪ ರಾಷ್ಟ್ರದ ಪ್ರಾದೇಶಿಕ ನೀರಿನಲ್ಲಿ ಅಕ್ರಮವಾಗಿ ಪ್ರವೇಶಿಸಿದ ಹಲವಾರು ಆರೋಪಗಳಲ್ಲಿ ಅವರ ದೋಣಿಗಳನ್ನು ವಶಪಡಿಸಿಕೊಂಡಿದ್ದಾರೆ. ತಮಿಳುನಾಡನ್ನು ಶ್ರೀಲಂಕಾದಿಂದ ಬೇರ್ಪಡಿಸುವ ಕಿರಿದಾದ ನೀರಿನ ಪಟ್ಟಿಯಾದ ಪಾಕ್ ಜಲಸಂಧಿಯು ಎರಡೂ ದೇಶಗಳ ಮೀನುಗಾರರಿಗೆ ಶ್ರೀಮಂತ ಮೀನುಗಾರಿಕೆ ನೆಲವಾಗಿದೆ.

## ಸಂಗಾತಿ ಕೊಂದು 2 ದಿನ ಶವದ ಜೊತೆ ಇದ್ದ ಪಾಪಿ

**ಭೋಪಾಲ್:** ಪಾಪಿಯೊಬ್ಬ ಲಿವ್ ಇನ್ ಸಂಗಾತಿಯನ್ನು ಕೊಂದು ಶವವನ್ನು ಕಂಬಳಿಯಲ್ಲಿ ಸುತ್ತಿಟ್ಟು ಶವದೊಂದಿಗೆ ಎರಡು ದಿನ ಮಲಗಿದ್ದ ಭೀಕರ ಘಟನೆ ಭೋಪಾಲ್‌ನ ಗಾಯತ್ರಿ ನಗರದಲ್ಲಿ ನಡೆದಿದೆ. 32 ವರ್ಷದ ಸಚಿನ್ ರಜಪೂತ್ ಎಂಬಾತ 28 ವರ್ಷದ ರಿತಿಕಾ ಸೇನ್ ಳನ್ನು ಕೊಂದಿದ್ದಲ್ಲದೆ, ಆಕೆಯ ದೇಹವನ್ನು ಕಂಬಳಿಯಲ್ಲಿ ಸುತ್ತಿ ಎರಡು ರಾತ್ರಿಗಳು ಅದರ ಪಕ್ಕದಲ್ಲಿ ಏನೂ ಆಗಿಲ್ಲ ಎನ್ನುವಂತೆ ಮಲಗಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಇಬ್ಬರ ನಡುವೆ ರಾತ್ರಿ ತೀವ್ರ ವಾಗ್ವಾದದ ನಂತರ ಕೊಲೆ ನಡೆದಿದೆ. ನಿರುದ್ಯೋಗಿ, ಅಸೂಯೆಯಿಂದ ಬಳಲುತ್ತಿದ್ದ ಸಚಿನ್, ಖಾಸಗಿ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದ ರಿತಿಕಾಳ ಮೇಲೆ ತನ್ನ ಬಾಸ್ ಜತೆ ಸಂಬಂಧವಿದೆ ಎಂದು ಶಂಕಿಸಿದ್ದ ಎನ್ನಲಾಗಿದೆ. ವಾಗ್ವಾದ ಹಿಂಸಾತ್ಮಕವಾಗಿ ತಿರುಗಿತು, ಕೋಪದಿಂದ ಆಕೆಯನ್ನು ಕತ್ತು ಹಿಸುಕಿ ಕೊಂದನು. ಆದರೆ ನಂತರ ಸಚಿನ್ ದೇಹವನ್ನು ಎಚ್ಚರಿಕೆಯಿಂದ ಹಾಳೆಯಲ್ಲಿ ಸುತ್ತಿ, ಹಾಸಿಗೆಯ ಮೇಲೆ ಬಿಟ್ಟು ಅದೇ ಕೋಣೆಯಲ್ಲಿಯೇ ಇದ್ದ. ಪೊಲೀಸರ ಪ್ರಕಾರ, ಅವನು ಎರಡು ದಿನಗಳ ಕಾಲ ದೇಹದ ಪಕ್ಕದಲ್ಲಿ ಮಲಗಿದ್ದ ಎನ್ನಲಾಗಿದೆ. ಈ ಸಂದರ್ಭದಲ್ಲಿ ಭಾರೀ ಪ್ರಮಾಣದಲ್ಲಿ ಮದ್ಯಪಾನ ಮಾಡಿದ್ದ ಎಂದು ಅವರು ಮಾಹಿತಿ ನೀಡಿದ್ದಾರೆ. ಕುಡಿದು ಚಡಪಡಿಸುತ್ತಿದ್ದ ಆತ ಎರಡು ದಿನಗಳ ನಂತರ ಮಿಸ್ರೋಡ್‌ನಲ್ಲಿರುವ ತನ್ನ ಸ್ನೇಹಿತ ಅನುಜ್‌ಗೆ ಕೊಲೆಯ ವಿಚಾರ ತಿಳಿಸಿದ್ದಾನೆ.ಆದರೆ ಮರುದಿನ ಬೆಳಿಗ್ಗೆ ಸಚಿನ್ ಅದೇ ತಪ್ಪೊಪ್ಪಿಗೆಯನ್ನು ಪುನರಾವರ್ತಿಸಿದಾಗ, ಅನುಜ್ ಪೊಲೀಸರಿಗೆ ಮಾಹಿತಿ ನೀಡಿದ್ದಾನೆ.

# ಪೆಹಲ್ಗಾಮ್ ದಾಳಿ ಆರ್ಥಿಕ ಯುದ್ಧದ ತಂತ್ರ: ಜೈಶಂಕರ್

### ಭಾರತ-ಪಾಕಿಸ್ತಾನ ನಡುವೆ ದ್ವಿಪಕ್ಷೀಯ ಕದನ ವಿರಾಮ ಒಪ್ಪಂದ ಎಂದ ಎಸ್. ಜೈಶಂಕರ್.

**ನ್ಯೂಯಾರ್ಕ್:** ಜಮ್ಮು ಮತ್ತು ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು, ಜಮ್ಮು ಕಾಶ್ಮೀರದ ಪ್ರವಾಸೋದ್ಯಮವನ್ನು ನಾಶಮಾಡಲು ಉದ್ದೇಶಿಸಲಾದ ಆರ್ಥಿಕ ಯುದ್ಧದ ಕೃತ್ಯ ಎಂದು ಬಣ್ಣಿಸಿರುವ ಭಾರತದ ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್, ಪಾಕಿಸ್ತಾನ ಬೆಂಬಲಿತ ಭಯೋತ್ಪಾದನೆಯನ್ನು ಭಾರತ ಯಾರ ಒತ್ತಡಕ್ಕೂಡ ಮಣಿಯದೇ ಸ್ವತಂತ್ರ್ಯವಾಗಿ ಎದುರಿಸಲಿದೆ ಎಂದು ಸ್ಪಷ್ಟವಾದ ಧ್ವನಿಯಲ್ಲಿ ಹೇಳಿದ್ದಾರೆ.

ನ್ಯೂಯಾರ್ಕ್‌ನಲ್ಲಿ ನ್ಯೂಸ್‌ವೀಕ್‌ನೊಂದಿಗೆ ನಡೆದ ವಿಶೇಷ ಚಾಟ್‌ನಲ್ಲಿ ಮಾತನಾಡಿದ ಎಸ್. ಜೈಶಂಕರ್, ಭಾರತ-ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದದಲ್ಲಿ ಮೂರನೇ ಶಕ್ತಿಯ ಮಧ್ಯಸ್ಥಿಕೆ ನಡೆದಿಲ್ಲಎಂದು ಸ್ಪಷ್ಟಪಡಿಸಿದರು. ಈ ಮೂಲಕ ಉಭಯ ದೇಶಗಳ ನಡುವೆ ಕದನ ವಿರಾಮ ಒಪ್ಪಂದವೇರ್ಪಡುವಲ್ಲಿ ತಮ್ಮ ಪಾತ್ರ ಇದೆ ಎಂಬ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವಾದವನ್ನು ಜೈಶಂಕರ್ ತಿರಸ್ಕರಿಸಿದರು. ಪಾಕಿಸ್ತಾನದಿಂದ ಹೊರಹೊಮ್ಮುವ ಭಯೋತ್ಪಾದನೆಗೆ ಭಾರತ ತನ್ನದೇ ಧಾಟಿಯಲ್ಲಿ ಪ್ರತಿಕ್ರಿಯೆ ನೀಡುವುದನ್ನು ಮುಂದುವರೆಸುತ್ತದೆ.

ಪಾಕಿಸ್ತಾನದ ಪರಮಾಣು ಬ್ಲ್ಯಾಕ್‌ಮೇಲ್‌ಗೆ ಭಾರತ ಎಂದಿಗೂ ಅವಕಾಶ ನೀಡುವುದಿಲ್ಲ. ನಮ್ಮ ಭಯೋತ್ಪಾದನೆ ವಿರುದ್ಧದ ಹೋರಾಟವನ್ನು ಜಗತ್ತು ನೋಡುತ್ತಿದೆ ಎಂದು ಭಾರತದ ವಿದೇಶಾಂಗ ಸಚಿವರು ಸೂಚ್ಯವಾಗಿ ಹೇಳಿದರು. ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಮತ್ತು ಭಾರತದ ಪ್ರಧಾನಮಂತ್ರಿ, ನರೇಂದ್ರ ಮೋದಿ ನಡುವೆ ಮಾತುಕತೆ ನಡೆದಾಗ, ನಾನು ಅದೇ ಕೋಣೆಯಲ್ಲಿ ಉಪಸ್ಥಿತನಿದ್ದೆ. ಇಬ್ಬರ ನಡುವೆ ಶಾಂತಿ ಸ್ಥಾಪನೆಯ ಪ್ರಯತ್ನಗಳ ಕುರಿತು ಮಾತುಕತೆ ನಡೆಯಿತೇ ಹೊರತು, ಕದನ ವಿರಾಮ ಮತ್ತು ವ್ಯಾಪಾರ ಒಪ್ಪಂದದ ಬಗ್ಗೆ ಚರ್ಚೆಯೇ ನಡೆದಿಲ್ಲ. ಭಾರತದ ಪಾಲಿಗೆ ಅಮೆರಿಕದೊಂದಿಗಿನ ವ್ಯಾಪಾರ ಒಪ್ಪಂದ ಮತ್ತು ಕದನ ವಿರಾಮದ ನಡುವೆ ಯಾವುದೇ ಸಂಬಂಧವಿಲ್ಲ ಎಂದು ವಿದೇಶಾಂಗ ಸಚಿವರು ಹೇಳಿದರು. ಮುಂದುವರೆದು, ಈ



**ದೂರವಾಣಿ ಮಾತುಕತೆ ವೇಳೆ ಜೆಡಿ ವ್ಯಾನ್ಸ್ ಅವರ ಕೆಲವು ಪ್ರತಿಪಾದನೆಗಳನ್ನು ನಾವು ಸ್ವೀಕರಿಸಲಿಲ್ಲ. ಪಾಕಿಸ್ತಾನ ಭೀಕರ ದಾಳಿ ನಡೆಸಲಿದೆ ಎಂಬ ಜೆಡಿ ವ್ಯಾನ್ಸ್ ಅವರ ಎಚ್ಚರಿಕೆಗೆ, ಪ್ರಧಾನಿ ಮೋದಿ ಅವರು ನಾವು ಸಿದ್ಧರಿದ್ದೇವೆ ಎಂದು ನೇರ ಉತ್ತರ ನೀಡಿದ್ದರು. ಅದೇ ರಾತ್ರಿ ಪಾಕಿಸ್ತಾನ ನಮ್ಮ ಮಿಲಿಟರಿ ನೆಲೆಗಳ ಮೇಲೆ ದಾಳಿ ಮಾಡಿತಾದರೂ, ಭಾರತೀಯ ಸೇನೆ ಈ ದಾಳಿಗಳನ್ನು ಹಿಮ್ಮೆಟ್ಟಿಸುವಲ್ಲಿ ಯಶಸ್ವಿಯಾಯಿತು**

**-ಡಾ.ಎಸ್.ಜೈಶಂಕರ್, ವಿದೇಶಾಂಗ ಸಚಿವ**

ದಾಳಿಯ ಬಳಿಕ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಅವರು ನನಗೆ ನೇರವಾಗಿ ಕರೆ ಮಾಡಿ, ಪಾಕಿಸ್ತಾನ ಮಾತುಕತೆಗೆ ಸಿದ್ಧವಾಗಿದೆ ಎಂದು ತಿಳಿಸಿದರು. ಆ ಬಳಿಕ ಪಾಕಿಸ್ತಾನದ ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕ ಮೇಜರ್ ಜನರಲ್ ಕಾಶಿಫ್ ಅಬ್ದುಲ್ಲಾ ಅವರು, ತಮ್ಮ ಭಾರತೀಯ ಸಹವರ್ತಿ ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್ ಅವರಿಗೆ ನೇರವಾಗಿ ಕರೆ ಮಾಡಿ ಕದನ ವಿರಾಮ ಪ್ರಸ್ತಾಪವನ್ನು ಮುಂದಿಟ್ಟರು. ಇದು ದ್ವಿಪಕ್ಷೀಯ ಕದನ ವಿರಾಮ ಒಪ್ಪಂದ ಎಂಬುದಕ್ಕೆ ಇದಕ್ಕಿಂತ ಸಾಕ್ಷಿ ಬೇಕಿಲ್ಲ ಎಂದು ಎಸ್. ಜೈಶಂಕರ್ ಮಾರ್ಮಿಕವಾಗಿ ಹೇಳಿದರು. ಇತ್ತೀಚಿನ ವರ್ಷಗಳಲ್ಲಿ ಭಾರತವು ಹಲವಾರು ಭಯೋತ್ಪಾದಕ ದಾಳಿಗಳನ್ನು ಎದುರಿಸಿದೆ. ಈ ಎಲ್ಲಾ ದಾಳಿಗಳಲ್ಲಿ ಪಾಕಿಸ್ತಾನದ ಪ್ರತ್ಯಕ್ಷ ಅಥವಾ ಪರೋಕ್ಷ ಬೆಂಬಲ ಇದೆ.

ಏಪ್ರಿಲ್ 22ರ ಪೆಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ, ದೇಶದಲ್ಲಿ ಆಕ್ರೋಶ ಮಡುಗಟ್ಟಿತ್ತು. ಭಾರತೀಯರ ಈ ಭಾವನೆಗಳನ್ನು ಗೌರವಿಸಿ, ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿರುವ ಭಯೋತ್ಪಾದಕ ನೆಲೆಗಳನ್ನು ಗುರಿಯಾಗಿಸಿ ಭಾರತ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆಯನ್ನು ನಡೆಸಿತು ಎಂದು ಜೈಶಂಕರ್ ಮಾಹಿತಿ ನೀಡಿದರು. ಪಹಲ್ಗಾಮ್ ದಾಳಿ ಆರ್ಥಿಕ ಯುದ್ಧದ ಕೃತ್ಯವಾಗಿತ್ತು. ಆರ್ಥಿಕತೆಯ ಮುಖ್ಯ ಆಧಾರವಾಗಿದ್ದ ಕಾಶ್ಮೀರದಲ್ಲಿ ಪ್ರವಾಸೋದ್ಯಮವನ್ನು ನಾಶಮಾಡುವ ಉದ್ದೇಶವನ್ನು ಹೊಂದಿತ್ತು. ಇಷ್ಟೇ ಅಲ್ಲದೇ ಪ್ರವಾಸಿಗರ ಧರ್ಮ ಕೇಳಿ ಹತ್ಯೆ ಮಾಡಿದ್ದು, ಭಾರತದಲ್ಲಿ ಧಾರ್ಮಿಕ ಹಿಂಸಾಚಾರವನ್ನು ಪ್ರಚೋದಿಸುವ ಉದ್ದೇಶವನ್ನು ಹೊಂದಿತ್ತು ಎಂದು ಜೈಶಂಕರ್ ಅಮೆರಿಕದ ನೆಲದಲ್ಲಿ ಭಾರತದ ವಾದವನ್ನು ಸಮರ್ಥವಾಗಿ ಮಂಡಿಸಿದ್ದಾರೆ.

**ದ್ವಿಪಕ್ಷೀಯ ಕದನ ವಿರಾಮ ಒಪ್ಪಂದ**

**ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಬಳಿಕ, ಇಸ್ಲಾಮಾಬಾದ್‌ನೊಂದಿಗೆ ನಡೆದ ಕದನ ವಿರಾಮ ಒಪ್ಪಂದ ದ್ವಿಪಕ್ಷೀಯವಾಗಿತ್ತು ಎಂದು ಸ್ಪಷ್ಟಪಡಿಸಿರುವ ಎಸ್. ಜೈಶಂಕರ್. ಕದನ ವಿರಾಮಕ್ಕೂ ಮೊದಲು ಹೊಸದೊಲ್ಲಿ ಮತ್ತು ವಾಷಿಂಗ್ಟನ್ ನಡುವಿನ ಮಾತುಕತೆಯ ಬಗೆಗಿನ ತಮ್ಮ ಅಭಿಪ್ರಾಯಗಳನ್ನು ಮುಕ್ತವಾಗಿ ಹಂಚಿಕೊಂಡರು. ಭಾರತ ಮತ್ತು ಪಾಕಿಸ್ತಾನವನ್ನು ಕದನ ವಿರಾಮಕ್ಕೆ ಒಪ್ಪಿಕೊಳ್ಳುವಂತೆ ಒತ್ತಾಯಿಸಲು, ವ್ಯಾಪಾರ ಒಪ್ಪಂದದ ಎಚ್ಚರಿಕೆಯನ್ನು ಗುರಾಣಿಯಾಗಿ ಬಳಸಲಾಗಿದೆ ಎಂಬ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆಯನ್ನು ಜೈಶಂಕರ್ ಸ್ಪಷ್ಟವಾಗಿ ತಳ್ಳಿ ಹಾಕಿದರು.**

## ಮೆಕಾನ್, ಎನ್‌ಎಂಡಿಸಿ ಕಚೇರಿಗಳನ್ನು ಉದ್ಘಾಟಿಸಿದ ಕೇಂದ್ರ ಸಚಿವ

**ದುಬೈ:** ಉಕ್ಕು ಸಚಿವಾಲಯದ ಅಧೀನದಲ್ಲಿ ಕಾರ್ಯ ನಿರ್ವಹಿಸುವ ಮೆಕಾನ್, ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮದ ಸಾಗರೋತ್ತರ ಕಚೇರಿಗಳನ್ನು ಉದ್ಘಾಟಿಸಿದ ಕೇಂದ್ರದ ಉಕ್ಕುವ ಹೆಚ್.ಡಿ. ಕುಮಾರಸ್ವಾಮಿ ಅವರು ದುಬೈನ ಪ್ರಮುಖ ಆಡಳಿತಗಾರರೊಂದಿಗೆ ಮಹತ್ವದ ಮಾತುಕತೆ ನಡೆಸಿದರು.

ದುಬೈನಲ್ಲಿ ಬಿಡುವಿಲ್ಲದ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡ ಅವರು, ಎರಡೂ ವ್ಯೂಹಾತ್ಮಕ ಕಚೇರಿಗಳನ್ನು ಉದ್ಘಾಟಿಸಿದ ನಂತರ ಯುನೈಟೆಡ್ ಅರಬ್ ಎಮಿರೇಟ್ಸ್‌ನ ಸುಪ್ರೀಂ ಕೌನ್ಸಿಲ್ ಸದಸ್ಯ, ರಾಸ್ ಅಲ್ ಖೈಮಾಹ್ ಆಡಳಿತಗಾರ ಶೇಖ್ ಸೌದ್ ಬಿನ್ ಸಕ್ರ್ ಅಲ್ ಖಾಸಿಮಿ ಅವರೊಂದಿಗೆ ಉನ್ನತ ಮಟ್ಟದ ಮಾತುಕತೆ ನಡೆಸಿದರು. ದುಬೈನಲ್ಲಿ ನೆಲೆಯಾಗಿರಿಸಿಕೊಂಡು ಕೊಲ್ಲಿ ಭಾಗದಲ್ಲಿ ಕಾರ್ಯನಿರ್ವಹಿಸುವ ಎನ್ ಎಂಡಿಸಿ, ಮೆಕಾನ್‌ಗಳ ಅಂತಾರಾಷ್ಟ್ರೀಯ ಕಚೇರಿಗಳ ಉದ್ಘಾಟನೆ ಮಾಡಿದರು. ನನ್ನ ಭೇಟಿಯು ಭಾರತ, ಯುಎಇ ನಡುವೆ ಆಳವಾಗಿ ಬೇರೂರಿರುವ, ವಿಕಸನಗೊಳ್ಳುತ್ತಿರುವ ಸದೃಢವಾದ ಪಾಲುದಾರಿಕೆಯನ್ನು ಒತ್ತಿ ಹೇಳುತ್ತದೆ.

ಇದು ಪರಸ್ಪರ ಆರ್ಥಿಕ ಹಿತಾಸಕ್ತಿಗಳು, ಸಾಂಸ್ಕೃತಿಕ ಬಾಂಧವ್ಯಗಳು ಮತ್ತು ಅಭಿವೃದ್ಧಿ ಹೊಂದುತ್ತಿರುವ ಭಾರತೀಯ ಸಮುದಾಯದ ಕೊಡುಗೆಯ ಮೇಲೆ ಅವಲಂಭಿತವಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ, ಭಾರತವು ವ್ಯೂಹಾತ್ಮಕ ಖನಿಜ ಪಾಲುದಾರಿಕೆ, ಕೈಗಾರಿಕಾ ಸಹಯೋಗ ಮತ್ತು ಯುಎಇಯಲ್ಲಿ ವಾಸಿಸುವ 3.5 ಮಿಲಿಯನ್ನಿಂತಲೂ ಹೆಚ್ಚು ಭಾರತೀಯರ ಕಲ್ಯಾಣದ ಮೇಲೆ ಕೇಂದ್ರೀಕರಿಸುವ ಮೂಲಕ ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸುವ ಉದ್ದೇಶ ಹೊಂದಿದೆ ಎಂದು ಅವರು ಹೇಳಿದ್ದಾರೆ. ರಾಸ್ ಅಲ್ ಖೈಮಾಡ್‌ದಿಂದ ಸುಣ್ಣದ ಕಲ್ಲಿನ ದೀರ್ಘಾವಧಿಯ ಆಮದು, ಭಾರತದಿಂದ ಮೌಲ್ಯವರ್ಧಿತ ಉಕ್ಕಿನ ರಫ್ತುಗಳ ಮೂಲಕ ವ್ಯಾಪಾರ ಪಾಲುದಾರಿಕೆ ವಿಸ್ತರಿಸುವುದು, ಹಸಿರು ಹೈಡ್ರೋಜನ್, ಗ್ರೀನ್ ಸ್ಟೀಲ್ ಸಹಯೋಗವನ್ನು ಅನ್ವೇಷಿಸುವುದು, ರಾಸ್ ಅಲ್ ಖೈಮಾಹ್ದಿಂದ ಸ್ಥಳೀಯ ಸುಣ್ಣದ ಕಲ್ಲು, ನೈಸರ್ಗಿಕ ಅನಿಲವನ್ನು ಬಳಸಿಕೊಂಡು ಸುಣ್ಣದ ಉತ್ಪಾದನಾ ಘಟಕಗಳ ಸ್ಥಾಪನೆ.

**ರಾಸ್ ಅಲ್ ಖೈಮಾಹ್ಗೆ ಆಹ್ವಾನ**



ಭಾರತೀಯ ಉಕ್ಕು ಪ್ರಾಧಿಕಾರ, ರಾಷ್ಟ್ರೀಯ ಖನಿಜಾವೃದ್ಧಿ ನಿಗಮ, ಮೆಕಾನ್‌ನಂತಹ ಕೇಂದ್ರ ಸರ್ಕಾರಿ ಸ್ವಾಮ್ಯದ ಕಂಪನಿಗಳ ಮೂಲಕ ಹೆಚ್ಚು ಒಪ್ಪಂದಗಳನ್ನು ಮಾಡಿಕೊಳ್ಳುವುದು ಸೇರಿದಂತೆ ವಿವಿಧ ಪ್ರಮುಖ ಅಂಶಗಳ ಬಗ್ಗೆ ಸಚಿವರು ಚರ್ಚೆ ನಡೆಸಿದ್ದಾರೆ. ರಾಸ್ ಅಲ್ ಖೈಮಾಕ್ನ ಖನಿಜ ಸಂಪತ್ತು, ಕೈಗಾರಿಕಾ ಸಾಮರ್ಥ್ಯ ಮತ್ತು ಶುದ್ಧ ಇಂಧನವು ಭಾರತದ ಮುಂದಿನ ಪೀಳಿಗೆಯ ಉಕ್ಕು, ಸಂಪನ್ಮೂಲ ಕಾರ್ಯತಂತ್ರಕ್ಕೆ ಆದರ್ಶ ಪಾಲುದಾರನನ್ನಾಗಿ ಮಾಡುತ್ತದೆ ಎಂಬ ಅಂಶವನ್ನು ಅಲ್ಲಿನ ಆಡಳಿತಾರರ ಗಮನಕ್ಕೆ ಅವರು ತಂದಿದ್ದಾರೆ.


ಭಾರತದ ಅತಿದೊಡ್ಡ ಉಕ್ಕು ಉತ್ಪಾದಕ ಸಂಸ್ಥೆಗಳಲ್ಲಿ ಒಂದಾದ, ಪ್ರಸ್ತುತ ರಾಸ್ ಅಲ್ ಖೈಮಾಹ್ಯದ ಆಧಾರಿತ ಸ್ಟೀವಿನ್ ರಾಕ್ ನಿಂದ ವಾರ್ಷಿಕವಾಗಿ ಸುಮಾರು 2.5 ದಶಲಕ್ಷ ಟನ್ ಸುಣ್ಣದ ಕಲ್ಲನ್ನು ಆಮದು ಮಾಡಿಕೊಳ್ಳುತ್ತಿದೆ. ಭವಿಷ್ಯದಲ್ಲಿ ಸಾಮರ್ಥ್ಯದ ವಿಸ್ತರಣೆಯ ಭಾಗವಾಗಿ ವಾರ್ಷಿಕ 20ರಿಂದ 35 ದಶಲಕ್ಷ ಟನ್‌ಗಳಿಗೆ ಆಮದು ಹೆಚ್ಚಾಗಲಿದೆ. ಮೂಲಸೌಕರ್ಯ ಅಭಿವೃದ್ಧಿ, ಇಂಧನ ಘಟಕಗಳು, ಕಚ್ಚಾ ವಸ್ತುಗಳ ಮೌಲ್ಯ ಸರಪಳಿಗಳಲ್ಲಿ ಸಹಯೋಗವನ್ನು ಅನ್ವೇಷಿಸಲು ಸಚಿವರು, ರಾಸ್ ಅಲ್ ಖೈಮಾಹ್ಗೆ ಆಹ್ವಾನ ನೀಡಿದ್ದಾರೆ.

**ಭಾರತವು ಉಕ್ಕನ್ನು ಕೇವಲ ಒಂದು ವಸ್ತುವನ್ನಾಗಿ ನೋಡುವುದಿಲ್ಲ. ಮೂಲಸೌಕರ್ಯ, ಚಲನಶೀಲತೆ, ಇಂಧನ ಮತ್ತು ಉತ್ಪಾದನಾ ವಲಯಗಳ ಬೆನ್ನೆಲುಬಾಗಿ ಉಕ್ಕನ್ನು ನಾವು ಗುರುತಿಸುತ್ತೇವೆ**

**-ಎಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ**

## ಡಿಜಿಟಲ್ ಇಂಡಿಯಾ ಚಳವಳಿಯಾಗಿ ಮಾರ್ಪಡು

**ನವದೆಹಲಿ:** ಡಿಜಿಟಲ್ ಇಂಡಿಯಾ ಕೇವಲ ಸರ್ಕಾರಿ ಕಾರ್ಯಕ್ರಮವಾಗಿ ಉಳಿದಿಲ್ಲ, ಬದಲಾಗಿ ಜನರ ಚಳುವಳಿಯಾಗಿಯೂ ಮಾರ್ಪಟ್ಟಿದೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಆತ್ಮನಿರ್ಭರ ಭಾರತವನ್ನು ನಿರ್ಮಿಸಲು, ಭಾರತವನ್ನು ಜಗತ್ತಿಗೆ ವಿಶ್ವಾಸಾರ್ಹ ನಾವೀನ್ಯತೆ ಪಾಲುದಾರನನ್ನಾಗಿ ಮಾಡಲು ಡಿಜಿಟಲ್ ಇಂಡಿಯಾ ಕೇಂದ್ರವಾಗಿದೆ ಎಂದು ಅವರು ಎಕ್ಸ್ ಮಾಡಿದ್ದಾರೆ. ದೇಶದ ದೂರದ ಮೂಲೆಗಳಿಗೆ ಇಂಟರ್ನೆಟ್ ಪ್ರವೇಶವನ್ನು ತರುವುದರಿಂದ ಹಿಡಿದು ಸರ್ಕಾರಿ ಸೇವೆಗಳನ್ನು ಆನ್‌ಲೈನ್‌ನಲ್ಲಿ ಲಭ್ಯವಾಗುವಂತೆ ಮಾಡುವವರೆಗೆ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಡಿಜಿಟಲ್ ಇಂಡಿಯಾ ಉಪಕ್ರಮವು ರಾಷ್ಟ್ರದಾದ್ಯಂತ ಡಿಜಿಟಲ್ ಅಂತರವನ್ನು ನಿಜವಾಗಿಯೂ ಕಡಿಮೆ ಮಾಡಿದೆ ಎಂದು ಡಿಜಿಟಲ್ ಇಂಡಿಯಾ ಮಿಷನ್ 10 ಯಶಸ್ವಿ ವರ್ಷಗಳನ್ನು ಪೂರೈಸುತ್ತಿದ್ದಂತೆ ಹಣಕಾಸು ಸಚಿವರು ಬರೆದಿದ್ದಾರೆ. ಸ್ಕ್ಯಾನ್ ಮಾಡಿ. ಪಾವತಿಸಿ. ಮುಗಿದಿದೆ.



ಭಾರತದ ಕ್ರಾಂತಿಯು ವಿಶ್ವದ ನೈಜ-ಸಮಯದ ಡಿಜಿಟಲ್ ವಹಿವಾಟುಗಳಲ್ಲಿ ಅರ್ಧದಷ್ಟು ಶಕ್ತಿಯನ್ನು ನೀಡುತ್ತದೆ.ಎಂದು ಅವರು ಮತ್ತಷ್ಟು ಹೇಳಿದರು. ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಅವರ ಪ್ರಕಾರ, ರಾಷ್ಟ್ರವು ಡಿಜಿಟಲ್ ಆಡಳಿತದಿಂದ ಜಾಗತಿಕ ಡಿಜಿಟಲ್ ನಾಯಕತ್ವಕ್ಕೆ ಚಲಿಸುತ್ತಿದೆ. ಉದ್ದೇಶ ಸರಿಯಾಗಿದ್ದಾಗ, ನಾವೀನ್ಯತೆ ಕಡಿಮೆ ಸಬಲೀಕರಣಗೊಂಡವರನ್ನು ಸಬಲಗೊಳಿಸುತ್ತದೆ ಎಂದು ಅವರು ಎಕ್ಸ್ ಮಾಡಿದ್ದಾರೆ.

ಆತ್ಮನಿರ್ಭರ ಭಾರತವನ್ನು ನಿರ್ಮಿಸಲು ಮತ್ತು ಭಾರತವನ್ನು ಜಗತ್ತಿಗೆ ವಿಶ್ವಾಸಾರ್ಹ ನಾವೀನ್ಯತೆ ಪಾಲುದಾರನನ್ನಾಗಿ ಮಾಡಲು ಡಿಜಿಟಲ್ ಇಂಡಿಯಾ ಕೇಂದ್ರವಾಗಿದೆ ಎಂದು ಪ್ರಧಾನಿ ಲಿಂಕ್‌ಇನ್‌ನಲ್ಲಿನ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಡಿಜಿಟಲ್ ಇಂಡಿಯಾ ಮೂಲಕ ಕೃಷಿಯಲ್ಲಿ ಕ್ರಾಂತಿಯನ್ನುಂಟು ಮಾಡಿದೆ. ರೈತರು ದೇಶಾದ್ಯಂತ ಖರೀದಿದಾರರೊಂದಿಗೆ ನೇರವಾಗಿ ಸಂಪರ್ಕ ಸಾಧಿಸಲು ಅನುವು ಮಾಡಿಕೊಡುತ್ತದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ.

**ಎಲ್ಲಾ ನಾವೀನ್ಯಕಾರರು, ಉದ್ಯಮಿಗಳು, ಕನಸುಗಾರರಿಗೆ**

**ಜಗತ್ತು ಮುಂದಿನ ಡಿಜಿಟಲ್ ಪ್ರಗತಿಗಾಗಿ ಭಾರತವನ್ನು ನೋಡುತ್ತಿದೆ. ಹತ್ತು ವರ್ಷಗಳ ಹಿಂದೆ, ಭಾರತವು ಹೆಚ್ಚಿನ ದೃಢನಿಶ್ಚಯದಿಂದ ಗುರುತು ಹಾಕದ ಪ್ರದೇಶಕ್ಕೆ ದಿಟ್ಟ ಪ್ರಯಾಣವನ್ನು ಪ್ರಾರಂಭಿಸಿತು. ಭಾರತೀಯರು ತಂತ್ರಜ್ಞಾನವನ್ನು ಬಳಸುವ ಸಾಮರ್ಥ್ಯವನ್ನು ಅನುಮಾನಿಸುತ್ತಾ ದಶಕಗಳು ಕಳೆದಿದ್ದರೂ, ನಾವು ಈ ವಿಧಾನವನ್ನು ಬದಲಾಯಿಸಿದ್ದೇವೆ ಮತ್ತು ಭಾರತೀಯರು ತಂತ್ರಜ್ಞಾನವನ್ನು ಬಳಸುವ ಸಾಮರ್ಥ್ಯವನ್ನು ನಂಬಿದ್ದೇವೆ ಎಂದು ಪ್ರಧಾನಿ ಮೋದಿ ಹೇಳಿದರು.**



ಗಾಜಾದತ್ತ ತಿರುಗಿದ ಇಸ್ರೇಲ್ ಟ್ಯಾಂಕ್‌ಗಳು; ಶೆಲ್ ದಾಳಿಯಲ್ಲಿ 60 ಪ್ಯಾಲೆಸ್ಟೈನ್ ನಾಗರಿಕರ ಸಾವು

# ಅಮೆರಿಕದಲ್ಲಿ ಇಸ್ರೇಲ್-ಹಮಾಸ್ ಕದನ ವಿರಾಮ ಒಪ್ಪಂದ ಮಾತುಕತೆ

**ಜೆರುಸಲೇಂ:** ಇಸ್ರೇಲ್-ಇರಾನ್ ಸಂಘರ್ಷ ಕೊನೆಯಾಗುತ್ತಿದ್ದಂತೇ, ಇಸ್ರೇಲ್ ಟ್ಯಾಂಕ್‌ಗಳು ಗಾಜಾದತ್ತ ತಿರುಗಿವೆ. ಇಸ್ರೇಲ್ ನಡೆಸಿದ ಭೀಕರ ಶೆಲ್ ದಾಳಿಯಲ್ಲಿ ಕನಿಷ್ಠ 60 ಜನ ಗಾಜಾ ನಿವಾಸಿಗಳು ಸಾವನ್ನಪ್ಪಿದ್ದಾರೆ. ಇತ್ತೀಚಿಗೆ ಗಾಜಾ ನೆರವು ಕೇಂದ್ರದ ಮೇಲೆ ಇಸ್ರೇಲ್ ದಾಳಿ ನಡೆಸಿದ್ದನ್ನು ಇಲ್ಲಿ ಸ್ಮರಿಸಬಹುದು. ಇಸ್ರೇಲ್-ಹಮಾಸ್ ನಡುವೆ ಕದನ ವಿರಾಮ ಒಪ್ಪಂದ ಜಾರಿಗೊಳಿಸುವ ಪ್ರಯತ್ನದ ಭಾಗವಾಗಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇಸ್ರೇಲ್ ಅಧಿಕಾರಿಗಳ ನಿಯೋಗವನ್ನು ವಾಷಿಂಗ್ಟನ್ ಡಿಸಿಗೆ ಕರೆಸಿಕೊಂಡಿದ್ದಾರೆ. ಈ ಸಂಬಂಧ ಮಾತುಗಳು ನಡೆಯುತ್ತಿರುವಾಗಲೇ, ಗಾಜಾ ಮೇಲೆ ಇಸ್ರೇಲ್ ದಾಳಿ ನಡೆಸಿದೆ. ಗಾಜಾದಲ್ಲಿ ಒಪ್ಪಂದ ಮಾಡಿಕೊಳ್ಳಿ, ಒತ್ತೆಯಾಳುಗಳನ್ನು ಮರಳಿ ಪಡೆಯಿರಿ ಎಂದು ಡೊನಾಲ್ಡ್ ಟ್ರಂಪ್ ಕರೆ ನೀಡಿದ ಒಂದು ದಿನದ ಬಳಿಕ, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಆಪ್ತ ಮತ್ತು ಇಸ್ರೇಲ್‌ನ ಕಾರ್ಯತಂತ್ರದ ವ್ಯವಹಾರಗಳ ಸಚಿವ ರಾನ್ ಡೆರ್ಮರ್, ಇರಾನ್ ಮತ್ತು ಗಾಜಾ ಕುರಿತು ಮಾತುಕತೆಗಾಗಿ ವಾಷಿಂಗ್ಟನ್‌ಗೆ ನಿಯೋಗದೊಂದಿಗೆ ಪ್ರಯಾಣಿಸಿದ್ದಾರೆ.

**ನಿಲ್ಲದ ಹೋರಾಟ:** ಇಸ್ರೇಲ್ ಮತ್ತು ಹಮಾಸ್ ನಡುವಿನ ಕದನ ನಿಲ್ಲುವ ಯಾವುದೇ ಮುನ್ಸೂಚನೆ ಕಂಡುಬರುತ್ತಿಲ್ಲ. ಇಸ್ರೇಲಿ ಮಿಲಿಟರಿ ಉತ್ತರ ಗಾಜಾ ಪಟ್ಟಿಯ ನಿವಾಸಿಗಳಿಗೆ ಸ್ಥಳಾಂತರದ ಆದೇಶಗಳನ್ನು ನೀಡಿತ್ತು. ಈ ಆದೇಶದ ಕೆಲವೇ ಗಂಟೆಗಳಲ್ಲಿ ಗಾಜಾ ಮೇಲೆ ಇಸ್ರೇಲ್ ಭೀಕರ ದಾಳಿ ನಡೆಸಿದೆ. ಗಾಜಾ ನಗರದ ಜೈಟೌನ್ ಉಪನಗರದ ಪೂರ್ವ ಪ್ರದೇಶಗಳಿಗೆ ಇಸ್ರೇಲಿ ಟ್ಯಾಂಕ್ ನುಗ್ಗಿ, ಉತ್ತರದ ಹಲವಾರು ಪ್ರದೇಶಗಳ ಮೇಲೆ ಶೆಲ್ ದಾಳಿ ನಡೆಸಿವೆ. ಆಶ್ರಯ ತಾಣಗಳಾಗಿ ಮಾರ್ಪಟ್ಟಿರುವ ನಾಲ್ಕು ಶಾಲೆಗಳನ್ನು ಗುರಿಯಾಗಿಸಿಕೊಂಡು ಇಸ್ರೇಲ್ ಶೆಲ್ ದಾಳಿ ನಡೆಸಿದೆ ಎಂದು ಹೇಳಲಾಗಿದೆ. ಗಾಜಾದಲ್ಲಿ ಆಹಾರ ಕೊರತೆ ಎದುರಾಗಿದ್ದು, ಸೀಮಿತ ಮಾನವೀಯ ನೆರವಿಗಾಗಿ ಇಸ್ರೇಲ್ ಈಗಾಗಲೇ ಅನುಮತಿ ನೀಡಿದೆ. ನಾಗರಿಕರಿಗೆ ಹಾನಿಯಾಗುವ ಅಪಾಯವನ್ನು ತಗ್ಗಿಸಲು ಕ್ರಮಗಳನ್ನು ತೆಗೆದುಕೊಂಡ ನಂತರ, ಕಮಾಂಡ್, ನಿಯಂತ್ರಣ ಕೇಂದ್ರಗಳು ಸೇರಿದಂತೆ ಉತ್ತರ ಗಾಜಾದಲ್ಲಿರುವ ಹಮಾಸ್ ಗುರಿಗಳ ಮೇಲೆ ದಾಳಿ ಮಾಡಲಾಗಿದೆ ಇಸ್ರೇಲಿ ಸೇನೆ ಸ್ಪಷ್ಟಪಡಿಸಿದೆ. ಗಾಜಾ ಪಟ್ಟಿಯ ನೈಋತ್ಯ, ಬೀಚ್‌ಫ್ರಂಟ್ ಕೆಫೆಯಲ್ಲಿ ಸಂಭವಿಸಿದ ಸಾವುನೋವುಗಳ ಬಗ್ಗೆ, ಇಸ್ರೇಲ್‌ನಿಂದ ತಕ್ಷಣದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಉತ್ತರ ಗಾಜಾದ ಪ್ರದೇಶಗಳಿಗೆ ಜನರನ್ನು ಸ್ಥಳಾಂತರಿಸುವ ಆದೇಶ ಹೊರಡಿಸಿರುವ ಇಸ್ರೇಲ್, ಬಾಂಬ್ ದಾಳಿ ಮೂಲಕ ಈ ಪ್ರದೇಶವನ್ನು ತನ್ನ ವಶಕ್ಕೆ ಪಡೆಯುವ ನಿರ್ಧಾರ ಮಾಡಿದೆ. ಗಾಜಾ ನಗರದ ಹೃದಯಭಾಗ ಸೇರಿದಂತೆ ಉತ್ತರ ಗಾಜಾದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಮಾಸ್ ಹೋರಾಟಗಾರರ ವಿರುದ್ಧ ಹೋರಾಡಲು, ಇಸ್ರೇಲ್ ಬೃಹತ್ ಪ್ರಮಾಣದಲ್ಲಿ ಸೇನೆಯನ್ನು ನಿಯೋಜಿಸಿದೆ. ಇಸ್ರೇಲ್ ಹಮಾಸ್ ಕದನ ಗಾಜಾ ನಗರವನ್ನು ಅಕ್ಷರಶಃ ನರಕವನ್ನಾಗಿ ಪರಿವರ್ತಿಸಿದೆ. ಒಟ್ಟಿನಲ್ಲಿ ಇಸ್ರೇಲ್-ಹಮಾಸ್ ನಡುವೆ ಕದನ ವಿರಾಮ ಒಪ್ಪಂದ ಏರ್ಪಡಲಿದೆ. ಗಾಜಾ ಭೀಕರ ಸಂಘರ್ಷದಿಂದ ಮುಕ್ತಿ ಪಡೆಯಲಿದೆ ಎಂಬ ಜಾಗತಿಕ ಶಾಂತಿಪ್ರಿಯರ ಕನಸು ಇನ್ನೂ ಕನಸಾಗಿಯೇ ಉಳಿದಿದ್ದು, ಗಾಜಾ ಮೇಲಿನ ಇಸ್ರೇಲ್ ದಾಳಿಗಳು, ಈ ಸಂಘರ್ಷ ಇಷ್ಟು ಬೇಗ ಕೊನೆಗೊಳ್ಳುವುದಿಲ್ಲ ಎಂಬ ಸಂದೇಶವನ್ನು ರವಾನಿಸಿವೆ.



**ಯಾವುದೇ ಪ್ರತಿಕ್ರಿಯೆ ಬಂದಿಲ್ಲ**

**ಇಸ್ರೇಲ್ ನಡೆಸಿದ ದಾಳಿಯಲ್ಲಿ ಕನಿಷ್ಠ 60 ಗಾಜಾ ನಿವಾಸಿಗಳು ಸಾವನ್ನಪ್ಪಿದ್ದು, ಜೈಟೌನ್‌ನಲ್ಲಿ 10, ಗಾಜಾ ನಗರದ ನೈಋತ್ಯದಲ್ಲಿ 13 ಜನರು ಸಾವನ್ನಪ್ಪಿದ್ದಾರೆ ಎಂದು ವೈದ್ಯಾಧಿಕಾರಿಗಳು ಮಾಹಿತಿ ನೀಡಿದ್ದಾರೆ. ಅದೇ ರೀತಿ ಗಾಜಾ ನಗರದ ಬೀಚ್ ಫ್ರಂಟ್ ಕೆಫೆಯ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ, ಮಹಿಳೆಯರು, ಮಕ್ಕಳು, ಸ್ಥಳೀಯ ಪತ್ರಕರ್ತ ಸೇರಿದಂತೆ 22 ಜನರು ಸಾವನ್ನಪ್ಪಿದ್ದಾರೆ ಎಂದು ಮೂಲಗಳು ಖಚಿತಪಡಿಸಿವೆ. 2023ರ ಅಕ್ಟೋಬರ್‌ನಲ್ಲಿ ಯುದ್ಧ ಪ್ರಾರಂಭವಾದಾಗಿನಿಂದ, ಗಾಜಾದಲ್ಲಿ ಇದುವರೆಗೂ ಕನಿಷ್ಠ 220ಕ್ಕೂ ಹೆಚ್ಚು ಪತ್ರಕರ್ತರು ಸಾವನ್ನಪ್ಪಿದ್ದಾರೆ**

**-ಸಿಂಡಿಕೇಟ್, ಪತ್ರಕರ್ತ**

## ಮಿನಿ ನ್ಯೂಸ್

### ಯೋಧನ ಪತ್ನಿ ಮೇಲೆ ಅತ್ಯಾಚಾರ

**ಪಿಲಿಭಿತ್:** ಬಿಎಸ್‌ಎಫ್ ಯೋಧನ ಪತ್ನಿಯ ಮೇಲೆ ಸಂಬಂಧಿಗಳೇ ಹಲವು ಬಾರಿ ಅತ್ಯಾಚಾರ ಎಸಗಿ, ಅಶ್ಲೀಲ ವಿಡಿಯೋಗಳನ್ನು ಬಳಸಿ ಬ್ಲಾಕ್‌ಮೇಲ್ ಮಾಡಿರುವ ಘಟನೆ ಉತ್ತರ ಪ್ರದೇಶ ಪಿಲಿಭಿತ್ ಜಿಲ್ಲೆಯಲ್ಲಿ ನಡೆದಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಅತ್ಯಾಚಾರ ಸಂತ್ರಸ್ತೆಯ ಅಳಿಯಂದಿರು ಸೇರಿದಂತೆ ಏಳು ಜನರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಸೋದರ ಮಾವಂದಿರಲ್ಲಿ ಒಬ್ಬನನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ವಿವಾಹಿತಳಾದ ನಂತರ, ತನ್ನ ಅತ್ತೆಯೊಂದಿಗೆ ತನ್ನ ಗ್ರಾಮದ ಹೊರಗೆ ಪ್ರತ್ಯೇಕ ಮನೆಯಲ್ಲಿ ವಾಸಿಸುತ್ತಿದ್ದಳು ಎಂದು ಪೊಲೀಸರಿಗೆ ತಿಳಿಸಿದ್ದಾರೆ.

ಆಕೆಯ ಪತಿ ಬಿಎಸ್‌ಎಫ್‌ಯೋಧರಾಗಿದ್ದು ಆಗಾಗ್ಗೆ ಕರ್ತವ್ಯದಿಂದ ಬೇರೆ ಕಡೆ ಇರುತ್ತಿದ್ದರು. ಈ ವೇಳೆ ಇಬ್ಬರೂ ಅಳಿಯಂದಿರು ಆಕೆಯ ಮನೆಗೆ ನುಗ್ಗಿ ಅತ್ಯಾಚಾರ ಮಾಡುತ್ತಿದ್ದರು ಎಂದು ಸಂತ್ರಸ್ತೆ ಪೊಲೀಸರಿಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದಾರೆ. ಅವರು ಕೃತ್ಯದ ವೀಡಿಯೊಗಳನ್ನು ಚಿತ್ರೀಕರಿಸಿ, ಆಕೆಯನ್ನು ಬ್ಲಾಕ್‌ಮೇಲ್ ಮಾಡಲಾಗುತ್ತಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ತನ್ನ ಪತಿ ರಜೆಯ ಮೇಲೆ ಮನೆಗೆ ಬಂದಾಗ, ವಿಡಿಯೋ ಗಳನ್ನು ತೋರಿಸಿದರು ಈ ವೇಳೆ ತನ್ನ ಅತ್ತೆ ಮಾವಂದಿರು ತನ್ನನ್ನು ಮತ್ತು ತನ್ನ ಪತಿಯನ್ನು ಹೊಡೆದಿದ್ದಾರೆ ತನ್ನನ್ನು ಕತ್ತು ಹಿಸುಕಿ ಕೊಲ್ಲಲು ಸಹ ಪ್ರಯತ್ನಿಸಿದರು ಎಂದು ಪೊಲೀಸರಿಗೆ ಮಾಹಿತಿ ನೀಡಲಾಗಿದೆ. ಸಂತ್ರಸ್ತೆಯ ದೂರಿನ ಮೇರೆಗೆ, ಅತ್ತೆ ಮತ್ತು ಮಾವ ಸೇರಿದಂತೆ ಏಳು ಜನರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಜಹಾನಾಬಾದ್ ಪೊಲೀಸ್ ಠಾಣೆಯ ಉಸ್ತುವಾರಿ ಮನೋಜ್ ಕುಮಾರ್ ಮಿಶ್ರಾ, ತಿಳಿಸಿದ್ದಾರೆ. ಆರೋಪಿಗಳಲ್ಲಿ ಒಬ್ಬ ಸೋದರ ಮಾವ ಹರಿಯೋಮ್‌ನನ್ನು ಬಂಧಿಸಲಾಗಿದೆ. ಉಳಿದ ಆರೋಪಿಗಳು ಪರಾರಿಯಾಗಿದ್ದು ಅವರ ಪತ್ತೆಗೆ ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ.

### ವಾಣಿಜ್ಯ ಬಳಕೆ ಅನಿಲ ಸಿಲಿಂಡರ್ ಬೆಲೆಯಲ್ಲಿ ಇಳಿಕೆ

**ನವದೆಹಲಿ:** ವಾಣಿಜ್ಯ ಬಳಕೆ 19 ಕೆಜಿ ಅನಿಲ ಸಿಲಿಂಡರ್ ಬೆಲೆ ಸುಮಾರು 60 ರೂ. ಕಡಿಮೆ ಮಾಡಲಾಗಿದೆ. ಪರಿಷ್ಕೃತ ದರ ಇಂದಿನಿಂದಲೇ ಜಾರಿಗೆ ಬಂದಿದ್ದು,ಗೃಹ ಬಳಕೆ 14 ಕೆಜಿ ಸಿಲಿಂಡರ್‌ನ ಬೆಲೆಯಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ದೆಹಲಿಯಲ್ಲಿ ಇಂದಿನಿಂದ 19 ಕೆಜಿ ಎಲ್ ಪಿಜಿ ಸಿಲಿಂಡರ್ 1723.50 ರೂ. ಗಳ ಬದಲಿಗೆ 1665 ರೂ.ಗಳಿಗೆ ಲಭ್ಯವಿರುತ್ತದೆ. ಅಂದರೆ, ಇಲ್ಲಿ 58.50 ರೂ.ಗಳ ಇಳಿಕೆ ಕಂಡುಬಂದಿದೆ. ಕೋಲ್ಕತ್ತಾದಲ್ಲಿ, ಇಂದಿನಿಂದ ವಾಣಿಜ್ಯ ಸಿಲಿಂಡರ್ 1769 ರೂ.ಗಳಿಗೆ ಲಭ್ಯವಿರುತ್ತದೆ. ಮೊದಲು ಇದು 1826 ರೂ.ಗಳಿಗೆ ಲಭ್ಯವಿತ್ತು, ಈಗ ಅದು 57 ರೂ.ಗಳಷ್ಟು ಅಗ್ಗವಾಗಿದೆ. ಈಗ ಮುಂಬೈನಲ್ಲಿ ಈ ಸಿಲಿಂಡರ್ ದರ 1616 ರೂ. ಆಗಿದೆ. ಜೂನ್ ನಲ್ಲಿ ಇದು 1674.50 ರೂ. ಇತ್ತು. ಇದಕ್ಕೂ ಮೊದಲು, ಅಂದರೆ ಮೇ ತಿಂಗಳಲ್ಲಿ ಇದು 1699 ರೂ.ಗೆ ಲಭ್ಯ ವಿತ್ತು. ಇಲ್ಲಿ, ಪ್ರತಿ ಸಿಲಿಂಡರ್ ಗೆ 58.50 ರೂ. ಕಡಿತ ಮಾಡಲಾಗಿದೆ. ಚೆನ್ನೈ ನಲ್ಲಿ ವಾಣಿಜ್ಯ ಸಿಲಿಂಡರ್ ಬೆಲೆ 1823.50 ರೂ. ಆಗಿದೆ. ಜೂನ್ ನಲ್ಲಿ ಇದು 1881 ರೂ.ಗೆ ಲಭ್ಯವಿತ್ತು. ಜೂನ್ 2025, ಮೇ 2025, ಏಪ್ರಿಲ್ 2025 ರಲ್ಲಿ ವಾಣಿಜ್ಯ ಸಿಲಿಂಡರ್‌ಗಳ ಬೆಲೆಗಳನ್ನು ಸಹ ಕಡಿಮೆ ಮಾಡಲಾಗಿತ್ತು. ಕಳೆದ ಜೂನ್ ತಿಂಗಳಲ್ಲಿ 24 ರೂ. ಇಳಿಕೆ ಮಾಡಲಾಗಿತ್ತು ಮೇ ತಿಂಗಳಲ್ಲಿ 14.50 ರೂ. ಮತ್ತು ಏಪ್ರಿಲ್ ತಿಂಗಳಲ್ಲಿ 41 ರೂ. ಇಳಿಕೆ ಮಾಡಲಾಗಿತ್ತು. 14.2 ಕೆಜಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ನ ಇಂದಿನ ದರ ದೆಹಲಿ 853 ರೂ., ಗುರುಗ್ರಾಮ 861.5 ರೂ., ಅಹಮದಾಬಾದ್ 860 ರೂ., ಪಾಟ್ನಾ 942.5 ರೂ., ಆಗ್ರಾ 865.5 ರೂ., ಬೆಂಗಳೂರು 855.5 ರೂ., ಹೈದರಾಬಾದ್ 905 ರೂ., ಪುಣೆಯಲ್ಲಿ 856 ರೂ., ಮುಂಬೈ 852.50 ರೂ., ಲಕ್ನೌ 890.5 ರೂ ಇದೆ.

### ಪಟಾಕಿ ಸ್ಫೋಟಕ್ಕೆ ಏಳು ಮಂದಿ ಬಲಿ

**ಚೆನ್ನೈ:** ತಮಿಳುನಾಡಿನ ಶಿವಕಾಶಿ ಸಂಭವಿಸಿದ ಪಟಾಕಿ ಸ್ಫೋಟಕ್ಕೆ ಏಳು ಮಂದಿ ಬಲಿಯಾಗಿದ್ದಾರೆ.ಶಿವಕಾಶಿಯ ಚಿನ್ನಕಾಮನಪಟ್ಟಿಯಲ್ಲಿರುವ ಪಟಾಕಿ ಕಾರ್ಖಾನೆಯಲ್ಲಿ ಸಂಭವಿಸಿದ ಸ್ಫೋಟದಲ್ಲಿ ಕನಿಷ್ಠ ಏಳು ಮಂದಿ ಸಾವನ್ನಪ್ಪಿದ್ದು, ಐದು ಮಂದಿ ಗಾಯಗೊಂಡಿದ್ದು ಸಾವಿ ಸಂಖ್ಯೆ ಹೆಚ್ಚಳವಾಗುವ ಸಾಧ್ಯತೆಗಳಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ವಿರುಧುನಗರ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಿಗೆ ಪ್ರಸ್ತುತ ವೈದ್ಯಕೀಯ ಚಿಕಿತ್ಸೆ ನೀಡಲಾಗುತ್ತಿದೆ. ಸ್ಫೋಟದ ಬಗ್ಗೆ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಹೆಚ್ಚಿನ ವಿವರಗಳನ್ನು ನಿರೀಕ್ಷಿಸಲಾಗಿದೆ ಎಂದು ವಿರುಧುನಗರ ಜಿಲ್ಲಾ ಎಸ್‌ಪಿ ಕಣ್ಣನ್ ತಿಳಿಸಿದ್ದಾರೆ.

### ತಮಿಳುನಾಡಿನಲ್ಲಿ ಲಾಕಪ್ ಡೆತ್, ಐವರು ಪೊಲೀಸರ ಬಂಧನ

**ಚೆನ್ನೈ:** ತಮಿಳುನಾಡಿನ ಶಿವಗಂಗಾ ಜಿಲ್ಲೆಯಲ್ಲಿ ನಡೆದಿದ್ದ ಸೆಕ್ಯೂರಿಟಿಗಾರ್ಡ್ ಲಾಕಪ್ ಡೆತ್ ಪ್ರಕರಣಕ್ಕೆ ಸಂಬಂಧಿಸಿದಂತೆ ಐವರು ಪೊಲೀಸರನ್ನು ಬಂಧಿಸಲಾಗಿದೆ. ಈ ಘಟನೆ ನಡೆದಿದ್ದು ಪ್ರಕರಣದಲ್ಲಿ ಆರು ಸಿಬ್ಬಂದಿಯನ್ನು ಅಮಾನತುಗೊಳಿಸಲಾಗಿದೆ ಎಂದು ತಡರಾತ್ರಿ ಅಧಿಕೃತ ಮಾಹಿತಿ ತಿಳಿಸಿದೆ. ಈ ಪ್ರಕರಣದ ಬಗ್ಗೆ ಸೂಕ್ತ ತನಿಖೆ ಆರಂಭಿಸಲಾಗಿದ್ದು ಮತ್ತು ರಾತ್ರಿ ಬಂದ ಮರಣೋತ್ತರ ಪರೀಕ್ಷೆಯ ವರದಿಯ ನಂತರ, ಯಾವುದೇ ವಿಳಂಬವಿಲ್ಲದೆ ಮುಂದಿನ ಕ್ರಮ ಕೈಗೊಳ್ಳಲಾಯಿತು ಎಂದು ಹಿರಿಯ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ. ಕೊಲೆ ಆರೋಪಗಳನ್ನು ಹೊರಿಸಿ ಈ ಪ್ರಕರಣದಲ್ಲಿ ಭಾಗಿಯಾಗಿರುವ ಐವರು ಪೊಲೀಸರನ್ನು ಬಂಧಿಸಲಾಗಿದೆ. ಈ ಪ್ರಕರಣದ ಬಗ್ಗೆ ನ್ಯಾಯಾಂಗ ತನಿಖೆಗೆ ಆದೇಶಿಸಲಾಗಿದೆ. ಈ ದುರದೃಷ್ಟಕರ ಘಟನೆಗೆ ಸಂಬಂಧಿಸಿದಂತೆ ರಾಜ್ಯ ಪೊಲೀಸರು ನ್ಯಾಯಯುತ, ಪಾರದರ್ಶಕ, ಪಕ್ಷಪಾತವಿಲ್ಲದ ರೀತಿಯಲ್ಲಿ ಕೆಲಸ ಮಾಡಿದ್ದಾರೆ ಎಂದು ಹೇಳಿದ್ದಾರೆ.


### ಫಾರ್ಮಾ ಪ್ಲಾಂಟ್ ಸ್ಫೋಟ ದುರಂತದಲ್ಲಿ ಮೃತರ ಸಂಖ್ಯೆ 42ಕ್ಕೆ ಏರಿಕೆ

**ಸಂಗರೆಡ್ಡಿ:** ಸಿಗಾಚಿ ಇಂಡಸ್ಟ್ರೀಸ್‌ನ ಪಾಶಮಿಲರಾಮ್ ನಲ್ಲಿರುವ ಫಾರ್ಮಾ ಪ್ಲಾಂಟ್‌ನಲ್ಲಿ ಸಂಭವಿಸಿದ ಸ್ಫೋಟದಲ್ಲಿ ಸಾವನ್ನಪ್ಪಿದವರ ಸಂಖ್ಯೆ 42ಕ್ಕೆ ಏರಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಅವಶೇಷಗಳನ್ನು ತೆಗೆದುಹಾಕುವಾಗ ಹಲವಾರು ಶವಗಳು ಅವಶೇಷಗಳ ಅಡಿಯಲ್ಲಿ ಪತ್ತೆಯಾಗಿವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪರಿತೋಷ್ ಪಂಕಜ್ ತಿಳಿಸಿದ್ದಾರೆ. ಕಾರ್ಯಾಚರಣೆ ವೇಳೆ ಕಳೆದ ರಾತ್ರಿ ಅವಶೇಷಗಳಿಂದ 31 ಶವಗಳನ್ನು ಹೊರತೆಗೆಯಲಾಗಿದೆ ಮತ್ತು ಮೂವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ಸಾವನ್ನಪ್ಪಿದ್ದಾರೆ. ರಕ್ಷಣಾ ಕಾರ್ಯಾಚರಣೆಯ ಕೊನೆಯ ಹಂತ ಇನ್ನೂ ಮುಂದುವರೆದಿದೆ ಎಂದು ಸುದ್ದಿಗಾರರಿಗೆ ಮಾಹಿತಿ ನೀಡಿದ್ದಾರೆ. ಮುಖ್ಯಮಂತ್ರಿ ಎ ರೇವಂತ್ ರೆಡ್ಡಿ ಮಂಗಳವರಬೆಳಿಗ್ಗೆ ದುರಂತ ನಡದ ಸ್ಥಳಕ್ಕೆ ಭೇಟಿ ನೀಡಿದ್ದು, ಆರೋಗ್ಯ ಸಚಿವ ಸಿ ದಾಮೋದರ್ ರಾಜನರಸಿಂಹ ಕೂಡ ಜೊತೆಗಿದ್ದರು. ರಾಸಾಯನಿಕ ಕ್ರಿಯೆಯಿಂದ ಬೆಂಕಿ ಉಂಟಾಗಿದೆ ಎಂದು ಶಂಕಿಸಲಾಗಿದೆ. ಸಿಗಾಚಿ ಇಂಡಸ್ಟ್ರೀಸ್ ಲಿಮಿಟೆಡ್ ಒಂದು ಔಷಧೀಯ ಕಂಪನಿಯಾಗಿದ್ದು, ಘಟನೆ ಕುರಿತಂತೆ ಪ್ರಕರಣ ದಾಖಲಾಗಿದೆ.

ಕೊನೆಗೂ ರಾಮಾಯಣ ಫಸ್ಟ್ ಗ್ಲಿಮ್ಸ್ ಅಫಿಷಿಯಲ್ ರಿಲೀಸ್‌ಗೆ ಕಾಲ ಕೂಡಿಬಂದಿದೆ. ಇದೇ ಜುಲೈ 3 ರಂದು ಯಶ್ ನಟಿಸಿ ನಿರ್ಮಿಸುತ್ತಿರುವ ಮಹತ್ವಾಕಾಂಕ್ಷೆಯ ಪ್ರಾಜೆಕ್ಟ್ ರಾಮಾಯಣ ಚಿತ್ರದ ಅಫಿಷಿಯಲ್ ಟೈಟಲ್ ಲುಕ್ ರಿವೀಲ್ ಆಗಲಿದೆ. ಒಂದ್ಕಡೆ ರಾಮಾಯಣ ಫಸ್ಟ್ ಗ್ಲಿಮ್ಸ್ ಬಿಡುಗಡೆಗೆ ಸಮಯ ನಿಗದಿಯಾದ್ರೆ ಅತ್ತ ಯಶ್ ಏಕಾಂಗಿಯಾಗಿ ಮುಂಬೈ ಏರ್‌ಪೋರ್ಟ್‌ನಲ್ಲಿ ಕಾಣಿಸ್ಕೊಂಡಿದ್ದಾರೆ. ಕಾರಣ ಯಶ್ ಅಮೆರಿಕಾಗೆ ಪ್ರವಾಸಕ್ಕೆ ತೆರಳಿದ್ದಾರೆ. ಈಗಾಗ್ಲೇ ಯಶ್ ಕುಟುಂಬ ಅಮೆರಿಕಾ ತಲುಪಿದ್ದು, ಯಶ್ ಇದೀಗ ಮುಂಬೈನಿಂದ ಹೊರಟು ಕುಟುಂಬದೊಂದಿಗೆ ಸೇರಿಕೊಂಡಿದ್ದಾರೆ. ಜುಲೈ 3 ರಂದು ಅಫಿಷಿಯಲ್ ಆಗಿ ರಿಲೀಸ್ ಆಗಲಿರುವ ರಾಮಾಯಣ ಫಸ್ಟ್ ಗ್ಲಿಮ್ಸ್ ಶೆಡ್ಯೂಲ್ ಮಾಡಿ ಮುಗಿಸಿ ಇದೀಗ ಯಶ್ ಯುಎಸ್ ತೆರಳಿದ್ದಾರೆ.

**ಯಶ್ ಅಮೆರಿಕಾಗೆ ಪ್ರವಾಸ**



# ರಾಮಾಯಣ ಫಸ್ಟ್ ಗ್ಲಿಮ್ಸ್ ನೋಡಲು ತಯಾರಾಗಿ ಎಂದ ಯಶ್

ಮುಂಬೈನ ವಿಮಾನ ನಿಲ್ದಾಣದಲ್ಲಿ ಯಶ್ ಸ್ಟೈಲಿಶ್ ಲುಕ್‌ನಲ್ಲಿ ಕಾಣಿಸ್ಕೊಂಡ್ರು. ಹಲವು ದಿನ ಕುಟುಂಬದ ಜೊತೆ ಪ್ರವಾಸ ಮುಗಿಸಿ ವಾಪಸ್ಸಾಗಲಿದ್ದಾರೆ ಯಶ್. ಟಾಕ್ಸಿಕ್ ಹಾಗೂ ರಾಮಾಯಣ, ಎರಡೂ ಚಿತ್ರಗಳ ನಿರ್ಮಾಣ ಹಾಗೂ ನಟನೆಯಲ್ಲಿ ಯಶ್ ಬ್ಯುಸಿ ಇದ್ದಾರೆ. ಹೀಗಾಗಿ ಟೈಟ್ ಶೆಡ್ಯೂಲ್ ಶೂಟಿಂಗ್ ಮುಗಿಸಿ ಇದೀಗ ಅಲ್ಪ ಸಮಯದಲ್ಲಿ ಪ್ರವಾಸಕ್ಕೆಂದು ಹೊರಟಿದ್ದಾರೆ ಯಶ್.



# ಮಡೆನೂರು ಮನುಗೆ ಹೇರಿದ್ದ ಅಸಹಕಾರ ತೆರವು

ಕಾಮಿಡಿ ನಟ ಮಡೆನೂರು ಮನು ಅತ್ಯಾಚಾರ ಪ್ರಕರಣದಲ್ಲಿ ಜೈಲುವಾಸ ಅನುಭವಿಸಿ, ಜಾಮೀನಿನ ಮೇಲೆ ಆಚೆ ಬಂದಿದ್ದಾರೆ. ಜೈಲು ಸೇರಿದ ಮೇಲೆ ಅವರ ಮೇಲೆ ಸಾಕಷ್ಟು ಆರೋಪ ಕೇಳಿ ಬಂದಿದ್ದವು. ಸ್ಯಾಂಡಲ್‌ವುಡ್‌ನ ನಟರ ಸಾವಿನ ಬಗ್ಗೆ ಮಾತನಾಡಿದ ಆಡಿಯೋ ವೈರಲ್ ಆಗಿತ್ತು. ಹಿನ್ನೆಲೆ ಫಿಲ್ಮ್ ಚೇಂಬರ್‌ಗೆ ಅವರ ಅಭಿಮಾನಿಗಳು ದೂರು ನೀಡಿದ್ರು.

ಕಾಮಿಡಿ ನಟನನ್ನ ಶಾಶ್ವತವಾಗಿ ಬ್ಯಾನ್ ಮಾಡುವಂತೆ ಒತ್ತಾಯಿಸಲಾಗಿತ್ತು. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಗೆ ದೂರು ಬಂದ ಹಿನ್ನೆಲೆ ಕಾಮಿಡಿ ನಟ ಮಡೆನೂರು ಮನು ಅವರಿಗೆ ಚಿತ್ರರಂಗದಲ್ಲಿ ಹಾಗೂ ಕಿರುತೆರೆಯಲ್ಲಿ ಅಸಹಕಾರ ತೋರುವಂತೆ ಫಿಲ್ಮ್ ಚೇಂಬರ್ ನಿರ್ಧಾರ ಮಾಡಿತ್ತು. ಇದೀಗ ತಮ್ಮ ತಪ್ಪಿನ ಅರಿವಾಗಿ ನಟರಿಗೆ ಕ್ಷಮೆ ಕೋರಿ ಪತ್ರ ಬರೆದಿದ್ದ ಕಾಮಿಡಿ ನಟ ಇದೀಗ ಫಿಲ್ಮ್ ಚೇಂಬರ್‌ಗೂ ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ.

ತಮ್ಮ ಮೇಲೆ ಹೇರಿದ್ದ ಅಸಹಕಾರವನ್ನ ತೆರವು ಮಾಡಿ, ಮುಂದಿನ ದಿನಗಳಲ್ಲಿ ಸಿನಿಮಾ ರಂಗದಲ್ಲಿ, ಕಿರುತೆರೆಯಲ್ಲಿ ಹಾಗೂ ವೇದಿಕೆ ಕಾರ್ಯಕ್ರಮಗಳಲ್ಲಿ ಭಾಗವಹಿಸುವಂತೆ ಕೋರಿ ಫಿಲ್ಮ್ ಚೇಂಬರ್‌ಗೆ ಮನವಿ ಮಾಡಿದ್ದಾರೆ ಕಾಮಿಡಿ ನಟ ಮನು. ಕಾಮಿಡಿ ನಟನ ಮನವಿಯನ್ನ ಸ್ವೀಕರಿಸಿದ ಫಿಲ್ಮ್ ಚೇಂಬರ್ ಎಚ್ಚರಿಕೆ ಕೊಟ್ಟು ಮುಂದೆ ಈ ರೀತಿಯಾದ ತಪ್ಪು ಮರುಕಳಿಸಬಾರು ಎಂದು ಹೇಳಿದೆ. ಮುಂದಿನ ದಿನಗಳಲ್ಲಿ ಚಿತ್ರರಂಗದಲ್ಲಿ ತೊಡಗಿಕೊಳ್ಳಬಹುದು ಎಂದು ಹೇಳಿದೆ. ಮುಂದಿನ ದಿನಗಳಲ್ಲಿ ಈ ರೀತಿ ಘಟನೆ ಮರುಕಳಿಸದಂತೆ ನೋಡಿಕೊಳ್ಳುತ್ತೇನೆ ಎಂದು ಮನು ಕೂಡಾ ಒಪ್ಪಿಕೊಂಡಿದ್ದಾರೆ.

**ಫಿಲ್ಮ್ ಚೇಂಬರ್ ಮಾನಿಂಗ್**



# ದಾಖಲೆ ಬರೆದ ಬ್ಯಾಂಗಲ್ ಬಂಗಾರಿ

**ಮುರಳಿ ಮಾಸ್ಟರ್ ಒಳ್ಳೆ ಸ್ಟೆಪ್ ಕಂಪೋಸ್**



ಎಕ್ಕ ಸಿನಿಮಾದ ಬ್ಯಾಂಗಲ್ ಬಂಗಾರಿ ಹಾಡಿಗೆ ಭರ್ಜರಿ ರೆಸ್ಪಾನ್ಸ್ ಸಿಕ್ಕಿದೆ. ಈ ಗೀತೆ ಎಲ್ಲೆಡೆ ವೈರಲ್ ಆಗಿದ್ದು, ಅನೇಕ ಸೆಲೆಬ್ರಿಟಿಗಳು ಹಾಡಿಗೆ ಡ್ಯಾನ್ಸ್ ಮಾಡಿದ್ದಾರೆ. ನಾಯಕ ಯುವರಾಜ್ ಕುಮಾರ್ ಹಾಗೂ ನಾಯಕಿ ಸಂಜನಾ ಆನಂದ್ ಬ್ಯಾಂಗಲ್ ಬಂಗಾರಿ ಅಂತಾ ಕುಣಿದು ಕುಪ್ಪಳಿಸಿದ್ದರು.

ನಾಗಾರ್ಜುನ್ ಶರ್ಮಾ ಸಾಹಿತ್ಯ ಬರೆದ ಹಾಡಿಗೆ ಆಂತೋನಿ ದಾಸ್ ಕಂಠ ಕುಣಿಸಿದ್ದರು. ಚರಣ್ ರಾಜ್ ಸಂಗೀತ, ಯುವ-ಸಂಜನಾ ಕುಣಿದ ಬಂಗಾಲ್ ಬಂಗಾರಿ ಗೀತೆ ಸಖತ್ ಹಿಟ್ ಕಂಡಿದೆ. ಕೇವಲ 22 ದಿನಗಳಲ್ಲಿ ಬರೋಬ್ಬರಿ 10 ಮಿಲಿಯನ್ ವೀಕ್ಷಣೆ ಕಂಡಿರುವ ಹಾಡು, ಟಾಪ್ ಮ್ಯೂಸಿಕ್ ವಿಡಿಯೋ ಕೆಟಗರಿಯಲ್ಲಿ 29ನೇ ಸ್ಥಾನ ಪಡೆದಿದೆ. ಅತಿ ಕಡಿಮೆ ಸಮಯದಲ್ಲಿ ಬ್ಯಾಂಗಲ್ ಬಂಗಾರಿ ದಾಖಲೆ ಬರೆದಿದ್ದು, ಚಿತ್ರತಂಡದ ಖುಷಿಗೆ ಕಾರಣವಾಗಿದೆ. ನಾಯಕಿ ಸಂಜನಾ ಆನಂದ್ ಇಲ್ಲಿ ಬ್ಯಾಂಗಲ್ ಬಂಗಾರಿ ಆಗಿದ್ದಾರೆ. ಯವರಾಜ್ ಕುಮಾರ್ ಲೈಫ್ ಅಲ್ಲಿ ಬರೋ ಈ ಬಂಗಾರಿಗೆ ಬ್ಯಾಂಗಲ್ ತೊಡಿಸಿದಾಗ ಶುರು ಆಗೋ ಹಾಡು ಇದಾಗಿದೆ. ಸಂಭ್ರಮಾಚರಣೆಯ ಕ್ಷಣದ ಈ ಗೀತೆಗೆ ಮುರಳಿ ಮಾಸ್ಟರ್ ಒಳ್ಳೆ ಸ್ಟೆಪ್‌ಗಳನ್ನೇ ಕಂಪೋಸ್ ಮಾಡಿದ್ದಾರೆ. ಎಕ್ಕ ಚಿತ್ರಕ್ಕೆ ರೋಹಿತ್ ಪದಕಿ ನಿರ್ದೇಶನ ಮಾಡಿದ್ದಾರೆ. ಚರಣ್ ರಾಜ್ ಸಂಗೀತದ ಮೋಡಿ ಇಡೀ ಚಿತ್ರಕ್ಕಿದೆ. ಅಶ್ವಿನಿ ಪುನೀತ್ ರಾಜ್‌ಕುಮಾರ್, ಜಯಣ್ಣ, ಕಾರ್ತಿಕ್ ಗೌಡ ಒಟ್ಟಿಗೆ ಸೇರಿ ಈ ಚಿತ್ರವನ್ನ ನಿರ್ಮಿಸಿದ್ದಾರೆ. ಚಿತ್ರದಲ್ಲಿ ಡೆಡ್ಲಿ ಸೋಮ ಖ್ಯಾತಿಯ ನಟ ಆದಿತ್ಯ ನಟಿಸಿದ್ದಾರೆ.

# ಚೈತ್ರಾ ಆಚಾರ್‌ಗೆ ಅಗ್ನಿಪರೀಕ್ಷೆ

ಚೈತ್ರಾ ಆಚಾರ್ ಹಾಗೂ ಸಪ್ತಮಿ ಗೌಡ ಇಬ್ಬರೂ ಕನ್ನಡದಲ್ಲಿ ದೊಡ್ಡ ಮಟ್ಟದಲ್ಲಿ ಗೆಲುವು ಕಂಡವರು. ಇವರಿಗೆ ಸಾಕಷ್ಟು ಹೆಸರು ಬಂದಿದೆ. ವಿಶೇಷ ಎಂದರೆ ಇವರು ಪರಭಾಷೆಯಲ್ಲಿ ನಟಿಸಿರೋ ಸಿನಿಮಾ ಈ ವಾರ (ಜುಲೈ 4) ರಿಲೀಸ್ ಆಗುತ್ತಿದೆ. ಸಪ್ತಮಿ ಗೌಡ ಅವರು 'ಕಾಂತಾರ ಸಿನಿಮಾ ಮೂಲಕ ದೊಡ್ಡ ಮಟ್ಟದಲ್ಲಿ ಗೆಲುವು ಕಂಡರು. ಅವರಿಗೆ ಈ ವಾರ ತೆಲುಗಿನಲ್ಲಿ ದೊಡ್ಡ ಅಗ್ನಿಪರೀಕ್ಷೆ ಇದೆ. ಅವರ ನಟನೆಯ ತೆಲುಗಿನ 'ತಮ್ಮುಡು ಸಿನಿಮಾ ಈ ವಾರ (ಜುಲೈ 4) ತೆರೆಗೆ ಬರುತ್ತಿದೆ. ಈ ಚಿತ್ರಕ್ಕೆ ತೆಲುಗು ನಟ ನಿತಿನ್ ಅವರು ಹೀರೋ. ಅವರು ತೆಲುಗಿನಲ್ಲಿ ಅನೇಕ ಹಿಟ್‌ಗಳನ್ನು ನೀಡಿದ್ದಾರೆ. ಅವರ ಜೊತೆ ಸಪ್ತಮಿ ಗೌಡ ಅವರು ಇದೇ ಮೊದಲ ಬಾರಿಗೆ ತೆರೆ ಹಂಚಿಕೊಂಡಿದ್ದಾರೆ. ಈ ಸಿನಿಮಾ ಬಗ್ಗೆ ಸಪ್ತಮಿ ನಿರೀಕ್ಷೆಗಳನ್ನು ಇಟ್ಟುಕೊಂಡಿದ್ದಾರೆ. ಸಪ್ತಮಿ ಗೌಡ ಅವರ ಪಾತ್ರದ ಹೆಸರು ರತ್ನ ಎಂದು. ಈ ಚಿತ್ರದಲ್ಲಿ ಅವರು ಡಿಗ್ಲಾಮ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದಾರೆ. 'ಕಾಂತಾರ ಚಿತ್ರದಲ್ಲೂ ಅವರಿಗೆ ಇದೇ ರೀತಿಯ ಪಾತ್ರ ಸಿಕ್ಕಿತ್ತು ಅನ್ನೋದು ವಿಶೇಷ. ಈ ಸಿನಿಮಾ ಹಿಟ್ ಆದರೆ, ತೆಲುಗಿನಲ್ಲಿ ಆಫರ್‌ಗಳು ಬರಲಿವೆ. ಚೈತ್ರಾ ಆಚಾರ್ ಕೂಡ ಕನ್ನಡದಲ್ಲಿ ಹೆಸರು ಮಾಡಿದ್ದಾರೆ. 'ಸಪ್ತ ಸಾಗರದಾಚೆ ಎಲ್ಲೋ ಪಾರ್ಟ್ 2 ಅವರಿಗೆ ದೊಡ್ಡ ಮಟ್ಟದಲ್ಲಿ ಗೆಲುವು ತಂದು ಕೊಟ್ಟಿತು. ಈ ಚಿತ್ರ ಪರಭಾಷೆಯಲ್ಲೂ ರಿಲೀಸ್ ಆಗಿರುವುದರಿಂದ ಅವರನ್ನು ಅಲ್ಲಿಯೂ ಗುರುತಿಸುತ್ತಾರೆ. ಈ ವಾರ ತಮಿಳಿನ '3 ಬಿಎಚ್‌ಕೆ ಸಿನಿಮಾ ರಿಲೀಸ್ ಆಗುತ್ತಿದೆ. ಮಧ್ಯಮ ವರ್ಗದ ಮನೆ ಕಟ್ಟುವ ಕಥೆಯನ್ನು ಸಿನಿಮಾದಲ್ಲಿ ಹೇಳಲಾಗುತ್ತಿದೆ. ಈ ಚಿತ್ರದ ಮೂಲಕ ಚೈತ್ರಾ ಪರಭಾಷೆಯಲ್ಲಿ ಗುರುತಿಸಿಕೊಳ್ಳುವ ಹಂಬಲದಲ್ಲಿ ಇದ್ದಾರೆ.

# 'ಆ ಕೆಲಸ ಮಾಡಲ್ಲವೆಂದ ರಶ್ಮಿಕಾ!



ನಟಿ ರಶ್ಮಿಕಾ ಮಂದಣ್ಣ ಕೀರ್ತಿ ಈಗ ಜಗದಗಲ ವ್ಯಾಪಿಸಿದೆ. ಸ್ಟಾರ್ ನಟರ ಚಿತ್ರಕ್ಕೆ ನಾಯಕಿಯಾಗಿ ಅಭಿನಯಿಸುವುದರ ಮೂಲಕ ಬಿಗ್‌ಬಜೆಟ್ ಚಿತ್ರಗಳ ನಾಯಕಿ ಎಂಬ ಹೆಗ್ಗಳಿಕೆ ಪಡೆದಿರೋ ರಶ್ಮಿಕಾ ಮಂದಣ್ಣ ಭಾರತೀಯ ಸಿನಿಮಾ ಇಂಡಸ್ಟ್ರಿಯ ನಟಿಯರ ಲಿಸ್ಟ್‌ನಲ್ಲಿ ಮುಂಚೂಣಿ ಸ್ಥಾನದಲ್ಲಿದ್ದಾರೆ. ಇದೀಗ ಈ ನಟಿ ಲಂಡನ್‌ಲ್ಲಿ ನಡೆದ ''ವಿ ದ ವಿಮನ್ ಕಾರ್ಯಕ್ರಮದಲ್ಲಿ ಘೋಷಿಸಿರುವ ಒಂದು ಸಂಕಲ್ಪ ನಟಿಯ ಸಾಮಾಜಿಕ ಪ್ರಜ್ಞೆಗೆ ಸಾಕ್ಷಿಯಾಗಿದೆ. ಸಿನಿಮಾದಲ್ಲೂ ನಿಜಜೀವನದಲ್ಲೂ ರಶ್ಮಿಕಾ ಧೂಮಪಾನವನ್ನ ಪೋಷಿಸದಿರಲು ನಿರ್ಧರಿಸಿದ್ದಾರಂತೆ. 'ಸಿನಿಮಾದಲ್ಲಿ ಅದು ಪಾತ್ರವಾಗಿದ್ದರೂ ಧೂಮಪಾನ ಮಾಡೋದಿಲ್ಲ. ಅಂಥಹ ಕೃತ್ಯವನ್ನ ತೆರೆಮೇಲೆ ವಿಜೃಂಭಿಸಲು ಇಷ್ಟಪಡೋದಿಲ್ಲ. ಮಾಡುವ ಅನಿವಾರ್ಯತೆ ಬಂದರೆ ಅದು ಎಂಥದ್ದೇ ಚಿತ್ರವಾದರೂ ಆ ಪಾತ್ರವನ್ನ ನಾನು ತಿರಸ್ಕರಿಸಲು ಸಿದ್ಧ. ಮಾಡುವುದು ತಪ್ಪು ಸರಿ ಅನ್ನೋದನ್ನ ನಾನು ವಿಶ್ಲೇಷಿಸೋದಿಲ್ಲ. ಧೂಮಪಾನ ಮಾಡದಿರುವುದು ನನ್ನ ವೈಯಕ್ತಿಕ ಅಭಿಪ್ರಾಯವಾಗಿದೆ ಎಂದಿದ್ದಾರೆ ರಶ್ಮಿಕಾ. ಮಹಿಳೆಯರ ಪ್ರಾಭಲ್ಯದ ಕುರಿತಾಗಿ ಏರ್ಪಡಿಲಾಗಿದ್ದ ಕಾರ್ಯಕ್ರಮದಲ್ಲಿ ಅತಿಥಿಯಾಗಿ ಹೋಗಿದ್ದ ವೇಳೆ ರಶ್ಮಿಕಾ ಈ ವಿಚಾರವನ್ನ ಘೋಷಿಸಿದ್ದಾರೆ. ಸಿನಿಮಾದಲ್ಲಿ ನಟಿಸುವಂಥ ಸಮಯದಲ್ಲಿ ಧೂಮಪಾನ, ಮಧ್ಯಪಾನದಂತಹ ಕೃತ್ಯಗಳ ದೃಶ್ಯಗಳಲ್ಲಿ ಕಾಣಿಸಿಕೊಳ್ಳುವುದು ಸಾಮಾನ್ಯ ಎಂಬಂಥ ಸ್ಥಿತಿ ಈಗಿದೆ. ಇಂಥಹ ಕಾಲದಲ್ಲಿ ರಶ್ಮಿಕಾ ಮಾಡಿಕೊಂಡಿರುವ ಸಂಕಲ್ಪ ನಿಜಕ್ಕೂ ಶ್ಲಾಘನೀಯ.

# 'ಕ್ಯಾಪ್ಟನ್ ಕೂಲ್ ಪಟ್ಟಕ್ಕಾಗಿ ಮಹೇಂದ್ರ ಸಿಂಗ್ ಧೋನಿ ಅರ್ಜಿ





ಇತ್ತೀಚೆಗೆ ಐಸಿಸಿ ಹಾಲ್ ಆಫ್ ಫೇಮ್‌ಗೆ ಸೇರ್ಪಡೆಗೊಂಡಿರುವ ಮಹೇಂದ್ರ ಸಿಂಗ್ ಧೋನಿ, ಈಗ ಕ್ಯಾಪ್ಟನ್ ಕೂಲ್ ಟ್ರೇಡ್ ಮಾರ್ಕ್‌ನೊಂದಿಗೆ ತಮ್ಮ ಪರಂಪರೆಯನ್ನು ಮತ್ತಷ್ಟು ಬಲಪಡಿಸಿಕೊಳ್ಳಲು ಸಜ್ಜಾಗಿದ್ದಾರೆ. ಅದರಂತೆ ಇದೀಗ ಧೋನಿ ಸಲ್ಲಿಸಿದ ಅರ್ಜಿಯನ್ನು ಟ್ರೇಡ್ ಮಾರ್ಕ್ ಜರ್ನಲ್‌ನಲ್ಲಿ ಪ್ರಕಟಿಸಲಾಗಿದೆ. ಮೈದಾನದಲ್ಲಿ ಕ್ಯಾಪ್ಟನ್ ಕೂಲ್ ಆಗಿ ಕಾಣಿಸಿಕೊಂಡಿದ್ದ ಟೀಮ್ ಇಂಡಿಯಾದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ಇದೀಗ ತಮ್ಮ ಬಿರುದನ್ನೇ ಟ್ರೇಡ್ ಮಾರ್ಕ್ ಮಾಡಿಕೊಳ್ಳಲು ಮುಂದಾಗಿದ್ದಾರೆ. ಅದರ ಮೊದಲ ಹೆಜ್ಜೆಯಾಗಿ ಇದೀಗ ಅಭಿಮಾನಿಗಳು ಪ್ರೀತಿಯಿಂದ ಕರೆಯುವ ''ಕ್ಯಾಪ್ಟನ್ ಕೂಲ್ ಎಂಬ ಪದ ಟ್ರೇಡ್ ಮಾರ್ಕ್‌ಗಾಗಿ ಅರ್ಜಿ ಸಲ್ಲಿಸಿದ್ದಾರೆ. ಈ ಅರ್ಜಿಯನ್ನು ಟ್ರೇಡ್‌ಮಾರ್ಕ್‌ಗಳ ನೋಂದಣಿ ಪೋರ್ಟಲ್ ಅನುಮೋದಿಸಿದೆ. ಟ್ರೇಡ್ ಮಾರ್ಕ್ಸ್ ರಿಜಿಸ್ಟ್ರಿ ಪೋರ್ಟಲ್ ಪ್ರಕಾರ, ಧೋನಿ ಸಲ್ಲಿಸಿದ ಅರ್ಜಿಯನ್ನು ಸ್ವೀಕರಿಸಲಾಗಿದ್ದು, ಈ ಬಗ್ಗೆ ಜಾಹೀರಾತು ನೀಡಲಾಗಿದೆ. ಅಲ್ಲದೆ ''ಕ್ಯಾಪ್ಟನ್ ಕೂಲ್ ಹೆಸರನ್ನು ಜೂನ್ 16, 2025 ರಂದು ಅಧಿಕೃತವಾಗಿ ಟ್ರೇಡ್ ಮಾರ್ಕ್ ಜರ್ನಲ್‌ನಲ್ಲಿ ಪ್ರಕಟಿಸಲಾಗಿದೆ. ಈ ಮೊದಲು ಧೋನಿ ''ಕ್ಯಾಪ್ಟನ್ ಕೂಲ್ ಟ್ರೇಡ್‌ಮಾರ್ಕ್‌ಗಾಗಿ ಅರ್ಜಿ ಸಲ್ಲಿಸಿದಾಗ, ರಿಜಿಸ್ಟ್ರಿ ಟ್ರೇಡ್ ಮಾರ್ಕ್ಸ್ ಕಾಯ್ದೆಯ ಸೆಕ್ಷನ್ 11(1) ರ ಅಡಿಯಲ್ಲಿ ಆಕ್ಷೇಪಣೆಯನ್ನು ಎತ್ತಲಾಗಿತ್ತು. ಈ ದಾಖಲೆಯಲ್ಲಿ ಈಗಾಗಲೇ ಇದೇ ರೀತಿಯ ಹೆಸರಿನ ಗುರುತು ಇರುವುದರಿಂದ ಈ ಹೆಸರು ಜನರನ್ನು ಗೊಂದಲಗೊಳಿಸಬಹುದು ಎಂಬ ಕಳವಳವನ್ನು ವ್ಯಕ್ತಪಡಿಸಲಾಗಿತ್ತು. ಆದರೆ ಧೋನಿ ಪರ ವಕೀಲರು 'ಕ್ಯಾಪ್ಟನ್ ಕೂಲ್ ಎಂಬ ಅಡ್ಡಹೆಸರು ಅವರ ಜೊತೆಗೆ ಸ್ಪಷ್ಟ, ವಿಶಿಷ್ಟ ಸಂಬಂಧವನ್ನು ಹೊಂದಿದೆ ಎಂದು ವಾದಿಸಿದ್ದರು. ಅಭಿಮಾನಿಗಳು ಮತ್ತು ಮಾಧ್ಯಮಗಳು ಈ ಅಡ್ಡಹೆಸರನ್ನು ಧೋನಿ ವಿಷಯದಲ್ಲಿ ವರ್ಷಗಳಿಂದ ಬಳಸುತ್ತಿದ್ದಾರೆ. ಅಲ್ಲದೆ ಇದು ಮಹೇಂದ್ರ ಸಿಂಗ್ ಧೋನಿ ಅವರ ಸಾರ್ವಜನಿಕ ಗುರುತಿನ ಭಾಗವಾಗಿದೆ ಎಂಬ ವಾದವನ್ನು ಮುಂದಿಟ್ಟಿದ್ದರು. ಈ ವಾದವನ್ನು ಪರಿಗಣಿಸಿರುವ ಟ್ರೇಡ್ ಮಾರ್ಕ್ ರಿಜಿಸ್ಟ್ರಿ ಧೋನಿಗೆ 'ಕ್ಯಾಪ್ಟನ್ ಕೂಲ್ ಪಟ್ಟ ನೀಡಲು ಹಸಿರು ನಿಶಾನೆ ತೋರಿದೆ. ಅದರಂತೆ ಮುಂಬರುವ ದಿನಗಳಲ್ಲಿ 'ಕ್ಯಾಪ್ಟನ್ ಕೂಲ್ ಎಂಬುದು ಮಹೇಂದ್ರ ಸಿಂಗ್ ಧೋನಿಗೆ ಮಾತ್ರ ಸೀಮಿತವಾಗಲಿದೆ. ಈ ಟ್ಯಾಗ್‌ಲೈನ್ ಅನ್ನು ಮತ್ತೊಬ್ಬರು ಬಳಸುವಂತಿಲ್ಲ.

**'ಕ್ಯಾಪ್ಟನ್ ಕೂಲ್ ಬ್ರ್ಯಾಂಡಿಂಗ್:**

ಮಹೇಂದ್ರ ಸಿಂಗ್ ಧೋನಿ 'ಕ್ಯಾಪ್ಟನ್ ಕೂಲ್ ಟ್ಯಾಗ್‌ಲೈನ್‌ನೊಂದಿಗೆ ಹೊಸ ಬ್ರ್ಯಾಡಿಂಗ್ ಮಾಡುವ ನಿರೀಕ್ಷೆಯಿದೆ. ಅದರಂತೆ ಧೋನಿ ಮುಂಬರುವ ದಿನಗಳಲ್ಲಿ ತಮ್ಮ ಕ್ರೀಡಾ ಸಂಸ್ಥೆಗಳು, ತರಬೇತಿ ಕೇಂದ್ರಗಳು ಮತ್ತು ಬ್ರಾಂಡ್ ಉತ್ಪನ್ನಗಳಂತಹ ವಿವಿಧ ವ್ಯವಹಾರ ಚಟುವಟಿಕೆಗಳಿಗೆ ಕ್ಯಾಪ್ಟನ್ ಕೂಲ್ ಪದವನ್ನು ಪ್ರತ್ಯೇಕವಾಗಿ ಬಳಸಬಹುದು. ಇದು ಧೋನಿಯ ಬ್ರ್ಯಾಂಡ್‌ನ ಮೌಲ್ಯವನ್ನು ಮತ್ತಷ್ಟು ಹೆಚ್ಚಿಸುವ ಸಾಧ್ಯತೆಯಿದೆ.

**ಕ್ಯಾಪ್ಟನ್ ಕೂಲ್ ಹೆಸರು ಏಕೆ ಬಂತು:** ಮೈದಾನದಲ್ಲಿ ಒತ್ತಡದ ಸಂದರ್ಭಗಳಲ್ಲಿಯೂ ಪ್ರಮುಖ ನಿರ್ಧಾರಗಳನ್ನು ತೆಗೆದುಕೊಳ್ಳುವ ಅವರ ಶಾಂತ ಸ್ವಭಾವದಿಂದಾಗಿ ಧೋನಿಗೆ ''ಕ್ಯಾಪ್ಟನ್ ಕೂಲ್ ಎಂಬ ಹೆಸರು ಬಂತು. ಅವರ ನಾಯಕತ್ವದಲ್ಲಿ, ಭಾರತ ತಂಡವು 2007 ಟಿ20 ವಿಶ್ವಕಪ್, 2011 ರ ಏಕದಿನ ವಿಶ್ವಕಪ್ ಮತ್ತು 2013 ರ ಚಾಂಪಿಯನ್ಸ್ ಟ್ರೋಫಿಯಂತಹ ಪ್ರತಿಷ್ಠಿತ ಐಸಿಸಿ ಪ್ರಶಸ್ತಿಗಳನ್ನು ಗೆದ್ದುಕೊಂಡಿತು.

# ಬ್ಯಾಟ್ಸ್‌ಮನ್ ಮಾತ್ರವಲ್ಲ ಬೌಲರ್‌ಗಳಿಗೂ ಇದು ಸ್ಮಶಾನ





ಭಾರತೀಯ ತಂಡವು ಈಗ ಲೀಡ್ಸ್‌ನಿಂದ ಎಡ್ಜ್‌ಬಾಸ್ಟನ್ ತಲುಪಿದೆ. ಈ ಮೈದಾನಕ್ಕೂ ಶುಭ್‌ಮನ್ ಗಿಲ್ ಪಡೆ ಮಾನಸಿಕವಾಗಿ ಸಿದ್ಧರಾಗಿರಬೇಕು, ಏಕೆಂದರೆ ಇಲ್ಲಿ ಭಾರತೀಯ ತಂಡದ ದಾಖಲೆ ತುಂಬಾ ಕಳಪೆಯಾಗಿದೆ. ಟೀಮ್ ಇಂಡಿಯಾ ಒಂದೇ ಒಂದು ಪಂದ್ಯವನ್ನು ಇಲ್ಲಿ ಗೆದ್ದಿಲ್ಲ. ಮತ್ತೊಂದೆಡೆ, ಲೀಡ್ಸ್‌ನಲ್ಲಿನ ಗೆಲುವಿನ ನಂತರ ಇಂಗ್ಲೆಂಡ್ ಆತ್ಮವಿಶ್ವಾಸದೊಂದಿಗೆ ಎಡ್ಜ್‌ಬಾಸ್ಟನ್‌ಗೆ ಬಂದಿದೆ, ಜೊತೆಗೆ ಅನುಭವಿ ಆಟಗಾರರು ಮತ್ತು ತವರು ಮೈದಾನದ ಪ್ರಯೋಜನ ಪಡೆದುಕೊಳ್ಳುವ ಪ್ಲ್ಯಾನ್‌ನಲ್ಲಿದೆ. ಸದ್ಯ ನಾಯಕ ಶುಭ್‌ಮನ್ ಗಿಲ್ ಮತ್ತು ಮುಖ್ಯ ಕೋಚ್ ಗೌತಮ್ ಗಂಭೀರ್ ದ್ವಿತೀಯ ಟೆಸ್ಟ್‌ಗೆ ಪ್ಲೇಯಿಂಗ್-11 ಅನ್ನು ಯೋಜಿಸಬೇಕಾಗಿರುವುದು ಮಾತ್ರವಲ್ಲದೆ, ಪಿಚ್‌ಗೆ ಅನುಗುಣವಾಗಿ ತಂತ್ರವನ್ನು ಸಿದ್ಧಪಡಿಸಬೇಕಾಗುತ್ತದೆ.

**ಭಾರತ ವಿರುದ್ಧ ಇಂಗ್ಲೆಂಡ್ ಎಡ್ಜ್‌ಬಾಸ್ಟನ್ ಪಿಚ್ ವರದಿ ವೇಗದ ಬೌಲರ್‌ಗಳಿಗೆ ಆರಂಭಿಕ ನೆರವು:** ಎಡ್ಜ್‌ಬಾಸ್ಟನ್ ಪಿಚ್ ಆರಂಭದಲ್ಲಿ ವೇಗದ ಬೌಲರ್‌ಗಳಿಗೆ ಸಹಾಯಕವಾಗಲಿದೆ. ಡ್ಯೂಕ್ಸ್ ಚೆಂಡು ಗಾಳಿಯಲ್ಲಿ ಸ್ವಿಂಗ್ ಮತ್ತು ಸೀಮ್ ಆಗಬಹುದು, ಇದು ಆರಂಭಿಕ ಓವರ್‌ಗಳಲ್ಲಿ ಬ್ಯಾಟ್ಸ್‌ಮನ್‌ಗಳಿಗೆ ತೊಂದರೆ ಉಂಟುಮಾಡಬಹುದು.

ವಿಶೇಷವಾಗಿ ಆಕಾಶವು ಮೋಡ ಕವಿದಿದ್ದರೆ, ವೇಗದ ಬೌಲರ್‌ಗಳು ಇನ್ನೂ ಹೆಚ್ಚಿನ ಪ್ರಯೋಜನವನ್ನು ಪಡೆಯುತ್ತಾರೆ. ಅಗ್ರ ಕ್ರಮಾಂಕದ ಬ್ಯಾಟ್ಸ್‌ಮನ್‌ಗಳು ವೇಗದ ಬೌಲರ್‌ಗಳ ಸೀಮ್ ಚಲನೆಯನ್ನು ನಿಭಾಯಿಸುವುದು ಕಷ್ಟಕರವಾಗಬಹುದು, ಇದು ಆರಂಭಿಕ ವಿಕೆಟ್‌ಗಳು ಬೇಗನೆ ಬೀಳುವ ಸಾಧ್ಯತೆಗಳನ್ನು ಹೆಚ್ಚಿಸುತ್ತದೆ. ನಂತರ ಬ್ಯಾಟ್ಸ್‌ಮನ್‌ಗಳಿಗೆ ಅನುಕೂಲಕರವಾಗಲಿದೆ. ಪಂದ್ಯ ಮುಂದುವರೆದಂತೆ, ಬ್ಯಾಟ್ಸ್‌ಮನ್‌ಗಳಿಗೆ ಹಾಗೂ ಪಿಚ್ ಹೆಚ್ಚು ಅನುಕೂಲಕರವಾಗಬಹುದು.

**ಚೆಂಡು ಗಾಳಿಯಲ್ಲಿ ಸ್ವಿಂಗ್ ಮತ್ತು ಸೀಮ್**

# ಟೀಮ್ ಇಂಡಿಯಾ ಪರ ಇಬ್ಬರು ಆಲ್‌ರೌಂಡರ್‌ಗಳು ಕಣಕ್ಕೆ

**ದ್ವಿತೀಯ ಟೆಸ್ಟ್‌ನಲ್ಲಿ ಸುಂದರ್**

ಭಾರತ ಮತ್ತು ಇಂಗ್ಲೆಂಡ್ ನಡುವಣ 5 ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಮ್ಯಾಚ್‌ನಲ್ಲಿ ಟೀಮ್ ಇಂಡಿಯಾ 5 ವಿಕೆಟ್‌ಗಳಿಂದ ಸೋಲನುಭವಿಸಿತ್ತು. ಇದೀಗ ದ್ವಿತೀಯ ಪಂದ್ಯಕ್ಕಾಗಿ ಉಭಯ ತಂಡಗಳು ಸಜ್ಜಾಗುತ್ತಿದೆ. ಈ ಪಂದ್ಯಕ್ಕಾಗಿ ಟೀಮ್ ಇಂಡಿಯಾ ತನ್ನ ಪ್ಲೇಯಿಂಗ್ ಇಲೆವೆನ್‌ನಲ್ಲಿ ಮಹತ್ವದ ಬದಲಾವಣೆ ಮಾಡಿಕೊಳ್ಳುವ ಸಾಧ್ಯತೆಯಿದೆ. ಭಾರತ ಮತ್ತು ಇಂಗ್ಲೆಂಡ್ ನಡುವಣ 2ನೇ ಟೆಸ್ಟ್ ಪಂದವು ಜುಲೈ 2 ಶುರುವಾಗಲಿದೆ. ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬಾಸ್ಟನ್‌ನಲ್ಲಿ ನಡೆಯಲಿರುವ ಈ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಯಾರು ಕಣಕ್ಕಿಳಿಯಲಿದ್ದಾರೆ ಎಂಬುದೇ ಕುತೂಹಲ. ಅತ್ತ ಪ್ಲೇಯಿಂಗ್ ಇಲೆವೆನ್‌ನಲ್ಲಿ ಇಬ್ಬರು ಸ್ಪಿನ್ನರ್‌ಗಳಿರಲಿದ್ದಾರೆ ಎಂದು ಟೀಮ್ ಇಂಡಿಯಾ ಸಹಾಯಕ ಕೋಚ್ ರಿಯಾನ್ ಟೆನ್ ಡೋಸ್ಚೇಟ್ ಸುಳಿವು ನೀಡಿದ್ದಾರೆ. ಆದರೆ ಆ ಸ್ಪಿನ್ನರ್ ಯಾರು ಎಂಬುದಕ್ಕೆ ಇದೀಗ ಉತ್ತರ ಸಿಕ್ಕಿದೆ. ಬಲ್ಲ ಮೂಲಗಳ ಮಾಹಿತಿ ಪ್ರಕಾರ, ಟೀಮ್ ಇಂಡಿಯಾ ಪರ ದ್ವಿತೀಯ ಟೆಸ್ಟ್‌ನಲ್ಲಿ ವಾಷಿಂಗ್ಟನ್ ಸುಂದರ್ ಕಣಕ್ಕಿಳಿಯಲಿದ್ದಾರೆ. ಸುಂದರ್ ಸ್ಪಿನ್ ಆಲ್‌ರೌಂಡರ್. ಹೀಗಾಗಿ ಎಡ್ಜ್‌ಬಾಸ್ಟನ್‌ನಲ್ಲಿ ಸುಂದರ್ ಹಾಗೂ ಮತ್ತೋರ್ವ ಆಲ್‌ರೌಂಡರ್ ನಿತೀಶ್ ಕುಮಾರ್ ರೆಡ್ಡಿಯನ್ನು ಕಣಕ್ಕಿಳಿಸಲು ನಿರ್ಧರಿಸಲಾಗಿದೆ ಎಂದು ತಿಳಿದು ಬಂದಿದೆ. ಇನ್ನು ವಿಶ್ರಾಂತಿಯ ಕಾರಣ ದ್ವಿತೀಯ ಟೆಸ್ಟ್ ಪಂದ್ಯದಿಂದ ಜಸ್‌ಪ್ರೀತ್ ಬುಮ್ರಾ ಹೊರಗುಳಿಯುವುದು ಖಚಿತ ಎಂದೇ ಹೇಳಬಹುದು. ಆದರೆ ಅತ್ತ ಎಡ್ಜ್‌ಬಾಸ್ಟನ್‌ನಲ್ಲಿ ಕಣಕ್ಕಿಳಿಯುವ ನಿರೀಕ್ಷೆಯಲ್ಲಿದ್ದ ಕುಲ್ದೀಪ್ ಯಾದವ್ ಈ ಪಂದ್ಯದ ವೇಳೆಯೂ ಬೆಂಚ್ ಕಾಯಬೇಕಾಗುತ್ತದೆ. ಏಕೆಂದರೆ ರವೀಂದ್ರ ಜಡೇಜಾ ಹಾಗೂ ವಾಷಿಂಗ್ಟನ್ ಸುಂದರ್ ಸ್ಪಿನ್ನರ್‌ಗಳಾಗಿ ಆಡುವ ಬಳಗದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಇದರಿಂದ ಕುಲ್ದೀಪ್‌ಗೆ ಚಾನ್ಸ್ ಸಿಗುವ ಸಾಧ್ಯತೆಯಿಲ್ಲ. ಇಲ್ಲಿ ಜಸ್‌ಪ್ರೀತ್ ಬುಮ್ರಾ ಬದಲಿಗೆ ವಾಷಿಂಗ್ಟನ್ ಸುಂದರ್ ಕಣಕ್ಕಿಳಿಯುವುದು ಬಹುತೇಕ ಖಚಿತ. ಆದರೆ ನಿತೀಶ್ ಕುಮಾರ್ ರೆಡ್ಡಿ ಅವರ ಆಯ್ಕೆಯಿಂದ ಯಾರು ಹೊರಗುಳಿಯಲಿದ್ದಾರೆ ಎಂಬುದರ ಬಗ್ಗೆ ಯಾವುದೇ ಖಚಿತ ಮಾಹಿತಿ ಹೊರಬಿದ್ದಿಲ್ಲ. ರೆಡ್ಡಿ ಪ್ಲೇಯಿಂಗ್ ಇಲೆವೆನ್‌ನಲ್ಲಿ ಕಾಣಿಸಿಕೊಂಡರೆ, ಶಾರ್ದೂಲ್ ಠಾಕೂರ್ ಅಥವಾ ಪ್ರಸಿದ್ಧ್ ಕೃಷ್ಣ ಆಡುವ ಬಳಗದಿಂದ ಹೊರಬೀಳಬಹುದು. ರವೀಂದ್ರ, ಜಡೇಜಾ, ನಿತೀಶ್ ಕುಮಾರ್ ರೆಡ್ಡಿ, ವಾಷಿಂಗ್ಟನ್ ಸುಂದರ್, ಮೊಹಮ್ಮದ್ ಸಿರಾಜ್, ಪ್ರಸಿದ್ಧ್ ಕೃಷ್ಣ.

# ಹೀಗಿರಲಿದೆ ಟೀಮ್ ಇಂಡಿಯಾ ಪ್ಲೇಯಿಂಗ್ ಇಲೆವೆನ್

ಭಾರತ ಮತ್ತು ಇಂಗ್ಲೆಂಡ್ ಎಡ್ಜ್‌ಬಾಸ್ಟನ್ ಸ್ಟೇಡಿಯಂನಲ್ಲಿ ಈವರೆಗೆ 8 ಟೆಸ್ಟ್ ಪಂದ್ಯಗಳಲ್ಲಿ ಮುಖಾಮುಖಿಯಾಗಿವೆ. ಈ ವೇಳೆ 7 ಮ್ಯಾಚ್‌ಗಳಲ್ಲಿ ಇಂಗ್ಲೆಂಡ್ ತಂಡ ಜಯ ಸಾಧಿಸಿದೆ. ಇನ್ನು ಒಂದು ಪಂದ್ಯವನ್ನು ಡ್ರಾ ಮಾಡಿಕೊಳ್ಳಲಷ್ಟೇ ಭಾರತ ತಂಡ ಯಶಸ್ವಿಯಾಗಿದೆ. ಹೀಗಾಗಿ ಈ ಬಾರಿ ಭಾರತ ತಂಡ ಗೆದ್ದರೆ ಹೊಸ ಇತಿಹಾಸ ನಿರ್ಮಾಣವಾಗಲಿದೆ. ಭಾರತ ಮತ್ತು ಇಂಗ್ಲೆಂಡ್ ನಡುವಣ 5 ಪಂದ್ಯಗಳ ಟೆಸ್ಟ್ ಸರಣಿಯ ದ್ವಿತೀಯ ಮ್ಯಾಚ್ ಬುಧವಾರದಿಂದ (ಜು.2) ಶುರುವಾಗಲಿದೆ. ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬಾಸ್ಟನ್ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯಕ್ಕಾಗಿ ಇಂಗ್ಲೆಂಡ್ ಈಗಾಗಲೇ ಪ್ಲೇಯಿಂಗ್ ಇಲೆವೆನ್ ಪ್ರಕಟಿಸಿದೆ. ಇದಾಗ್ಯೂ ಭಾರತ ತಂಡ ತನ್ನ ಆಡುವ ಬಳಗವನ್ನು ಹೆಸರಿಸಿಲ್ಲ. ಅದರಲ್ಲೂ ಮೊದಲ ಪಂದ್ಯದಲ್ಲಿ ಸೋತಿರುವ ಕಾರಣ ಟೀಮ್ ಇಂಡಿಯಾ ತನ್ನ ಪ್ಲೇಯಿಂಗ್ ಇಲೆವೆನ್‌ನಲ್ಲಿ ಬದಲಾವಣೆ ಮಾಡಿಕೊಳ್ಳುವ ಸಾಧ್ಯತೆಯಿದೆ. ಅದರಂತೆ ಎಡ್ಜ್‌ಬಾಸ್ಟನ್‌ನಲ್ಲಿ ಭಾರತ ತಂಡವು 2 ಬದಲಾವಣೆಯೊಂದಿಗೆ ಕಣಕ್ಕಿಳಿಬಹುದು. ಇಲ್ಲಿ ಆರಂಭಿಕರಾಗಿ ಯಶಸ್ವಿ ಜೈಸ್ವಾಲ್ ಹಾಗೂ ಕೆಎಲ್ ರಾಹುಲ್ ಇನಿಂಗ್ಸ್ ಆರಂಭಿಸುವುದು ಖಚಿತ. ಇನ್ನು ಮೂರನೇ ಕ್ರಮಾಂಕದಲ್ಲಿ ಸಾಯಿ ಸುದರ್ಶನ್ ಬ್ಯಾಟ್ ಬೀಸಲಿದ್ದಾರೆ. ನಾಲ್ಕನೇ ಕ್ರಮಾಂಕದಲ್ಲಿ ಶುಭ್‌ಮನ್ ಗಿಲ್ ಕಾಣಿಸಿಕೊಳ್ಳಲಿದ್ದಾರೆ.



ಇನ್ನು ಐದನೇ ಕ್ರಮಾಂಕದಲ್ಲಿ ರಿಷಭ್ ಪಂತ್ ಆಡಲಿದ್ದಾರೆ.

ಆರನೇ ಕ್ರಮಾಂಕದಲ್ಲಿ ಕರುಣ್ ನಾಯರ್ ಆಡಿದರೆ, ಏಳನೇ ಕ್ರಮಾಂಕದಲ್ಲಿ ರವೀಂದ್ರ ಜಡೇಜಾ ಕಾಣಿಸಿಕೊಳ್ಳಲಿದ್ದಾರೆ. ಆದರೆ ಎಂಟನೇ ಕ್ರಮಾಂಕದಿಂದ ಶಾರ್ದೂಲ್ ಠಾಕೂರ್ ಅವರನ್ನು ಕೈ ಬಿಡುವ ಸಾಧ್ಯತೆಯಿದೆ. ಅವರ ಬದಲಿಗೆ ನಿತೀಶ್ ಕುಮಾರ್ ರೆಡ್ಡಿಗೆ ಆಡುವ ಬಳಗದಲ್ಲಿ ಚಾನ್ಸ್ ನೀಡಬಹುದು. ಹಾಗೆಯೇ ಜಸ್‌ಪ್ರೀತ್ ಬುಮ್ರಾ ವಿಶ್ರಾಂತಿ ಪಡೆದರೆ, ಅವರ ಬದಲಿಗೆ ಆಲ್‌ರೌಂಡರ್ ವಾಷಿಂಗ್ಟನ್ ಸುಂದರ್ ಕಾಣಿಸಿಕೊಳ್ಳಬಹುದು. ಅಲ್ಲದೆ ವೇಗಿಗಳಾಗಿ ಮೊಹಮ್ಮದ್ ಸಿರಾಜ್ ಹಾಗೂ ಪ್ರಸಿದ್ಧ್ ಕೃಷ್ಣ ಕಣಕ್ಕಿಳಿಯುವುದು ಬಹುತೇಕ ಖಚಿತ ಎನ್ನಬಹುದು. ಅದರಂತೆ ಟೀಮ್ ಇಂಡಿಯಾದ ಸಂಭಾವ್ಯ ಪ್ಲೇಯಿಂಗ್ ಇಲೆವೆನ್ ಹೀಗಿರಲಿದೆ

**ಭಾರತ ಸಂಭಾವ್ಯ ಪ್ಲೇಯಿಂಗ್ ಇಲೆವೆನ್:** ಕೆಎಲ್ ರಾಹುಲ್, ಯಶಸ್ವಿ ಜೈಸ್ವಾಲ್, ಸಾಯಿ ಸುದರ್ಶನ್, ಶುಭ್‌ಮನ್ ಗಿಲ್, ರಿಷಭ್ ಪಂತ್, ಕರುಣ್ ನಾಯರ್, ರವೀಂದ್ರ ಜಡೇಜಾ, ನಿತೀಶ್ ಕುಮಾರ್ ರೆಡ್ಡಿ, ವಾಷಿಂಗ್ಟನ್ ಸುಂದರ್, ಮೊಹಮ್ಮದ್ ಸಿರಾಜ್, ಪ್ರಸಿದ್ಧ್ ಕೃಷ್ಣ.

ಇಂಗ್ಲೆಂಡ್ ಪ್ಲೇಯಿಂಗ್ ಇಲೆವೆನ್: ಝೂಕ್ ಕ್ರಾಲಿ, ಬೆನ್ ಡಕೆಟ್, ಒಲೀ ಪೋಪ್, ಜೋ ರೂಟ್, ಹ್ಯಾರಿ ಬ್ರೂಕ್, ಬೆನ್ ಸ್ಟೋಕ್ಸ್ (ನಾಯಕ), ಜೇಮಿ ಸ್ಮಿತ್ (ವಿಕೆಟ್ ಕೀಪರ್), ಕ್ರಿಸ್ ವೋಕ್ಸ್, ಬ್ರೈಡನ್ ಕಾರ್ಸ್, ಜೋಶ್ ಟಂಗ್, ಶೋಯೆಬ್ ಬಶೀರ್.





Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966